

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಸೆಪ್ಟೆಂಬರ್ 12 ಮಂಗಳವಾರ 2023

ಸಂಪುಟ: 44 | ಸಂಚಿಕೆ: 148 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಅದೃಷ್ಟ, ಜನರ ಆಶೀರ್ವಾದದಿಂದ ರಾಜಕೀಯದಲ್ಲಿ ನಾನು ಮೇಲೆ ಬಂದೆ

ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನದ ನೂತನ ಶಾಖಾ ಮಠದ ಕಟ್ಟಡ ಲೋಕಾರ್ಪಣೆ ಸಮಾರಂಭದಲ್ಲಿ ಸಿದ್ದರಾಮಯ್ಯ ಬಿಚ್ಚು ನುಡಿ

- ಸಂವಿಧಾನ ಪೀಠಿಕೆ ಓದಲು ಸೆ.13 ರಂದು ಚಾಲನೆ
- ಅಕ್ಷರಸ್ಥ ಜಾತಿವಾದಿಯಾದರೆ ವಿದ್ಯೆಗೆ ಬೆಲೆ ಇಲ್ಲ
- ದಯೆ, ಕರುಣೆ ಇಲ್ಲದಿರುವುದು ಧರ್ಮವೇ ಅಲ್ಲ
- ಆದಿಚುಂಚನಗಿರಿ ಸಂಸ್ಥಾನ ಹೆಮ್ಮರವಾಗಿ ಬೆಳೆದಿದೆ



ಮೈಸೂರು ಹೆಬ್ಬಾಳಿನ ಶ್ರೀ ಲಕ್ಷ್ಮಿಕಾಂತಸ್ವಾಮಿ ದೇವಸ್ಥಾನದಲ್ಲಿ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನದ ಮೈಸೂರಿನ ಶಾಖೆಯ ನೂತನ ಕಟ್ಟಡ, ಬಿಜಿಎಸ್ ಸಾಂಸ್ಕೃತಿಕ ಭವನ ಹಾಗೂ ಉಚಿತ ವಿದ್ಯಾರ್ಥಿನಿಲಯದ ಕಟ್ಟಡವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಲೋಕಾರ್ಪಣೆ ಮಾಡಿದರು.





ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನದ ಮೈಸೂರು ಶಾಖಾ ಮಠದ ನೂತನ ಕಟ್ಟಡ.


ಮೈಸೂರು, ಸೆ.11(ಬಿಎಲ್‌ಯು)–ಅದೃಷ್ಟದ ಬಲ ಹಾಗೂ ಜನರ ಆಶೀರ್ವಾದದಿಂದ ನಾನು ರಾಜಕೀಯವಾಗಿ ಇಷ್ಟು ಎತ್ತರಕ್ಕೇರಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ರಾಜಕೀಯ ಬೆಳವಣಿಗೆಯ ಹಿನ್ನೋಟವನ್ನು ಮೆಲುಕು ಹಾಕಿದ್ದಾರೆ.

ಮೈಸೂರಿನ ಹೆಬ್ಬಾಳಿನ ಶ್ರೀ ಲಕ್ಷ್ಮಿಕಾಂತಸ್ವಾಮಿ ದೇವಸ್ಥಾನದಲ್ಲಿ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನದ ಮೈಸೂರಿನ ಶಾಖೆಯ ನೂತನ ಕಟ್ಟಡ, ಬಿಜಿಎಸ್ ಸಾಂಸ್ಕೃತಿಕ ಭವನ ಹಾಗೂ ಉಚಿತ ವಿದ್ಯಾರ್ಥಿನಿಲಯದ ಕಟ್ಟಡವನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ಜನರ ಪ್ರೀತಿ ವಿಶ್ವಾಸ ಇಲ್ಲದಿದ್ದರೆ ನಾನು ಮುಖ್ಯಮಂತ್ರಿ ಆಗಲು ಸಾಧ್ಯವಾಗುತ್ತಿರಲಿಲ್ಲ. ಯಾರೇ ಆಗಲಿ ರಾಜಕೀಯವಾಗಿ ಉತ್ತುಂಗಕ್ಕೇರಲು ಅದೃಷ್ಟ ಹಾಗೂ ಜನರ ಪ್ರೀತಿ–ವಿಶ್ವಾಸ ಮೂಲ ಕಾರಣ. ಇದಕ್ಕೆ ನಾನೇ ಸ್ಪಷ್ಟ ನಿದರ್ಶನ ಎಂದು ಹೇಳಿದರು.

ವಿಧಾನಪರಿಷತ್ ಮಾಜಿ ಸದಸ್ಯ ಡಿ.ಮಾದೇಗೌಡರು ವಯಸ್ಸಿನಲ್ಲಿ ನನಗಿಂತ ಹಿರಿಯರು. ಸಜ್ಜನಿಕೆಯ ರಾಜಕಾರಣಿ. ಆದರೆ ಅವರಿಗೆ ಅದೃಷ್ಟ ಇಲ್ಲದ ಕಾರಣ ರಾಜಕೀಯವಾಗಿ ಎತ್ತರಕ್ಕೆ ಬೆಳೆಯಲು ಸಾಧ್ಯವಾಗಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ವಿದ್ಯೆ ನೀಡುವುದು ಬಹಳ ದೊಡ್ಡ ಕೊಡುಗೆ. ಪ್ರತಿಯೊಬ್ಬರಿಗೂ ಅಕ್ಷರ ಜ್ಞಾನ ದೊರೆತಾಗ ಮಾತ್ರ ಸ್ವಾಭಿಮಾನದ ಬದುಕು ಕಾಣಲು ಸಾಧ್ಯ. ಈ ಹಿನ್ನೆಲೆಯಲ್ಲಿ ಯೋಚನಾಪರರಾಗಿ, ಜ್ಞಾನಿಯಾಗಿ ಹಾಗೂ ಸ್ವಾಭಿಮಾನಿಯಾಗಲು ಪ್ರತಿಯೊಬ್ಬರಿಗೂ ವೈಜ್ಞಾನಿಕ ಹಾಗೂ ವೈಚಾರಿಕತೆಯ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂದು ಸಿದ್ದರಾಮಯ್ಯ ಅಭಿಪ್ರಾಯಪಟ್ಟರು. ವಿದ್ಯೆ ಕಲಿತವನು ಯಾವುದೇ ಕಾರಣಕ್ಕೂ ಜಾತಿವಾದಿಗಳಾಗಬಾರದು. ಒಂದು ವೇಳೆ ಹಾಗಾದರೆ ಕಲಿತ ವಿದ್ಯೆಗೆ ಬೆಲೆ ಇರುವುದಿಲ್ಲ. ಜ್ಞಾನವಂತನಾದನು ಜಾತ್ಯಾತೀತವಾದಿಯಾಗಬೇಕು. ▶ 6ನೇ ಪುಟಕ್ಕೆ

ಬೆಂಗಳೂರು ವಿಶ್ವವಿದ್ಯಾನಿಲಯಕ್ಕೆ ನಾಡಪ್ರಭು ಕೆಂಪೇಗೌಡರ ಹೆಸರು ನಾಮಕರಣ ಮಾಡಿ

ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಶ್ರೀ ಆದಿಚುಂಚನಗಿರಿ ಸ್ವಾಮೀಜಿ ಸಲಹೆ



ಮೈಸೂರು, ಸೆ.11(ಬಿಎಲ್‌ಯು)– ಬೆಂಗಳೂರು ವಿಶ್ವ ವಿದ್ಯಾನಿಲಯಕ್ಕೆ ನಾಡ ಪ್ರಭು ಕೆಂಪೇಗೌಡರ ಹೆಸರನ್ನು ನಾಮಕರಣ ಮಾಡಬೇಕು ಎಂದು ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಗ್ರಹಿಸಿದರು.

ಮೈಸೂರಿನ ಹೆಬ್ಬಾಳಿನಲ್ಲಿ ನಿರ್ಮಿಸಿರುವ ಶ್ರೀ ಆದಿಚುಂಚನಗಿರಿ ಮಠದ ಶಾಖೆಯ ನೂತನ ಕಟ್ಟಡದ ಲೋಕಾರ್ಪಣೆ ಸಮಾರಂಭದಲ್ಲಿ ಮಾತನಾಡಿದ ಸ್ವಾಮೀಜಿ, ಬೆಂಗಳೂರು ವಿಶ್ವ ವಿದ್ಯಾನಿಲಯವನ್ನು ಮೂರು ಭಾಗವಾಗಿ ವಿಂಗಡಿಸಲಾಗಿದೆ. ಇದು ಸರ್ಕಾರದ ಆಡಳಿತಾತ್ಮಕ ವಿಚಾರ. ಆದರೆ ಬೆಂಗಳೂರು ನಿರ್ಮಾತೃ ಕೆಂಪೇಗೌಡರ ಹೆಸರನ್ನು ಬೆಂಗಳೂರು ವಿಶ್ವ ವಿದ್ಯಾನಿಲಯಕ್ಕೆ ನಾಮಕರಣ ಮಾಡುವುದು ಸೂಕ್ತ ಎಂದು ಸಲಹೆ ನೀಡಿದರು.

ಸಿದ್ದರಾಮಯ್ಯ, ಈ ಹಿಂದೆ ಮುಖ್ಯಮಂತ್ರಿ ಆಗಿದ್ದಾಗ ಕೆಂಪೇಗೌಡರ ಜಯಂತಿ ಆರಂಭವಾಯಿತು. ಕೆಂಪೇಗೌಡರ ಹೆಸರಿನಲ್ಲಿ ಪ್ರಾಧಿಕಾರ ರಚನೆ ಕೂಡ ಮಾಡಿದರು. ಈಗ ವಿಶ್ವ ವಿದ್ಯಾನಿಲಯಕ್ಕೆ ಕೆಂಪೇಗೌಡರ ಹೆಸರನ್ನು ಅವರ ಸರ್ಕಾರವೇ ನಾಮಕರಣ ಮಾಡಬೇಕು ಎಂದು ಒತ್ತಾಯಿಸಿದರು. ಮಕ್ಕಳಿಗೆ ಅಕ್ಷರ ಜ್ಞಾನ ಬಹಳ ಮುಖ್ಯ. ಮೈಸೂರಿನ ಅಂದಿನ ಮಹಾರಾಜರು 1900ರ ▶ 9ನೇ ಪುಟಕ್ಕೆ



ಬೇಡಿಕೆ ಈಡೇರಿಸುವ ಭರವಸೆ ಹಿನ್ನೆಲೆ

ಖಾಸಗಿ ಸಾರಿಗೆ ಒಕ್ಕೂಟದಿಂದ ಬೆಂಗಳೂರು ಬಂದ್ ವಾಪಸ್



ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಶಕ್ತಿ ಯೋಜನೆಯನ್ನು ಖಾಸಗಿ ಬಸ್‌ಗಳಿಗೂ ವಿಸ್ತರಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಖಾಸಗಿ ಸಾರಿಗೆ ಒಕ್ಕೂಟ ನಡೆಸುತ್ತಿದ್ದ ಬೆಂಗಳೂರು ಬಂದ್ ಅನ್ನು ಮಧ್ಯಾಹ್ನದ ವೇಳೆಗೆ ಹಿಂಪಡೆದುಕೊಂಡಿದೆ.

ಆಟೋ, ಕ್ಯಾಬ್ ಸೇರಿದಂತೆ ಸಾವಿರಾರು ಖಾಸಗಿ ವಾಹನಗಳು ಸೋಮವಾರ ರಸ್ತೆಗೆ ಇಳಿದಿಲ್ಲ. ಇದರಿಂದಾಗಿ ಕೆಲವೆಡೆ ಪ್ರಯಾಣಿಕರು ಪರದಾಡುವಂತಾಯಿತು.

ಖಾಸಗಿ ಸಾರಿಗೆ ಒಕ್ಕೂಟಗಳು ಫ್ರೀಡಂ ಪಾರ್ಕ್‌ನಲ್ಲಿ ನಡೆಸುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಭೇಟಿ ನೀಡಿ, ಹೋರಾಟ ನಿರತರ ಮನವಿಯನ್ನು ಆಲಿಸಿದರು. ನಂತರ ಅವರ ಬೇಡಿಕೆ ಈಡೇರಿಸುವುದಾಗಿ ಭರವಸೆ ನೀಡಿದ ಹಿನ್ನೆಲೆ ಖಾಸಗಿ ಸಾರಿಗೆ ಒಕ್ಕೂಟ ಬೆಂಗಳೂರು ನಗರ ಬಂದ್ ಅನ್ನು ಹಿಂಪಡೆದಿರುವುದಾಗಿ ಪ್ರಕಟಿಸಿತು. ಈ ಬಗ್ಗೆ ಮಾಧ್ಯಮಗಳ ಜೊತೆ ಮಾತನಾಡಿದ ರಾಮಲಿಂಗಾರೆಡ್ಡಿ ▶ 9ನೇ ಪುಟಕ್ಕೆ

ಲೋಕಸಭೆ ಮಾತ್ರವಲ್ಲ, ಜಿಲ್ಲಾ, ತಾಲೂಕು, ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗೂ

ಬಿಜೆಪಿ–ಜೆಡಿಎಸ್ ಮೈತ್ರಿ

- ದೆಹಲಿ ಮಟ್ಟದಲ್ಲಿ ಉಭಯ ಪಕ್ಷಗಳ ನಾಯಕರ ಸಭೆ
- ಸದ್ಯದಲ್ಲೇ ಪ್ರಧಾನಿ ಮೋದಿ ಸಮ್ಮುಖದಲ್ಲೇ ನಿಷ್ಕರ್ಷೆ







ಬೆಂಗಳೂರು ಸೆ.11(ಕೆಎಂಶಿ)– **ಲೋಕಸಭಾ ಚುನಾವಣೆ ಅಷ್ಟೇ ಅಲ್ಲದೆ, ಮುಂಬರುವ ಜಿಲ್ಲಾ, ತಾಲೂಕು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗೂ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡು ಕಣಕ್ಕಿಳಿಯಲಿವೆ.**

ಈ ಸಂಬಂಧ ಈಗಾಗಲೇ ಉಭಯ ಪಕ್ಷಗಳ ನಾಯಕರು ದೆಹಲಿಯಲ್ಲಿ ಎರಡು– ಮೂರು ಸುತ್ತಿನ ಮಾತುಕತೆ ನಡೆಸಿದ್ದಾರೆ. ದೆಹಲಿಯಲ್ಲಿ ನಡೆಯುತ್ತಿರುವ ಶೃಂಗಸಭೆಯ ಗಡಿಬಿಡಿಯ ನಂತರ ಪ್ರಧಾನಿ ನರೇಂದ್ರ ಮೋದಿ ಸಮ್ಮುಖದಲ್ಲೇ ಎರಡೂ ಪಕ್ಷಗಳ ನಾಯಕರು ಕುಳಿತು ಚರ್ಚಿಸಿ, ಸೀಟು ಹಂಚಿಕೆ ಹಾಗೂ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ನಡೆಸಲು ರೂಪುರೇಷೆ ಸಿದ್ಧಪಡಿಸಲಿದ್ದಾರೆ.

ಬಹುತೇಕ ಈ ವಾರಾಂತ್ಯ ಇಲ್ಲವೇ ಮುಂದಿನ ವಾರದಲ್ಲಿ ಪ್ರಧಾನಿ ಅವರು ಮಾತುಕತೆಗೆ ಸಮಯ ನೀಡಲಿದ್ದಾರೆ. ಜೆಡಿಎಸ್‌ನ ಅಧಿನಾಯಕ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹಾಗೂ ಶಾಸಕಾಂಗ ಪಕ್ಷದ ನಾಯಕರಾದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಮಾತುಕತೆಗಾಗಿ ದೆಹಲಿಗೆ ತೆರಳಲಿದ್ದಾರೆ. ಚರ್ಚೆ ಸಂದರ್ಭದಲ್ಲಿ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಷಾ, ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಭಾಗವಹಿಸಲಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ಮೈತ್ರಿಗೆ ಸಂಬಂಧಿಸಿದಂತೆ ಬಿಜೆಪಿ ರಾಜ್ಯ ನಾಯಕರು ಯಾವುದೇ ಗೊಂದಲಕಾರಿ ಹೇಳಿಕೆ ನೀಡಿದರೂ, ನೀವು ಅದಕ್ಕೆ ಗಮನ ಹರಿಸಬೇಡಿ ಎಂದು ಜೆಡಿಎಸ್ ನಾಯಕರಿಗೆ ಕೇಂದ್ರ ಬಿಜೆಪಿ ನಾಯಕರು ಕಿವಿ ಮಾತು ಹೇಳಿದ್ದಾರೆ.


ಮೈತ್ರಿಗೆ ಸಂಬಂಧಿಸಿದಂತೆ ಸ್ಥಳೀಯ ಸಮಸ್ಯೆಗಳು ಏನೇ ಇದ್ದರೂ ನಮ್ಮ ಗಮನಕ್ಕೆ ತನ್ನಿ, ನಾವೇ ಅವುಗಳನ್ನು ಪರಿಹರಿಸುತ್ತೇವೆ.

ಲೋಕಸಭಾ ಚುನಾವಣೆಗೂ ಮುನ್ನ ಮೈತ್ರಿ ಪಕ್ಷಗಳು ರಾಜ್ಯದ ನಾಲ್ಕು ವಿಭಾಗದಲ್ಲೂ ಬೃಹತ್ ಸಮಾವೇಶ ನಡೆಸಲಿವೆ. ಈ ಸಮಾವೇಶಗಳಲ್ಲಿ ಜೆಡಿಎಸ್ ನಾಯಕರಲ್ಲದೆ, ಬಿಜೆಪಿಯ ದೆಹಲಿಯ ನಾಯಕರು ಭಾಗವಹಿಸಲಿದ್ದಾರೆ. ಈ ಸಮಾವೇಶದ ಮೂಲಕವೇ ಲೋಕಸಭೆ ಚುನಾವಣೆ ಅಲೆ ಸೃಷ್ಟಿ ಮಾಡುವ ವೇದಿಕೆಯಾಗಿ ಮಾಡಿಕೊಳ್ಳಲಿದ್ದಾರೆ. ಸಮಾವೇಶ ಮುಗಿಯುತ್ತಿದ್ದಂತೆ ಉಭಯ ಪಕ್ಷಗಳು ಅಭ್ಯರ್ಥಿಗಳ ಆಯ್ಕೆಗೆ ಕಸರತ್ತು ಪ್ರಾರಂಭಿಸಲಿವೆ. ಮೈತ್ರಿಗೆ ಸಂಬಂಧಿಸಿದಂತೆ ▶ 9ನೇ ಪುಟಕ್ಕೆ

ಏಷ್ಯಾಕಪ್: ಕೊಹ್ಲಿ, ರಾಹುಲ್ ಶತಕಗಳ ಸಿಡಿತ; ಕುಲದೀಪ್ ಯಾದವ್ ಮಾರಕ ಬೌಲಿಂಗ್ ದಾಳಿ, ಪಾಕಿಸ್ತಾನ ಧೂಳೀಪಟ

ವಿರಾಟ್‌ನ ವಿಶ್ವ ದರ್ಶನ

47ನೇ ಶತಕ, 13,000 ರನ್ ಸಿಡಿಸಿ ಕೊಹ್ಲಿ ವಿಶ್ವ ದಾಖಲೆ



ಕೊಲಂಬೊ: ಏಕದಿನ ಕ್ರಿಕೆಟ್‌ನಲ್ಲಿ ಈಗಾಗಲೇ ಸಾಕಷ್ಟು ದಾಖಲೆ ಬರೆದಿರುವ ವಿರಾಟ್ ಕೊಹ್ಲಿ ಇದೀಗ ಮತ್ತೊಂದು ಮಹತ್ವದ ದಾಖಲೆ ಬರೆದಿದ್ದಾರೆ. ಪಾಕ್ ವಿರುದ್ಧದ ಪಂದ್ಯದಲ್ಲಿ ವೃತ್ತಿ ಜೀವನದ 47ನೇ ಒಡಿಐ ಶತಕ ಸಿಡಿಸಿದ ವಿರಾಟ್ ಕೊಹ್ಲಿ, ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್‌ನಲ್ಲಿ ವೇಗವಾಗಿ 13,000 ರನ್‌ಗಳನ್ನು ಪೂರ್ಣಗೊಳಿಸಿದ್ದಾರೆ. ಆ ಮೂಲಕ ಈ ಸಾಧನೆ ಮಾಡಿದ ವಿಶ್ವದ ಮೊದಲ ಬ್ಯಾಟ್ಸ್‌ಮನ್ ವಿಶ್ವ ದಾಖಲೆಯನ್ನು ಕಿಂಗ್ ಕೊಹ್ಲಿ ಬರೆದಿದ್ದಾರೆ. ಅಲ್ಲದೇ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್‌ನಲ್ಲಿ 13 ಸಾವಿರ ರನ್ ಪೂರ್ಣಗೊಳಿಸಿದ 5ನೇ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದಾರೆ.

ಭಾರತೀಯ ಕ್ರಿಕೆಟ್ ದಿಗ್ಗಜ ಸಚಿನ್ ತೆಂಡೂಲ್ಕರ್ (18426) ಅವರು ಈ ಸಾಧಕರ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದರೆ, ಶ್ರೀಲಂಕಾ ಮಾಜಿ ನಾಯಕ ಕುಮಾರ ಸಂಗಕ್ಕಾರ (14234) ಎರಡನೇ ಸ್ಥಾನ, ಆಸ್ಟ್ರೇಲಿಯಾ ಮಾಜಿ ನಾಯಕ ರಿಕಿ ಪಾಂಟಿಂಗ್ (13704) ಹಾಗೂ ಶ್ರೀಲಂಕಾ ಮಾಜಿ ಬ್ಯಾಟ್ಸ್‌ಮನ್ ಸನತ್ ಜಯಸೂರ್ಯ (13,430) ಕ್ರಮವಾಗಿ ಮೂರು ಮತ್ತು ನಾಲ್ಕನೇ ಸ್ಥಾನದಲ್ಲಿದ್ದಾರೆ. ▶ 9ನೇ ಪುಟಕ್ಕೆ

ಭಾರತಕ್ಕೆ 228 ರನ್‌ಗಳ ದಾಖಲೆಯ ಜಯ

ಕೊಲಂಬೊ, ಸೆ.11– ಕಿಂಗ್ ಕೊಹ್ಲಿ, ಕನ್ನಡಿಗ ಕೆ.ಎಲ್. ರಾಹುಲ್ ಅವರ ಭರ್ಜರಿ ಶತಕ ಹಾಗೂ ಕುಲದೀಪ್ ಯಾದವ್ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಭಾರತ, ಪಾಕ್ ವಿರುದ್ಧದ ಹೈವೋಲ್ಟೇಜ್ ಪಂದ್ಯದಲ್ಲಿ ದಾಖಲೆಯ 228 ರನ್‌ಗಳ ಜಯ ಸಾಧಿಸಿದೆ.

ಇಲ್ಲಿನ ಆರ್.ಪ್ರೇಮದಾಸ ಮೈದಾನದಲ್ಲಿ ನಡೆದ ಏಷ್ಯಾಕಪ್ ಪಂದ್ಯಾವಳಿಯ ಸೂಪರ್–4 ಹಂತದ ಪಂದ್ಯದಲ್ಲಿ ಭಾನುವಾರ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಾಯಕ ರೋಹಿತ್ ಶರ್ಮಾ ಹಾಗೂ ಶುಭ್‌ಮನ್ ಗಿಲ್ ಅವರ ಅರ್ಧಶತಕಗಳ ನೆರವಿನಿಂದ ಭರ್ಜರಿ ಆರಂಭ ಪಡೆಯಿತು. ಆದರೆ ರೋಹಿತ್ ಶರ್ಮಾ ಹಾಗೂ ಶುಭಮನ್ ಗಿಲ್ ಔಟ್ ಆಗುವುದಕ್ಕೂ ಮುನ್ನ ಕ್ರಮವಾಗಿ 56 ಮತ್ತು 58 ರನ್‌ಗಳನ್ನು ಕಲೆ ಹಾಕಿದ್ದರು. ಭಾರತ 24.1 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 147ರನ್ ಗಳಿಸಿದ್ದ ವೇಳೆ ಭಾರಿ ಮಳೆ ಕಾರಣ ಪಂದ್ಯ ನಡೆಸಲು ಸಾಧ್ಯವಾಗದ ಕಾರಣ ಪಂದ್ಯವನ್ನು ಮೀಸಲು ದಿನವಾದ ಸೋಮವಾರಕ್ಕೆ ಮುಂದೂಡಲಾಗಿತ್ತು. ವಿರಾಟ್ ಕೊಹ್ಲಿ 8, ಕನ್ನಡಿಗ ಕೆ.ಎಲ್.ರಾಹುಲ್ 17ರನ್ ಗಳಿಸಿ ಬ್ಯಾಟಿಂಗ್ ಕಾಯ್ದುಕೊಂಡಿದ್ದರು. ಮೀಸಲು ದಿನವಾದ ಇಂದು ಪಂದ್ಯ ಆರಂಭಕ್ಕೆ ಮತ್ತೆ ಮಳೆ ಅಡ್ಡಿಯಾಗಿತ್ತು. ಹೀಗಾಗಿ ವಿಳಂಬವಾಗಿ ಪಂದ್ಯ ಆರಂಭಗೊಂಡಿತ್ತು.

ಸೋಮವಾರ ಆಟ ಮುಂದುವರೆಸಿದ ರಾಹುಲ್ ಹಾಗೂ ಕೊಹ್ಲಿ ಆರಂಭದಲ್ಲಿ ಎಚ್ಚರಿಕೆಯ ▶ 9ನೇ ಪುಟಕ್ಕೆ



ಪೊಲೀಸರ ಸೋಗಿನಲ್ಲಿ ಮತ್ತೆ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ದರೋಡೆ

ಕೊಡಗಿನ ದಂಪತಿಯಿಂದ 2 ಲಕ್ಷ ಮೌಲ್ಯದ 30 ಗ್ರಾಂ ಚಿನ್ನದ ಸರ ಸುಲಿಗೆ

ಮಂಡ್ಯ, ಸೆ.11– ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ದರೋಡೆ ಪ್ರಕರಣಗಳು ಮುಂದುವರೆದಿದ್ದು, ಪೊಲೀಸರ ಸೋಗಿನಲ್ಲಿ ಬಂದ ದುಷ್ಕರ್ಮಿಗಳು ದಂಪತಿ ಬೆದರಿಸಿ 30 ಗ್ರಾಂ ಚಿನ್ನದ ಸರ ದರೋಡೆ ಮಾಡಿರುವ ಘಟನೆ ▶ 9ನೇ ಪುಟಕ್ಕೆ



ರಾಷ್ಟ್ರ, ರಾಜ್ಯ ರಾಜಕೀಯದಲ್ಲಿ ಅಸ್ಥಿರತೆ!

ಹುಬ್ಬಳ್ಳಿ, ಸೆ.11(ಬಿಎಲ್‌ಯು)– ರಾಷ್ಟ್ರ ಹಾಗೂ ರಾಜ್ಯ ರಾಜಕೀಯದಲ್ಲಿ ಅಸ್ಥಿರತೆ ಉಂಟಾಗಲಿದೆ ಎಂದು ಕೋಡಿ ಮಠದ ಶ್ರೀ ಶಿವಾನಂದ ಶಿವಯೋಗಿ ಸ್ವಾಮೀಜಿ ಸದ್ಯ ಭವಿಷ್ಯ ನುಡಿದಿದ್ದಾರೆ.

ಹುಬ್ಬಳ್ಳಿಯಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಯುಗಾದಿ ನಂತರ ರಾಷ್ಟ್ರ ಹಾಗೂ ರಾಜ್ಯ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆ ಉಂಟಾಗಲಿದೆ ಎಂದು ಹೇಳಿದ್ದಾರೆ.

ಕೇಂದ್ರದಲ್ಲಿ ಬಿಜೆಪಿ ಹಾಗೂ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರಕ್ಕೆ ಸ್ಪಷ್ಟ ಬಹುಮತವಿದೆ. ಹೀಗಿರುವಾಗ ಅಸ್ಥಿರತೆ ಎದುರಾಗಲಿದೆ ಎಂದು ಕೋಡಿ ಮಠದ ಸ್ವಾಮೀಜಿ ನೀಡಿರುವ ಭವಿಷ್ಯವಾಣಿ ಕುತೂಹಲಕ್ಕೆಡೆ ಮಾಡಿದೆ.

ರಾಜ್ಯದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ನಡುವೆ ಮೈತ್ರಿ ಏರ್ಪಟ್ಟಿದೆ. ಈ ಹಿನ್ನೆಲೆಯಲ್ಲಿ ಮುಂದೆ ಹಲವು ಬೆಳವಣಿಗೆಗಳಾಗಬಹುದು ಎಂದು ನಿರೀಕ್ಷಿಸಲಾಗಿದೆ. ಇಂತಹ ಸಮಯದಲ್ಲಿ ಕೋಡಿಮಠದ ಶ್ರೀಗಳು ಹೇಳಿರುವ ಭವಿಷ್ಯ ಮಹತ್ವ ಪಡೆದುಕೊಂಡಿದೆ. ಅಲ್ಲದೆ ಕೋಡಿ ಮಠದ ಶ್ರೀಗಳು ಈಗಾಗಲೇ ಹೇಳಿರುವ ಹಲವು ಭವಿಷ್ಯಗಳು ನಿಜವಾಗಿರುವ




ಕೋಡಿಮಠದ ಶ್ರೀಗಳ ಭವಿಷ್ಯ

ಕಾರಣ ಇಂದು ಅವರು ನೀಡಿರುವ ಈ ಹೇಳಿಕೆ ಕುತೂಹಲ ಮೂಡಿಸಿದೆ.

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ನಡುವಿನ ಮೈತ್ರಿ ಬಗ್ಗೆ ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಸ್ವಾಮೀಜಿ, ಈ ವಿಚಾರದ ಬಗ್ಗೆ ಈಗಲೇ ಏನನ್ನೂ ಹೇಳಲು ಆಗುವುದಿಲ್ಲ ಎಂದರು.

ತಮಿಳುನಾಡು ಸಚಿವ ಉದಯನಿಧಿ ಸ್ಟಾಲಿನ್ ಸನಾತನ ಧರ್ಮದ ಬಗ್ಗೆ ನೀಡಿರುವ ಹೇಳಿಕೆ ಬಗ್ಗೆ ಬೇಸರ ವ್ಯಕ್ತಪಡಿಸಿದ ಕೋಡಿ ಮಠದ ಸ್ವಾಮೀಜಿ, ಅರಿವಿನ ಕೊರತೆಯಿಂದ ಧರ್ಮ ಹಾಗೂ ರಾಜಕೀಯ ವಿಚಾರಗಳನ್ನು ಮುನ್ನೆಲೆಗೆ ತರುತ್ತಾರೆ. ಧರ್ಮ ಎಂದರೆ ಶಾಂತಿ ಹಾಗೂ ನೆಮ್ಮದಿಯ ಸಂಕೇತ ಎಂದು ಅಭಿಪ್ರಾಯಪಟ್ಟರು.

ಕೆಆರ್‌ಎಸ್ ಬೃಂದಾವನದಲ್ಲಿ ಹೊಸ ಸಂಗೀತ ಕಾರಂಜಿ ಪ್ರವಾಸಿಗರ ವೀಕ್ಷಣೆಗೆ ಸಿದ್ಧ





ಕೆಆರ್‌ಎಸ್‌ನ ಬೃಂದಾವನ ಗಾರ್ಡನ್‌ನಲ್ಲಿ ಸಿದ್ಧಗೊಂಡಿರುವ ಸಂಗೀತ ಕಾರಂಜಿ ಟ್ರಯಲ್ ರನ್ ದೃಶ್ಯ

ಮೈಸೂರು,ಸೆ.11(ಆರ್‌ಕೆ)–ಬಹು ನಿರೀಕ್ಷಿತ ಕೃಷ್ಣರಾಜ ಸಾಗರ (ಕೆಆರ್‌ಎಸ್)ದ ಬೃಂದಾವನದಲ್ಲಿ ನಿರ್ಮಿಸಿರುವ ನೂತನ ತಂತ್ರಜ್ಞಾನದ ಅತ್ಯಾಕರ್ಷಕ ಸಂಗೀತ ಕಾರಂಜಿಯು ಪ್ರವಾಸಿಗರ ವೀಕ್ಷಣೆಗೆ ಸಿದ್ಧವಾಗಿದೆ.

ಅತೀ ಹಳೆಯದಾಗಿದ್ದ ಉತ್ತರ ಬೃಂದಾವನ ಗಾರ್ಡನ್‌ನಲ್ಲಿದ್ದ ಮ್ಯೂಸಿಕಲ್ ಫೌಂಟೇನ್ ಅನ್ನು ತೆರವುಗೊಳಿಸಿ ಕಾವೇರಿ ನೀರಾವರಿ ನಿಗಮ ನಿಯಮಿತ (ಸಿಎನ್‌ಎನ್)ವು 2.6 ಕೋಟಿ ರೂ. ವೆಚ್ಚದಲ್ಲಿ ವಿನೂತನ ತಂತ್ರಜ್ಞಾನದೊಂದಿಗೆ ಅತ್ಯಾಕರ್ಷಕ ಕಾರಂಜಿಯನ್ನು ನಿರ್ಮಿಸಿದ್ದು, ಈಗಾಗಲೇ ನಾಲ್ಕು ಬಾರಿ ಟ್ರಯಲ್ ರನ್ ನಡೆಸಿದೆ.

ಲೇಸರ್, ಫೈಯರ್, ಮಂಜು (ಹಿಮ) ಹೊರಸೂಸುವ ನಾಸಲ್‌ಗಳು, ಮೂವಬಲ್ ನಾಸಲ್‌ಗಳು, ರೊಟೇಟ್ ನಾಸಲ್‌ಗಳನ್ನು ಅಳವಡಿಸಿರುವುದರಿಂದ ಅತೀ ವಿಶೇಷ ಕಾರಂಜಿಯಲ್ಲಿ ನೃತ್ಯ ಸಂಗೀತ ನಯನ ಮನೋಹರವಾಗಿದ್ದು, ಪ್ರವಾಸಿಗರ ಕಣ್ಮನ ಸೆಳೆಯಲಿದೆ.

ವಾರದ ದಿನಗಳಲ್ಲಿ ಸಂಜೆ 7ರಿಂದ 8 ಗಂಟೆವರೆಗೆ ಹಾಗೂ ವಾರಾಂತ್ಯ ಮತ್ತು ರಜಾ ದಿನಗಳಲ್ಲಿ ಸಂಜೆ 7ರಿಂದ ರಾತ್ರಿ 9 ಗಂಟೆವರೆಗೆ ಸಂಗೀತ ಕಾರಂಜಿ ಪ್ರದರ್ಶನವಿರುತ್ತದೆ. ಕೆಆರ್‌ಎಸ್ ಬೃಂದಾವನಕ್ಕೆ ಭೇಟಿ ನೀಡುವ ಪ್ರತಿಯೊಬ್ಬರಿಗೂ ಕಾರಂಜಿಯ ಸಂಗೀತ–ನೃತ್ಯ ವೈಭವ ನೋಡುವ ಅವಕಾಶವಿರುತ್ತದೆ.

ವಯಸ್ಕರಿಗೆ 50 ರೂ. ಹಾಗೂ 5ರಿಂದ 10 ವರ್ಷದೊಳಗಿನ ಮಕ್ಕಳಿಗೆ 10 ರೂ. ಪ್ರವೇಶ ಟಿಕೆಟ್ ದರ ನಿಗದಿಪಡಿಸಲಾಗಿದ್ದು, 5 ವರ್ಷದೊಳಗಿನ ಮಕ್ಕಳಿಗೆ ಬೃಂದಾವನಕ್ಕೆ ಉಚಿತ ಪ್ರವೇಶ ಕಲ್ಪಿಸಲಾಗಿದೆ. ಸಂಗೀತ ಕಾರಂಜಿಯು ಪ್ರವಾಸಿಗರ ವೀಕ್ಷಣೆಗೆ ಸರ್ವ ರೀತಿಯಲ್ಲಿ ಸಜ್ಜುಗೊಂಡಿದ್ದು, ಮುಂಬೈ ಮೂಲದ ಗ್ರೀನ್ ಕೇರ್ ಪ್ರೈವೇಟ್ ಲಿಮಿಟೆಡ್ ಕಾಮಗಾರಿಯನ್ನು ಪೂರ್ಣಗೊಳಿಸಿ ಕಾವೇರಿ ನೀರಾವರಿ ನಿಗಮದ ಸುಪರ್ದಿಗೆ ಒಪ್ಪಿಸಿದೆ.

ಜಲಸಂಪನ್ಮೂಲ ಮತ್ತು ನೀರಾವರಿ ಸಚಿವರ ಗಮನಕ್ಕೆ ತಂದು ಅವರ ನಿರ್ದೇಶನದಂತೆ ನೂತನ ಸಂಗೀತ ಕಾರಂಜಿಗೆ ವಿಧ್ಯುಕ್ತ ಚಾಲನೆ ನೀಡಲಾಗುವುದು ಎಂದು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ. ಪ್ರತೀ ದಿನ ಸಾವಿರಾರು ಮಂದಿ ಪ್ರವಾಸಿಗರು ವಿಶ್ವವಿಖ್ಯಾತ ಕೆಆರ್‌ಎಸ್‌ಗೆ ಭೇಟಿ ನೀಡುತ್ತಿದ್ದು, ಇದೀಗ ಅತ್ಯಾಕರ್ಷಕ ಕಾರಂಜಿ ಸಿದ್ಧವಾಗಿರುವುದರಿಂದ ಹಾಗೂ ದಸರಾ ಮಹೋತ್ಸವ ಸಮೀಪಿಸುತ್ತಿರುವ ಕಾರಣ ಹೆಚ್ಚಿನ ಸಂಖ್ಯೆಯ ಪ್ರವಾಸಿಗರ ನಿರೀಕ್ಷೆಯಲ್ಲಿದ್ದೇವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಾಳೆ ಚಕ್ರವರ್ತಿ ಸೂಲಿಬೆಲೆ ಉಪನ್ಯಾಸ

ಮೈಸೂರು,ಸೆ.11–ಉಡುಪಿಯ ಪೇಜಾವರ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳವರ 36ನೇ ಚಾತುರ್ಮಾಸ್ಯದ ಪ್ರಯುಕ್ತ ಹಿಂದೂ ರಾಷ್ಟ್ರವಾದಿ ಲೇಖಕ ಚಕ್ರವರ್ತಿ ಸೂಲಿಬೆಲೆ ಅವರಿಂದ ವಿಶೇಷ



ಉಪನ್ಯಾಸ ಕಾರ್ಯಕ್ರಮವನ್ನು ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ಸೆ.13ರ ಬುಧವಾರದಂದು ಸಂಜೆ 4.30 ಗಂಟೆಗೆ ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಅರ್ಜಿ ಆಹ್ವಾನ

ಮೈಸೂರು,ಸೆ.11–ಮೈಸೂರಿನ ಚಾಮರಾಜ ಮೊಹಲ್ಲಾದಲ್ಲಿರುವ ದಿ ಸಿಟಿಜನ್ಸ್ ಹೌಸ್ ಮಾರ್ಟ್‌ಗೇಜ್ ಮತ್ತು ಹೌಸಿಂಗ್ ಕೋ–ಆಪರೇಟಿವ್ ಸೊಸೈಟಿಯ ವಾರ್ಷಿಕ ಮಹಾಸಭೆ ಸೆ.24ರಂದು ನಡೆಯಲಿದ್ದು, 2022–23ರ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ, ಪದವಿ, ಸ್ನಾತಕೋತ್ತರ ಪದವಿಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿರುವ ಹಾಗೂ ಇದೇ ಸಾಲಿನಲ್ಲಿ ಅಂತರರಾಷ್ಟ್ರೀಯ/ರಾಜ್ಯ ಮಟ್ಟದಲ್ಲಿ ಸರ್ಕಾರ ನಡೆಸುವ ಆಟೋಟ ಸ್ಪರ್ಧೆಯಲ್ಲಿ ಪ್ರಶಸ್ತಿ ಅಥವಾ ಪದಕ ಪಡೆದ ಸೊಸೈಟಿ ಸದಸ್ಯರು/ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲು ನಿರ್ಧರಿಸಲಾಗಿದೆ. ಅರ್ಹರು ಸೆ.16ರ ಸಂಜೆ 6.30 ರೊಳಗೆ ಅರ್ಜಿ ಸಲ್ಲಿಸುವಂತೆ ಪ್ರಕಟಣೆ ಕೋರಿದೆ. ಹೆಚ್ಚಿನ ವಿವರಗಳಿಗಾಗಿ ಮೊ. 97412 02595 ಸಂಪರ್ಕಿಸಬಹುದಾಗಿದೆ.

ಮೈಸೂರಲ್ಲಿ ಬಂಡವಾಳ ಹೂಡಿದರೆ ಅಗತ್ಯ ನೆರವು: ಡಿ.ಕೆ.ಶಿವಕುಮಾರ್



ಬೆಂಗಳೂರು,ಸೆ.11(ಬಿಎಲ್‌ಯು)– ಬೆಂಗಳೂರು ಮಾತ್ರವಲ್ಲದೆ ಮೈಸೂರು, ಹುಬ್ಬಳ್ಳಿ, ಮಂಗಳೂರು ಹಾಗೂ ಬೆಳಗಾವಿಯಲ್ಲಿ ಉದ್ಯಮ ಆರಂಭಿಸಲು ಬಂಡವಾಳ ಹೂಡಿದರೆ ಅಗತ್ಯ ನೆರವು ಕಲ್ಪಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದರು.

ವಿಧಾನಸೌಧದಲ್ಲಿ ಸೋಮವಾರ ನೆದರ್‌ಲ್ಯಾಂಡ್ ಪ್ರಧಾನಮಂತ್ರಿ ಮಾರ್ಕ್‌ರುಟ್ಟೆ ಹಾಗೂ ಆ ದೇಶದ ಕಂಪನಿಗಳ ಪ್ರಮುಖರ ಜೊತೆ ಸಭೆ ನಡೆಸಿದ ವೇಳೆ ಈ ಭರವಸೆ ನೀಡಿದರು. ಕರ್ನಾಟಕವೆಂದರೆ ಕೇವಲ ಬೆಂಗಳೂರು ಮಾತ್ರವಲ್ಲ. ಕರ್ನಾಟಕದಲ್ಲಿ ಮೈಸೂರು ಸೇರಿದಂತೆ ಇತರೆ ನಗರಗಳಲ್ಲಿ ಕೂಡ ಕೈಗಾರಿಕೆ ಸ್ಥಾಪನೆಗೆ ಪೂರಕ ವಾತಾವರಣವಿದೆ. ಅತ್ಯುತ್ತಮ ಮಾನವ ಸಂಪನ್ಮೂಲ ಕೂಡ ಇದೆ ಎಂದು ಡಿ.ಕೆ.ಶಿವಕುಮಾರ್ ಮನವರಿಕೆ ಮಾಡಿಕೊಟ್ಟರು.

ಮೈಸೂರು ಸೇರಿದಂತೆ ಇತರೆ ನಗರಗಳಲ್ಲಿ ಐಟಿ ಸೇರಿದಂತೆ ಇತರೆ ಕ್ಷೇತ್ರಗಳಲ್ಲಿ ಹೆಚ್ಚು ಅಭಿವೃದ್ಧಿ ಹೊಂದುತ್ತಿದೆ. ಅಲ್ಲಿ ಉದ್ಯಮ ಆರಂಭಿಸುವುದಾದರೆ ಸರ್ಕಾರ ಎಲ್ಲಾ ರೀತಿಯ ನೆರವು ನೀಡಲಿದೆ ಎಂದು ಡಿ.ಕೆ.ಶಿವಕುಮಾರ್ ಭರವಸೆ ನೀಡಿದರು.

ಜ್ಞಾನದಿಂದ ಮಾತ್ರ ಘನತೆ ಹೆಚ್ಚಲು ಸಾಧ್ಯ



ಮೈಸೂರು,ಸೆ.11–ಮೈಸೂರಿನ ಬಾಸುದೇವ ಸೋಮಾನಿ ಮಹಾವಿದ್ಯಾಲಯದಲ್ಲಿ ಪ್ರಥಮ ವರ್ಷದ ಬಿ.ಎ, ಬಿ.ಕಾಂ ಬಿ.ಬಿ.ಎ ವಿದ್ಯಾರ್ಥಿಗಳಿಗೆ ಅಭಿ ವಿನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ಪ್ರೊ. ಪ್ರಸನ್ನಕುಮಾರ್ ಮ್ಯಾನೇಜಿಂಗ್ ಟ್ರಸ್ಟಿ, ದಿ ಇನ್ಸ್ಟಿಟ್ಯೂಟ್ ಆಫ್ ಎಜುಕೇಶನ್ ಟ್ರಸ್ಟ್‌ನವರು ನೆರವೇರಿಸಿದರು.

ಅಭಿ ವಿನ್ಯಾಸ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಪ್ರೊ.ಪ್ರಸನ್ನ ಕುಮಾರ್ ಸಹಾಯಕ ಪ್ರಾಧ್ಯಾಪಕರು ಆಂಗ್ಲ ಭಾಷಾ ವಿಭಾಗ, ಮಹಿಳಾ ಸರ್ಕಾರಿ ಕಾಲೇಜು, ಮಂಡ್ಯ ಇವರು ಮಾತನಾಡುತ್ತಾ ಪದವಿ ಹಂತದ ವಿದ್ಯಾರ್ಥಿಗಳು ತಮ್ಮ ಆಲೋಚನಾ ಶಕ್ತಿಯನ್ನು ಬದಲಾಯಿಸಿಕೊಂಡರೆ ಬದುಕಿನಲ್ಲಿ ಬೆಳಕು ಕಾಣಲು ಸಾಧ್ಯ. ಶಾಲಾ ಶಿಕ್ಷಣಕ್ಕೂ, ಕಾಲೇಜು ಶಿಕ್ಷಣಕ್ಕೂ ಇರುವ ವ್ಯತ್ಯಾಸವನ್ನು ತಿಳಿಸಿದರು. ನಮ್ಮ ಜ್ಞಾನದಿಂದ ಮಾತ್ರ ಘನತೆ ಬರಲು ಸಾಧ್ಯ. ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಸನದಲ್ಲಿ ಮನಸ್ಸು ಮುಖ್ಯ ಪಾತ್ರ ವಹಿಸುತ್ತದೆ. ಸಾರ್ಥಕ ಬದುಕನ್ನು ಕಟ್ಟಿಕೊಳ್ಳಬೇಕಾದರೆ ಅತಿಯಾದ ಶ್ರಮ ಬೇಕು. ಆಗ ಮಾತ್ರ ಉನ್ನತ ಹುದ್ದೆಗಳನ್ನು ಅಲಂಕರಿಸಲು ಸಾಧ್ಯ. ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಮನಸ್ಸು ಬಹಳ ಮುಖ್ಯ ಇದಕ್ಕೆ ಸಾಕಷ್ಟು ತಯಾರಿ ಬೇಕು. ಸಮಾಜದಲ್ಲಿ ಒಳ್ಳೆಯ ಸ್ಥಾನಮಾನ ಪಡೆಯಲು ಪ್ರತಿಯೊಬ್ಬರ ಶ್ರಮ, ಶ್ರದ್ಧೆ ಆಸಕ್ತಿ ಹಾಗೂ ಆಳವಾದ ಜ್ಞಾನ ಇದ್ದರೆ ಮಾತ್ರ ಸಾಧ್ಯ. ಈ ಶಿಕ್ಷಣಕ್ಕೆ ಎಲ್ಲವನ್ನು ಪರಿವರ್ತಿಸುವ ಶಕ್ತಿ ಇದೆ ಎಂದು ತಿಳಿಸಿದರು.

ಸಂಸ್ಥೆಯ ಅಧ್ಯಕ್ಷ ಡಾ.ಎಂ ಪುಟ್ಟಸ್ವಾಮಿ ಮಾತನಾಡಿ, ಬೇರೆ ದೇಶದ ಸಂಸ್ಕೃತಿಯ ವ್ಯಾಮೋಹಕ್ಕೆ ಒಳಗಾಗಬೇಡಿ. ನಮ್ಮ ದೇಶದ ಸಂಸ್ಕೃತಿಯನ್ನು ಉಳಿಸಿ ಎಂದು ಹೇಳುತ್ತ, ಎಲ್ಲಾ ವಿದ್ಯಾರ್ಥಿಗಳು ಶ್ರಮಪಟ್ಟು ಅರ್ಥಪೂರ್ಣ ಬದುಕನ್ನು ಕಟ್ಟಿಕೊಳ್ಳಿ ಎಂದರು.

ಕಾಲೇಜಿನ ಪ್ರಾಂಶುಪಾಲ ಡಾ.ಎಂ. ಮಹದೇವಸ್ವಾಮಿ ಮಾತನಾಡಿ, ನಮ್ಮ ಜೀವನದಲ್ಲಿ ಸಾಧನೆ ಮುಖ್ಯ. ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವಲ್ಲಿ ನಮ್ಮ ಕಾಲೇಜು ನಿಮ್ಮೊಂದಿಗೆ ಇರುತ್ತದೆ ಎಂದರು. ಕಾರ್ಯಕ್ರಮದಲ್ಲಿ ಕಚೇರಿ ಅಧೀಕ್ಷಕ ಡಾ. ಎಂ.ಪಿ.ಬಸವರಾಜು ಉಪಸ್ಥಿತರಿದ್ದರು.

ಡಾ.ಶೋಭಾ ಕೆ.ಆರ್.ಆಸ್ಪತ್ರೆ ವೈದ್ಯಕೀಯ ಅಧೀಕ್ಷಕಿ



ಮೈಸೂರು,ಸೆ.11(ಆರ್‌ಕೆ)– ಮೈಸೂರಿನ ಕೆ.ಆರ್.ಆಸ್ಪತ್ರೆ ವೈದ್ಯಕೀಯ ಅಧೀಕ್ಷಕಿಯಾಗಿ ಕೀಲು–ಮೂಳೆ ವಿಭಾಗದ ಪ್ರಾಧ್ಯಾಪಕಿ ಡಾ.ಹೆಚ್.ಪಿ.ಶೋಭಾ ಅವರನ್ನು ನಿಯೋಜಿಸಲಾಗಿದೆ. ಅವರು ನಿರ್ಗಮಿತ ವೈದ್ಯಕೀಯ ಅಧೀಕ್ಷಕ ಡಾ. ನಂಜುಂಡಸ್ವಾಮಿ ಅವರಿಂದ ಅಧಿಕಾರ ವಹಿಸಿಕೊಂಡರು. ಹಲವು ವರ್ಷಗಳಿಂದ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಕೀಲು–ಮೂಳೆ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ಡಾ.ಶೋಭಾ, ಕೆ.ಆರ್. ಆಸ್ಪತ್ರೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸಿ ಮೂಲ ಸೌಲಭ್ಯ ಕಲ್ಪಿಸಿ ಬಡ ರೋಗಿಗಳಿಗೆ ಚಿಕಿತ್ಸೆ ಒದಗಿಸಲು ವೈದ್ಯಕೀಯ ಹಾಗೂ ವೈದ್ಯಕೇತರ ಅಧಿಕಾರಿಗಳು, ಸಿಬ್ಬಂದಿಗಳನ್ನು ವಿಶ್ವಾಸಕ್ಕೆ ಪಡೆದು ಕರ್ತವ್ಯ ನಿರ್ವಹಿಸುವ ಇಂಗಿತ ವ್ಯಕ್ತಪಡಿಸಿದ್ದಾರೆ.

ಯುಜಿಸಿ ಮಾನ್ಯತೆ ಇಲ್ಲದಿದ್ದರೂ ಮುಕ್ತ ವಿವಿಯಲ್ಲಿ 2023–24ನೇ ಸಾಲಿಗೆ ವಿವಿಧ ಕೋರ್ಸ್‌ಗೆ ಪ್ರವೇಶಾತಿ

● ಹಳೆಯ ವಿದ್ಯಾರ್ಥಿ ಎ.ಎಸ್.ನಂದೀಶ್ ಆತಂಕ ● ಸಾವಿರಾರು ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಮುಕ್ತ ವಿವಿ ಚೆಲ್ಲಾಟ ಆರೋಪ

ಮೈಸೂರು,ಸೆ.11(ಎಂಟಿವೈ)–ಕರ್ನಾಟಕ ರಾಜ್ಯ ಮುಕ್ತ ವಿವಿಗೆ ಯುಜಿಸಿ ಮಾನ್ಯತೆ ಇನ್ನೂ ದೊರಕಿಲ್ಲದಿದ್ದರೂ 2023–24ನೇ ಶೈಕ್ಷಣಿಕ ಸಾಲಿಗೆ ಪ್ರವೇಶಾತಿ ನೀಡುವ ಮೂಲಕ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಹಳೆಯ ವಿದ್ಯಾರ್ಥಿ ಎ.ಎಸ್.ನಂದೀಶ್ ಆರೋಪಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಕ್ತ ವಿವಿಯ ಯುಜಿಸಿಯ ಮಾನ್ಯತೆ ನಿರೀಕ್ಷೆಯಲ್ಲಿರುವುದಾಗಿ ಹೇಳುತ್ತಿದೆ. ವಿವಿಯ ಪರೀಕ್ಷಾ ಕ್ರಮಗಳ ಕಾರಣ ದೊರಕದೆಯೂ ಇರಬಹುದಾಗಿದೆ. ಹೀಗಿದ್ದರೂ 2013–14 ಹಾಗೂ 2014–15ನೇ ಶೈಕ್ಷಣಿಕ ಸಾಲಿನಲ್ಲಿ ಕೆಎಸ್‌ಒಯುನಲ್ಲಿ ನೇರವಾಗಿ ಪ್ರವೇಶಾತಿ ಪಡೆದಿರುವ 95,000 ವಿದ್ಯಾರ್ಥಿಗಳಿಗೆ 10 ವರ್ಷದ ಬಳಿಕವೂ ಪದವಿ ಪ್ರಮಾಣ ಪತ್ರ ನೀಡದೆ, ಪದವಿಗಳಿಗೆ ಯುಜಿಸಿ ಮಾನ್ಯತೆ ದೊರಕದೆ ಅತಂತ್ರ ಸ್ಥಿತಿಯಲ್ಲಿದ್ದಾರೆ. 2013–14 ಹಾಗೂ 2014–15ನೇ ಸಾಲಿನ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣಪತ್ರ ನೀಡಿಲ್ಲ ಎಂಬ ಕಾರಣ ನೀಡಿ ಕೆಎಸ್‌ಒಯುನಲ್ಲೇ ಪಿಹೆಚ್.ಡಿ ಪ್ರವೇಶಾತಿಗೂ ಅವಕಾಶ ಮಾಡಿಕೊಡುತ್ತಿಲ್ಲ. ಯಾವುದೋ ಒಂದು ವಿಭಾಗದಲ್ಲಿ ನ್ಯಾಯಾಲಯದ ಮಧ್ಯ ಪ್ರವೇಶದಿಂದ ಪಿಹೆಚ್.ಡಿ ಪ್ರವೇಶಾತಿ ನೀಡಲಾಗಿದೆ. ನಾವು ಓದಿದ ವಿವಿಯೇ ನಮ್ಮ ಪದವಿಗೆ ಮಾನ್ಯತೆ ಇಲ್ಲ ಎಂದು ಹೇಳುತ್ತಿದೆ ಎಂದು ವ್ಯಂಗ್ಯವಾಡಿದರು.

2023–24ನೇ ಸಾಲಿಗೆ ಕರಾಮುವಿಯಲ್ಲಿ ಸಾರ್ವಜನಿಕ ಆಡಳಿತ ವಿಷಯದಲ್ಲಿ ಎಂಎ ಪದವಿ ಮಾಡಬೇಕೆಂದು ನಿರ್ಧರಿಸಿ ಯುಜಿಸಿ ವೆಬ್‌ಸೈಟ್‌ನಲ್ಲಿ ಕರಾಮುವಿಗೆ ಆಫ್‌ಲೈನ್ ಕೋರ್ಸ್‌ಗೆ 2023–24ನೇ ಶೈಕ್ಷಣಿಕ ಸಾಲಿಗೆ ಮಾನ್ಯತೆ ದೊರಕಿದೆಯೇ ಎಂದು ಪರಿಶೀಲಿಸಿದ್ದೇವೆ. ಈ ವೇಳೆ 2018–19ರಿಂದ 2022–23ನೇ ಸಾಲಿನವರೆಗೆ ಮಾತ್ರ ಆಫ್‌ಲೈನ್ ಕೋರ್ಸ್‌ಗಳಿಗೆ ಮಾನ್ಯತೆ ನೀಡಿರುವುದು ಗಮನಕ್ಕೆ ಬಂದಿದೆ. ಈ ಯುಜಿಸಿ ಮಾನ್ಯತೆ ವಿಷಯವಾಗಿ ವಿವಿಯಲ್ಲಿ ಸ್ಪಷ್ಟನೆ ಕೋರಿದ ವೇಳೆ "2023–24ರ ಶಿಕ್ಷಣ ಕ್ರಮಗಳಿಗೆ ಯುಜಿಸಿ ಮಾನ್ಯತೆ ಸಂಬಂಧದ ಮಾಹಿತಿಯು ಯುಜಿಸಿ ವೆಬ್‌ಸೈಟ್‌ನಲ್ಲಿ ಯುಜಿಸಿ–ಡಿಇಬಿ ನವರು ಅಪ್ಲೋಡ್ ಮಾಡಿರುವುದಿಲ್ಲ. ಕರಾಮುವಿಯು ಈಗಾಗಲೇ ಯುಜಿಸಿಯು Interface Expert Committeeಯಲ್ಲಿ ಶಿಕ್ಷಣ ಕ್ರಮಗಳಿಗೆ ಪ್ರವೇಶಾತಿಗೆ Recommendation ಆಗಿರುವುದರಿಂದ ಮಾನ್ಯತೆ ಪತ್ರವನ್ನು ನಿರೀಕ್ಷಿಸುತ್ತಿದೆ ಎಂದು ಹೇಳುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮುಕ್ತ ವಿವಿ ಯಾವುದೇ ಪ್ರಯತ್ನ ಮಾಡದೇ ಕೇವಲ ಯುಜಿಸಿ ಮಾನ್ಯತೆ ದೊರಕಬಹುದೆಂಬ ನಿರೀಕ್ಷೆಯಲ್ಲಿರುವುದು ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ಕಮರುವಂತಾಗಿದೆ. ನಿರೀಕ್ಷೆಯ ಆಧಾರದ ಮೇಲೆ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡುತ್ತ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿದೆ. ಇದೇ ವೇಳೆ ವಿವಿಯ ಅಧ್ಯಯನ ಕೇಂದ್ರದಲ್ಲಿ ಪರೀಕ್ಷೆ ವೇಳೆ ಸಾಮೂಹಿಕ ಅಕ್ರಮ ನಡೆದ ವರದಿಯಾಗಿದ್ದು, ಈ ಕಾರಣದಿಂದಲೂ ಮಾನ್ಯತೆ ದೊರಕದಿರಬಹುದಾಗಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಹಳೆ ವಿದ್ಯಾರ್ಥಿಗಳಾದ ಬಿ.ಎಸ್.ಸುದೀಪ್, ಎಸ್.ಜಿ.ಚೇತನ್ ಇದ್ದರು.

ಸಿದ್ದರಾಮಯ್ಯ ವಿರುದ್ಧ ಹರಿಪ್ರಸಾದ್ ವಾಗ್ದಾಳಿ

ಪಕ್ಷದಿಂದ ಸೂಕ್ತ ತೀರ್ಮಾನ; ಸಚಿವ ಎಂ.ಬಿ.ಪಾಟೀಲ

ಬೆಂಗಳೂರು,ಸೆ.11(ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗುರಿಯಾಗಿಟ್ಟುಕೊಂಡು ಪರೋಕ್ಷ ವಾಗ್ದಾಳಿ ನಡೆಸಿರುವ ಬಿ.ಕೆ.ಹರಿಪ್ರಸಾದ್ ಅವರ ನಡೆ ಬಗ್ಗೆ ಪಕ್ಷವು ಗಮನಿಸುತ್ತಿದ್ದು ಸೂಕ್ತ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹರಿಪ್ರಸಾದ್ ಪಕ್ಷದ ಹಿರಿಯ ನಾಯಕರು. ಅವರು



ಎಐಸಿಸಿ ಪ್ರಧಾನ ಕಾರ್ಯದರ್ಶಿ, ರಾಜ್ಯಸಭಾ ಸದಸ್ಯ, ವಿಧಾನಪರಿಷತ್ತಿನಲ್ಲಿ ಪಕ್ಷದ ನಾಯಕರಾಗಿ ಕೆಲಸ ಮಾಡಿರುವವರು. ಅವರಿಂದ ಇಂತಹ ಮಾತು ಬರಬಾರದಿತ್ತು. ಅವರ ಮಾತುಗಳನ್ನು ಕೇಳಿಸಿಕೊಂಡು ಪಕ್ಷದ ರಾಷ್ಟ್ರೀಯ ನಾಯಕರು ಸುಮ್ಮನೆ ಕೂರುವುದಿಲ್ಲ ಎಂದರು. ಹರಿಪ್ರಸಾದ್ ಅವರಿಗೆ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸುರ್ಜೇವಾಲ, ವೇಣುಗೋಪಾಲ್ ಎಲ್ಲರೂ ಆತ್ಮೀಯರು. ಹೀಗಿರುವಾಗ ಅವರು ಎಲ್ಲ ವಿಚಾರಗಳನ್ನೂ ಪಕ್ಷದ ಒಳಗೇ ಮಾತನಾಡಬೇಕಿತ್ತು. ಆದರೆ ಅವರು ಬೀದಿಗೆ ಹೋಗಿದ್ದಾರೆ. ಇದು ಸರಿಯಲ್ಲ. ಇದರ ಪರಿಣಾಮ ಗಳನ್ನು ಅವರು ಎದುರಿಸಬೇಕಾಗುತ್ತದೆ. ಕಾಂಗ್ರೆಸ್ಸಿನಲ್ಲಿ ಯಾವ ಅಂತಃಕಲಹವೂ ಇಲ್ಲ ಎಂದು ಇದೇ ವೇಳೆ ಸ್ಪಷ್ಟಪಡಿಸಿದರು.

ದಸರಾ ಫಲಪುಷ್ಪ ಪ್ರದರ್ಶನದಲ್ಲಿ ಎಕ್ಸೋಟಿಕ್ ಪ್ಲಾಂಟ್ಸ್ ಸ್ಪೀಶಿಸ್ ಪ್ರದರ್ಶನಕ್ಕೆ ಆಹ್ವಾನ

ಮೈಸೂರು, ಸೆ.11– ತೋಟಗಾರಿಕೆ ಇಲಾಖೆ ಮತ್ತು ಜಿಲ್ಲಾ ತೋಟಗಾರಿಕೆ ಸಂಘ ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ನಿಶಾದ್ ಬಾಗ್ (ಕುಪ್ಪಣ್ಣ ಪಾರ್ಕ್) ಅವರಣದಲ್ಲಿ ಅಕ್ಟೋಬರ್ 15ರಿಂದ 24 ರವರೆಗೆ 2023–24ನೇ ಸಾಲಿನ ದಸರಾ ಫಲಪುಷ್ಪ ಪ್ರದರ್ಶನವನ್ನು ನಡೆಸಲು ತೀರ್ಮಾನಿಸಲಾಗಿದ್ದು, ಆರ್ಕಿಡ್ಸ್, ಅಂತೋರಿಯಂ, ಬೋನ್ಸಾಯಿ ಗಿಡಗಳು ಮತ್ತು ವಿವಿಧ ಎಕ್ಸೋಟಿಕ್ ಪ್ಲಾಂಟ್ಸ್ ಸ್ಪೀಶಿಸ್‌ಗಳನ್ನು ನಿಶಾದ್ ಬಾಗ್ ಆವರಣದಲ್ಲಿ ಪ್ರದರ್ಶಿಸಲು ಅವಕಾಶವಿದೆ.

ಆಸಕ್ತಿಯುಳ್ಳವರು ಅಕ್ಟೋಬರ್ 5ರೊಳಗೆ ಮೈಸೂರಿನ ಕರ್ಜನ್ ಪಾರ್ಕ್‌ನಲ್ಲಿರುವ ಜಿಲ್ಲಾ ತೋಟಗಾರಿಕೆ ಸಂಘದ ಕಚೇರಿಯಲ್ಲಿ ತಮ್ಮ ಹೆಸರು ನೋಂದಾಯಿಕೊಳ್ಳಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ಜಿಲ್ಲಾ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೀರಿನ ಮಟ್ಟ

ಕೆಆರ್‌ಎಸ್ ಅಣೆಕಟ್ಟು	ಕಬಿನಿ ಅಣೆಕಟ್ಟು	ಹಾರಂಗಿ ಅಣೆಕಟ್ಟು
ಗರಿಷ್ಠ ಮಟ್ಟ 124.80 ಅಡಿ	ಗರಿಷ್ಠ ಮಟ್ಟ 2284.00 ಅಡಿ	ಗರಿಷ್ಠ ಮಟ್ಟ 2859.00 ಅಡಿ
ಇಂದಿನ ಮಟ್ಟ 98.02 ಅಡಿ	ಇಂದಿನ ಮಟ್ಟ 2275.82 ಅಡಿ	ಇಂದಿನ ಮಟ್ಟ 2858.09 ಅಡಿ
ಹಿಂದಿನ ವರ್ಷದ ಮಟ್ಟ 124.42 ಅಡಿ	ಹಿಂದಿನ ವರ್ಷದ ಮಟ್ಟ 2283.53 ಅಡಿ	ಹಿಂದಿನ ವರ್ಷದ ಮಟ್ಟ 2856.90 ಅಡಿ
ನೆನ್ನೆಯ ಮಟ್ಟ 98.08 ಅಡಿ	ನೆನ್ನೆಯ ಮಟ್ಟ 2275.64 ಅಡಿ	ನೆನ್ನೆಯ ಮಟ್ಟ 2857.27 ಅಡಿ

ಅಡುಗೆ ಎಣ್ಣೆಗಳ ಬಗ್ಗೆ ಜಾಗೃತಿ, ಉಪನ್ಯಾಸ




ಮೈಸೂರು,ಸೆ.11–ಮೈಸೂರಿನ ಕುವೆಂಪುನಗರ ಆರ್.ಎಂ.ಪಿ ರಸ್ತೆಯ ಗಣಪ ಮರದ ಗಾಣಗಳಿಂದ ತಯಾರಾಗುವ ಅಡುಗೆ ಎಣ್ಣೆಗಳ ಕುಟೀರದಲ್ಲಿ ಜೆ.ಎಲ್.ಬಿ ರಸ್ತೆಯಲ್ಲಿರುವ ರೋಟರಿ ವಿದ್ಯಾಸಂಸ್ಥೆಯ ಮಕ್ಕಳಿಗೆ ಗಾಣದಿಂದ ತಯಾರಾಗುವ ಎಣ್ಣೆಗಳ ಬಗ್ಗೆ ಮಾಹಿತಿ ಮತ್ತು ವಿಶೇಷ ಉಪನ್ಯಾಸವನ್ನು ಏರ್ಪಡಿಸಲಾಗಿತ್ತು.

ತೋಟಗಾರಿಕೆ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಡಾ॥ಡಿ.ಎಸ್.ಚಂದ್ರಶೇಖರ್ ಮಾತನಾಡಿ, ಲಿಪಿಡ್ ಸೈನ್ಸ್ ಎಂದರೆ ಎಣ್ಣೆಕಾಳುಗಳು ಮತ್ತು ಮರದ ಎಣ್ಣೆಗಳ ಬಗ್ಗೆ ತಿಳಿಸುವ ಶಾಸ್ತ್ರವೂ ಆಗಿರುತ್ತದೆ. ಇತ್ತೀಚಿನ ದಿನಗಳಲ್ಲಿ ರಾಸಾಯನಿಕಗಳಿಂದ ತಯಾರಾದ ಆಹಾರ ಪದಾರ್ಥಗಳನ್ನು ತಿನ್ನುತ್ತಿದ್ದೇವೆ. ಇದರಿಂದ ಅನೇಕ ರೋಗಗಳು ಮನುಷ್ಯನಿಗೆ ಬರುತ್ತಿದೆ. ನಾವು ತಿನ್ನುವ ಆಹಾರ ನಮಗೆ ಆರೋಗ್ಯವನ್ನು ನೀಡುತ್ತದೆ. ದೈನಂದಿನ ಜೀವನದಲ್ಲಿ ಮನುಷ್ಯ ಕಂಡ ಕಂಡ ಎಣ್ಣೆಗಳನ್ನು ಬಳಸುತ್ತಿದ್ದಾನೆ. ಅದು ಮನುಷ್ಯನ ಆರೋಗ್ಯದಲ್ಲಿ ಏರುಪೇರು ಉಂಟು ಮಾಡುತ್ತಿದೆ. ಆಹಾರ ಪದಾರ್ಥಗಳನ್ನು ಬಳಸುವಾಗ ಎಚ್ಚರಿಕೆ ವಹಿಸುವುದು ಬಹಳ ಮುಖ್ಯ. ಅದರಲ್ಲಿ ಮುಖ್ಯವಾಗಿ ಸಿರಿಧಾನ್ಯಗಳು, ಗಾಣದಿಂದ ತಯಾರಾದ ಎಣ್ಣೆಗಳು, ಸಾವಯವ ಕೃಷಿಯಿಂದ ಮಾಡಿದ ಅನೇಕ ಪದಾರ್ಥಗಳನ್ನು ಉಪಯೋಗಿಸಿದಾಗ ಅನಾರೋಗ್ಯದಿಂದ ದೂರವಿರಬಹುದೆಂದು ವಿದ್ಯಾರ್ಥಿಗಳಿಗೆ ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ತೋಟಗಾರಿಕೆ ಇಲಾಖೆ ಅಧಿಕಾರಿ ಡಾ॥ಶಂಕರ ನಾರಾಯಣಶೆಟ್ಟಿ, ಪಶುಪಾಲನಾ ಇಲಾಖೆಯ ನಿವೃತ್ತ ನಿರ್ದೇಶಕ ಬಿ.ವಿ.ಶಿವಪ್ರಸಾದ್, ಗಣಪ ಗಾಣದ ಆಯಿಲ್ ಮಿಲ್‌ನ ಮಾಲೀಕರಾದ ವಿದ್ಯಾಮೋಹನ್, ಮೋಹನ್‌ಕುಮಾರ್ ಎಂ.ಎನ್, ಎಸ್.ನಾಗರಾಜು ಹಾಗೂ 70ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

12.9.2023 ಮಂಗಳವಾರ, ಮಳೆ ನಕ್ಷತ್ರ: ಪುಬ್ಬ 31.08.2023ರಿಂದ 13.09.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ,
ಶುಕ್ಲ ಪಕ್ಷ, ತಿಥಿ: ತ್ರಯೋದಶಿ, ನಕ್ಷತ್ರ: ಆಶ್ಲೇಷ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

■ **ಶ್ರೀ ಕಲಾನಿಕೇತನ ಕಾಲೇಜ್ ಆಫ್ ವಿಷುಯಲ್ ಆರ್ಟ್ :** ಎಂ.ಎಲ್. ಪವನ್‌ಕುಮಾರ್ ಅವರಿಂದ ಸ್ಥಿರ ಚಿತ್ರಣ ಕಲಾ ಪ್ರದರ್ಶನ, ಸ್ಥಳ: ಶ್ರೀ ಕಲಾನಿಕೇತನ ಆರ್ಟ್ ಗ್ಯಾಲರಿ, ಬೆಳಗ್ಗೆ 10 ರಿಂದ.

■ **ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು:** ಬಿ.ವಿ. ಕಾರಂತ ಕಾಲೇಜು ರಂಗ ತರಬೇತಿ ಶಿಬಿರ ಉದ್ಘಾಟನೆ ಮತ್ತು ನಾಟಕ ಪ್ರದರ್ಶನ, ಸಾನ್ನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಅಧ್ಯಕ್ಷತೆ: ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ.ಎಸ್. ಶಿವರಾಜಪ್ಪ, ಸೋರುತಿಹುದು ಸಂಬಂಧಗಳು ನಾಟಕ ಪ್ರದರ್ಶನ, ರಚನೆ: ಮಹಾಂತೇಶ್ ರಾಮದುರ್ಗ, ನಿರ್ದೇಶನ: ಪ್ರವೀಣ್ ಬೆಳ್ಳಿ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30ಕ್ಕೆ.

■ **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್:** ಶ್ರೀ ವೀರಭದ್ರೇಶ್ವರ ಸ್ವಾಮಿಯ ಜನ್ಮೋತ್ಸವ, ಮಹಾ ರಥೋತ್ಸವ ಹಾಗೂ ಶ್ರಾವಣ ಮಾಸದಲ್ಲಿ ನಡೆಯುವ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಆವರಣ, ಡಿ.ಬನುಮಯ್ಯ ರಸ್ತೆ, ಕೆಆರ್ ಮೊಹಲ್ಲಾ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ ಮತ್ತು ಮಹಿಳೆಯರಲ್ಲಿ ಋತುಬಂಧನ ಸಮಸ್ಯೆಗಳು ಕುರಿತು ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆಯಿಂದ.

■ **ಮೈಸೂರು ಜಿಲ್ಲಾ ಪೆಂಡಾಲ್ ಮಾಲೀಕರ ಸಂಘ, ಕರ್ನಾಟಕ ರಾಜ್ಯ ಶಾಮಿಯಾನ ಡೆಕೋರೇಷನ್, ಧ್ವನಿ ಮತ್ತು ಬೆಳಕು ಕ್ಷೇಮಾಭಿವೃದ್ಧಿ ಸಂಘ, ಆಲ್ ಇಂಡಿಯಾ ಟೆಂಟ್ ಅಂಡ್ ಡೆಕೋರೇಟರ್ಸ್ ವೆಲ್‌ಫೇರ್ ಅಸೋಸಿಯೇಷನ್:** ಬೆಳಗ್ಗೆ 11ಕ್ಕೆ ಸಾಂಸ್ಕೃತಿಕ ನಗರ ಮೈಸೂರು ವೈಭವ ರಾಜ್ಯ ಮಟ್ಟದ 3ನೇ ಮಹಾ ಅಧಿವೇಶನ, ಅಧ್ಯಕ್ಷತೆ : ದಾವಣಗೆರೆ ಕರ್ನಾಟಕ ರಾಜ್ಯ ಶಾಮಿಯಾನ ಡೆಕೋರೇಷನ್, ಧ್ವನಿ ಮತ್ತು ಬೆಳಕು ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಆರ್. ಲಕ್ಷ್ಮಣ್, ಮೈಸೂರು ಜಿಲ್ಲಾ ಪೆಂಡಾಲ್ ಮಾಲೀಕರ ಸಂಘದ ಅಧ್ಯಕ್ಷ ಶಿವಕುಮಾರ್, ಸಂಜೆ 4ಕ್ಕೆ ಸಮಾರೋಪ ಸಮಾರಂಭ, ಸ್ಥಳ: ದಸರಾ ವಸ್ತು ಪ್ರದರ್ಶನ ಮೈದಾನ.

■ **ಶ್ರೀ ಉತ್ತರಾದಿ ಮಠ, ರೋಗ ಮೋಚನ ಶ್ರೀ ಧನ್ವಂತರಿ ಸನ್ನಿಧಾನ:** ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಆಜ್ಞೆ ಹಾಗೂ ಅನುಗ್ರಹದಿಂದ ಶ್ರೀ ಧನ್ವಂತರಿ ಜಯಂತಿ ಪ್ರಯುಕ್ತ ಸಪ್ತ ರಾತ್ರೋತ್ಸವ ಬೆಳಗ್ಗೆ ಶ್ರೀ ಧನ್ವಂತರಿ ದೇವರಿಗೆ ಅರಿಶಿನ ಅಲಂಕಾರ, ಸಂಜೆ ಗಜ ವಾಹನೋತ್ಸವ, ಶ್ರೀ ಭಗವದ್ಗೀತಾ ಅಭಿಯಾನ, ಸುಪ್ರಸಿದ್ಧ ಪ್ರವಚನಕಾರರಾದ ಪಂ.ಶ್ರೀ ಬಾದರಾಯಣಾಚಾರ್ಯ ಅವರಿಂದ ಭಗವದ್ಗೀತೆ ಅಧ್ಯಾಯ–11 ಕುರಿತು ಪ್ರವಚನ, ಸ್ಥಳ: ರೋಗ ಮೋಚನ ಶ್ರೀ ಧನ್ವಂತರಿ ಸನ್ನಿದನ, ಉತ್ತರಾದಿ ಮಠ, ಸಂಜೆ 6ರಿಂದ.

■ **ಶ್ರೀ ಸುತ್ತೂರು ಮಠ (ಮೈಸೂರು ಶಾಖೆ):** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ಕೆ. ಅನಂತರಾಮು ಅವರಿಂದ ಲಕ್ಕಣ್ಣ ದವಡೇಶ ವಿರಚಿತ ಶಿವತತ್ತ್ವ ಚಿಂತಾಮಣಿ ಕುರಿತು ಪ್ರವಚನ, ವಿದ್ವಾನ್ ಕೃ.ರಮಚಂದ್ರ ಅವರಿಂದ ವಾಚನ, ಸ್ಥಳ: ಮಠದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30ಕ್ಕೆ.

■ **ಅನ್ನಪೂರ್ಣ ಕಣ್ಣಿನ ಆಸ್ಪತ್ರೆ :** ಗೌರಿ ಗಣೇಶ ಹಬ್ಬದ ಪ್ರಯುಕ್ತ ಹಿರಿಯ ನಾಗರಿಕರಿಗೆ ಉಚಿತ ಕಣ್ಣಿನ ತಪಾಸಣೆ ಶಿಬಿರ, ಸ್ಥಳ: ಅನ್ನಪೂರ್ಣ ಕಣ್ಣಿನ ಆಸ್ಪತ್ರೆ, ಶಾರದಾದೇವಿನಗರ, ಬೆಳಗ್ಗೆ 10 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಶ್ರದ್ಧೆಯ ಶಿಲ್ಪ, ಲೇಖನ ಮತ್ತು ಪ್ರಸ್ತುತಿ–ಟಿ.ಎಸ್.ಗೋಪಾಲ್, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಶ್ರೀ ರಾಂಭಟ್, 7.15 ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ, ಓದು ಪ್ರಸ್ತುತಿ–ಉಮೇಶ್ ಎಸ್.ಎಸ್., 8.30 ಕರೆಗೊಂದು ಗೀತೆ, 10.00 ಪಂಚವೀಣಾವಾದನ–ನಿರ್ದೇಶನ ಮೈಸೂರು ಎಸ್. ರಾಜಲಕ್ಷ್ಮಿ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.05 ವನಿತಾ ವಿಹಾರ, 12.30 ದೇವರನಾಮ–ಸುಧಾ ಮದುಸೂಧನ್, 12.45 ಸೈಬರ್ ಮಿತ್ರ ಮೈಸೂರಿನ ಸತೀಶ್ ಅವರೊಂದಿಗೆ ಸಂದರ್ಶನ, ಸಂದರ್ಶಕರು–ದಿವಾಕರ ಹೆಗಡೆ, 1.20 ಭಾವಗೀತೆಗಳು–ದೀಪಾ ಸತ್ಯನಾರಾಯಣ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.35ರಿಂದ ರಾತ್ರಿ 11ರವರೆಗೆ ಏಷಿಯಾ ಕಪ್ ಕ್ರಿಕೆಟ್ ಪಂದ್ಯದ ವೀಕ್ಷಕ ವಿವರಣೆ

ಮುಂದಿನ ಸಂಪುಟ ಸಭೆಯಲ್ಲಿ 62 ತಾಲೂಕು ಬರಪೀಡಿತ ನಿರ್ಧಾರ

● ಸಿಎಂ ಸಿದ್ದರಾಮಯ್ಯ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಮಾಹಿತಿ
● ಕಾವೇರಿ ನೀರು ನಿರ್ವಹಣೆ: ಸರ್ವ ಪಕ್ಷ ನಿಯೋಗ ಕರೆದೊಯ್ಯಲು ನಿರ್ಧಾರ

ಮೈಸೂರು,ಸೆ.11(ಎಂಟಿವೈ)–ಮುಂದಿನ ಸಂಪುಟ ಸಭೆಯಲ್ಲಿ ರಾಜ್ಯದ 62 ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಲು ನಿರ್ಧರಿಸಿದ್ದು, 136 ತಾಲೂಕುಗಳ ಬರ ಪರಿಸ್ಥಿತಿಯ ವರದಿ ಕೇಳಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿವಿಧ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಬೆಂಗಳೂರಿನಿಂದ ವಿಮಾನದಲ್ಲಿ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿ, ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಬರಪೀಡಿತ ಪ್ರದೇಶವೆಂದು ಘೋಷಿಸಲು ಅನುಸರಿಸಬೇಕಾದ ಮಾರ್ಗ ಸೂಚಿಯಂತೆ ರಾಜ್ಯದಲ್ಲಿ 62 ತಾಲೂಕು ಸದ್ಯಕ್ಕೆ ಬರಪೀಡಿತ ತಾಲೂಕಾಗಿವೆ. ಮುಂದಿನ ಕ್ಯಾಬಿನೆಟ್ ಸಭೆಯಲ್ಲಿ ಇವುಗಳನ್ನು ಬರಪೀಡಿತ ಎಂದು ಘೋಷಿಸಲು ನಿರ್ಧರಿಸಲಾಗಿದೆ. ಅಲ್ಲದೆ, ಇನ್ನೂ 136 ತಾಲೂಕುಗಳ ಬರ ಪರಿಸ್ಥಿತಿ ಕುರಿತು ವರದಿ ನೀಡುವಂತೆ ಸೂಚಿಸಲಾಗಿದೆ. ವರದಿ ಬಂದ ನಂತರ ಅವುಗಳಲ್ಲಿನ ಪರಿಸ್ಥಿತಿ ಅವಲೋಕಿಸಲಾಗುತ್ತದೆ ಎಂದರು.

ರಾಜ್ಯದ ರೈತರ ಹಿತ ಬಲಿಕೊಟ್ಟು ರಾಜಕಾರಣ ಮಾಡಲ್ಲ: ಕಾವೇರಿ ನೀರಿನ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ. ತಮಿಳುನಾಡಿಗೆ ನಾವು ಖುಷಿಯಿಂದ ನೀರು ಬಿಡುತ್ತಿಲ್ಲ. ನ್ಯಾಯಾಧೀಕರಣದ ಆದೇಶದ ಅನುಸಾರ ನೀರು ಬಿಡಲಾಗುತ್ತಿದೆ. ರಾಜ್ಯದ ಜನ ಹಾಗೂ ರೈತರ ಹಿತ ಕಾಯುವುದಕ್ಕೆ ನಾವು ಬದ್ಧರಾಗಿದ್ದೇವೆ. ಯಾವುದೇ ಕಾರಣಕ್ಕೂ ರೈತರ ಹಿತ ಬಲಿಕೊಟ್ಟು ನಾವು ರಾಜಕಾರಣ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ತುಟಿ ಬಿಚ್ಚಿದ ಬಿಜೆಪಿ ನಾಯಕರು: ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಕರೆದಿದ್ದ ಸರ್ವಪಕ್ಷ ಸಭೆಯಲ್ಲಿ ಬಿಜೆಪಿ ನಾಯಕರು ಕಾವೇರಿ ಜಲ ವಿವಾದ ಕುರಿತು ಸರ್ಕಾರವನ್ನು ಬೆಂಬಲಿಸುವುದಾಗಿ ಭರವಸೆ ನೀಡಿದ್ದರು. ಆದರೆ, ಕೆಆರ್‌ಎಸ್ ಜಲಾಶಯದ ಬಳಿ ಬಂದು ಪ್ರತಿಭಟನೆ ಮಾಡುವ ಮೂಲಕ ಸರ್ಕಾರದ ವಿರುದ್ಧ ಸುಳ್ಳು ಆರೋಪ ಮಾಡಿದ್ದಾರೆ. ಬಿಜೆಪಿಯದ್ದು ದ್ವಂದ್ವ ನೀತಿ. ರಾಜಕೀಯ ಲಾಭಕ್ಕಾಗಿ ಜನರನ್ನು ದಿಕ್ಕು ತಪ್ಪಿಸುವುದರ ಬದಲು, ಬಿಜೆಪಿ ನಾಯಕರು ರಾಜ್ಯದ ಜನರ ಹಿತಕ್ಕಾಗಿ ಕೇಂದ್ರ ಸರ್ಕಾರ ಮುಂದೆ ಕಾವೇರಿ ವಿವಾದದ ಬಗ್ಗೆ ಮಾತನಾಡಬೇಕು. ಕೇಂದ್ರದಲ್ಲಿ ತುಟಿ ಬಿಚ್ಚದ ಬಿಜೆಪಿಯವರು ಇಲ್ಲಿ ನಾಟಕ ಮಾಡುತ್ತಿದ್ದಾರೆ. ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡದಿರುವ ಬಗ್ಗೆ ಚಕಾರ ಎತ್ತಿಲ್ಲ. ಸಂಕಷ್ಟ ಸಮಯದಲ್ಲಿ ಸಂಕಷ್ಟ ಸೂತ್ರ ಅನುಸರಿಸಬೇಕಾಗಿದೆ. ಆದರೆ ತಮಿಳುನಾಡು ಸರ್ಕಾರ ಅನಗತ್ಯವಾಗಿ ಕ್ಯಾತೆ ತೆಗೆಯುತ್ತಿದೆ. ಮೇಕೆದಾಟು ಯೋಜನೆಗೆ ಸಂಬಂಧಿಸಿದ ಡಿಪಿಆರ್ ನೀಡಲಾಗಿದೆ ಎಂದರು.

ಸರ್ವಪಕ್ಷ ನಿಯೋಗ ಕರೆದೊಯ್ಯಲು ನಿರ್ಧಾರ: ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಬಿಜೆಪಿಯವರು ಯೋಜನೆಗೆ ಅನುಮತಿ ದೊರಕಿಸಿಕೊಡಲು ಮನವಿ ಮಾಡಿಕೊಳ್ಳಬೇಕು. ಆದರೆ ರಾಜ್ಯ ಬಿಜೆಪಿಯವರು ಸರ್ವಪಕ್ಷ ಸಭೆಯಲ್ಲಿ ಕಾವೇರಿ ವಿಷಯದಲ್ಲಿ ರಾಜ್ಯಸರ್ಕಾರಕ್ಕೆ ಸಹಕರಿಸುವುದಾಗಿ ತಿಳಿಸಿ, ಇಲ್ಲಿ ಇದೇ ವಿಷಯದ ಬಗ್ಗೆ ರಾಜಕೀಯ ಮಾಡುತ್ತಿದ್ದಾರೆ. ಮೈಸೂರು, ಬೆಂಗಳೂರು ಜಿಲ್ಲೆಗಳ ಜನರಿಗೆ ಕುಡಿಯುವ ನೀರು ಒದಗಿಸುವುದು ನೀರು ನೀತಿಯಂತೆ ಮೊದಲ ಆದ್ಯತೆಯಾಗಿದೆ. ಸರ್ವೋಚ್ಚ ನ್ಯಾಯಾಲಯದಲ್ಲಿ ತಮಿಳುನಾಡು ಪ್ರಕರಣ ದಾಖಲಿಸಿದ್ದು, ರಾಜ್ಯದ ನಿಲುವನ್ನು ಸರ್ಕಾರ ಸ್ಪಷ್ಟವಾಗಿ ತಿಳಿಸಲಿದೆ. ಯಾವುದೇ ಕಾರಣಕ್ಕೂ ರಾಜ್ಯದ ರೈತರ ಹಿತರಕ್ಷಣೆಯ ವಿಷಯದಲ್ಲಿ ರಾಜಕಾರಣ ಮಾಡಲ್ಲ. ಈ ವಿಚಾರವಾಗಿ ಸರ್ವಪಕ್ಷ ನಿಯೋಗದ ಭೇಟಿಗೆ ಪ್ರಧಾನಮಂತ್ರಿಗಳ ಸಮಯ ಕೋರಿದ್ದು, ಇಂದಿಗೂ ಯಾವುದೇ ಉತ್ತರ ಬಂದಿಲ್ಲವಾದ್ದರಿಂದ, ರಾಜ್ಯ ಬಿಜೆಪಿ ಸಂಸದರು, ಭೇಟಿಗೆ ಸಮಯ ನಿಗದಿಪಡಿಸಲಿ ಎಂದು ಒತ್ತಾಯಿಸಿದರು.

ಒಂದು ರಾಷ್ಟ್ರ ಒಂದು ಚುನಾವಣೆ ಕಾರ್ಯ ಅಸಾಧ್ಯ: ನಮ್ಮಲ್ಲಿ ಒಂದು ರಾಷ್ಟ್ರ, ಒಂದು ಚುನಾವಣೆ ಕುರಿತಂತೆ ಕೇಂದ್ರ ಸರ್ಕಾರ ಸಮಿತಿ ರಚನೆ ಮಾಡಿರುವುದರ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ, ಒಂದು ರಾಷ್ಟ್ರ, ಒಂದು ಚುನಾವಣೆ ವ್ಯವಸ್ಥೆ ಜಾರಿಗೊಳಿಸುವುದು ಸಾಧ್ಯವಿಲ್ಲ. ಕರ್ನಾಟಕ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಇತ್ತೀಚೆಗಷ್ಟೇ ಚುನಾವಣೆ ನಡೆದಿದೆ. ಲೋಕಸಭಾ ಚುನಾವಣೆ ವೇಳೆ ಈ ಎಲ್ಲ ರಾಜ್ಯ ವಿಧಾನಸಭೆಗಳನ್ನು ವಿಸರ್ಜಿಸಲು ಸಾಧ್ಯವಿದೆಯೇ ಅಥವಾ ಚುನಾವಣೆ ನಡೆಯುವವರೆಗೂ ರಾಷ್ಟ್ರಪತಿ ಅಧಿಕಾರ ಹೇರಲು ಸಾಧ್ಯವಿದೆಯೇ? ಎಂದು ಪ್ರಶ್ನಿಸಿದರಲ್ಲದೆ, ಈ ಹಿನ್ನೆಲೆಯಲ್ಲಿ ಒಂದು ರಾಷ್ಟ್ರ, ಒಂದು ಚುನಾವಣೆ ಜಾರಿಗೊಳಿಸುವುದು ಸುಲಭ ಸಂಗತಿಯಲ್ಲ ಎಂದು ಸಿಎಂ ಹೇಳಿದರು.


ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಪತ್ರಕರ್ತರೊಂದಿಗೆ ಸಿಎಂ ಸಿದ್ದರಾಮಯ್ಯ ಮಾತನಾಡಿದರು.

ರಾಜ್ಯ ನಾಯಕರ ಮೇಲೆ ಕೇಂದ್ರ ನಾಯಕರ ಮುನಿಸು: ಸಿದ್ದರಾಮಯ್ಯ

ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಪ್ರಧಾನಿ ಮೋದಿ ಸೇರಿದಂತೆ ಕೇಂದ್ರ ನಾಯಕರು ಸಾಕಷ್ಟು ಬಾರಿ ಬಂದು ಹೋದರೂ ರಾಜ್ಯದಲ್ಲಿ ಬಿಜೆಪಿ ಹೀನಾಯ ಸೋಲು ಕಂಡಿರುವುದರಿಂದ ಕೇಂದ್ರದ ಬಿಜೆಪಿ ನಾಯಕರಿಗೆ ರಾಜ್ಯ ಬಿಜೆಪಿ ನಾಯಕರ ಮೇಲೆ ಕೋಪವಿದೆ. ಆ ಕಾರಣದಿಂದಾಗಿ ರಾಜ್ಯದಲ್ಲಿ ಹೊಸ ಸರ್ಕಾರ ಅಧಿಕಾರಕ್ಕೆ ಬಂದು 110 ದಿನ ಕಳೆದರೂ ವಿರೋಧ ಪಕ್ಷದ ನಾಯಕನನ್ನು ಆಯ್ಕೆ ಮಾಡಿಕೊಳ್ಳಲು ಸಾಧ್ಯವಾಗಿಲ್ಲ. ರಾಜ್ಯ ನಾಯಕರನ್ನು ಕೇಂದ್ರ ಬಿಜೆಪಿ ನಾಯಕರು ಕಡೆಗಣಿಸುತ್ತಿರುವುದಕ್ಕೆ ಇದಕ್ಕಿಂತ ಬೇರೆ ನಿದರ್ಶನ ಬೇಕಾ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಮ್ಯಾಜಿಕ್ ಮಾಡಲು ಸಾಧ್ಯವಿಲ್ಲ

“ ರಾಜ್ಯದಲ್ಲಿ ನಡೆದ ವಿಧಾನಸಭಾ ಚುನಾವಣೆ ವೇಳೆ ಪ್ರಧಾನಿ ನರೇಂದ್ರ ಮೋದಿ ಮ್ಯಾಜಿಕ್ ಮಾಡುವುದಾಗಿ ಪದೇ ಪದೇ ಕರ್ನಾಟಕ ಪ್ರವಾಸ ಕೈಗೊಂಡರು. ಮೋದಿ ಅವರು ಓಡಾಡಿದ ಸ್ಥಳದಲ್ಲೆಲ್ಲಾ ಕಾಂಗ್ರೆಸ್‌ಗೆ ಅಭೂತಪೂರ್ವ ಜಯ ಸಿಕ್ಕಿದೆ. ಮೋದಿ ಬಂದರೆ ಮ್ಯಾಜಿಕ್ ಮಾಡಬಹುದು ಎಂದು ರಾಜ್ಯ ಬಿಜೆಪಿ ನಾಯಕರು ತಿಳಿದುಕೊಂಡಿದ್ದಾರೆ. ಇದರಿಂದ ಯಾವುದೇ ಮ್ಯಾಜಿಕ್ ಮಾಡಲು ಸಾಧ್ಯವಿಲ್ಲ. ಲೋಕಸಭಾ ಚುನಾವಣೆಯಲ್ಲೂ ಕಾಂಗ್ರೆಸ್ ಹೆಚ್ಚು ಸ್ಥಾನಗಳಲ್ಲಿ ಗೆಲುವು ಸಾಧಿಸುತ್ತದೆ.

–ಸಿದ್ದರಾಮಯ್ಯ, ಮುಖ್ಯಮಂತ್ರಿ

ನಾನಲ್ಲ, ನನ್ನ ಹೆಣವೂ ಬಿಜೆಪಿ ಸೇರಲ್ಲ...!

ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ನುಡಿ

● ಅಧಿಕಾರ ಇರಲಿ, ಇಲ್ಲದಿರಲಿ ನನ್ನದು ಜಾತ್ಯಾತೀತ ನಿಲುವು
● ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿಗೆ ಎದಿರೇಟು

ಮೈಸೂರು,ಸೆ.11(ಎಂಟಿವೈ)– ನನ್ನ ರಾಜಕೀಯ ಜೀವನದುದ್ದಕ್ಕೂ ಕೋಮುವಾದವನ್ನು ವಿರೋಧಿಸುತ್ತಲೇ ಬಂದಿದ್ದೇನೆ. ನಾನಲ್ಲ ನನ್ನ ಹೆಣವೂ ಬಿಜೆಪಿಗೆ ಹೋಗುವುದಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡುತ್ತಿದ್ದ ವೇಳೆ, ಸಿದ್ದರಾಮಯ್ಯ ಬಿಜೆಪಿಗೆ ಸೇರಲು ಮುಂದಾಗಿದ್ದರು ಎಂಬ ಹೆಚ್‌ಡಿಕೆ ಹೇಳಿಕೆ ಪ್ರತಿಕ್ರಿಯಿಸಿದ ಅವರು, ನಾನು ಬಿಜೆಪಿ ಸೇರಲು ಹೋಗಿದ್ದೇ ಎನ್ನುವುದ ಊಹಿಸಲು ಸಾಧ್ಯವೇ?. ನನ್ನ ರಾಜಕೀಯ ಜೀವನದುದ್ದಕ್ಕೂ ಕೋಮುವಾದ ವಿರೋಧಿಸುತ್ತಲೇ ಬಂದಿದ್ದೇನೆ. ನನ್ನದೇ ಆದ ತತ್ವ, ಆದರ್ಶದಿಂದ ಜ್ಯಾತ್ಯಾತೀತ ವಾದ ಅನುಸರಿಸುತ್ತಾ ಬಂದಿದ್ದೇನೆ. ಯಾವುದೇ ಕಾರಣಕ್ಕೂ ಕೋಮುವಾದಿಗಳೊಂದಿಗೆ ರಾಜಕೀಯ ಲಾಭಕ್ಕಾಗಿ ರಾಜೀ ಮಾಡಿಕೊಳ್ಳುವುದಿಲ್ಲ. ಹೆಚ್.ಡಿ.ಕುಮಾರಸ್ವಾಮಿ ಕುಟುಂಬ ರಾಜಕಾರಣಕ್ಕಾಗಿ ಬಿಜೆಪಿಯೊಂದಿಗೆ ಕೈಜೋಡಿಸಿದೆ. ನಾನಿರಲಿ, ನನ್ನ ಹೆಣವೂ ಬಿಜೆಪಿಯತ್ತ ಸುಳಿಯಲ್ಲ. ಅಧಿಕಾರ ಇರಲಿ, ಇಲ್ಲದೇ ಇರಲಿ ನಾವು ಕೋಮುವಾದಿಗಳ ಜೊತೆ ಕೈಜೋಡಿಸಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ವಿಚಾರ ಚರ್ಚಿಸಲು ಪ್ರಧಾನಿ ಮೋದಿ, ಕೇಂದ್ರ ಸಚಿವ ಅಮಿತ್ ಷಾ ಅವರನ್ನು ಬೇಟಿ ಮಾಡಿದ ಮಾತ್ರಕ್ಕೆ ಬಿಜೆಪಿಗೆ ಹೋಗಲು ಪ್ರಯತ್ನಿಸಿದರು ಎನ್ನುವ ಹೇಳಿಕೆ ಹತಾಶೆಯಿಂದ ಕೂಡಿದೆ. ನಾನು ಮೊದಲು ಸೋಷಿಯಲಿಸ್ಟ್ ಪಾರ್ಟಿಯಲ್ಲಿದ್ದೆ. ನಂತರ ಜೆಪಿ ಅವರ ಜನತಾ ಪಾರ್ಟಿ ಸೇರಿದ್ದೆ. ಆ ವೇಳೆ ಜನತಾ ಪಾರ್ಟಿಗೆ ಆರ್‌ಎಸ್‌ಎಸ್‌ನವರು ಬಂದು ಸೇರಿದರು. ದ್ವಿಸದಸ್ಯತ್ವಕ್ಕೆ ಒತ್ತಾಯಿಸುತ್ತಿದ್ದರು. ಇದಕ್ಕೆ ವಿರೋಧ ವ್ಯಕ್ತವಾದ ಕಾರಣ ಪಕ್ಷ ಬಿಟ್ಟರು. ಇಂತಹ ಸನ್ನಿವೇಶ ಇರಬೇಕಾದರೆ ಕೋಮುವಾದಿ ಪಕ್ಷಕ್ಕೆ ಹೋಗಲು ಸಾಧ್ಯವೇ ಎಂದು ಕಿಡಿಕಾರಿದರು.

ಈ ಸಂದರ್ಭದಲ್ಲಿ ಸಚಿವ ಚೆಲುವರಾಯಸ್ವಾಮಿ, ಶಾಸಕರಾದ ಕೆ.ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಸನಾತನ ಧರ್ಮದ ಬಳಿಕ ಉದಯನಿಧಿ ಸ್ಟಾಲಿನ್ ಮತ್ತೊಂದು ವಿವಾದಾತ್ಮಕ ಹೇಳಿಕೆ



ತೆಲಂಗಾಣ: ಇತ್ತೀಚೆಗೆ ಸನಾತನ ಧರ್ಮವನ್ನು ನಿರ್ಮೂಲನೆ ಮಾಡಬೇಕೆಂದು ಹೇಳಿಕೆ ನೀಡಿದ್ದ ತಮಿಳುನಾಡು ಕ್ರೀಡಾ ಹಾಗೂ ಯುವಜನ ವ್ಯವಹಾರಗಳ ಸಚಿವ ಉದಯನಿಧಿ ಸ್ಟಾಲಿನ್ ಈಗ ಮತ್ತೊಂದು ವಿವಾದದಲ್ಲಿ ಸುದ್ದಿಯಲ್ಲಿದ್ದಾರೆ. ಈಗಾಗಲೇ ಸನಾತನ ಧರ್ಮವನ್ನು ನಿರ್ಮೂಲನೆ ಮಾಡಬೇಕೆಂಬ ವಿಚಾರದಲ್ಲಿ ಸಾಕಷ್ಟು ಜನರಿಂದ ಛೀಮಾರಿ ಹಾಕಿಸಿಕೊಂಡಿರುವ ಉದಯನಿಧಿ ಇದೀಗ ಬಿಜೆಪಿಯನ್ನು ವಿಷಕಾರಿ ಹಾವಿಗೆ ಹೋಲಿಸಿ ಸುದ್ದಿಯಲ್ಲಿದ್ದಾರೆ.

ಲೋಕಸಭೆ ಸಂಸದ ಮತ್ತು ಡಿಎಂಕೆ ಉಪ ಪ್ರಧಾನ ಕಾರ್ಯದರ್ಶಿ ಎ ರಾಜಾ ಅವರು ಪ್ರಧಾನಿ ನರೇಂದ್ರ ಮೋದಿ ಯನ್ನು ಹಾವಿಗೆ ಹೋಲಿಸಿದ ಕೆಲವು ದಿನಗಳ ನಂತರ ಉದಯನಿಧಿ ಸ್ಟಾಲಿನ್ ಅವರ ಹೇಳಿಕೆಗಳು ಬಂದಿವೆ. ತಮಿಳುನಾಡಿನ ನೇವೇಲಿಯಲ್ಲಿ ಭಾನುವಾರ ನಡೆದ ಡಿಎಂಕೆ ಶಾಸಕ ಸಭಾ ರಾಜೇಂದ್ರನ್ ಅವರ ವಿವಾಹ ಸಮಾರಂಭದಲ್ಲಿ ಭಾಗಿಯಾಗಿ ಮಾತನಾಡಿದ ಅವರು ಪ್ರತಿಪಕ್ಷವಾದ ಎಐಎಡಿಎಂಕೆ ವಿರುದ್ಧ ವ್ಯಂಗ್ಯವಾಡಿದ್ದು, ಅದನ್ನು 'ಹಾವುಗಳಿಗೆ ಆಶ್ರಯ ನೀಡುವ ತಾಣ' ಎಂದು ಬಣ್ಣಿಸಿದರು.

ನಿಮ್ಮ ಮನೆಗೆ ಹಾವು ಬಂದರೆ ಏನು ಮಾಡುತ್ತೀರಿ ಅದನ್ನು ಮನೆಯ ಹತ್ತಿರದ ಕಾಡಿಗೆ ಬಿಡುತ್ತೀರಿ ಆದರೆ ಕೆಲ ದಿನಗಳ ಬಳಿಕ ಮತ್ತೆ ಆ ಹಾವು ನಿಮ್ಮ ಮನೆಗೆ ಬರುತ್ತದೆ. ಹಾಗಾಗಿ ಮನೆಯ ಬಳಿ ಹಾವುಗಳಿಗೆ ಆಶ್ರಯ ನೀಡುವ ಪೊದೆಗಳನ್ನು ತೆಗೆದರೆ ಮಾತ್ರ ಹಾವುಗಳಿಗೆ ರಕ್ಷಣೆ ಇಲ್ಲದಂತಾಗುತ್ತದೆ ಎಂದು ಎಐಎಡಿಎಂಕೆಯನ್ನು ಅಣಕಿಸಿದ್ದಾರೆ.

ದಸರಾ ಫಲಪುಷ್ಪ ಪ್ರದರ್ಶನದಲ್ಲಿ ಭಾಗವಹಿಸಲು ಉದ್ಯಮಿಗಳಿಗೆ ಆಹ್ವಾನ

ಮೈಸೂರು, ಸೆ.11– 2023–24ನೇ ಸಾಲಿನ ದಸರಾ ಫಲಪುಷ್ಪ ಪ್ರದರ್ಶನವನ್ನು ತೋಟಗಾರಿಕೆ ಇಲಾಖೆ ಮತ್ತು ಜಿಲ್ಲಾ ತೋಟಗಾರಿಕೆ ಸಂಘ ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ಅ.15ರಿಂದ 24ರವರೆಗೆ ನಿಶಾದ್‌ಬಾಗ್ (ಕುಪ್ಪಣ್ಣ ಪಾರ್ಕ್) ಅವರಣದಲ್ಲಿ ನಡೆಸಲು ತಿರ್ಮಾನಿಸಲಾಗಿದ್ದು, ಮೈಸೂರು ಜಿಲ್ಲೆಯಲ್ಲಿರುವ ವಿವಿಧ ಬೃಹತ್ ಕೈಗಾರಿಕಾ ಉದ್ಯಮದವರು ಫಲಪುಷ್ಪ ಪ್ರದರ್ಶನದಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಆಸಕ್ತಿಯುಳ್ಳವರು ಅ.5ರೊಳಗೆ ಮೈಸೂರಿನ ಕರ್ಜನ್ ಪಾರ್ಕ್‌ನಲ್ಲಿರುವ ಜಿಲ್ಲಾ ತೋಟಗಾರಿಕೆ ಸಂಘದ ಕಚೇರಿಯಲ್ಲಿ ತಮ್ಮ ಹೆಸರು ನೋಂದಾಯಿಕೊಳ್ಳಬಹುದು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಶಕ್ತಿ'ಯಿಂದ ಖಾಸಗಿ ಸಾರಿಗೆ ವ್ಯವಸ್ಥೆ ಬುಡಮೇಲು

● ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ವಾಗ್ದಾಳಿ ● ಕೂಡಲೇ ಖಾಸಗಿ ಒಕ್ಕೂಟದವರ ಬೇಡಿಕೆ ಈಡೇರಿಸಲು ಆಗ್ರಹ



ಬೆಂಗಳೂರು,ಸೆ.11(ಕೆಎಂಶಿ)–ಖಾಸಗಿ ಸಾರಿಗೆಯನ್ನೇ ನಂಬಿ ಜೀವನ ನಡೆಸುತ್ತಿರುವವರ ನೆರವಿಗೆ ಸರಕಾರ ಧಾವಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ, ರಾಜ್ಯ ಸರಕಾರವನ್ನು ಒತ್ತಾಯಿಸಿದ್ದಾರೆ.

ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ರಾಜ್ಯ ಕಾಂಗ್ರೆಸ್ ಸರಕಾರದ ಗ್ಯಾರಂಟಿಗಳ 'ಅಡ್ಡ ಪರಿಣಾಮ'ದ ತೀವ್ರತೆ ಜನರಿಗೆ ತಟ್ಟುತ್ತಿದೆ. ಸರಕಾರಿ ಸೌಲಭ್ಯಗಳ ಹಂಚಿಕೆಯಲ್ಲಿನ ಅಸಮಾನತೆ, ಪಕ್ಷಪಾತವು ಅರಾಜಕತೆ ಸೃಷ್ಟಿಸಿದೆ. ಅವೈಜ್ಞಾನಿಕ, ಅರೆ ಬೆಂದ 'ಶಕ್ತಿ' ಯೋಜನೆಯ ಫಲವಾಗಿ ಇವತ್ತು ಖಾಸಗಿ ಸಂಚಾರ ವ್ಯವಸ್ಥೆ ಬುಡಮೇಲಾಗಿದೆ. ಬದುಕಿಗೆ ಗ್ಯಾರಂಟಿ ಕೊಡಿ ಎಂದು ಅವರು ಆಗ್ರಹಪಡಿಸಿದ್ದಾರೆ.

ಸಾಲಸೋಲಾ ಮಾಡಿ ಕ್ಯಾಬ್, ಆಟೋ ಓಡಿಸಿಕೊಂಡು ಬದುಕುತ್ತಿದ್ದವರು ಬೀದಿ ಪಾಲಾಗಿದ್ದಾರೆ. ನಿತ್ಯದ ಬದುಕು ಸಾಗಿಸುವುದೇ ದುಸ್ತರ ಎನ್ನುವ ಸ್ಥಿತಿಯಲ್ಲಿ ಅವರಿದ್ದಾರೆ. ಇನ್ನು, ಸರಕಾರಿ ಸಾರಿಗೆಯಷ್ಟೇ ಉತ್ತಮವಾಗಿ ಸೇವೆ ಒದಗಿಸುತ್ತಿರುವ ಖಾಸಗಿ ಬಸ್ ಜಾಲವನ್ನು ಸರಕಾರ ಹಾಳು ಮಾಡಿದೆ. ಅನೇಕರ ಬದುಕಿಗೆ ಗ್ಯಾರಂಟಿ ಇಲ್ಲದಂತೆ ಮಾಡಿದೆ ಎಂದು ಹೇಳಿದ್ದಾರೆ.



ಈ ಬಂದ್‌ನಿಂದ ಸರಕಾರಿ ಸಾರಿಗೆಗೆ ಪರ್ಯಾಯವಾಗಿದ್ದ ಖಾಸಗಿ ಸಾರಿಗೆ ಜಾಲ ಇಂದು ಸಂಪೂರ್ಣ ಸ್ಥಗಿತವಾಗಿದೆ. ಶಾಲಾ ಮಕ್ಕಳು, ಸಾರ್ವಜನಿಕರು, ವಿಮಾನ ನಿಲ್ದಾಣಕ್ಕೆ ತೆರಳುವವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಹಣ್ಣು, ತರಕಾರಿ ಸೇರಿ ಅಗತ್ಯ ವಸ್ತುಗಳ ಸಾಗಣೆಯಲ್ಲಿ ವ್ಯತ್ಯಯ ಆಗಿದೆ. ಸರಕಾರವು ಖಾಸಗಿ ಸಾರಿಗೆ ಒಕ್ಕೂಟದವರ ಬೇಡಿಕೆಗಳನ್ನು ಪಕ್ಕಕ್ಕಿಟ್ಟು ಮಾನವೀಯತೆಯಿಂದ ಪರಿಶೀಲಿಸಬೇಕು. ಅವರ ಬೇಡಿಕೆಗಳು ಈಡೇರಿಸಲಾಗದ ಅಸಾಧ್ಯ ಡಿಮ್ಯಾಂಡ್‌ಗಳಲ್ಲ. ಅವರಿಗೂ ಕುಟುಂಬಗಳಿವೆ, ತಂದೆ–ತಾಯಿ, ಮಕ್ಕಳು ಇರುತ್ತಾರೆ ಎನ್ನುವುದನ್ನು ಸರಕಾರ ಮರೆಯಬಾರದು ಎಂದು ತಿಳಿಸಿದ್ದಾರೆ. ಹೋರಾಟ ಮಾಡುತ್ತಿರುವವರನ್ನು ಕಾಟಾಚಾರಕ್ಕೆ ಕರೆದು ಮಾತನಾಡುವುದಲ್ಲ. ವಾಸ್ತವತೆಗೆ ತಕ್ಕಂತೆ ಕಷ್ಟದಲ್ಲಿರುವ ಅವರಿಗೆ ನೆರವಾಗಬೇಕು. ನುಡಿದಂತೆಯೇ ನಡೆದು, 'ಗ್ಯಾರಂಟಿ ಬಾಧಿತರ' ಬದುಕಿಗೆ ಪರಿಹಾರ ಒದಗಿಸಬೇಕು ಎನ್ನುವುದು ನನ್ನ ಆಗ್ರಹ. ತಕ್ಷಣವೇ ಬಂದ್ ನಿರತರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಕರೆದು ಮಾತನಾಡಬೇಕು ಎಂದು ಅವರು ಒತ್ತಾಯಿಸಿದರು.

ಖಾಸಗಿ ಬಸ್ ಮಾಲೀಕರಿಗೆ 'ಶಕ್ತಿ'ಯಿಂದ ತೊಂದರೆ

ಬೆಂಗಳೂರು ಸೆ.11(ಕೆಎಂಶಿ)– ಖಾಸಗಿ ಬಸ್ ಮಾಲೀಕರಿಗೆ ಶಕ್ತಿ ಯೋಜನೆಯಿಂದ ತೊಂದರೆ ಆಗಿರುವುದು ನಿಜ. ಆದರೆ ಓಲಾ, ಉಬರ್ ಚಾಲಕರ ಪ್ರತಿಭಟನೆ ರಾಜಕೀಯ ಪ್ರೇರಿತ ಇರಬಹುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಖಾಸಗಿ ಬಸ್ ಮಾಲೀಕರಿಗೆ ಆಗಿರುವ ತೊಂದರೆಯನ್ನು ಬಗೆಹರಿಸಲು ಕ್ರಮ ತೆಗೆದುಕೊಳ್ಳುತ್ತೇವೆ. ಆಟೋ ಚಾಲಕರು ತೊಂದರೆ ಅನುಭವಿಸುತ್ತಿದ್ದರೂ ಅದನ್ನು ಬಗೆಹರಿಸುತ್ತೇವೆ. ನಮಗೂ ಅದರ ಬಗ್ಗೆ ಅರಿವಿದೆ ಎಂದರು. ಸರ್ಕಾರವನ್ನು ಹೆದರಿಸುವುದು, ಪ್ರಯಾಣಿಕರಿಗೆ ತೊಂದರೆ ಮಾಡುವುದು ಒಳ್ಳೆಯ ಬೆಳವಣಿಗೆಯಲ್ಲ. ಸರ್ಕಾರ ಖಂಡಿತವಾಗಿ ಅವರ ಎಲ್ಲಾ ಸಮಸ್ಯೆಗಳನ್ನು ಕೇಳುತ್ತದೆ ಮತ್ತು ಸೂಕ್ತ ಪರಿಹಾರ ಒದಗಿಸುತ್ತದೆ. ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಒಳ್ಳೆಯದಾಗಿದೆಯಲ್ಲ ಎಂದು ಹೇಳಿದರು.

ಸಂಸದ ಸ್ಥಾನದಿಂದ ಪ್ರಜ್ವಲ್ ರೇವಣ್ಣ ಅನರ್ಹತೆಗೆ ತಡೆ ನೀಡಲು ಹೈಕೋರ್ಟ್ ನಕಾರ


ಬೆಂಗಳೂರು: ಹಾಸನ ಸಂಸದ ಸ್ಥಾನದಿಂದ ತಮ್ಮನ್ನು ಅನರ್ಹಗೊಳಿಸಿದ ಆದೇಶಕ್ಕೆ ತಡೆ ಕೋರಿ ಜೆಡಿಎಸ್ ಯುವ ನಾಯಕ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.



ಪ್ರಜ್ವಲ್ ರೇವಣ್ಣ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೆ.ನಟರಾಜನ್ ಅವರು ತೀರ್ಪನ್ನು ಕಾಯ್ದಿರಿಸಿದ್ದರು. ಇಂದು ತೀರ್ಪು ಪ್ರಕಟಿಸಿದ ನ್ಯಾಯಮೂರ್ತಿ ಕೆ.ನಟರಾಜನ್ ಅವರು, ಸಂಸದ ಸ್ಥಾನದಿಂದ ಅನರ್ಹಗೊಳಿಸಿದ ಆದೇಶಕ್ಕೆ ತಡೆ ನೀಡಲು ನಿರಾಕರಿಸಿದ್ದಾರೆ. ಸಂಸದ ಸ್ಥಾನದಿಂದ ಅನರ್ಹಗೊಳಿಸಿದ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವವರೆಗೆ ಅನರ್ಹತೆ ಆದೇಶಕ್ಕೆ ತಡೆ ನೀಡುವಂತೆ ಕೋರಿ ಪ್ರಜ್ವಲ್ ರೇವಣ್ಣ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ವಿಚಾರಣೆ ವೇಳೆ ಅನರ್ಹತೆ ಆದೇಶಕ್ಕೆ ತಡೆ ನೀಡಲು ತೀವ್ರ ವಿರೋಧ ವ್ಯಕ್ತಪಡಿಸಿದ ಅರ್ಜಿದಾರ ದೇವರಾಜೇಗೌಡ ಅವರ ಪರ ವಕೀಲರು, ಈಗಾಗಲೇ ಲೋಕಸಭೆಗೆ ಅನರ್ಹತೆ ಮಾಹಿತಿ ನೀಡಿರುವುದರಿಂದ ಆದೇಶಕ್ಕೆ ತಡೆ ನೀಡಲು ಬರುವುದಿಲ್ಲ ಎಂದು ವಾದಿಸಿದರು. ಚುನಾವಣಾ ಅಕ್ರಮದ ಆಧಾರದಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಮೊಮ್ಮಗ ಪ್ರಜ್ವಲ್ ರೇವಣ್ಣ ಅವರ ಆಯ್ಕೆಯನ್ನು ಅಸಿಂಧುಗೊಳಿಸಿ, ಸೆಪ್ಟೆಂಬರ್ 1ರಂದು ಹೈಕೋರ್ಟ್ ತೀರ್ಪು ನೀಡಿದೆ.


ಮಾಜಿ ಶಾಸಕ ಎಲ್.ನಾಗೇಂದ್ರ ಅವರು ತಮ್ಮ ಜನ್ಮದಿನದ ಹಿನ್ನೆಲೆಯಲ್ಲಿ ಸೋಮವಾರ ಬೆಳಗ್ಗೆ ನಂಜನಗೂಡು ಶ್ರೀ ನಂಜುಂಡೇಶ್ವರನಿಗೆ ಕುಟುಂಬ ಸಮೇತ ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಅವರ ಅಭಿಮಾನಿಗಳು, ಹಿತೈಷಿಗಳು ಅವರೊಂದಿಗಿದ್ದರು.


ಮೈಸೂರಿನ ಒಂಟಿಕೊಪ್ಪಲು ಶ್ರೀ ಲಕ್ಷ್ಮಿ ವೆಂಕಟರಮಣ ದೇವಸ್ಥಾನದಲ್ಲಿ ಮಾಜಿ ಶಾಸಕ ಎಲ್.ನಾಗೇಂದ್ರ ಅವರ ಹುಟ್ಟಹಬ್ಬದ ಹಿನ್ನೆಲೆಯಲ್ಲಿ ವಿಶೇಷ ಪೂಜೆ ಸಲ್ಲಿಸಿದ ಅವರ ಅಭಿಮಾನಿಗಳು ನಂತರ ಅವರಿಗೆ ಭಾರೀ ಹಾರ ಹಾಕಿ ಅಭಿನಂದಿಸಿದರು.


ಚಾಮರಾಜ ಕ್ಷೇತ್ರದ ಮಾಜಿ ಶಾಸಕ ಎಲ್.ನಾಗೇಂದ್ರ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಅಭಿಮಾನಿಗಳು, ಹಿತೈಷಿಗಳು ಹಾರ ಹಾಕಿ ಅಭಿನಂದಿಸಿ, ಶುಭಾಶಯ ಕೋರಿದರು.

ಸಂಸತ್ ವಿಶೇಷ ಅಧಿವೇಶನದಲ್ಲಿ ಒಂದು ರಾಷ್ಟ್ರ–ಒಂದು ಚುನಾವಣೆ, ಮಹಿಳಾ ಮೀಸಲಾತಿ ಮಸೂದೆ ಮಂಡನೆ ಸಾಧ್ಯತೆ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ದಿಢೀರ್ ಸಂಸತ್ ವಿಶೇಷ ಅಧಿವೇಶನ ಕರೆದಿರುವುದು ಎಲ್ಲರಿಗೂ ಅಚ್ಚರಿ ಮೂಡಿಸಿದೆ.

ಈ ವಿಶೇಷ ಅಧಿವೇಶನ ಕರೆದಿರುವ ಹಿಂದಿನ ಉದ್ದೇಶದ ಬಗ್ಗೆ ಕೇಂದ್ರ ಇದುವರೆಗೆ ಯಾವುದೇ ಮಾಹಿತಿಯನ್ನು ಬಹಿರಂಗಪಡಿಸಿಲ್ಲ. ಆದರೆ, ಈ ಅಧಿವೇಶನದಲ್ಲಿ ಒಂದು ರಾಷ್ಟ್ರ–ಒಂದು ಚುನಾವಣೆ, ಮಹಿಳಾ ಮೀಸಲಾತಿ ಮಸೂದೆ ಸೇರಿದಂತೆ ಕೆಲವು ಮಹತ್ವದ ಮಸೂದೆಗಳನ್ನು ಮಂಡಿಸುವ ಸಾಧ್ಯತೆ ಇದೆ. ವಿಶೇಷ ಅಧಿವೇಶನದಲ್ಲಿ "ಒಂದು ರಾಷ್ಟ್ರ ಒಂದು ಚುನಾವಣೆ" ಮಸೂದೆ, ಏಕ ರೂಪ ನಾಗರಿಕ ಸಂಹಿತೆ ಪರಿಚಯಿಸುವ ಮಸೂದೆ ಮತ್ತು ಮಹಿಳಾ ಮೀಸಲಾತಿ ಮಸೂದೆ ಸಹ ಚರ್ಚೆಗೆ ಬರಲಿವೆ ಎನ್ನಲಾಗುತ್ತಿದೆ.



ಯುಸಿಸಿಯು ಬಿಜೆಪಿಯ ಅತ್ಯಂತ ಹಳೆಯ ಚುನಾವಣಾ ಭರವಸೆಗಳಲ್ಲಿ ಒಂದಾಗಿದೆ ಮತ್ತು ಇದು ದೀರ್ಘಕಾಲದಿಂದ ಬಾಕಿ ಉಳಿದಿದೆ. 2024ರ ಸಾರ್ವತ್ರಿಕ ಚುನಾವಣೆಗೆ ಮುಂಚಿತವಾಗಿ ರಾಜಕೀಯ ಬೆಂಬಲವನ್ನು ಕ್ರೋಢೀಕರಿಸಲು ಪ್ರಧಾನಿ ಮೋದಿ ಅಂತಿಮವಾಗಿ ಯುಸಿಸಿ ಜಾರಿಗೊಳಿಸುತ್ತಾರೆಯೇ ಎನ್ನುವುದನ್ನು ತಿಳಿಯಲು ಇನ್ನು ಒಂದು ವಾರ ಕಾಯಬೇಕು. ಇನ್ನು, 2014ರಲ್ಲಿ, ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಜಾರಿಗೊಳಿಸುವುದಾಗಿ ಭರವಸೆ ನೀಡಿತ್ತು. 2019ರ ಪ್ರಣಾಳಿಕೆಯಲ್ಲೂ ಮಹಿಳೆ ಮೀಸಲಾತಿ ಭರವಸೆ ನೀಡಿತ್ತು ಆದರೆ ಇದುವರೆಗೂ ಈ ನಿಟ್ಟಿನಲ್ಲಿ ಕೇಂದ್ರ ಯಾವುದೇ ಕ್ರಮ ತೆಗೆದುಕೊಂಡಿಲ್ಲ.

ಈಗ ಈ ಮಸೂದೆಯನ್ನು ಅಂಗೀಕರಿಸುವುದರಿಂದ ಪ್ರಧಾನಿ ಮೋದಿ ಮಹಿಳಾ ಮತದಾರರ ಬೆಂಬಲ ಗಳಿಸಬಹುದು ಮತ್ತು ಪ್ರತಿಸ್ಪರ್ಧಿಗಳಿಗೆ ಶಾಕ್ ನೀಡಬಹುದು ಎನ್ನಲಾಗುತ್ತಿದೆ. ಸೆ.18ರಿಂದ 22ರವರೆಗೆ 5 ದಿನಗಳ ಸಂಸತ್ ವಿಶೇಷ ಅಧಿವೇಶನ ನಡೆಸಲಾಗುವುದು ಎಂದು ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಎಕ್ಸ್‌ನಲ್ಲಿ ಪ್ರಕಟಿಸಿದ್ದಾರೆ.

ಮೈಸೂರು ವಿವಿ ವಿದ್ಯಾರ್ಥಿ ಆತ್ಮಹತ್ಯೆ ಯತ್ನ ಪ್ರಕರಣ

ವಿವಿ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ವೆಂಕಟೇಶ್ ವಿರುದ್ಧ ಪ್ರಕರಣ ದಾಖಲು

ಮೈಸೂರು, ಸೆ. 11– ಮೈಸೂರು ವಿವಿ ವಿದ್ಯಾರ್ಥಿ ಆತ್ಮಹತ್ಯೆಗೆ ಯತ್ನಿಸಿದ ಪ್ರಕರಣದಲ್ಲಿ ವಿವಿಯ ಕ್ರೀಡಾ ವಿಭಾಗದ ನಿರ್ದೇಶಕ ಡಾ. ವೆಂಕಟೇಶ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಹಾಸನ ಜಿಲ್ಲೆ ಭುವನಹಳ್ಳಿ ಗ್ರಾಮದ ಕೆ.ಜೆ.ಗಗನ್(24) ಎಂಬ ವಿದ್ಯಾರ್ಥಿ ಮೈಸೂರು ವಿವಿಯ ದೈಹಿಕ ಶಿಕ್ಷಣ ಕ್ರೀಡಾ ಅಧ್ಯಯನ ವಿಭಾಗದ ಹಾಸ್ಟೆಲ್‌ನಲ್ಲಿದ್ದುಕೊಂಡು, ವ್ಯಾಸಂಗ ಮಾಡುತ್ತಿದ್ದ. ಈತ ಸೆಪ್ಟೆಂಬರ್ 9ರಂದು ಬೆಳಗ್ಗೆ 11.30ರ ಸುಮಾರಿನಲ್ಲಿ ಕ್ರಾಫರ್ಡ್ ಹಾಲ್‌ನ ಉಪಕುಲಪತಿಗಳ ಕಚೇರಿ ಮುಂಭಾಗ ಬಿಪಿ ಮಾತ್ರೆಗಳನ್ನು ಸೇವಿಸಿ ಅಸ್ವಸ್ಥನಾಗಿ ಕುಳಿತಿದ್ದ. ಈತನನ್ನು ದೈಹಿಕ ಶಿಕ್ಷಣ ವಿಭಾಗದ ಕಾರ್ಯದರ್ಶಿ ಟಿ.ಎಸ್. ರವಿ ಮತ್ತು ಸ್ನೇಹಿತ ಸುಧೀರ್ ಅವರುಗಳು ಕೆಆರ್ ಆಸ್ಪತ್ರೆಗೆ ಕರೆದೊಯ್ದಿದ್ದರು. ಅಲ್ಲಿ ಪ್ರಥಮ ಚಿಕಿತ್ಸೆ ನೀಡಿದ ನಂತರ ಹೆಚ್ಚಿನ ಚಿಕಿತ್ಸೆಗಾಗಿ ಒಂಟಿಕೊಪ್ಪಲ್‌ನ ಡಿಆರ್‌ಎಂ ಆಸ್ಪತ್ರೆಯಲ್ಲಿ ಆತನನ್ನು ದಾಖಲಿಸಲಾಗಿತ್ತು.

ಈ ಸಂಬಂಧ ಅಂದು ರಾತ್ರಿ ಲಕ್ಷ್ಮೀಪುರಂ ಠಾಣೆಗೆ ದೂರು ಸಲ್ಲಿಸಿರುವ ಗಗನ್, ತಾನು ಸೆಪ್ಟೆಂಬರ್ 9ರಂದು ಬೆಳಗ್ಗೆ ಓವಲ್ ಗ್ರೌಂಡ್ ಸಮೀಪದ ಬ್ಯಾಸ್ಕೆಟ್ ಬಾಲ್ ಕೋರ್ಟ್‌ಗೆ ತೆರಳಿದಾಗ ಅಲ್ಲಿದ್ದ ಮೋಹನ್ ಎಂಬುವರು ತನ್ನನ್ನು ಕ್ರೀಡೆಯಲ್ಲಿ ಭಾಗವಹಿಸುವುದು ಬೇಡ ಎಂದು ತಿಳಿಸಿದ್ದು, ಕ್ರೀಡಾ ವಿಭಾಗದ ನಿರ್ದೇಶಕ ಡಾ.ವೆಂಕಟೇಶ್ ಅವರನ್ನು ಭೇಟಿ ಮಾಡುವಂತೆ ಹೇಳಿದರು. ಅದರಂತೆ ತಾನು ವೆಂಕಟೇಶ್ ಅವರನ್ನು ಭೇಟಿ ಮಾಡಿದಾಗ ನನ್ನನ್ನು ಕ್ರೀಡೆಯಲ್ಲಿ ಭಾಗವಹಿಸುವುದು ಬೇಡ ಎಂದು ಹೇಳಿದ್ದಲ್ಲದೇ, ನನ್ನ ವಿರುದ್ಧ ಹುಡುಗಿಯಿಂದ ದೂರು ನೀಡಿಸಿ, ವಿದ್ಯಾಭ್ಯಾಸಕ್ಕೆ ತೊಂದರೆ ಕೊಡುವುದಾಗಿಯೂ ಪರೀಕ್ಷೆಯಲ್ಲಿ ಫೇಲ್ ಮಾಡುವುದಾಗಿಯೂ ತಿಳಿಸಿದರು. ವೆಂಕಟೇಶ್ ಅವರು ಕಳೆದ ಜುಲೈ 18ರಂದು ಕೂಡ ತನ್ನ ಮೇಲೆ ಹಲ್ಲೆ ನಡೆಸಿದ್ದು, ಆ ವೇಳೆ ಕೆಆರ್ ಆಸ್ಪತ್ರೆಯಲ್ಲಿ ಹೊರರೋಗಿಯಾಗಿ ಚಿಕಿತ್ಸೆ ಪಡೆದಿರುವುದಾಗಿಯೂ ಆ ವೇಳೆ ತನ್ನ ಪೋಷಕರನ್ನು ಕರೆಸಿ, ವೆಂಕಟೇಶ್ ಕ್ಷಮೆಯಾಚಿಸಿದ್ದರಿಂದ ಆಗ ದೂರು ಸಲ್ಲಿಸಿಲ್ಲವೆಂದು ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಿರುವ ಗಗನ್, ವೆಂಕಟೇಶ್ ಅವರ ಕಿರುಕುಳದಿಂದಾಗಿ ತಾನು 25–30 ಬಿಪಿ ಮಾತ್ರೆ ಸೇವಿಸಿ ಆತ್ಮಹತ್ಯೆಗೆ ಪ್ರಯತ್ನಿಸಿದ್ದಾಗಿ ತಿಳಿಸಿದ್ದಾನೆ. ಈ ದೂರನ್ನು ಆಧರಿಸಿ ಲಕ್ಷ್ಮೀಪುರಂ ಠಾಣೆ ಪೊಲೀಸರು, ಡಾ.ವೆಂಕಟೇಶ್ ವಿರುದ್ಧ ಭಾರತೀಯ ದಂಡ ಸಂಹಿತೆ 325, 506ರಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

ನಿಧನ

ಶಂಕರಲಾಲ್ ಪುರೋಹಿತ್

ಮೈಸೂರು,ಸೆ.11–ಮೈಸೂರಿನ ಅಗ್ರಹಾರದ ರಂಜನಾ ಟೆಕ್ಸ್‌ಟೈಲ್ಸ್ ಮಾಲೀಕರಾದ ಶಂಕರಲಾಲ್ (73) ಅವರು ಇಂದು ನಿಧನರಾದರು. ಮೃತರು ಪತ್ನಿ ಸುನ್ನಿದೇವಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಸಂಜೆ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರ ಘಾಟ್‌ನಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ನಕ್ಕರೆ ಅದೇ ಸ್ವರ್ಗ

ಮಾರಾಟಗಾರ: "ಪ್ಯಾರಾಚ್ಯೂಟ್! ಪ್ಯಾರಾಚ್ಯೂಟ್! ಯಾವುದನ್ನು ಖರೀದಿಸಿದರೂ ಸಾವಿರ ರೂಪಾಯಿ, ಆಕಾಶದಿಂದ ಬೀಳುವಾಗ ಬಟನ್ ಒತ್ತಿದರೆ ಥಟ್ಟನೆ ಬಿಚ್ಚಿಕೊಳ್ಳುವ ಹೊಸ ನಮೂನೆ ಪ್ಯಾರಾಚ್ಯೂಟ್"
ದಾರಿ ಹೋಕನೊಬ್ಬ : ಒಂದು ವೇಳೆ ಬಟನ್ ಅಮುಕಿದರೂ ಬಿಚ್ಚಿಕೊಳ್ಳದಿದ್ದರೆ?
ಮಾರಾಟಗಾರ : "ಸಾವಿರ ರೂಪಾಯಿ ವಾಪಸ್!!"

ಮೈಸೂರು ಮಿತ್ರ
ಮಂಗಳವಾರ, 12 ಸೆಪ್ಟೆಂಬರ್ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........
ಕೆಲಸ ಸಾಧಿಸಲಿಚ್ಛಿಸುವವರು ಮೊದಲು ಬಿಗುಮಾನ ಬಿಡಬೇಕು
–ರಾಮಾಯಣ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತಪ್ಪಿ ಬಿದ್ದವನಿಗೆ ತೆಪ್ಪ ಏನು ಮಾಡೀತು?

ನಿಮ್ಮ ಪತ್ರಗಳು

ಅನ್ಯ ಧರ್ಮಗಳಿಗೂ ಬೆಲೆ ಕೊಡುವ ಬುದ್ಧಿ ಕಲಿಯಲಿ

ಮಾನ್ಯರೆ,

'ಮೈಸೂರು ದಸರಾ' ಎಂಬುದು ಪ್ರಪಂಚದಾದ್ಯಂತ ಪ್ರಖ್ಯಾತಿ ಪಡೆದಿದೆ. ಈ ಮೈಸೂರು ದಸರಾ ಅಂದವನ್ನು ಕಣ್ತುಂಬಿಕೊಳ್ಳಲು ದೇಶ ವಿದೇಶಗಳಿಂದ ಜನರು ಆಗಮಿಸುತ್ತಾರೆ. ಈ ದಸರಾ ವೇಳೆ "ಮಹಿಷ ದಸರಾ" ನೆಪದಲ್ಲಿ ಕೆಲವರು ಬೇಕಂತಲೇ ಇಲ್ಲ ಸಲ್ಲದ ಆರೋಪಗಳನ್ನು ಮಾಡುತ್ತಾ ದಸರಾ ಹಬ್ಬಕ್ಕೆ ಕಳಂಕವನ್ನು ಉಂಟು ಮಾಡುತ್ತಿದ್ದಾರೆ. ಇನ್ನೂ ಒಂದು ಕುಚೋದ್ಯ ಎಂದರೆ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಇದ್ದಾಗ ಈ ಕೂಗಿಗೆ ಮತ್ತಷ್ಟು ಬಲ ಬರುತ್ತದೆ. ಇನ್ನೂ ಒಂದು ಸೋಜಿಗವೆಂದರೆ ಹಿಂದೂಗಳೇ ಈ ಸನಾತನ ಹಿಂದೂ ಹಬ್ಬಕ್ಕೆ ಅದು ನಡೆಯದಂತೆ ತೊಂದರೆಗಳನ್ನು ಉಂಟುಮಾಡುವುದು!

ದಸರಾ ಹಬ್ಬವನ್ನು ಟೀಕಿಸುವ ಭರದಲ್ಲಿ ನಾಡದೇವಿ ಚಾಮುಂಡೇಶ್ವರಿಯನ್ನು ಸಹ ಟೀಕಿಸಿ ವಿರೋಧ ಮಾಡುತ್ತಾರೆ. ತಮಿಳುನಾಡಿನ ಮುಖ್ಯಮಂತ್ರಿ ಸ್ಟಾಲಿನ್ ಅವರ ಮಗ ಉದಯನಿಧಿ ಸ್ಟಾಲಿನ್ ಸನಾತನ ಧರ್ಮ ಒಂದು ಧರ್ಮವೇ ಅಲ್ಲ ಎಂದು ಅಪ್ಪಣೆ ಕೊಡಿಸಿದ್ದಾರೆ. ಅವರು ಪಾಲಿಸುತ್ತಿರುವ ಧರ್ಮಕ್ಕಿಂತ ನಮ್ಮ ಹಿಂದೂ ಧರ್ಮ ಬಹಳ ಪುರಾತನವಾದುದು. ಇಡೀ ಪ್ರಪಂಚದ ಜನರು ಹಿಂದೂ ಧರ್ಮಕ್ಕೆ ಬಹಳ ಬೆಲೆ ಕೊಡುತ್ತಾರೆ. ಆದರೆ ನಮ್ಮವರೇ ನಮ್ಮ ಧರ್ಮವನ್ನು ಟೀಕಿಸುವ ಧೈರ್ಯ ಮಾಡುತ್ತಾರೆ.

ಅವರು ಪಾಲಿಸುತ್ತಿರುವ ಧರ್ಮವನ್ನು ಟೀಕಿಸಿದರೆ ಅವರು ಸುಮ್ಮನಿರುತ್ತಾರೆಯೇ? ಇನ್ನಾದರೂ ಅವರು ಎಚ್ಚೆತ್ತುಕೊಂಡು ಅನ್ಯ ಧರ್ಮಗಳಿಗೂ ಸಹ ಬೆಲೆ ಕೊಡುವ ಬದ್ಧಿಯನ್ನು ಕಲಿಯಲಿ. ಇಲ್ಲದಿದ್ದರೆ ಜನಗಳೇ ಅವರಿಗೆ ಬುದ್ಧಿ ಕಲಿಸುವ ಕಾಲ ದೂರವಿಲ್ಲ. **–ಬೇಲೂರು ದ.ಶಂ.ಪ್ರಕಾಶ್, ಮೈಸೂರು**

ಎಲ್ಲರೂ ಮಾಡುವುದು...

ಮಾನ್ಯರೆ,

ಪಕ್ಷದ ಉಳಿವಿಗಾಗಿ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿರುವುದಾಗಿ ಜೆಡಿಎಸ್‌ನ ರಾಷ್ಟ್ರೀಯ ಅಧ್ಯಕ್ಷ ಹಾಗೂ ಮಾಜಿ ಪ್ರಧಾನಮಂತ್ರಿ ಹೆಚ್.ಡಿ.ದೇವೇಗೌಡ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಪಕ್ಷದ ಕಾರ್ಯಕರ್ತರ ಸಮಾವೇಶದಲ್ಲಿ ಘೋಷಿಸುವುದರೊಂದಿಗೆ, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಮೈತ್ರಿ ಅಧಿಕೃತವಾಗಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕೇವಲ 19 ಸ್ಥಾನಗಳನ್ನು ಪಡೆದ ಜೆಡಿಎಸ್ ತೀವ್ರ ಮುಖಭಂಗ ಅನುಭವಿಸಿದ್ದರೂ ಸಹ, ಪಕ್ಷಕ್ಕೆ ಬಲ ತುಂಬಲು ನಾನಾ ರೀತಿಯ ಕಸರತ್ತು ನಡೆಸುತ್ತಿದೆ. ಜಾತ್ಯಾತೀತ ಜನತಾದಳದ ಇತಿಹಾಸ ಹಲವಾರು ಏಳು ಬೀಳುಗಳಿಂದ ಕೂಡಿದೆ. ಆ ಪಕ್ಷದ ಮುಂಚೂಣಿಯಲ್ಲಿದ್ದ ಸಿದ್ದರಾಮಯ್ಯನವರು, ಆ ಪಕ್ಷದಿಂದ ಸಿಡಿದು ಕಾಂಗ್ರೆಸ್ ಸೇರಿ ಎರಡು ಬಾರಿ ಮುಖ್ಯಮಂತ್ರಿಯಾಗಿದ್ದಾರೆ. ಒಮ್ಮೆ ಬಿಜೆಪಿ ಹಾಗೂ ಮಗದೊಮ್ಮೆ ಕಾಂಗ್ರೆಸ್ ಪಕ್ಷಗಳ ಬೆಂಬಲದಿಂದ ಹೆಚ್.ಡಿ.ಕುಮಾರಸ್ವಾಮಿಯವರು ಸಹ ಎರಡು ಬಾರಿ ಮುಖ್ಯಮಂತ್ರಿಯಾಗಿದ್ದರು. 1996ರಲ್ಲಿ ತೃತೀಯ ರಂಗ ಸರ್ಕಾರದ ನೇತೃತ್ವವನ್ನು ವಹಿಸಿದ್ದ ದೇವೇಗೌಡರು ಕಾಂಗ್ರೆಸ್ ಪಕ್ಷದ ಬಾಹ್ಯ ಬೆಂಬಲದಿಂದ ಪ್ರಧಾನಮಂತ್ರಿಗಳಾಗಿ ಅಧಿಕಾರ ನಡೆಸಿದರು. ದೇಶದ ಅನೇಕ ರಾಜಕೀಯ ಪಕ್ಷಗಳಿಗೆ ಅದರಲ್ಲೂ ವಿಶೇಷವಾಗಿ ಪ್ರಾದೇಶಿಕ ಪಕ್ಷಗಳಿಗೆ ಇಂದು ರಾಜಕೀಯ ಅಸ್ತಿತ್ವದ ಪ್ರಶ್ನೆ ಕಾಡುತ್ತಿದೆ. ಹೀಗಾಗಿ ತತ್ವ ಸಿದ್ಧಾಂತ ಮರೆಯಾಗುತ್ತಿದೆ. ಅಸ್ತಿತ್ವದ ಉಳಿವಿಗಾಗಿ ಏನು ಬೇಕಾದರೂ ಮಾಡುವ ಹಂತ ತಲುಪಿವೆ. ಎಐಎಡಿಎಂಕೆ, ಡಿಎಂಕೆ, ಟಿಎಂಸಿ ಮುಂತಾದ ಪ್ರಬಲ ಪ್ರಾಂತೀಯ ಪಕ್ಷಗಳು ಸ್ವಂತ ಬಲದಿಂದ ಅಧಿಕಾರಕ್ಕೆ ಬಂದಿದ್ದರೆ, ಮತ್ತೆ ಕೆಲವು ಪಕ್ಷಗಳು ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷಗಳ ಮೈತ್ರಿಕೂಟ ಸೇರಿವೆ. ಹಾವು ಮುಂಗುಸಿಗಳಂತಿದ್ದ ಸಿದ್ದರಾಮಯ್ಯ ಹಾಗೂ ಕುಮಾರಸ್ವಾಮಿ 2018ರಲ್ಲಿ ಒಂದಾದರು. ಈಗ ಮತ್ತೊಮ್ಮೆ ದುಷ್ಮನ್‌ಗಳಾಗಿದ್ದಾರೆ. ಅದೇನೇ ಇರಲಿ ಇಂದಿನ ರಾಜಕೀಯ ಪರಿಸ್ಥಿತಿಯಲ್ಲಿ ಏನು ಬೇಕಾದರೂ ಸಂಭವಿಸಬಹುದು. ಈ ನಿಟ್ಟಿನಲ್ಲಿ ಜೆಡಿಎಸ್ ನಡೆ ತಪ್ಪು ಎಂದು ಹೇಳಲಾಗದು. ಎಲ್ಲರೂ ಮಾಡುವುದು ಹೊಟ್ಟೆಗಾಗಿ ಅನ್ನುವ ಹಾಗೆ ಎಲ್ಲಾ ಪಕ್ಷಗಳು ಮಾಡುವುದು ತಮ್ಮ ಅಸ್ತಿತ್ವಕ್ಕೆ ಎಂದು ಈಗ ಹೇಳಬೇಕಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ರೈಲಿನ ಬೋಗಿಯೊಳಗೆ ಏಕೆ ರಾಜ್ಯ ಸರ್ಕಾರದ ಸಾಧನೆಯ ಸಾರುವ ವಿರೂಪಕಾರಿ ಪುಕ್ಕಟೆ ತುತ್ತೂರಿ?



ಮಾನ್ಯರೆ,

ನಾನು ಇತ್ತೀಚೆಗೆ ಮೈಸೂರಿನಿಂದ ಚೆನ್ನೈಗೆ ಮತ್ತು ಹಾಗೆಯೇ ಕೆ.ಜಿ.ಎಫ್.ನಿಂದ ಮೈಸೂರಿಗೆ ಸಂಚರಿಸುವ ರೈಲಿನಲ್ಲಿ ಪ್ರಯಾಣಿಸಿದೆ. ಆದರೆ ಅಲ್ಲಿ ನನಗೆ ಯಾರೋ ಕಿಡಿಗೇಡಿಗಳು ನಮ್ಮ ರಾಜ್ಯ ಸರ್ಕಾರದ ಸಾಧನೆಯನ್ನು ಸಾರುವ ವಿವಿಧ ನಮೂನೆಯ ಜಾಹಿರಾತು ಸ್ಟಿಕ್ಕರ್‌ಗಳನ್ನು ಇಡೀ ರೈಲು ಬೋಗಿಗಳ ತುಂಬಾ ಬೇಜವಾಬ್ದಾರಿಯಿಂದ ಅಸಹ್ಯಕರ ರೀತಿ ಅಂಟಿಸಿ, ರೈಲಿನ ಒಳಾಂಗಣವನ್ನು ಸಂಪೂರ್ಣವಾಗಿ ವಿರೂಪಗೊಳಿಸಿದ್ದಾರೆ. ಇಲ್ಲಿ ರೈಲ್ವೆ ಇಲಾಖೆಯು, ತನ್ನ ಖಾಸಗಿ ಆಸ್ತಿಯ ಮೇಲೆ ರಾಜ್ಯ ಸರ್ಕಾರದ ಸಾಧನೆಯ ತುತ್ತೂರಿಯನ್ನು ಮೂರು ಕಾಸಿನ ಖರ್ಚಿಲ್ಲದೆ ಊದಲು ಬಿಟ್ಟಿರುವಂತೆ ತೋರುತ್ತಿದೆ ಇದು ನನಗೇಕೋ ಸರಿ ಎನಿಸಲಿಲ್ಲ ಆದ್ದರಿಂದ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರು ಈ ಕೂಡಲೇ, ರಾಜ್ಯದಲ್ಲಿ ಸಂಚರಿಸುವ ಎಲ್ಲಾ ರೈಲು ಬೋಗಿಯಲ್ಲಿ, ಸಂಬಂಧಿಸಿದವರು ಈ ರೀತಿಯ ಬೇಜವಾಬ್ದಾರಿಯ ಜಾಹೀರಾತು ಅಂಟಿಸಿರುವುದನ್ನು ತೆರವುಗೊಳಿಸಲು ಸೂಕ್ತ ನಿರ್ದೇಶನ ನೀಡಿ, ತಪ್ಪಿತಸ್ಥರ ಕಿವಿ ಹಿಂಡಿ, ಜನರಿಗೆ ಸರಿಯಾದ ಸಂದೇಶ ನೀಡುವರೇ?

–ನಾಗಮಂಗಲ ನರಸಿಂಹಮೂರ್ತಿ, ಮೈಸೂರು

ಮೈಸೂರು ಆಕಾಶವಾಣಿ '89'

ಮೈಸೂರು ಹೆಮ್ಮೆ



ಬೆಳಗ್ಗೆ 5.55ಕ್ಕೆ ಕಾರ್ಯಾರಂಭ ಮಾಡುವ ಆಕಾಶವಾಣಿ, ರಾತ್ರಿ 11.15ರವರೆಗೂ ಕಾರ್ಯನಿರ್ವಹಿಸುತ್ತದೆ. ಭಕ್ತಿ ಗೀತೆ, ದೇಶಭಕ್ತಿ ಗೀತೆ, ಭಾವಗೀತೆ, ಜನಪದ ಗೀತೆಗಳು, ಹರಿಕಥೆ, ಶಾಸ್ತ್ರೀಯ ಸಂಗೀತ, ಚಲನ ಚಿತ್ರಗೀತೆಗಳು, ನಾಟಕ, ಆರೋಗ್ಯ ಕಾರ್ಯಕ್ರಮ, ಮಹಿಳಾ ಕಾರ್ಯಕ್ರಮ, ಸಾಧಕರ ಪರಿಚಯ, ರಸಪ್ರಶ್ನೆ, ಯುವ ಜನರಿಗಾಗಿ ಯುವ ವಾಣಿ, ವೃತ್ತಿ ಮಾರ್ಗದರ್ಶನ, ಕೃಷಿರಂಗ, ಕ್ರೀಡಾಲೋಕ,ಹಾಸ್ಯ ಚಟಾಕಿಗಳು, ಸಾಹಿತ್ಯಕ, ಮಕ್ಕಳ ಕಾರ್ಯಕ್ರಮಗಳು... ಹೀಗೆ ಮೈಸೂರು ಆಕಾಶವಾಣಿ ಕೈಹಾಕದ ಕ್ಷೇತ್ರಗಳೇ ಇಲ್ಲ.



ನಿವೇದಿತಾ ಎಚ್.
ಇಂಗ್ಲಿಷ್ ಉಪನ್ಯಾಸಕಿ
ಯುವರಾಜ ಕಾಲೇಜು
ಮೈಸೂರು.

ಆಕಾಶವಾಣಿಯ ಜೊತೆ ದಿನ ಪ್ರಾರಂಭ ಮಾಡುವ, ದಿನ ಮುಗಿಸುವ ಜನರ ಸಂಖ್ಯೆ, ಈ ಅತ್ಯಾಧುನಿಕ ಯುಗದಲ್ಲಿಯೂ ಕಿಂಚಿತ್ತೂ ಕಡಿಮೆಯಾಗಿಲ್ಲ ಎಂಬುದು ಅಚ್ಚರಿ ತರಿಸುವ ವಿಷಯವಾದರೂ, ಅಪ್ಪಟ ನಿಜ. ಜನರ ಅಗತ್ಯಗಳನ್ನು ಪೂರೈಸುತ್ತಿದ್ದೇವೆ, ಕಾಲದ ಜೊತೆ ನಡೆಯುತ್ತಿದ್ದೇವೆ ಎಂಬ ಸೋಗಿನಲ್ಲಿ, ಸಂಸ್ಕೃತಿ ಪರಂಪರೆಯ ಭವ್ಯತೆಯನ್ನು ಮರೆತು ಜನರ ಅಭಿರುಚಿಗೇ ಚೌಕಟ್ಟನ್ನು ಹಾಕುವ ದುಸ್ಸಾಹಸಕ್ಕೆ ಇಳಿದಿರುವ ಎಫ್‌ಎಂಗಳ ಭರಾಟೆಯಲ್ಲಿಯೂ ಗಟ್ಟಿಯಾಗಿ ಜನ ಮಾನಸದಲ್ಲಿ ನೆಲೆಯಾಗಿರುವ ಆಕಾಶವಾಣಿ ಚಿರಂತನ ತೊರೆಯಂತೆ.

ಕರ್ನಾಟಕದ ಜನರಿಗೆ ಕೇಳುವ ಸಂಸ್ಕೃತಿಯ ಪರಿಚಯ ಮಾಡಿಸಿದ ಮೈಸೂರು ಆಕಾಶವಾಣಿಗೆ ಇದೇ ಸೆಪ್ಟೆಂಬರ್ 10ಕ್ಕೆ 89ರ ಹರೆಯ ಆಯ್ತು. 1935 ಸೆಪ್ಟೆಂಬರ್ 10 ರಂದು, ತಮ್ಮ ಸ್ವಗೃಹ ವಿಠ್ಠಲ ವಿಹಾರದಿಂದ ಕಾರ್ಯಾರಂಭ ಮಾಡಿದ ಮೈಸೂರಿನ ಬಾನುಲಿಗೆ ಅಡಿಪಾಯ ಹಾಕಿದವರು **ಎಂ.ವಿ.ಗೋಪಾಲಸ್ವಾಮಿ.** 1955ರಲ್ಲಿ ಕೇಂದ್ರ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟ ನಂತರ ಬೆಂಗಳೂರಿಗೆ ಸ್ಥಳಾಂತರವಾಗಿದ್ದ ಆಕಾಶವಾಣಿ, 1974 ನವೆಂಬರ್ 14ರಂದು ಮತ್ತೆ ಮೈಸೂರಿಗೆ ವಾಪಾಸಾಯಿತು. ಅಂದಿನಿಂದ ಇಂದಿನವರೆಗೆ ಸದಭಿರುಚಿಯ ಕಾರ್ಯಕ್ರಮಗಳನ್ನು ನೀಡುತ್ತ ತನ್ನ ಕೇಳುಗ ವರ್ಗವನ್ನು ಸುಸಂಸ್ಕೃತ ಸಜ್ಜನರನ್ನಾಗಿಸುವ ಹೊಣೆಯನ್ನು ಸ್ವಯಂ ಪ್ರೇರಿತವಾಗಿ ವಹಿಸಿಕೊಂಡಿರುವ ಆಕಾಶವಾಣಿ ಮೈಸೂರು, ಅಬಾಧಿತವಾಗಿ ಸಾಗಿಬಂದಿದೆ.

ಆಕಾಶವಾಣಿ ಎನ್ನುವ ಸುಂದರ ಹೆಸರನ್ನು ಬಾನುಲಿಗೆ ನೀಡಿದ್ದೇ ನಮ್ಮ **ನಾ. ಕಸ್ತೂರಿ** ಅವರು ಎನ್ನುವ ಹೆಮ್ಮೆ ನಮ್ಮದು. **ಎ.ಎನ್.ಮೂರ್ತಿರಾಯರಾದಿಯಾಗಿ** ಹಲವಾರು ಘಟಾನುಘಟಿ ನಿರ್ದೇಶಕರನ್ನು ಕಂಡ ಮೈಸೂರು ಆಕಾಶವಾಣಿ ರೂಪಿಸುವ ಕಾರ್ಯಕ್ರಮಗಳು ಅತ್ಯುನ್ನತ ಮಟ್ಟದವು. 'ಬಹು ಜನ ಹಿತಾಯ ಬಹುಜನ ಸುಖಾಯ' ಎಂಬ ಧ್ಯೇಯ ಹೊಂದಿರುವ ಆಕಾಶವಾಣಿ, ಶಿಕ್ಷಣ, ಮಾಹಿತಿ ಮನರಂಜನೆಗಳನ್ನು ನೀಡುವ ದಿಸೆಯಲ್ಲಿ ಇಂದಿಗೂ ಅದೇ ಬದ್ಧತೆಯಿಂದ ಕಾರ್ಯಕ್ರಮಗಳನ್ನು ರೂಪಿಸುತ್ತಿದೆ.

ಎಲ್ಲ ವರ್ಗದ ಜನರನ್ನು ಗಮನದಲ್ಲಿಟ್ಟುಕೊಂಡು ಕಾರ್ಯಕ್ರಮಗಳನ್ನು ರೂಪಿಸುತ್ತಾ ಜನರಿಗೆ ಹತ್ತಿರವಾಗುತ್ತಿದೆ. ಬೆಳಗ್ಗೆ 5.55ಕ್ಕೆ ಕಾರ್ಯಾರಂಭ ಮಾಡುವ ಆಕಾಶವಾಣಿ, ರಾತ್ರಿ 11.15ರವರೆಗೂ ಕಾರ್ಯನಿರ್ವಹಿಸುತ್ತದೆ. ಭಕ್ತಿಗೀತೆ, ದೇಶಭಕ್ತಿಗೀತೆ, ಭಾವಗೀತೆ, ಜನಪದ ಗೀತೆಗಳು, ಹರಿಕಥೆ, ಶಾಸ್ತ್ರೀಯ ಸಂಗೀತ, ಚಲನಚಿತ್ರಗೀತೆಗಳು, ನಾಟಕ, ಆರೋಗ್ಯ ಕಾರ್ಯಕ್ರಮ, ಮಹಿಳಾ ಕಾರ್ಯಕ್ರಮ, ಸಾಧಕರ ಪರಿಚಯ, ರಸಪ್ರಶ್ನೆ, ಯುವ ಜನರಿಗಾಗಿ ಯುವವಾಣಿ, ವೃತ್ತಿ ಮಾರ್ಗದರ್ಶನ, ಕೃಷಿರಂಗ, ಕ್ರೀಡಾಲೋಕ, ಹಾಸ್ಯ ಚಟಾಕಿಗಳು, ಸಾಹಿತ್ಯಕ, ಮಕ್ಕಳ ಕಾರ್ಯಕ್ರಮಗಳು... ಹೀಗೆ ಮೈಸೂರು ಆಕಾಶವಾಣಿ ಕೈಹಾಕದ ಕ್ಷೇತ್ರಗಳೇ ಇಲ್ಲ.



ಈ ದೈನಂದಿನ ಕಾರ್ಯಕ್ರಮಗಳಲ್ಲದೆ, ಅನೇಕ ವಿಶೇಷ ಸೀಮಿತಾವಧಿಯ ಕಾರ್ಯಕ್ರಮಗಳನ್ನು ರೂಪಿಸುವುದರಲ್ಲಿಯೂ ಆಕಾಶವಾಣಿ ಮೈಸೂರಿನದು ಸಿದ್ಧಹಸ್ತ. ಕನ್ನಡ ಪದಗಳ ಕುರಿತಾದ 'ಪದಸಂಸ್ಕೃತಿ', ಸರ್ವಜ್ಞನ ವಚನಗಳ ಕುರಿತ 'ಅರಿವಿನ ಶಿಖರ' ಕನ್ನಡದ ವಿಶಿಷ್ಟ ಕಾದಂಬರಿಗಳನ್ನು ಕೇಳುಗರಿಗೆ ಪರಿಚಯಿಸುವ 'ಕಾದಂಬರಿ ವಿಹಾರ', ಕರ್ನಾಟಕದ ದೇವಾಲಯಗಳನ್ನು ಅವುಗಳ ವೈಶಿಷ್ಟ್ಯವನ್ನು ಪರಿಚಯಿಸುವ 'ಶ್ರದ್ಧೆಯ ಶಿಲ್ಪ', ಕೇಳುಗರಲ್ಲಿನ ಕಥಾರಚನೆಯ ಕೌಶಲವನ್ನು ಹೊರ ಗೆಳೆದ 'ಒಂದೇ ಕಥೆ ವಿವಿಧ ಮುಖ', ಭಾರತೀಯ ಋಷಿ ಪರಂಪರೆಯನ್ನು ಪರಿಚಯಿಸುವ 'ಋಷಿ ಮನೀಷಿಗಳು', ಭಾರತ ಭೂಮಿಯನ್ನಾಳಿದ ಗಾಥೆ 'ಮಹಾ ಮೋಜಣಿ', 'ಯೋಗದ ಮಾತು', ಕನ್ನಡದ ಅರ್ಥ ಗರ್ಭಿತ ಚಲನಚಿತ್ರ ಗೀತೆಗಳ 'ಹಾಡು ಹೇಳಿದ ಕಥೆ', 'ಸಾವಯವ ಕೃಷಿಸಂಪದ', 'ಲಯ ಸಂಭ್ರಮ', ವಿಶಿಷ್ಟ ವ್ಯಕ್ತಿಗಳ ಪರಿಚಯಿಸುವ 'ಮಾತಿಗೆ ಸಿಕ್ಕವರು' 'ಹಳ್ಳಿ ಹಾಡು' 'ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ', ಕವಿ ಶ್ರೇಷ್ಠ ಪಂಪನ ಕುರಿತ 'ಪಂಪನ ಪೆಂಪು' ಇವು ಮೈಸೂರು ಕೇಂದ್ರದ ಹಲವು ವಿಶೇಷ ನಿರ್ಮಾಣಗಳಲ್ಲಿ ಕೆಲವಷ್ಟೇ.



ಒಮ್ಮುಖ ಜ್ಞಾನ ಪ್ರಸರಣ ಮಾತ್ರವಲ್ಲದೆ, ಆರೋಗ್ಯ,, ವೃತ್ತಿ ಮಾರ್ಗ ದರ್ಶನದಂತಹ ಫೋನ್ ಇನ್ ಕಾರ್ಯಕ್ರಮಗಳ ಮೂಲಕ ಜನರ ಸಂದೇಹ ಪ್ರಶ್ನೆಗಳಿಗೆ ಉತ್ತರವನ್ನು ಒದಗಿಸುವ ಜವಾಬ್ದಾರಿಯನ್ನು ಆಕಾಶವಾಣಿ ಹೊತ್ತಿದೆ. ಅಲ್ಲದೇ 'ನಿಮ್ಮೊಂದಿಗೆ' ಎಂಬ ಶ್ರೋತೃಗಳೊಂದಿಗಿನ ದೈನಂದಿನ ಅಭಿಪ್ರಾಯ ಆಧಾರಿತ ನೇರ ಪ್ರಸಾರದ ಕಾರ್ಯಕ್ರಮದ ಮೂಲಕ, ಸಲಹೆ, ಆಕ್ಷೇಪ, ಮೆಚ್ಚುಗೆಗಳೆಲ್ಲವನ್ನೂ ಸಮನಾಗಿ ಸ್ವೀಕರಿಸುತ್ತಾ ಪ್ರತಿದಿನ ಅಪ್ ಡೇಟ್ ಆಗಲು ಹವಣಿಸುವುದು ಮೈಸೂರು ಆಕಾಶವಾಣಿಯ ಹಿರಿಮೆ.

ಕಾರ್ಯಕ್ರಮ ನಿರ್ಮಾಣಗಳಿಂದ ಮಾತ್ರ ಆಕಾಶವಾಣಿ ಮೈಸೂರು ತನ್ನ ಕೇಳುಗ ಪ್ರಭುಗಳಿಗೆ ಹತ್ತಿರವಾಗುತ್ತಿಲ್ಲ. ಅದಲ್ಲದೆ, ಸಾರ್ವಜನಿಕರಿಗೂ ಆಗಿಂದಾಗ್ಗೆ ಪ್ರವೇಶ ಒದಗಿಸುವ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುತ್ತದೆ. ಇದರಿಂದ ಆಕಾಶವಾಣಿಯ ಕಾರ್ಯವೈಖರಿ ಯನ್ನು ಅರಿಯುವ ಅವಕಾಶ ಕೇಳುಗರಲ್ಲಿ ರೋಮಾಂಚನ ಹುಟ್ಟಿಸುತ್ತದೆ. ಪ್ರತಿ ವರ್ಷ ನವೆಂಬರ್‌ನಲ್ಲಿ ಆಕಾಶವಾಣಿ ಆಯೋಜಿಸುವ 'ಕನ್ನಡ ಹಬ್ಬ'ವನ್ನು ಕಾತರದಿಂದ ಕಾಯ್ದು ಕಣ್ತುಂಬಿಸಿಕೊಳ್ಳುವ ಶ್ರೋತೃವರ್ಗವೇ ಇದೆ. ಕಳೆದ ವರ್ಷದ ಕನ್ನಡ ಹಬ್ಬದ ಸಮಯದಲ್ಲಿ ಆಯೋಜಿಸಿದ್ದ 'ಓಪನ್ ಡೇ'ಯಂದು ಸಾವಿರಾರು ಅಭಿಮಾನಿಗಳು ಆಕಾಶವಾಣಿಗೆ ಭೇಟಿ ನೀಡಿ, ಸ್ಟುಡಿಯೋ ಇತ್ಯಾದಿಗಳನ್ನು ನೋಡಿದ್ದಲ್ಲದೆ, ತಮ್ಮ ನೆಚ್ಚಿನ ಕಾರ್ಯಕ್ರಮ ನಿರ್ವಾಹಕರು, ಉದ್ಘೋಷಕರನ್ನು ಮಾತನಾಡಿಸಿ ಸೆಲ್ಫೀ ತೆಗೆಸಿಕೊಂಡು ಸಂಭ್ರಮಿಸಿದ್ದ ನೆನಪು ಇನ್ನೂ ಹಸಿರಾಗಿದೆ.

ಸಾರ್ವಜನಿಕ ಸೇವೆಯನ್ನು ಹೃತ್ಪೂರ್ವಕವಾಗಿ ಪ್ರಾಮಾಣಿಕತೆಯಿಂದ ವ್ರತದಂತೆ ನಡೆಸಿಕೊಂಡು ಬರುತ್ತಿರುವ ಮೈಸೂರು ಆಕಾಶವಾಣಿ, ತನ್ನ 89ನೇ ಹರೆಯಕ್ಕೆ ಕಾಲಿಡುತ್ತಿರುವ ಹೊತ್ತಿನಲ್ಲಿಯೂ ಹಲವಾರು ಹೊಸ ಯೋಜನೆಗಳನ್ನು ಸಿದ್ಧ ಪಡಿಸಿಕೊಂಡು ಅದನ್ನು ಕೃತಿಗಿಳಿಸಿ, ತನ್ನ ಶ್ರೋತೃಗಳ ಜ್ಞಾನತೃಷೆಯನ್ನು, ಮನರಂಜನೆಯ ಅಗತ್ಯವನ್ನು ಏಕಕಾಲದಲ್ಲಿ ಪೂರೈಸಲು ತುದಿಗಾಲಲ್ಲಿ ನಿಂತಿದೆ. ಮೊಬೈಲ್ ಟಿವಿಗಳಂತೆ ಮನುಷ್ಯನ ಎಲ್ಲ ಇಂದ್ರಿಯಗಳ ಸಂಪೂರ್ಣ ಗಮನವನ್ನು ಬೇಡದ, ತನ್ನ ಶ್ರೋತೃಗಳ ಕೆಲಸ ಕಾರ್ಯಗಳನ್ನು ಅಬಾಧಿತವಾಗಿ ಆಗಕೊಡುತ್ತಲೇ ಅವರ ವಿಕಾಸಕ್ಕೆ ಶ್ರಮಿಸುವ ಆಕಾಶವಾಣಿಯ ಪ್ರಾಮುಖ್ಯತೆ, ಬದ್ಧತೆ, ಪ್ರಾಮಾಣಿಕತೆ ವರ್ಣಿಸಲಸದಳ. ಆಕಾಶವಾಣಿ ಮೈಸೂರು ಹೀಗೆಯೇ ನಿರಂತರವಾಗಿ ಸಾಗುತ್ತಿರಲಿ ಎಂಬುದೇ ನಮ್ಮೆಲ್ಲರ ಹಾರೈಕೆ.

ದಾಖಲೆ ಬರೆದ ಮೈಸೂರಿನ ಪ್ರೀತಿ ಅಘಲಯಂ

ತಾಂಜೇನಿಯಾ ಜಂಜೀಬಾರ್ ಐಐಟಿ ನಿರ್ದೇಶಕಿ



ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಈಗಲೂ ಮಹಿಳೆಯರ ಪ್ರಾತಿನಿಧ್ಯ ತೀರಾ ಕಡಿಮೆಯೆ. ಹಾಗೆ ನೋಡಿದರೆ ಎಲ್ಲಾ ಕ್ಷೇತ್ರದಲ್ಲೂ ಸಾಕಷ್ಟು ಸಂಖ್ಯೆಯಲ್ಲಿ ಪ್ರತಿಭಾವಂತ ಹೆಣ್ಣು ಮಕ್ಕಳಿದ್ದು ಅವಕಾಶ ವಂಚಿತರಾಗಿದ್ದಾರೆ. ಹಾಗೆ ಈ ಕ್ಯಾಂಪಸ್‌ನಲ್ಲೂ ಕೂಡ ಹೆಣ್ಣು ಮಕ್ಕಳ ಸಂಖ್ಯೆಯ ಲಿಂಗಾಧಾರಿತ ಚಿತ್ರವನ್ನು ಗಮನಿಸಿದರೆ, ಹೆಣ್ಣು ಮಕ್ಕಳ ಸಂಖ್ಯೆ ತೀರಾ ಕಡಿಮೆಯೆ.

ಐಐಟಿಯು ಮೊದಲು ಪ್ರಾರಂಭವಾದದ್ದು 1951ರಲ್ಲಿ ಖರಗ್‌ಪುರದಲ್ಲಿ. ಈ ಸಂಸ್ಥೆ ಪ್ರಾರಂಭವಾಗಿ 7 ದಶಕಗಳು ಕಳೆದ ನಂತರ ಮೊದಲ ಬಾರಿಗೆ ಮಹಿಳೆಯೊಬ್ಬರಿಗೆ ಅದರ ನಿರ್ದೇಶಕರಾಗುವ ಸೌಭಾಗ್ಯ ದೊರೆತಿರುವುದು ಮೈಸೂರಿನ ಹೆಮ್ಮೆಯ ಪುತ್ರಿ ಪ್ರೀತಿ ಅಘಲಯಂ ಅವರಿಗೆ. "ಹೆಣ್ಣು–ಗಂಡು ನಡುವಿನ ಅಂತರವನ್ನು ಕಡಿಮೆ ಮಾಡಲು ನಾವಿನ್ನೂ ಸಾಕಷ್ಟು ದೂರ ಶ್ರಮಿಸಬೇಕಾಗಿದೆ" ಎನ್ನುತ್ತಾರೆ ಪ್ರೀತಿ.

ಸರಸ್ವತಿಪುರಂನ 13ನೇ ಮುಖ್ಯರಸ್ತೆಯಲ್ಲಿನ ಮನೆಯೊಂದರಲ್ಲಿ ವಾಸವಾಗಿದ್ದ ಡಾ:ಜನಾರ್ಧನ್, ಮೈಸೂರು ರೀಜನಲ್ ಕಾಲೇಜಿನಲ್ಲಿ ಅಧ್ಯಾಪಕರಾಗಿದ್ದರು. ಅವರ ಪತ್ನಿ ರಮಾ. ಅವರಿಗಿಬ್ಬರು ಹೆಣ್ಣು ಮಕ್ಕಳು. ಜ್ಯೋತಿ ಮತ್ತು ಪ್ರೀತಿ. ಈ ಪ್ರೀತಿಯೇ ಇಡೀ ಮೈಸೂರು ಹೆಮ್ಮೆಪಡುವಂತಹ ಸ್ಥಾನಕ್ಕೇರಿದ್ದಾರೆ. ತಾಂಜೇನಿಯಾದಲ್ಲಿರುವ ಜಂಜೀಬಾರ್ ಐಐಟಿ ನಿರ್ದೇಶಕಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

ಮೈಸೂರಿನ ಡಿಎಂಎಸ್ ಶಾಲೆಯ ವಿದ್ಯಾರ್ಥಿಯಾಗಿದ್ದ ಇವರು ಪಿಯುಸಿ ನಂತರ ಸಿಇಟಿಯಲ್ಲಿ ಪ್ರಥಮ ರ್‍ಯಾಂಕ್ ಪಡೆದೂ ಚೆನ್ನೈನ ಐಐಟಿಯಲ್ಲೇ ಓದಬೇಕೆಂದು ಸಾಕಷ್ಟು ಪರಿಶ್ರಮ ಹಾಕಿ, ಅಲ್ಲಿಯ ಪ್ರವೇಶ ಪರೀಕ್ಷೆಯಲ್ಲಿ ಉನ್ನತ ಶ್ರೇಣಿ ಪಡೆದು ಕೆಮಿಕಲ್ ಇಂಜಿನಿಯರಿಂಗ್‌ಗೆ ಸೇರಿದರು. ನಂತರ ನ್ಯೂಯಾರ್ಕ್‌ನ ಯೂನಿವರ್ಸಿಟಿ ಆಫ್ ರೋಚೆಸ್ಟರ್‌ನಲ್ಲಿ ಎಂಎಸ್ ಮಾಡಿದರು. ಯುನಿವರ್ಸಿಟಿ ಆಫ್ ಮಸಾಚುಸೆಟ್ಸ್‌ನಲ್ಲಿ ಪಿಎಚ್.ಡಿ ಮಾಡಿ ಅಲ್ಲೇ ಉದ್ಯೋಗ ಸಿಕ್ಕಾಗ ಅದನ್ನು ತಿರಸ್ಕರಿಸಿ. ಐಐಟಿ ಬಾಂಬೆಗೆ ಬಂದು ತನ್ನ ಪ್ರೀತಿಯ ಅಧ್ಯಾಪನ ವೃತ್ತಿಯನ್ನು ಕೈಗೊಂಡರು. ಆಮೇಲೆ ತಾನು ಓದಿದ ಐಐಟಿ ಚೆನ್ನೈಗೆ ಹಿಂದಿರುಗಿ ಅಧ್ಯಾಪನ ವೃತ್ತಿಯನ್ನು ಮುಂದುವರೆಸಿದರು.

ಇದೀಗ ಅವರ ಮುಡಿಗೆ ಐಐಟಿಯ ನಿರ್ದೇಶಕಿ ಎಂಬ ಹೆಮ್ಮೆ ಗರಿ. ಶೈಕ್ಷಣಿಕವಾಗಿ ಅತ್ಯಂತ ಉನ್ನತ ಸಾಧನೆ ಮಾಡಿರುವ ಪ್ರೀತಿಗೆ ಈಗ ಆಡಳಿತಾತ್ಮಕ ಜವಾಬ್ದಾರಿಯ ಹೊಣೆ. ಅತ್ಯಂತ ಸಮರ್ಥವಾಗಿ ನಿಭಾಯಿಸಬಲ್ಲ ಚತುರೆ. ಇದರಾಚೆಗೆ ಅವರ ಪ್ರತಿಭೆಗೆ ಪುಟವಿಡುವಂತೆ ಹಲವಾರು ಮಗ್ಗಲುಗಳಿವೆ.

ವಿದ್ಯಾರ್ಥಿದೆಸೆಯಿಂದಲೂ ಅವರು ಆಟೋಟಗಳಲ್ಲೂ ಮುಂದಿದ್ದರು. ಆಗ ಬ್ಯಾಸ್ಕೆಟ್ ಬಾಲ್ ಆಟಗಾರ್ತಿಯಾಗಿದ್ದವರು. ಈಗ ಮೆರಥಾನ್ ಓಟದಲ್ಲಿ ಹೆಸರು ಮಾಡಿದ್ದಾರೆ.

ಅವರ ತಾಯಿ ರಮಾ ಅವರಂತೆ ಸಾಹಿತ್ಯದಲ್ಲೂ ತುಂಬಾ ಆಸಕ್ತಿ. ಅಪಾರ ಓದಿನ ಜ್ಞಾನದ ಜೊತೆಗೆ ಇವರು ಬ್ಲಾಗರ್ ಕೂಡ. ಹಲವಾರು ಉತ್ತಮ ಲೇಖನಗಳನ್ನೂ ಬರೆದಿದ್ದಾರೆ. ಪ್ರಿನ್ಸಿಪಲ್ ಸೈಂಟಿಫಿಕ್ ಅಡವೈಸರ್ಸ್ ಆಫೀಸ್‌ನಿಂದ "ಎಸ್‌ಟಿಇಎಂ" ಎಂಬ ಕಾರ್ಯಕ್ರಮದ ಸಮಿತಿಯಲ್ಲಿರುವ ಎಪ್ಪತ್ತೈದು ಮಹಿಳಾ ಸದಸ್ಯರಲ್ಲಿ ಪ್ರೀತಿ ಕೂಡ ಒಬ್ಬರು.

ಲಿಂಗತಾರತಮ್ಯದ ಬಗ್ಗೆ ಸಾಕಷ್ಟು ಕೆಲಸ ಮಾಡುತ್ತಿದ್ದು, ಸಾಮಾಜಿಕ ಕಾಳಜಿಯನ್ನೂ ಕೂಡ ಹೊಂದಿರುವವರು. ಮದ್ರಾಸಿನಲ್ಲಿ ಓದಿ, 14 ವರ್ಷ ಅಲ್ಲಿ ಪಾಠ ಮಾಡಿ, ಬಾಂಬೆಯಲ್ಲೂ ಕೆಲಸ ಮಾಡಿರುವ ಪ್ರೀತಿಗೆ ಐಐಟಿ ಮದ್ರಾಸಿನ ಬಗ್ಗೆ ಅಪಾರ ಗೌರವ, ಅಭಿಮಾನ ಹೊಂದಿದ್ದಾರೆ. ಅದಕ್ಕೆ ಮತ್ತೊಂದು ಕಾರಣವೂ ಉಂಟು. ಅವರ ಬಾಳ ಸಂಗಾತಿ ಸಿಕಿದ್ದು ಅಲ್ಲೇ. ಮೈಸೂರಿನ ಈ ನಮ್ಮ ಹುಡುಗಿಗೆ ಮತ್ತಷ್ಟು ಚಾಲೆಂಜಿಂಗ್ ಆದ ಕೆಲಸಗಳು ಒದಗಿ ಬರಲಿ, ಉನ್ನತ ಸ್ಥಾನಗಳಿಕ್ಕೇರಿ ಯಶಸ್ಸು ಸಾಧಿಸಲಿ.

●ಮೀನಾ ಮೈಸೂರು, ನಿವೃತ್ತ ಐಎಎಸ್ ಅಧಿಕಾರಿ, ಮೊ.: 9845790862

ರಾಜ್ಯದಲ್ಲೀಗ ಡೆಂಗ್ಯೂ ಅಟ್ಟಹಾಸ; 7 ಸಾವಿರಕ್ಕೂ ಅಧಿಕ ಪ್ರಕರಣ ದಾಖಲು

ಅಗತ್ಯ ಮುನ್ನೆಚ್ಚರಿಕೆಗೆ ಸಿಎಂ ಸಿದ್ದರಾಮಯ್ಯ ಸೂಚನೆ

ಬೆಂಗಳೂರು,ಸೆ.11(ಕೆಎಂಶಿ)– ಕೋವಿಡ್–19ರ ಸಂಕಷ್ಟದಿಂದ ಹೊರ ಬರುತ್ತಿದ್ದಂತೆ ಡೆಂಗ್ಯೂ ಜ್ವರ ವ್ಯಾಪಕವಾಗಿ ಹರಡಿದ್ದು, ಜನರನ್ನು ಸಂಕಷ್ಟಕ್ಕೆ ಸಿಲುಕಿಸಿದೆ. ಪ್ರಾಥಮಿಕ ಹಂತದಲ್ಲೇ ಡೆಂಗ್ಯೂ ಹತ್ತಿಕ್ಕಲು ಸರ್ಕಾರ ಹಲವು ಸುತ್ತಿನ ಸಭೆಗಳನ್ನು ನಡೆಸಿ ಕ್ರಮ ಕೈಗೊಂಡರೂ ಹತೋಟಿಗೆ ಬಂದಿಲ್ಲ. ಮುಂಗಾರು ಮಳೆ ರಾಜ್ಯಾದ್ಯಂತ ಕೈಕೊಟ್ಟು, ಅಲ್ಪ–ಸ್ವಲ್ಪ ಮಳೆಯಾಗಿರುವುದು ರೋಗ ಉಲ್ಬಣಗೊಳ್ಳಲು ಕಾರಣವಾಗಿದೆ.

ಸಮರ್ಪಕವಾಗಿ ಸೊಳ್ಳೆಯನ್ನು ನಿಯಂತ್ರಣ ಮಾಡದಿರುವುದರಿಂದ ಕಳೆದ ಕೆಲವು ದಿನಗಳ ಅವಧಿಯಲ್ಲಿ ಸುಮಾರು 7 ಸಾವಿರಕ್ಕೂ ಅಧಿಕ ಡೆಂಗ್ಯೂ ಪ್ರಕರಣಗಳು ದಾಖಲಾಗಿವೆ. ಅದರಲ್ಲೂ ಖಾಸಗಿ ಆಸ್ಪತ್ರೆಗಳಲ್ಲಿ ಈ ರೋಗಕ್ಕೆ ಸಂಬಂಧಿಸಿದ ಸರಿಯಾದ ಅಂಕಿ–ಅಂಶಗಳಿಲ್ಲ. ಇದನ್ನು ಮನಗಂಡ ಮುಖ್ಯಮಂತ್ರಿ ಡೆಂಗ್ಯೂ ನಿಯಂತ್ರಣದ ಬಗ್ಗೆ ಟ್ವೀಟ್ ಮೂಲಕ ಜನರನ್ನು ಎಚ್ಚರಿಸುವ ಕೆಲಸ ಮಾಡಿದ್ದಾರೆ. ರಾಜ್ಯಾದ್ಯಂತ ಕಳೆದ ಕೆಲವು ದಿನಗಳ ಅವಧಿಯಲ್ಲಿ ಸುಮಾರು 7 ಸಾವಿರಕ್ಕೂ ಅಧಿಕ ಡೆಂಗ್ಯೂ ಪ್ರಕರಣಗಳು ವರದಿಯಾಗಿವೆ. ಇದರಲ್ಲಿ 4 ಸಾವಿರಕ್ಕೂ ಅಧಿಕ ಪ್ರಕರಣಗಳು ಬೆಂಗಳೂರು ನಗರವೊಂದರಲ್ಲೇ ಕಂಡುಬಂದಿದೆ.



ಡೆಂಘಿ ಕ್ಷಿಪ್ರಗತಿಯಲ್ಲಿ ವ್ಯಾಪಿಸುತ್ತಿರುವ ಬಗ್ಗೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಮಾತನಾಡಿ, ಎಲ್ಲಾ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದ್ದೇನೆ ಎಂದಿದ್ದಾರೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸೊಳ್ಳೆ ನಿಯಂತ್ರಣಕ್ಕೆ ಔಷಧ ಸಿಂಪಡಣೆ, ನೀರು ಶೇಖರಣೆಯಾಗುವ ಸ್ಥಳಗಳನ್ನು ಗುರುತಿಸಿ ಸ್ವಚ್ಛಗೊಳಿಸುವುದು ಸೇರಿದಂತೆ ಸೊಳ್ಳೆ ನಿಯಂತ್ರಣಕ್ಕೆ ಪರಿಣಾಮಕಾರಿ ಮಾರ್ಗಗಳನ್ನು ಅನುಸರಿಸಲಾಗುತ್ತಿದೆ. ಮನೆ ಸುತ್ತ ಮುತ್ತಲಿನ ಪರಿಸರದ ಸ್ವಚ್ಛತೆಗೆ ಆದ್ಯತೆ ನೀಡಿ, ಸೊಳ್ಳೆ ಕಡಿತದ ಬಗ್ಗೆ ಎಚ್ಚರಿಕೆ ವಹಿಸಿ. ಜತೆಗೆ ಡೆಂಘಿ ಬಗ್ಗೆ ಭಯ ಬೇಡ, ಜಾಗೃತೆಯಿರಲಿ ಎಂದು ಸಲಹೆ ಮಾಡಿದ್ದಾರೆ. ಒಂದೇ ವಾರದಲ್ಲಿ ಡೆಂಗ್ಯೂಗೆ 7 ಮಂದಿ ಬಲಿಯಾಗಿರುವುದರ ಜತೆಗೆ ವ್ಯಾಪಕವಾಗಿ ರೋಗ ಹರಡುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಅವರು ಸಾರ್ವಜನಿಕರಿಗೆ ಎಚ್ಚರಿಕೆ ಸಂದೇಶ ನೀಡಿದ್ದಾರೆ. ಅಷ್ಟೇ ಅಲ್ಲ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ನಗರ ಮತ್ತು ಗ್ರಾಮೀಣ ಭಾಗದ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಧಿತ ರೋಗಿಗಳಿಗೆ ಅಗತ್ಯ ಚಿಕಿತ್ಸೆ ನೀಡಲು ಸೂಚಿಸಿದ್ದಾರೆ.

ಮೈಸೂರಲ್ಲಿ ಡೆಂಗ್ಯೂ ನಿಯಂತ್ರಣದಲ್ಲಿದೆ: ಡಿಹೆಚ್‌ಓ

ಮೈಸೂರು, ಸೆ.11(ಎಸ್‌ಬಿಡಿ)–ಮೈಸೂರು ಜಿಲ್ಲೆಯಲ್ಲಿ ಡೆಂಗ್ಯೂ ನಿಯಂತ್ರಣದಲ್ಲಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ತಿಳಿಸಿದ್ದಾರೆ. ರಾಜ್ಯದಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲೆ ಪರಿಸ್ಥಿತಿ ಬಗ್ಗೆ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯಿಸಿದ ಅವರು, ಜನವರಿಯಿಂದ ಈವರೆಗೆ ಜಿಲ್ಲೆಯಲ್ಲಿ 426 ಡೆಂಗ್ಯೂ ಪ್ರಕರಣ ಪತ್ತೆಯಾಗಿದ್ದು, ಇವರಲ್ಲಿ 70 ಮಂದಿಯನ್ನು ಬೆಳಗ್ಗೆಯಿಂದ ಸಂಜೆವರೆಗೆ ಆಸ್ಪತ್ರೆಯಲ್ಲಿರಿಸಿಕೊಂಡು ನಿಗಾ ವಹಿಸಿದ ಬಳಿಕ ಬಿಡುಗಡೆ ಮಾಡಲಾಗಿದೆ. ಎಲ್ಲರೂ ಸಂಪೂರ್ಣವಾಗಿ ಚೇತರಿಸಿಕೊಂಡಿದ್ದಾರೆ. ಜಿಲ್ಲೆಯಲ್ಲಿ ಯಾವುದೇ ಗಂಭೀರ ಪ್ರಕರಣಗಳಿಲ್ಲ ಎಂದರು.



ಏಜಿಪ್ಟಿ ಸೊಳ್ಳೆಯಿಂದ ಡೆಂಗ್ಯೂ ಹರಡುತ್ತದೆ. ಈ ಸೊಳ್ಳೆ ಶುದ್ಧ ನೀರಿನಲ್ಲಿ ಸಂತಾನೋತ್ಪತ್ತಿ ಮಾಡುವುದರಿಂದ ಟೈರ್, ಎಳನೀರು ಚಿಪ್ಪು ಇನ್ನಿತರ ವಸ್ತುಗಳಲ್ಲಿ ನೀರು ಶೇಖರಣೆಯಾಗದಂತೆ ನಿಗಾ ವಹಿಸಬೇಕೆಂದು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಮುಖ್ಯವಾಗಿ ಜ್ವರ, ದದ್ದು(ರ್‍ಯಾಶಸ್) ಹಾಗೂ ಮುಂದಲೆ ನೋವು ಇದ್ದವರಿಗೆ ಕಡ್ಡಾಯವಾಗಿ ರಕ್ತ ಪರೀಕ್ಷೆ ಮಾಡಿಸಲಾಗುತ್ತಿದೆ. ಎಲಿಸಾ ಪರೀಕ್ಷೆಯನ್ನೂ ನಡೆಸಲಾಗುತ್ತಿದೆ. ಆಶಾ ಕಾರ್ಯಕರ್ತರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹಲವು ಚಟುವಟಿಕೆ ನಡೆಸಲಾಗುತ್ತಿದೆ. ನಿಗದಿಗಿಂತ ಹೆಚ್ಚು ಸಂಖ್ಯೆಯ ಟೆಸ್ಟಿಂಗ್ ನಡೆಸಲಾಗುತ್ತಿದ್ದು, ಸದ್ಯ ಯಾವುದೇ ಆತಂಕವಿಲ್ಲ ಎಂದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಸೆ.15ರಿಂದ ದಸರಾ ಗಜಪಡೆಗೆ ಭಾರ ಹೊರುವ ತಾಲೀಮು

● ಈ ಮಾಸಾಂತ್ಯಕ್ಕೆ ಎರಡನೇ ತಂಡದ ಆಗಮನ ● ಅರಮನೆ ಆವರಣದಲ್ಲಿ ಗಜಪಡೆ ಪರಿವಾರಕ್ಕೆ ಸಕಲ ವ್ಯವಸ್ಥೆ ● ಡಿಸಿಎಫ್ ಸೌರಭ್ ಕುಮಾರ್ ಮಾಹಿತಿ



ಅಂಬಾರಿ ಆನೆ ಅಭಿಮನ್ಯು ನೇತೃತ್ವದಲ್ಲಿ ಸೋಮವಾರ ತಾಲೀಮು ನಡೆಸಿದ ಗಜಪಡೆ.



ಅರಮನೆ ಅಂಗಳದಲ್ಲಿ ಮಾವುತರು, ಕಾವಾಡಿಗಳು ಹಾಗೂ ಮಕ್ಕಳು ವಾಲಿಬಾಲ್ ಆಡುತ್ತಿರುವುದು.



"ತಾಲೀಮು ವೇಳೆ ಎಲ್ಲಾ ಆನೆಗಳ ವರ್ತನೆ ಗಮನಿಸಲಾಗುತ್ತದೆ. ಇದರ ಆಧಾರದಲ್ಲಿ ನಿಶಾನೆ ಆನೆ, ನೌಪತ್ ಹಾಗೂ ಪಟ್ಟದ ಆನೆಯನ್ನು ಆಯ್ಕೆ ಮಾಡಲಾಗುವುದು. ಈ ಬಗ್ಗೆ ಸದ್ಯಕ್ಕೆ ಯಾವುದೇ ನಿರ್ಧಾರವಾಗಿಲ್ಲ.

-ಡಿಸಿಎಫ್ ಸೌರಭ್ ಕುಮಾರ್

ಮೈಸೂರು, ಸೆ.11(ಎಸ್‌ಬಿಡಿ)– ಮೈಸೂರು ದಸರಾ ಗಜಪಡೆಗೆ ಸೆ.15ರಿಂದ ಭಾರ ಹಾಕಿ ತಾಲೀಮು ನಡೆಸಲಾಗುವುದು ಎಂದು ಡಿಸಿಎಫ್ ಸೌರಭ್ ಕುಮಾರ್ ತಿಳಿಸಿದ್ದಾರೆ.

ಅರಮನೆ ಆವರಣದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆನೆಗಳಿಗೆ ನೀಡುತ್ತಿರುವ ಆಹಾರ, ಔಷಧೋಪಚಾರ, ತಾಲೀಮು, ಎರಡನೇ ತಂಡದ ಆನೆಗಳ ಆಗಮನ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಮಾಹಿತಿ ನೀಡಿದರು.

ಮೊದಲ ತಂಡದಲ್ಲಿ ಆಗಮಿಸಿರುವ ಎಂಟು ಆನೆಗಳ ಮೆರವಣಿಗೆ ತಾಲೀಮು ಉತ್ತಮವಾಗಿದೆ. ಸೆ.15ರಿಂದ ಆನೆಗಳಿಗೆ ಭಾರ ಹೊರಿಸಿ ತಾಲೀಮು ನಡೆಸಲಾಗುವುದು. ಅಂಬಾರಿ ಆನೆ ಅಭಿಮನ್ಯುವಿನಿಂದ ಆರಂಭಿಸಲಾಗುವುದು. ದಸರಾ ಮೆರವಣಿಗೆಯಲ್ಲಿ ಚಿನ್ನದ ಅಂಬಾರಿ ಸೇರಿದಂತೆ ಒಟ್ಟು ಹೊರಬೇಕಾದ ಭಾರದ ಅರ್ಧದಷ್ಟು ಭಾರ ಹಾಕಿ ತಾಲೀಮು ನಡೆಸಲಾಗುವುದು. ಒಟ್ಟು ನಾಲ್ಕು ಆನೆಗಳಿಗೆ ಭಾರ ಹಾಕಿ ತಾಲೀಮು ನೀಡುವ ಯೋಜನೆ ಇದೆ ಎಂದು ತಿಳಿಸಿದರು.

ಆನೆಗಳ ತೂಕದ ಆಧಾರದಲ್ಲಿ ಆಹಾರದ ಪ್ರಮಾಣವನ್ನು ನಿಗದಿಪಡಿಸಿ ಸಮರ್ಪಕವಾಗಿ ಒದಗಿಸಲಾಗುತ್ತಿದೆ. ಹಸಿ ಮತ್ತು ಒಣ ಹುಲ್ಲು, ಕಬ್ಬು, ಬೆಲ್ಲ, ಭತ್ತ, ತೆಂಗಿನಕಾಯಿ, ಹುರುಳಿ, ಬೆಣ್ಣೆ ಸೇರಿದಂತೆ ಬಗೆ ಬಗೆಯ ವಿಶೇಷ ಆಹಾರ ನೀಡಲಾಗುತ್ತಿದೆ. ವೈದ್ಯರ ಸೂಚನೆಯಂತೆ ಪೌಷ್ಟಿಕ ಪೌಡರ್‌ಗಳು ಹಾಗೂ ಔಷಧೋಪಚಾರ ನೀಡಲಾಗುತ್ತಿದೆ. ಮೊದಲ ಬಾರಿ ಆಗಮಿಸಿರುವ ಕಂಜನ್ ಆರೋಗ್ಯದ ಬಗ್ಗೆ ವಿಶೇಷ ನಿಗಾ ವಹಿಸಲಾಗಿದೆ. ಆನೆಗಳ ಆರೋಗ್ಯ ಸ್ಥಿತಿಯ ಬಗ್ಗೆ ವೈದ್ಯರು ನಿತ್ಯ ವರದಿ ನೀಡುತ್ತಿದ್ದಾರೆ ಎಂದರು.

ಯಶಸ್ವಿ ಪೂರ್ಣ ತಾಲೀಮು: ಕಳೆದ ಶನಿವಾರ ಮತ್ತು ಭಾನುವಾರ ಅರಮನೆ ಆವರಣದಿಂದ ಬನ್ನಿಮಂಟಪದವರೆಗೆ ಸಂಪೂರ್ಣ ತಾಲೀಮು ನಡೆಸಲಾಯಿತು. ವಾರಾಂತ್ಯ ವಾಹನ ದಟ್ಟಣೆ ನಡುವೆ ಆನೆಗಳೆಲ್ಲಾ ಉತ್ತಮವಾಗಿ ತಾಲೀಮು ನಡೆಸಿದವು. ಬನ್ನಿಮಂಟಪದಿಂದ ಶನಿವಾರ ಮಹೇಂದ್ರ ಹಾಗೂ ಭಾನುವಾರ ಗೋಪಿ ನೇತೃತ್ವದಲ್ಲಿ ಆನೆಗಳು ವಾಪಸ್ಸಾದವು. ಹೀಗೆ ಬೇರೆ ಬೇರೆ ಆನೆಗಳನ್ನು ಮುಂದೆ ಬಿಟ್ಟು ಅಭ್ಯಾಸ ಮಾಡಿಸಲಾಗುತ್ತಿದೆ. ಈ ಬಾರಿ ಮೆರವಣಿಗೆ ಸಂಜೆ ಸುಮಾರು 5 ಗಂಟೆಗೆ ಆರಂಭವಾಗಬಹುದು. ಹಾಗಾಗಿ ಆ ಸಮಯದಲ್ಲೇ ವಾರಾಂತ್ಯ ದಿನಗಳಲ್ಲಿ ಪೂರ್ಣ ತಾಲೀಮು ನಡೆಸಲಾಗುವುದು. ಉಳಿದ ದಿನಗಳಲ್ಲಿ ಆರ್‌ಎಂಸಿ ಜಂಕ್ಷನ್‌ನಿಂದ ವಾಪಸ್ ಕರೆತರಲಾಗುವುದು ಎಂದು ವಿವರಿಸಿದರು.

ಅನುಭವಿಯಂತೆ ಕಂಜನ್ ವರ್ತನೆ: ದಸರಾಗೆ ಮೊದಲ ಬಾರಿ ಆಗಮಿಸಿರುವುದರಿಂದ ಕಂಜನ್ ಆನೆ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಲಾಗುತ್ತಿದೆ. ಆದರೆ ಆತನ ವರ್ತನೆ ಅನುಭವಿ ಆನೆಗಳಂತಿದೆ. ಆತ ಧೈರ್ಯಶಾಲಿ. ತಾಲೀಮು ಸಂದರ್ಭದಲ್ಲಿ ಹೊಸ ಆನೆ ಕಂಜನ್‌ನನ್ನು ಗುರುತಿಸಲಾಗದು. ವಾಹನಗಳ ಹಾರನ್ ಶಬ್ದಕ್ಕೆ ಹೆದರದೆ ಉಳಿದ ಆನೆಗಳಂತೆ ರಸ್ತೆಯಲ್ಲಿ ಆರಾಮಾಗಿ ಹೆಜ್ಜೆ ಹಾಕುತ್ತಾನೆ. ಒಂದು ದಿನ ತಾಲೀಮಿನಲ್ಲಿ ಕಂಜನ್ ನೇತೃತ್ವದಲ್ಲೇ ಆನೆಗಳು ವಾಪಸ್ಸಾದವು. ಮುಂದೆಯಿದ್ದರೂ ಕಂಜನ್ ಭಯಪಡದೆ ಹೆಜ್ಜೆ ಹಾಕಿದ ಎಂದು ತಿಳಿಸಿದರು.

ಕೊನೆವಾರ 2ನೇ ತಂಡ: ಮೊದಲ ತಂಡದಲ್ಲಿ ಆಗಮಿಸಿದ ಅರ್ಜುನ ಆನೆಯನ್ನು ಹುಲಿ ಸೆರೆ ಕಾರ್ಯಾಚರಣೆಗೆ ಹೆಚ್.ಡಿ.ಕೋಟೆಗೆ ಕರೆದೊಯ್ಯಲಾಗಿದೆ. ಅಲ್ಲಿನ ಅರಣ್ಯಾಧಿಕಾರಿಗಳ ತಂಡದೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ. ಕಾರ್ಯಾಚರಣೆ ಮುಗಿದಾಕ್ಷಣ ಅಥವಾ ಪರ್ಯಾಯ ವ್ಯವಸ್ಥೆಯಾದರೆ ಅರ್ಜುನನ್ನು ಕಳುಹಿಸಿಕೊಡಲಿದ್ದಾರೆ. ಶೀಘ್ರದಲ್ಲೇ ವಾಪಸ್ಸು ತಂಡ ಸೇರಲಿದ್ದಾನೆ. ಇನ್ನು ಎರಡನೇ ತಂಡದ ಆನೆಗಳನ್ನು ಕರೆತರುವ ಬಗ್ಗೆ ದಿನಾಂಕ ನಿಗದಿಯಾಗಿಲ್ಲ. ಆದರೆ ಸೆಪ್ಟೆಂಬರ್ ಕೊನೆ ವಾರದಲ್ಲಿ ಕರೆತರುವ ಆಲೋಚನೆ ಇದೆ. ಆ ತಂಡದಲ್ಲಿ ಮೂರು ಹೊಸ ಆನೆಗಳು ಬರುತ್ತವೆ. ರಾಮಪುರ ಕ್ಯಾಂಪ್‌ನಿಂದ ಹಿರಣ್ಯಾ, ರೋಹಿತ ಮತ್ತು ದೊಡ್ಡಹರವೆ ಕ್ಯಾಂಪ್‌ನಿಂದ ಲಕ್ಷ್ಮೀ ಆನೆಗಳು ಮೊದಲ ಬಾರಿ ದಸರೆಗೆ ಬರಲಿವೆ ಎಂದು ಹೇಳಿದರು.

ಸಕಲ ವ್ಯವಸ್ಥೆ: ಆನೆಗಳಿಗೆ ಸ್ನಾನ ಮಾಡುವ ಜಾಗದ ಸುತ್ತ ಸ್ವಚ್ಛತೆ ಕಾಯ್ದುಕೊಳ್ಳಲಾಗಿದೆ. ಮಾವುತರು ಹಾಗೂ ಕಾವಾಡಿಗರಿಗೆ ಸೂಕ್ತ ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ. ಮಾವುತರು ಹಾಗೂ ಕಾವಾಡಿಗಳ ಮಕ್ಕಳ ವಿದ್ಯಾಭ್ಯಾಸಕ್ಕೆ ಟೆಂಟ್ ಸಿದ್ಧವಾಗಿದೆ. ಶಿಕ್ಷಣ ಇಲಾಖೆ ಅಧಿಕಾರಿಗಳೂ ಭೇಟಿ ನೀಡಿದ್ದರು. ಎಲ್ಲಾ ಮಕ್ಕಳು ಬಂದ ಕೂಡಲೇ ಶಾಲೆ ಆರಂಭಿಸಲಾಗುವುದು. ಈಗಿರುವ ಮಕ್ಕಳಿಗೆ ಕೇರಂ, ಬ್ಯಾಸ್ಕೆಟ್‌ಬಾಲ್, ಕ್ರಿಕೆಟ್ ಕ್ರೀಡಾ ಸಾಮಗ್ರಿ ನೀಡಲಾಗಿದೆ ಎಂದು ತಿಳಿಸಿದರು.

ಚಾಕುವಿನಿಂದ ಕುತ್ತಿಗೆಗೆ ಇರಿದು ವ್ಯಕ್ತಿ ಹತ್ಯೆ

ಕೇರ್ಗಳ್ಳಿಯ ಬಾರ್‌ವೊಂದರ ಬಳಿ ಘಟನೆ ತಡವಾಗಿ ಬೆಳಕಿಗೆ

ಮೈಸೂರು, ಸೆ.11(ಎಸ್‌ಬಿಡಿ)– ಚಾಕುವಿನಿಂದ ಕುತ್ತಿಗೆಗೆ ಇರಿದು ವ್ಯಕ್ತಿಯೊಬ್ಬರನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಮೈಸೂರು ತಾಲೂಕು ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.


ಮೈಸೂರು ತಾಲೂಕಿನ ಕೇರ್ಗಳ್ಳಿ ಗ್ರಾಮದ ಮಹದೇವ(54) ಬರ್ಬರವಾಗಿ ಹತ್ಯೆಯಾದವರು. ಈ ಘಟನೆ ಶನಿವಾರ ನಡೆದಿದೆ ಎನ್ನಲಾಗಿದ್ದು, ಸೋಮವಾರ ಬೆಳಗ್ಗೆ ಬೆಳಕಿಗೆ ಬಂದಿದೆ.

ಪೇಂಟಿಂಗ್ ಇನ್ನಿತರ ಕೂಲಿ ಕೆಲಸ ಮಾಡಿಕೊಂಡಿದ್ದ ಮಹದೇವ ಅವರು, ಮದ್ಯ ವ್ಯಸನಿಯಾಗಿದ್ದರು. ಶನಿವಾರದಿಂದ ಮನೆಗೆ ಬಂದಿಲ್ಲವಾದ್ದರಿಂದ ಕುಟುಂಬದವರು ಹುಡುಕಾಟ ನಡೆಸಿದ್ದರು. ಆದರೆ ಸೋಮವಾರ ಬೆಳಗ್ಗೆ ಕೇರ್ಗಳ್ಳಿ ಗ್ರಾಮದ ಬಾರ್ ಮುಂದಿನ ಮಾವಿನ ತೋಟದ ಬಳಿ ಮಹದೇವ ಅವರ ಶವ ಕಂಡು ಸ್ಥಳೀಯರು ಕುಟುಂಬದವರಿಗೆ ಮಾಹಿತಿ ನೀಡಿದ್ದಾರೆ ಎಂದು ತಿಳಿದುಬಂದಿದೆ.

ವಿಷಯ ತಿಳಿದ ಜಯಪುರ ಠಾಣೆ ಸಬ್‌ಇನ್‌ಸ್ಪೆಕ್ಟರ್ ಸುರೇಶ್ ಬೋಪಣ್ಣ ಹಾಗೂ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿ, ಪರಿಶೀಲಿಸಿದರು. ಬಳಿಕ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಎಎಸ್ಪಿ ನಂದಿನಿ, ಡಿವೈಎಸ್ಪಿ ಪೂರ್ಣಚಂದ್ರ ತೇಜಸ್ವಿ, ಸರ್ಕಲ್ ಇನ್ಸ್‌ಪೆಕ್ಟರ್ ಸ್ವರ್ಣಾ ಪರಿಶೀಲನೆ ನಡೆಸಿದರು.

ಹತ್ಯೆ ನಡೆದು ಎರಡು ದಿನವಾಗಿದ್ದರಿಂದ ಶವಕ್ಕೆ ಇರುವೆಗಳು ಮುತ್ತಿಕೊಂಡಿದ್ದವು. ಪೊಲೀಸರು ವೈದ್ಯಕೀಯ ಪರೀಕ್ಷೆ ಬಳಿಕ ದೇಹವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಿದರು. ಬಳಿಕ ಅಂತ್ಯಕ್ರಿಯೆ ನೆರವೇರಿಸಲಾಯಿತು. ಮಹದೇವ ಅವರಿಗೆ ಯಾರೊಂದಿಗೂ ವೈಷಮ್ಯವಿರಲಿಲ್ಲ ಎಂದು ಅವರ ಕುಟುಂಬದವರು ತಿಳಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ಸಬ್‌ಇನ್‌ಸ್ಪೆಕ್ಟರ್ ಸುರೇಶ್ ಬೋಪಣ್ಣ ತಿಳಿಸಿದ್ದಾರೆ.

ಮೈಸೂರು ಲಿಂಗಾಂಬುದಿ ಕೆರೆಯಲ್ಲಿ ಮೀನುಗಳ ಮಾರಣಹೋಮ: ಜಂಟಿ ಸಮಿತಿ ರಚಿಸಿದ ಎನ್‌ಜಿಟಿ



ನವದೆಹಲಿ: ಮೈಸೂರಿನ ಲಿಂಗಾಂಬುದಿ ಕೆರೆಯಲ್ಲಿ ಮೀನುಗಳ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ವಯಂಪ್ರೇರಿತ ಪ್ರಕರಣವನ್ನು ರಾಷ್ಟ್ರೀಯ ಹಸಿರು ನ್ಯಾಯಮಂಡಳಿಯ (ಎನ್‌ಜಿಟಿ) ಪ್ರಧಾನ ಪೀಠ ದಾಖಲಿಸಿಕೊಂಡು, ಇದರ ವರದಿಗಾಗಿ ತಜ್ಞರ ಜಂಟಿ ಸಮಿತಿ ರಚಿಸಿದೆ.

ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸದಸ್ಯ ಕಾರ್ಯದರ್ಶಿ ಹಾಗೂ ಮೈಸೂರು ಜಿಲ್ಲಾಧಿಕಾರಿ ಅವರನ್ನೊಳಗೊಂಡ ಜಂಟಿ ಸಮಿತಿಯನ್ನು ಪೀಠ ರಚಿಸಿದೆ. ಮೈಸೂರು ಜಿಲ್ಲಾಧಿಕಾರಿಯವರು ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಈ ಘಟನೆಯು ಪರಿಸರ ನಿಯಮಗಳು ಮತ್ತು ನಿಗದಿತ ಕಾಯ್ದೆಗಳ ನಿಬಂಧನೆಗಳ ಉಲ್ಲಂಘನೆಯನ್ನು ಸ್ಪಷ್ಟವಾಗಿ ಬಹಿರಂಗಪಡಿಸುತ್ತದೆ ಎಂದು ನ್ಯಾಯಮೂರ್ತಿಗಳಾದ ಪ್ರಕಾಶ್ ಶ್ರೀವಾಸ್ತವ, ಸುಧೀರ್ ಅಗರವಾಲ್ ಹಾಗೂ ಡಾ.ಸೆಂಥಿಲ್ ವೇಲ್ ಅವರನ್ನು ಒಳಗೊಂಡ ಪೀಠ ಹೇಳಿದೆ.

ಜಂಟಿ ಸಮಿತಿಯು ಕೆರೆಗೆ ಭೇಟಿ ನೀಡಿ, ಸ್ಥಳ ಪರಿಶೀಲಿಸಿ ಮಾದರಿಗಳನ್ನು ಸಂಗ್ರಹಿಸಬೇಕು. ಮೀನುಗಳ ಸಾವಿಗೆ ಕಾರಣವೇನು ಎಂಬುದನ್ನು ಪತ್ತೆ ಹಚ್ಚಬೇಕು. ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಭವಿಷ್ಯದಲ್ಲಿ ಇಂತಹ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸಬೇಕು. ಜತೆಗೆ, ಆರು ವಾರಗಳೊಳಗೆ ಪೀಠಕ್ಕೆ ವರದಿಯನ್ನು ಸಲ್ಲಿಸಬೇಕು ಎಂದು ಪೀಠ ನಿರ್ದೇಶನ ನೀಡಿದೆ.

ಈ ಘಟನೆಯು ನ್ಯಾಯಮಂಡಳಿಯ ಚೆನ್ನೈ ಪೀಠದ ವ್ಯಾಪ್ತಿಯಲ್ಲಿ ನಡೆದಿದೆ. ಹೀಗಾಗಿ, ಈ ಪ್ರಕರಣದ ವಿಚಾರಣೆಯನ್ನು ಚೆನ್ನೈ ಪೀಠ ನಡೆಸಲಿದೆ ಎಂದು ಪ್ರಧಾನ ಪೀಠ ತಿಳಿಸಿದೆ. ವಿಚಾರಣೆಯನ್ನು ಡಿ.1ಕ್ಕೆ ಮುಂದೂಡಿದೆ.

ಸಂಘ ಸಂಸ್ಥೆಗಳ ನವೀಕರಣಕ್ಕೆ 2024 ಜೂನ್‌ವರೆಗೆ ಅವಕಾಶ

ಮೈಸೂರು, ಸೆ.11– ಕರ್ನಾಟಕ ಸಂಘ ಸಂಸ್ಥೆಗಳ ನೋಂದಣಿ ಅಧಿನಿಯಮ 1960 ಅಡಿ ನೋಂದಣಿಯಾದ ಪ್ರತಿಯೊಂದು ಸಂಘವು ಪ್ರತಿ ವರ್ಷ ಲೆಕ್ಕ ಪತ್ರಗಳ ಫೈಲಿಂಗ್ ಮಾಡಬೇಕಾಗಿದ್ದು, ಆದರೆ ಕಲಂ 13 ರಂತೆ ಅನೇಕ ಸಂಘ ಸಂಸ್ಥೆಗಳು ಐದು ವರ್ಷಗಳಿಗೂ ಮೇಲ್ಪಟ್ಟು ಫೈಲಿಂಗ್ ಮಾಡದೆ ಇರುವ ಸಂಘ ಸಂಸ್ಥೆಗಳನ್ನು ಸದಸ್ಯರ ಹಿತದೃಷ್ಟಿಯಿಂದ ಒಂದು ಬಾರಿ ದಂಡ ವಿಧಿಸಿ ಷರತ್ತುಗಳಿಗೆ ಒಳಪಟ್ಟಂತೆ 2024ರ ಜೂನ್ 30 ರ ಅಂತ್ಯದೊಳಗಾಗಿ ನವೀಕರಿಸಲು ಕರ್ನಾಟಕ ರಾಜ್ಯ ಸಹಕಾರ ಸಂಘಗಳ ನಿಬಂಧಕರು ಅನುಮತಿ ನೀಡಿದ್ದಾರೆ.

ಷರತ್ತುಗಳು: ಐದು ವರ್ಷಗಳಿಗೆ ಮೇಲ್ಪಟ್ಟು ನವೀಕರಿಸಿದ ಸಂಘ ಸಂಸ್ಥೆಗಳನ್ನು ಒಂದು ಬಾರಿ ಮಾತ್ರ ವರ್ಷಕ್ಕೆ 3000 ದಂತೆ ಹೆಚ್ಚುವರಿ ದಂಡ ವಿಧಿಸಿ ನವೀಕರಿಸಲಾಗುವುದು. ಜೂನ್ 30, 2024ರ ಅಂತ್ಯದೊಳಗೆ ನಿಗದಿಪಡಿಸಿದ ದಾಖಲೆಗಳನ್ನು ಸಲ್ಲಿಸದೇ ಇರುವ ಸಂಘಗಳ ರದ್ಧತಿಗೆ ಕ್ರಮ ಕೈಗೊಳ್ಳಲಾಗುವುದು. ಸಂಘದ ಎಲ್ಲಾ ಆಡಳಿತ ಆಡಿಟ್ ವರದಿಗಳನ್ನು ಆನ್‌ಲೈನ್‌ನಲ್ಲಿ ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ.

ನವೀಕರಣಕ್ಕೆ ಸಂಬಂಧಿಸಿದಂತೆ ಸಂಬಂಧ ಸಂಘದ ಅಗತ್ಯ ದಾಖಲೆಗಳಾದ ಮೂಲ ಬೈಲಾ ಪ್ರತಿ, ಆಡಿಟ್ ವರದಿಗಳು, ಕಾರ್ಯಕಾರಿ ಸಮಿತಿ ಸದಸ್ಯರ ಪಟ್ಟಿ (ಸದಸ್ಯರ ಭಾವಚಿತ್ರ ಹಾಗೂ ಸಹಿಯೊಂದಿಗೆ) ವಾರ್ಷಿಕ ಸಾಮಾನ್ಯ ಸಭೆಯ ನಡವಳಿಗಳು, ಸಾಮಾನ್ಯ ಸಭೆಯ ನೋಟಿಸ್, ಸಭೆಗೆ ಹಾಜರಾದ ಸದಸ್ಯರ ವಿವರ ಮತ್ತು ಅವರ ಸಹಿಯೊಂದಿಗೆ ನೋಂದಣಿ ಪ್ರಮಾಣ ಪತ್ರ ಮತ್ತು ಹಿಂದಿನ ಸಾಲಿನಲ್ಲಿ ಫೈಲಿಂಗ್ ಮಾಡಿರುವ ಸ್ವೀಕೃತಿ ಪತ್ರ ಹಾಗೂ ಇನ್ನಿತರ ಅಗತ್ಯ ದಾಖಲೆಗಳೊಂದಿಗೆ ಸಯ್ಯಾಜಿ ರಾವ್ ರಸ್ತೆಯಲ್ಲಿರುವ ಸಾರ್ವಜನಿಕ ಕಚೇರಿಗಳ ಕಟ್ಟಡದ ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪನಿಬಂಧಕರನ್ನು ಸಂಪರ್ಕಿಸಬಹುದು ಎಂದು ಸಂಘ ಸಂಸ್ಥೆಗಳ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ಕಾವೇರಿ ನದಿ ನೀರು ನಿಯಂತ್ರಣ ಸಮಿತಿಯ ಸಭೆ

ನವದೆಹಲಿ: ಕಾವೇರಿ ನದಿ ನೀರು ನಿಯಂತ್ರಣ ಸಮಿತಿಯ ಸಭೆ(ಸಿಡಬ್ಲ್ಯುಆರ್‌ಸಿ) ಮಂಗಳವಾರ ನಡೆಯಲಿದೆ.

ಕಾವೇರಿ ನದಿಯಿಂದ ತಮಿಳುನಾಡಿಗೆ ಪ್ರತಿನಿತ್ಯ ಅಂದಾಜು ಅರ್ಧ ಟಿಎಂಸಿ ಅಡಿ (5 ಸಾವಿರ ಕ್ಯೂಸೆಕ್) ನೀರು ಬಿಡುಗಡೆ ಮಾಡುವಂತೆ ಸಮಿತಿಯು ಆಗಸ್ಟ್ 29ರಂದು ಶಿಫಾರಸು ಮಾಡಿತ್ತು. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರವು ಆಗಸ್ಟ್ 29ರಂದು ನಡೆಸಿದ ಸಭೆಯಲ್ಲಿ ಸೆಪ್ಟೆಂಬರ್ 12ರವರೆಗೆ ಪ್ರತಿದಿನ 5 ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ನಿರ್ದೇಶನ ನೀಡಿತ್ತು. ಪ್ರಾಧಿಕಾರವು ನಿಗದಿಪಡಿಸಿದಷ್ಟು ನೀರನ್ನು ಕರ್ನಾಟಕ, ತಮಿಳುನಾಡಿಗೆ ಬಿಡುಗಡೆ ಮಾಡಿದೆ. ಕಾವೇರಿ ಹಾಗೂ ಕೃಷ್ಣಾ ಕಣಿವೆಯಲ್ಲಿ ಭೀಕರ ಬರದ ಸನ್ನಿವೇಶ ಕಾಣಿಸಿಕೊಂಡಿದ್ದು, ಸೆಪ್ಟೆಂಬರ್ 12ರ ನಂತರ ತಮಿಳುನಾಡಿಗೆ ನೀರು ಬಿಡುಗಡೆ ಮಾಡಲು ಸಾಧ್ಯವಿಲ್ಲ ಎಂದು ಕರ್ನಾಟಕ ಸರ್ಕಾರವು ಸುಪ್ರೀಂಕೋರ್ಟ್‌ಗೆ ಈಗಾಗಲೇ ಪ್ರಮಾಣಪತ್ರ ಸಲ್ಲಿಸಿದೆ.

ಸಮಿತಿಯ ಅಧ್ಯಕ್ಷ ವಿನೀತ್ ಗುಪ್ತ ಅಧ್ಯಕ್ಷತೆಯಲ್ಲಿ ವರ್ಚುವಲ್ ಮೂಲಕ ಮಧ್ಯಾಹ್ನ 2.30ಕ್ಕೆ ಸಭೆ ನಡೆಯಲಿದ್ದು, ಕಾವೇರಿ ಕಣಿವೆಯ ಜಲಾಶಯಗಳ ಸ್ಥಿತಿ, ನೀರು ಬಿಡುಗಡೆ ಪ್ರಮಾಣ ಮತ್ತಿತರ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. ಜಲಾಶಯಗಳ ವಾಸ್ತವ ಸ್ಥಿತಿ ಕುರಿತು ಸಮಿತಿಯು ಪ್ರಾಧಿಕಾರಕ್ಕೆ ವರದಿ ನೀಡಲಿದೆ. ಇನ್ನಷ್ಟು ನೀರು ಬಿಡುಗಡೆಗೆ ಶಿಫಾರಸು ಮಾಡುವ ಸಾಧ್ಯತೆಯೂ ಇದೆ ಎಂದು ಮೂಲಗಳು ಹೇಳಿವೆ.

ಸಾಮಾನ್ಯವಾಗಿ ಸಮಿತಿಯ ಸಭೆ ನಡೆದ 2–3 ದಿನಗಳಲ್ಲಿ ಪ್ರಾಧಿಕಾರದ ಸಭೆ ನಡೆಯಲಿದೆ. ಆದರೆ, ಈ ಸಲ ಪ್ರಾಧಿಕಾರದ ಸಭೆಯ ಕುರಿತು ನಮಗೆ ಯಾವುದೇ ಮಾಹಿತಿ ಬಂದಿಲ್ಲ ಎಂದು ಕರ್ನಾಟಕ ಸರ್ಕಾರದ ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.



ಮೈಸೂರು ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅವರು ವಾರ್ಡ್ ಸಂಖ್ಯೆ 50ರ ವ್ಯಾಪ್ತಿಯ ವಿದ್ಯಾರಣ್ಯಪುರಂ ಇನ್ನಿತರ ಭಾಗದಲ್ಲಿ ಪಾದಯಾತ್ರೆ ಮೂಲಕ ಸಾರ್ವಜನಿಕ ಸಮಸ್ಯೆಗಳನ್ನು ಪ್ರತ್ಯಕ್ಷವಾಗಿ ಕಂಡು, ಪರಿಹಾರ ಕ್ರಮಕ್ಕೆ ಸೂಚಿಸಿದರು. ಈ ವೇಳೆ ನಗರಪಾಲಿಕೆ ಸದಸ್ಯ ಮಾ.ವಿ.ರಾಮಪ್ರಸಾದ್, ಮಾಜಿ ಕಾರ್ಪೋರೇಟರ್ ರಘು ಅರಸ್, ವಿದ್ಯಾ ಅರಸ್, ಸಂದೀಪ್, ಪುರುಷೋತ್ತಮ, ಧರ್ಮೇಂದ್ರ ಮತ್ತಿತರ ಮುಖಂಡರಿದ್ದರು.

ಮುಂದಿನ ವರ್ಷದಿಂದ ಪಿಯುಗೆ ಎನ್‌ಸಿಇಆರ್‌ಟಿ ಪಠ್ಯ

ಬೆಂಗಳೂರು, ಸೆ. 11– 2024–25ನೇ ಸಾಲಿನಿಂದ ಪ್ರಥಮ ವರ್ಷದ ಪಿಯುಗೆ ಕಂಪ್ಯೂಟರ್ ಸೈನ್ಸ್, ಗೃಹವಿಜ್ಞಾನ ಮತ್ತು ಮನೋವಿಜ್ಞಾನ ವಿಷಯಗಳಿಗೆ ಎನ್‌ಸಿಇಆರ್‌ಟಿ ಪಠ್ಯಪುಸ್ತಕಗಳನ್ನು ಅಳವಡಿಸಿಕೊಳ್ಳಲು ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ಧರಿಸಿದೆ. ಇದೇ ಎನ್‌ಸಿಇಆರ್‌ಟಿ ಪಠ್ಯ ಪುಸ್ತಕಗಳನ್ನು 2025–26ರಿಂದ ದ್ವಿತೀಯ ಪಿಯುಗೂ ಮುಂದು ವರಿಸಲಾಗುವುದು. ಈ ಕುರಿತು ಶಿಕ್ಷಕರಿಗೆ ಸೂಕ್ತ ತರಬೇತಿ ಆಯೋಜಿಸಲಾಗುವುದು ಎಂದು ಇಲಾಖೆ ತಿಳಿಸಿದೆ. ಪ್ರಸ್ತುತ ಎನ್‌ಸಿಇಆರ್‌ಟಿ ಪಠ್ಯಪುಸ್ತಕಗಳನ್ನು ಭೌತವಿಜ್ಞಾನ, ರಸಾಯನವಿಜ್ಞಾನ, ಗಣಿತ, ಜೀವವಿಜ್ಞಾನ, ವ್ಯವಹಾರ ಅಧ್ಯಯನ ಮತ್ತು ಅರ್ಥಶಾಸ್ತ್ರಸೇರಿ ಏಳು ವಿಷಯಗಳಿಗೆ ಬಳಸಲಾಗುತ್ತಿದೆ.

ಮಾಜಿ ಶಾಸಕ ಎಲ್.ನಾಗೇಂದ್ರರ ಅದ್ಧೂರಿ ಹುಟ್ಟುಹಬ್ಬ ಆಚರಣೆ



ಮೈಸೂರು, ಸೆ.11(ಬಿಎಲ್‌ಯು)– ಮೈಸೂರಿನ ಚಾಮರಾಜ ಕ್ಷೇತ್ರದ ಮಾಜಿ ಶಾಸಕ ಎಲ್.ನಾಗೇಂದ್ರ ಅವರ ಹುಟ್ಟುಹಬ್ಬವನ್ನು ಅವರ ಅಭಿಮಾನಿಗಳು ಇಂದು ಅದ್ಧೂರಿಯಾಗಿ ಆಚರಣೆ ಮಾಡಿದರು.

ಮೈಸೂರಿನ ನಂಜನಗೂಡಿನ ಶ್ರೀಕಂಠೇಶ್ವರ ದೇವಸ್ಥಾನಕ್ಕೆ ಇಂದು ಬೆಳಿಗ್ಗೆ ಭೇಟಿ ನೀಡಿದ್ದ ನಾಗೇಂದ್ರ ಅವರು ತಮ್ಮ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಶ್ರೀಕಂಠೇಶ್ವರನಿಗೆ ವಿಶೇಷ ಪೂಜೆ ಸಲ್ಲಿಸಿದರು.

ತರುವಾಯ ಮೈಸೂರಿನ ಒಂಟಿಕೊಪ್ಪಲ್‌ನ ಲಕ್ಷ್ಮಿ ವೆಂಕಟರಮಣಸ್ವಾಮಿ ದೇವಸ್ಥಾನದಲ್ಲೂ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಚಾಮರಾಜ ಕ್ಷೇತ್ರದ ಬಿಜೆಪಿ ಕಾರ್ಯಕರ್ತರು ಹಾಗೂ ಅವರ ಅಭಿಮಾನಿಗಳು ಅವರಿಗೆ ಭಾರಿ ಗಾತ್ರದ ಹಾರ ಹಾಕಿ, ಕೇಕ್ ಕತ್ತರಿಸಿ ಹುಟ್ಟುಹಬ್ಬವನ್ನು ವಿಜೃಂಭಣೆಯಿಂದ ಆಚರಣೆ ಮಾಡಿದರು. ತರುವಾಯ ಅಲ್ಲೇ ಅನ್ನದಾನವನ್ನು ಕೂಡ ಆಯೋಜಿಸಲಾಗಿತ್ತು.

ಮೈಸೂರಿನ ಬಂಬೂಬಜಾರ್‌ನಲ್ಲಿರುವ ವಿಶೇಷಚೇತನರ ಸರ್ಕಾರಿ ಶಾಲೆಯಲ್ಲೂ ನಾಗೇಂದ್ರ ಅವರು ಮಕ್ಕಳಿಗೆ ಊಟದ ವ್ಯವಸ್ಥೆ ಮಾಡಿದ್ದರು.

ಮೈಸೂರಿನ ಮಂಡಿ ಮೊಹಲ್ಲಾ, ಕೆ.ಟಿ.ಸ್ಟ್ರೀಟ್ ಸೇರಿದಂತೆ ಇತರೆಡೆ ಶಾಲಾ ವಿದ್ಯಾರ್ಥಿಗಳಿಗೆ ನಾಗೇಂದ್ರ ಸಮವಸ್ತ್ರ ಹಾಗೂ ಪುಸ್ತಕಗಳನ್ನು ವಿತರಣೆ ಮಾಡಿದರು. ಮಂಚೇಗೌಡನಕೊಪ್ಪಲಿನಲ್ಲಿ ನಾಗೇಂದ್ರ ಅವರ ಅಭಿಮಾನಿಗಳು ಉಚಿತ ಆರೋಗ್ಯ ತಪಾಸಣಾ ಶಿಬಿರ ಕೂಡ ಆಯೋಜಿಸಿದ್ದರು.

ಮೈಸೂರಿನ ಚಾಮರಾಜ ಕ್ಷೇತ್ರವಲ್ಲದೇ ಇನ್ನಿತರೆಡೆ ಪ್ರಮುಖ ರಸ್ತೆ, ವೃತ್ತಗಳಲ್ಲಿ ಮಾಜಿ ಶಾಸಕ ಎಲ್. ನಾಗೇಂದ್ರರ ಫ್ಲೆಕ್ಸ್ ಭಾರಿ ಪ್ರಮಾಣದಲ್ಲಿ ರಾರಾಜಿಸುತ್ತಿದ್ದವು.



ಮಾಜಿ ಶಾಸಕ ಎಲ್.ನಾಗೇಂದ್ರ ಅವರ ಹುಟ್ಟುಹಬ್ಬದ ಪ್ರಯುಕ್ತ ಲಕ್ಷ್ಮಿಕಾಂತನಗರದಲ್ಲಿ ಬೃಹತ್ ಒಣ ದ್ರಾಕ್ಷಿ ಹಾರ ಹಾಕುವುದರ ಮೂಲಕ ಅಭಿನಂದಿಸಲಾಯಿತು. ಈ ವೇಳೆ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಎಂ.ಜೆ.ಕಿರಣ್ ಗೌಡ, ಶಕ್ತಿ ಕೇಂದ್ರದ ಅಧ್ಯಕ್ಷ ಬಿ.ಟಿ.ರಾಜೇಂದ್ರ, ಬೂತ್ ಅಧ್ಯಕ್ಷರುಗಳಾದ ರಾಜೇಂದ್ರ, ಶಾಂತಪ್ಪ, ಗುರು, ಮನು, ಭರತ , ಹರೀಶ್ ಕುಮಾರ್, ದೀಪು, ಬಸವರಾಜ್, ಶಿವಸ್ವಾಮಿ, ಪ್ರವೀಣ್ ಇತರರು ಹಾಜರಿದ್ದರು.



ಚಾಮರಾಜ ಕ್ಷೇತ್ರದ ಮಾಜಿ ಶಾಸಕರಾದ ಎಲ್. ನಾಗೇಂದ್ರ ಅವರನ್ನು ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಎಸ್. ಅರವಿಂದ್, ಬಿಜೆಪಿ ಎಸ್‌ಟಿ ಘಟಕದ ಟೆನ್ನಿಸ್ ಗೋಪಿ ಆತ್ಮೀಯವಾಗಿ ಅಭಿನಂದಿಸಿ, ಶುಭಾಶಯ ಕೋರಿದರು. ಚಿತ್ರದಲ್ಲಿ ಕೇಬಲ್ ವಿಜಿ, ಮಂಜು, ಗೋವಿಂದ ರವಿ ಇತರರಿದ್ದಾರೆ.

ಮುಕ್ತ ವ್ಯಾಪಾರ ಒಪ್ಪಂದದ ತ್ವರಿತ ತೀರ್ಮಾನಕ್ಕೆ ಭಾರತ–ಬ್ರಿಟನ್ ಬದ್ಧ

ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್



ನವದೆಹಲಿ: ಉಭಯ ರಾಷ್ಟ್ರಗಳ ನಡುವಿನ ಮುಕ್ತ ವ್ಯಾಪಾರ ಒಪ್ಪಂದದ ತ್ವರಿತ ತೀರ್ಮಾನಕ್ಕೆ ಭಾರತ ಹಾಗೂ ಬ್ರಿಟನ್ ಬದ್ಧವಾಗಿದೆ ಎಂದು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

12 ನೇ ಭಾರತ–ಬ್ರಿಟನ್ ಆರ್ಥಿಕ ಹಾಗೂ ಹಣಕಾಸು ಮಾತುಕತೆ ವೇಳೆ ಎಫ್‌ಟಿಎ ಬಗ್ಗೆ ಘೋಷಣೆ ಮಾಡಲಾಗಿತ್ತು.

ಬ್ರಿಟನ್‌ನ ಖಜಾನೆಯ ಚಾನ್ಸಲರ್ ಜೆರೆಮಿ ಹಂಟ್ ಜೊತೆ ಜಂಟಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿರುವ ನಿರ್ಮಲಾ ಸೀತಾರಾಮನ್, ಎಫ್‌ಟಿಎ ಬಗ್ಗೆ ಖಂಡಿತವಾಗಿಯೂ ಒಂದಷ್ಟು ಚರ್ಚೆಗಳು ನಡೆಯುತ್ತಿವೆ. ಉಭಯ ರಾಷ್ಟ್ರಗಳು ಸಾಧ್ಯವಾದಷ್ಟೂ ಶೀಘ್ರವಾಗಿ ಇದನ್ನು ಅಂತಿಮಗೊಳಿಸುತ್ತವೆ ಎಂದು ಹೇಳಿದ್ದಾರೆ.

ಲಂಡನ್ ಸ್ಟಾಕ್ ವಿನಿಮಯ (ಎಲ್‌ಎಸ್‌ಇ)ನಲ್ಲಿ ಭಾರತೀಯ ಸಂಸ್ಥೆಗಳನ್ನು ನೇರ ಲಿಸ್ಟ್ ಮಾಡುವುದಕ್ಕೆ ಸಂಬಂಧಿಸಿದ ಪ್ರಗತಿಯನ್ನು ಹಂಟ್ ಶ್ಲಾಘಿಸಿದ್ದಾರೆ. ಪಿಂಚಣಿಗಳು ಮತ್ತು ವಿಮಾ ಪಾಲುದಾರಿಕೆ, ಜ್ಞಾನ ಮತ್ತು ಪರಿಣತಿ –ಹಂಚಿಕೆಗಾಗಿ ಉಪಕ್ರಮಗಳು, ಹೊಸ ಯುಕೆ ಮೂಲಸೌಕರ್ಯ ಹಣಕಾಸು ಸೇತುವೆ ಮತ್ತು ಭಾರತದ ಅಭಿವೃದ್ಧಿಶೀಲ GIFT ಸಿಟಿಯಲ್ಲಿ ಆಳವಾದ ಪಾಲುದಾರಿಕೆಯನ್ನು ಅವರು ಮತ್ತಷ್ಟು ಸ್ಪಷ್ಟವಾಗಿ ಉಲ್ಲೇಖಿಸಿದರು. ಸಂಬಂಧವನ್ನು ಬಲಪಡಿಸಲು ನಾವು ಪರಸ್ಪರ ಯೋಜನೆಗಳನ್ನು ನಿಜವಾಗಿಯೂ ಬೆಂಬಲಿಸಬಹುದು ಮತ್ತು ಇದರ ಮುಂದಿನ ಹಂತವು ಸಮಗ್ರFTA ಮತ್ತು ದ್ವಿಪಕ್ಷೀಯ ಹೂಡಿಕೆ ಒಪ್ಪಂದವಾಗಿದೆ ಎಂದು ಹಂಟ್ ಹೇಳಿದ್ದಾರೆ.

ಮೈಸೂರು ಮಿತ್ರ
ಮಂಗಳವಾರ 12 ಸೆಪ್ಟೆಂಬರ್ 2023



ಲೋಕಸಭಾ ಚುನಾವಣೆ –2024

ಮಂಡ್ಯ ಕಾಂಗ್ರೆಸ್ ಟಿಕೆಟ್‌ಗೆ ಭಾರಿ ಪೈಪೋಟಿ...!

ರಮ್ಯಾ, ರೇವಣ್ಣ, ಸಿಆರ್‌ಎಸ್ ಅಣ್ಣನ ಮಗ ಸುನೀಲ್, ಡಾ.ಕೃಷ್ಣ ಹೆಸರು ಮುಂಚೂಣಿಯಲ್ಲಿ


ರಮ್ಯಾ


ರೇವಣ್ಣ


ಸುನೀಲ್


ಡಾ. ಕೃಷ್ಣ

● ಎಂ.ಕೆ.ಮೋಹನ್‌ರಾಜ್

ಮಂಡ್ಯ, ಸೆ.11– ಒಂದು ಕಾಲದಲ್ಲಿ ಕಾಂಗ್ರೆಸ್ ಭದ್ರಕೋಟೆಯಾಗಿದ್ದ ಮಂಡ್ಯ ಲೋಕಸಭಾ ಕ್ಷೇತ್ರ ಕ್ರಮೇಣ ಜೆಡಿಎಸ್ ತೆಕ್ಕೆಗೆ ಜಾರಿತ್ತು. ಇದೀಗ ಕಳೆದ ವಿಧಾನ ಸಭಾ ಚುನಾವಣೆಯಲ್ಲಿ ಮಂಡ್ಯ ಲೋಕ ಸಭಾ ಕ್ಷೇತ್ರ ವ್ಯಾಪ್ತಿಯ 7 ಕ್ಷೇತ್ರ ದಲ್ಲಿ ಕಾಂಗ್ರೆಸ್ ಗೆದ್ದು ಬೀಗಿರುವುದರಿಂದ ಈ ಬಾರಿಯ ಲೋಕಸಭಾ ಚುನಾವಣೆ ಯಲ್ಲಿ ಕಾಂಗ್ರೆಸ್ ಟಿಕೆಟ್‌ಗೆ ಭಾರಿ ಪೈಪೋಟಿ ಎದುರಾಗಿದೆ.

ಎಸ್.ಎಂ.ಕೃಷ್ಣ, ಜಿ.ಮಾದೇಗೌಡ, ಅಂಬರೀಷ್ ಕಾಲದಲ್ಲಿ ಕಾಂಗ್ರೆಸ್‌ನ ಭದ್ರಕೋಟೆಯಾಗಿದ್ದ ಮಂಡ್ಯ ಲೋಕ ಸಭಾ ಕ್ಷೇತ್ರ 2009ರ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ತೆಕ್ಕೆಗೆ ಜಾರಿತ್ತು. ನಂತರ ಲೋಕಸಭೆಗೆ ಸ್ಪರ್ಧಿಸಲು ಟಿಕೆಟ್ ಕೇಳುವವರೇ ಇಲ್ಲದ ಪರಿಸ್ಥಿತಿಯಲ್ಲಿ 2013ರ ಉಪ ಚುನಾವಣೆಯಲ್ಲಿ ಅನಿವಾರ್ಯವಾಗಿ ಚಿತ್ರನಟಿ ರಮ್ಯಾರನ್ನು ಕಾಂಗ್ರೆಸ್ ನಾಯಕರು ಕರೆ ತಂದು ಅಭ್ಯರ್ಥಿ ಮಾಡಬೇಕಾದ ಪರಿಸ್ಥಿತಿ ಉದ್ಭವವಾಗಿತ್ತು. ಆದರೆ ಇದೀಗ ಪರಿಸ್ಥಿತಿ ಬದಲಾಗಿದ್ದು, ಕಾಂಗ್ರೆಸ್ ಟಿಕೆಟ್‌ಗಾಗಿ ತೀವ್ರ ಪೈಪೋಟಿ ಏರ್ಪಟ್ಟಿದೆ.

ಮಾಜಿ ಸಂಸದೆ ರಮ್ಯಾ ಸೇರಿದಂತೆ ಕಳೆದ ವಿಧಾನಸಭಾ ಚುನಾವಣೆಯ ಟಿಕೆಟ್ ವಂಚಿತರು ಹಾಗೂ ಇನ್ನಿತರ ಕೆಲ ಪ್ರಭಾವಿ ಮುಖಂಡರು ಮಂಡ್ಯ ಲೋಕಸಭಾ ಕ್ಷೇತ್ರದ ಮೇಲೆ ಕಣ್ಣಿಟ್ಟಿದ್ದಾರೆ. ಈ ಬಗ್ಗೆ ಇತ್ತೀಚೆಗೆ ಸ್ಪಷ್ಟನೆ ಕೊಟ್ಟಿದ್ದ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸುಮಾರು 7ರಿಂದ 10 ಮಂದಿ ಎಂಪಿ ಟಿಕೆಟ್ ಕೇಳಿದ್ದು, ಈ ಪೈಕಿ ಮೂರ್‍ನಾಲ್ಕು ಮಂದಿ ಮುಂಚೂಣಿ ಯಲ್ಲಿದ್ದಾರೆ ಎಂದಿದ್ದರು.

ಮತ್ತೆ ಮಂಡ್ಯಕ್ಕೆ ಬರ್ತಾರಾ ರಮ್ಯಾ?: ಈ ಬಾರಿ ಚುನಾವಣೆಗೆ ಮಾಜಿ ಸಂಸದೆ ರಮ್ಯಾ ಅವರ ಹೆಸರು ಮಂಡ್ಯದಿಂದ ಪ್ರಬಲವಾಗಿ ಕೇಳಿ ಬರುತ್ತಿದ್ದು, 2013ರ ಲೋಕ ಸಭಾ ಉಪಚುನಾವಣೆಯಲ್ಲಿ ಅನಿರೀಕ್ಷಿತ ವಾಗಿ ಕಾಂಗ್ರೆಸ್‌ನಿಂದ ಮಂಡ್ಯ ಕ್ಷೇತ್ರದ ಅಭ್ಯರ್ಥಿಯಾಗಿದ್ದ ರಮ್ಯಾ 75 ಸಾವಿರ ಅಧಿಕ ಮತಗಳಿಂದ ಪ್ರಚಂಡ ಜಯಭೇರಿ ಬಾರಿಸಿದ್ದರು. ಅದಾದ ಬಳಿಕ 2014ರ ಸಾರ್ವತ್ರಿಕ ಚುನಾವಣೆಯಲ್ಲಿ ಕೇವಲ 5 ಸಾವಿರ ಮತಗಳಿಂದ ಸೋಲನ್ನಪ್ಪಿದ್ದರು.

ಆ ಸೋಲಿನ ಬಳಿಕ ಮಂಡ್ಯದಲ್ಲೇ ಮನೆ ಮಾಡಿ ಕೆಲ ದಿನಗಳ ಕಾಲ ಬಂದು ಹೋದರಾದರೂ ಬಳಿಕ ಸಂಪೂರ್ಣವಾಗಿ ಕ್ಷೇತ್ರವನ್ನು ತೊರೆದರು. ಅಷ್ಟೇ ಅಲ್ಲದೇ ಸಾರ್ವಜನಿಕವಾಗಿಯೂ ಕೆಲ ವರ್ಷ ಕಾಣಿಸಿಕೊಳ್ಳಲಿಲ್ಲ. ಆದರೆ ಕಳೆದ ವಿಧಾನಸಭಾ ಚುನಾವಣೆ ಸಂದರ್ಭ 'ಕೈ' ಅಭ್ಯರ್ಥಿಗಳ ಪರ ಪ್ರಚಾರಕ್ಕೆ ಆಗಮಿಸಿದ್ದ ರಮ್ಯಾ, ಹೈಕಮಾಂಡ್ ಒಪ್ಪಿದರೆ ಸ್ಪರ್ಧೆ ಬಗ್ಗೆ ನಿರ್ಧಾರ ಮಾಡುವೆ ಎಂದಿದ್ದರು. ಮೂಲಗಳ ಪ್ರಕಾರ ಕಾಂಗ್ರೆಸ್ ನಾಯಕರು ರಮ್ಯಾಗೆ ಮಂಡ್ಯ ಅಥವಾ ಬೆಂಗಳೂರು ಉತ್ತರ ಕ್ಷೇತ್ರ ಪೈಕಿ ಎಲ್ಲಿಂದ ಸ್ಪರ್ಧೆ ಮಾಡಲು ಇಚ್ಛೆ ಇದೆ ಎಂದು ಕೇಳಿದ್ದು, ರಮ್ಯಾ ಇನ್ನೂ ನಿರ್ಧಾರ ಪ್ರಕಟಿಸಿಲ್ಲ ಎನ್ನಲಾಗಿದೆ.

ರೇವಣ್ಣಗೆ ಸಿಗುತ್ತಾ ಕೈ ಟಿಕೆಟ್: ಮೇಲುಕೋಟೆ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಬೇಕೆಂಬ ಆಕಾಂಕ್ಷೆ ಹೊಂದಿದ್ದ ಕಾಂಗ್ರೆಸ್ ಮುಖಂಡ ಬಿ.ರೇವಣ್ಣಗೆ 2018ರಲ್ಲಿ ಟಿಕೆಟ್ ಕೈತಪ್ಪಿತ್ತು. 2015ರಿಂದ ಕ್ಷೇತ್ರದಲ್ಲಿ ಗುರುತಿಸಿಕೊಂಡು ಸಮಾಜ ಸೇವೆ ಹಾಗೂ ಇನ್ನಿತರ ಸಾಮಾಜಿಕ ಚಟುವಟಿಕೆಯಲ್ಲಿ ತೊಡಗಿಕೊಂಡು ಕ್ಷೇತ್ರದಲ್ಲಿ ಹೆಸರು ಮಾಡಿದ್ದ ರೇವಣ್ಣಗೆ ಮಾಜಿ ಶಾಸಕ ಕೆ.ಎಸ್.ಪುಟ್ಟಣ್ಣಯ್ಯ ಅವರ ಅಕಾಲಿಕ ನಿಧನ ಟಿಕೆಟ್ ತಪ್ಪಲು ಕಾರಣವಾಯಿತು.

ಪುಟ್ಟಣ್ಣಯ್ಯ ನಿಧನದಿಂದಾಗಿ ಕಾಂಗ್ರೆಸ್ ಪಕ್ಷ ಕ್ಷೇತ್ರದಲ್ಲಿ ಅಭ್ಯರ್ಥಿ ಹಾಕದೇ ಅವರ ಪುತ್ರ ದರ್ಶನ್‌ಗೆ ಬೆಂಬಲ ಸೂಚಿಸಿತ್ತು. ಅದಾದ ಬಳಿಕವೂ ಕ್ಷೇತ್ರದಲ್ಲಿ ಸಕ್ರಿಯವಾಗಿದ್ದ ರೇವಣ್ಣ ಕಳೆದ 2023ರ ಚುನಾವಣೆ ವೇಳೆ ವೈಯಕ್ತಿಕ ಕಾರಣದಿಂದ ರಾಜಕೀಯದಲ್ಲಿ ಸಕ್ರಿಯವಾಗಿರಲಿಲ್ಲ. ಇದೀಗ ಕಳೆದ 3 ತಿಂಗಳಿನಿಂದ ರಾಜಕೀಯದಲ್ಲಿ ಸಕ್ರಿಯವಾಗಿರುವ ರೇವಣ್ಣ, ಮೇಲುಕೋಟೆಯಿಂದ 2 ಬಾರಿ ಟಿಕೆಟ್ ಮಿಸ್ ಆಗಿದ್ದು, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ನನ್ನನ್ನ ಪರಿಗಣಿಸಿ ಎಂದು ಮನವಿ ಮಾಡಿದ್ದಾರೆ.

2 ಬಾರಿ ಟಿಕೆಟ್ ತಪ್ಪಿರುವ ಕಾರಣ ಜಿಲ್ಲೆಯ ಕೆಲ ಕಾಂಗ್ರೆಸ್ ನಾಯಕರು ರೇವಣ್ಣಗೆ ಟಿಕೆಟ್ ಸಿಗಲಿ ಎನ್ನುತ್ತಿದ್ದಾರೆ. ಒಂದು ವೇಳೆ ರಮ್ಯಾ ಮಂಡ್ಯ ಕ್ಷೇತ್ರಕ್ಕೆ ಬಾರದಿದ್ದರೆ ಸ್ಥಳೀಯ ಮುಖಂಡರಿಗೆ ಟಿಕೆಟ್ ಕೊಡುವುದು ಎನ್ನುವುದಾದರೆ ಆ ಪೈಕಿ ಬಿ.ರೇವಣ್ಣ ಹೆಸರು ಮುಂಚೂಣಿಯಲ್ಲಿದೆ.

ಅಣ್ಣನ ಪುತ್ರನಿಗೆ ಟಿಕೆಟ್ ಕೊಡಿಸ್ತಾರಾ ಸಿಆರ್‌ಎಸ್: ಅಚ್ಚರಿಯ ಬೆಳವಣಿಗೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರ ಅಣ್ಣ ಲಕ್ಷ್ಮಿಕಾಂತ್ ಪುತ್ರ ಸುನೀಲ್ ಲಕ್ಷ್ಮಿಕಾಂತ್ ಹೆಸರು ಮಂಡ್ಯ ಲೋಕಸಭಾ ಕ್ಷೇತ್ರದ 'ಕೈ' ಟಿಕೆಟ್ ಆಕಾಂಕ್ಷಿಗಳ ಪಟ್ಟಿಯಲ್ಲಿ ತಳುಕು ಹಾಕಿಕೊಂಡಿದೆ. ಕುಟುಂಬಸ್ಥರಿಗೆ ಟಿಕೆಟ್ ಕೊಡಿಸಲು ಚಲುವರಾಯಸ್ವಾಮಿ ಉತ್ಸಾಹ ತೋರುತ್ತಿಲ್ಲವಾದರೂ ನಾಗಮಂಗಲ ಕ್ಷೇತ್ರದ ಚಲುವರಾಯಸ್ವಾಮಿ ಬೆಂಬಲಿಗರು ಒತ್ತಡ ಹಾಕುತ್ತಿದ್ದಾರೆ. ಆದರೆ ಸುನೀಲ್ ಕಣಕ್ಕಿಳಿಸಲು ರಾಜ್ಯ ಕಾಂಗ್ರೆಸ್ ನಾಯಕರು ಹಾಗೂ ಚಲುವರಾಯಸ್ವಾಮಿ ಒಪ್ಪುತ್ತಾರಾ ಎಂಬುದು ಖಾತ್ರಿ ಇಲ್ಲ. ಕಳೆದ ಎರಡ್ಮೂರು ಚುನಾವಣೆ ಗಳಿಂದ ಚಿಕ್ಕಪ್ಪ ಚಲುವರಾಯಸ್ವಾಮಿ ಪರ ನಾಗಮಂಗಲ ಕ್ಷೇತ್ರದಲ್ಲಿ ಸಕ್ರಿಯವಾಗಿದ್ದ ಸುನೀಲ್, ನಾಗಮಂಗಲ ಕಾಂಗ್ರೆಸ್‌ನ ಯುವ ಮುಖಂಡರಾಗಿದ್ದು, ಸುನೀಲ್ ಸಕ್ರಿಯ ರಾಜಕಾರಣಕ್ಕೆ ಬರಬೇಕೆಂಬುದು ಚಲುವರಾಯಸ್ವಾಮಿ ಬೆಂಬಲಿಗರ ಅಪೇಕ್ಷೆಯಾಗಿದೆ.

ಟಿಕೆಟ್‌ಗಾಗಿ ಡಾ.ಕೃಷ್ಣ ಒತ್ತಾಯ: ಕಳೆದ ವಿಧಾನಸಭಾ ಚುನಾವಣೆ ಸಂದರ್ಭ ಮಂಡ್ಯ ಟಿಕೆಟ್ ಆಕಾಂಕ್ಷಿಯಾಗಿದ್ದ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಡಾ.ಕೃಷ್ಣಗೆ ಟಿಕೆಟ್ ಮಿಸ್ ಆಗಿತ್ತು. ಈ ನಿಟ್ಟಿನಲ್ಲಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ಸಿಕ್ಕರೆ ಸ್ಪರ್ಧೆಗೆ ಸಿದ್ಧತೆ ನಡೆಸಿದ್ದಾರೆ. ವಿಧಾನಸಭಾ ಚುನಾವಣೆ ವೇಳೆ ಟಿಕೆಟ್ ಸಿಗದಿದ್ದರಿಂದ ಪ್ರಚಾರ ಸಮಿತಿ ಅಧ್ಯಕ್ಷಗಾದಿ ನೀಡಿ ಮುಂದೆ ಪರಿಗಣಿಸುವುದಾಗಿ ನಾಯಕರು ಆಶ್ವಾಸನೆ ನೀಡಿದ್ದರಿಂದ ಸ್ಪರ್ಧೆಯಿಂದ ಹಿಂದೆ ಸರಿದಿದ್ದರು. ಈ ಬಾರಿ ಸಂಸತ್ ಚುನಾವಣೆಗೆ ಟಿಕೆಟ್ ಸಿಗುವ ವಿಶ್ವಾಸದಲ್ಲಿದ್ದಾರೆ. ಇದರ ಜೊತೆಗೆ ಇನ್ನೊಂದಷ್ಟು ಮುಖಂಡರು ಟಿಕೆಟ್‌ಗಾಗಿ ನಾಯಕರ ದುಂಬಾಲು ಬಿದ್ದಿದ್ದು, ಒಟ್ಟಾರೆ ಮಂಡ್ಯ ಲೋಕಸಭಾ ಕಾಂಗ್ರೆಸ್ ಟಿಕೆಟ್ ಯಾರ ಪಾಲಾಗಲಿದೆ ಎಂಬುದನ್ನು ಕಾದು ನೋಡಬೇಕು.

ಸುಮಲತಾ ಕಥೆ ಏನು?



ಜೆಡಿಎಸ್– ಬಿಜೆಪಿ ಮೈತ್ರಿಯಾಗಿರುವುದರಿಂದ ಮಂಡ್ಯ ಲೋಕಸಭಾ ಕ್ಷೇತ್ರ ಜೆಡಿಎಸ್ ಪಾಲಾಗುವ ಹಿನ್ನೆಲೆಯಲ್ಲಿ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಬೇಕೆಂಬ ಬಯಕೆ ಹೊಂದಿರುವ ಪಕ್ಷೇತರ ಸಂಸದೆ ಸುಮಲತಾ ಕಥೆ ಏನೆಂಬ ಪ್ರಶ್ನೆ ಮೂಡಿದೆ. ಕಳೆದ ವಿಧಾನಸಭಾ ಚುನಾವಣೆ ವೇಳೆ ಬಿಜೆಪಿಗೆ ಅಭ್ಯರ್ಥಿಗಳ ಪರ ಪ್ರಚಾರ ಮಾಡಿದ್ದರು. ಅಲ್ಲದೆ ತಾವು ಬಿಜೆಪಿ ಸೇರುವ ಬಗ್ಗೆ ಬಹಿರಂಗವಾಗಿಯೇ ಹೇಳಿದ್ದರು. ಒಂದು ವೇಳೆ ಮಂಡ್ಯ ಕ್ಷೇತ್ರ ಜೆಡಿಎಸ್ ಪಾಲಾದರೆ ಸುಮಲತಾಗೆ ಬೆಂಗಳೂರು ಉತ್ತರ ಕ್ಷೇತ್ರ ಅಥವಾ ಬೇರೆ ಕ್ಷೇತ್ರದಿಂದ ಬಿಜೆಪಿ ಟಿಕೆಟ್ ಕೊಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಅದೇ ವೇಳೆ ರಾಯಚೂರಿನಲ್ಲಿಂದು ಸಚಿವ ಬೋಸರಾಜು ಅವರು ಸುಮಲತಾ ಕಾಂಗ್ರೆಸ್‌ಗೆ ಬರುವ ಸಾಧ್ಯತೆ ಇದೆ ಎಂದು ತಿಳಿಸಿದ್ದು, ಅದು ನಿಜವೇ ಆದಲ್ಲಿ ಮಂಡ್ಯ ಕ್ಷೇತ್ರದ ಕಾಂಗ್ರೆಸ್ ಆಕಾಂಕ್ಷಿಗಳಲ್ಲಿ ಸುಮಲತಾ ಕೂಡ ಪ್ರಮುಖರಾಗಲಿದ್ದಾರೆ.

ಪುಟ್ಟರಾಜು ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿ?



ಕಳೆದ ವಿಧಾನಸಭಾ ಚುನಾವಣೆಯಲ್ಲಿ ಅನಿರೀಕ್ಷಿತವಾಗಿ ಸೋಲನ್ನಪ್ಪಿದ ಮೇಲುಕೋಟೆ ಕ್ಷೇತ್ರದ ಮಾಜಿ ಶಾಸಕ ಸಿ.ಎಸ್.ಪುಟ್ಟರಾಜು ಹೆಸರು ಈ ಬಾರಿಯ ಲೋಕಸಭಾ ಚುನಾವಣೆಗೆ ಪ್ರಬಲವಾಗಿ ಕೇಳಿ ಬರುತ್ತಿದೆ. ಅದರಲ್ಲೂ ಜೆಡಿಎಸ್– ಬಿಜೆಪಿ ಮೈತ್ರಿ ಬಹುತೇಕ ನಿಶ್ಚಿತವಾಗಿರುವುದರಿಂದ ಸಿ.ಎಸ್.ಪುಟ್ಟರಾಜು ಅವರನ್ನು ಜೆಡಿಎಸ್ ನಾಯಕರು ಅಭ್ಯರ್ಥಿ ಮಾಡಬಹುದೆಂಬ ಚರ್ಚೆಗಳು ಶುರುವಾಗಿವೆ. ಪುಟ್ಟರಾಜು ಕಾಂಗ್ರೆಸ್‌ಗೆ ಹೋಗಲಿದ್ದಾರೆ ಎಂಬ ಸುದ್ದಿಗಳು ಹರಿದಾಡಿದ್ದ ಬೆನ್ನಲ್ಲೇ ಜೆಡಿಎಸ್‌ನಲ್ಲೇ ಇರುವುದಾಗಿ ಅವರು ಸ್ಪಷ್ಟನೆ ನೀಡಿದ್ದರು. ಅದೇ ವೇಳೆ ಜೆಡಿಎಸ್– ಬಿಜೆಪಿ ಮೈತ್ರಿ ಮಾತುಕತೆ ಸಹ ನಡೆದಿರುವುದರಿಂದ ಮಂಡ್ಯ ಲೋಕಸಭಾ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಡುವ ಸಾಧ್ಯತೆ ಹೆಚ್ಚಿದೆ. ಹಾಗೊಂದು ವೇಳೆ ಮಂಡ್ಯ ಜೆಡಿಎಸ್ ಪಾಲಾದರೆ ಜಿಲ್ಲೆಯ ಜೆಡಿಎಸ್‌ನ ಮಾಜಿ ಶಾಸಕರಾದ ಸಿ.ಎಸ್.ಪುಟ್ಟರಾಜು, ಡಿ.ಸಿ.ತಮ್ಮಣ್ಣ, ರವೀಂದ್ರ ಶ್ರೀಕಂಠಯ್ಯ, ಸುರೇಶ್‌ಗೌಡ ಪೈಕಿ ಅನುಭವ ಹಾಗೂ ಹಿರಿತನದ ಆಧಾರದಲ್ಲಿ ಪುಟ್ಟರಾಜುಗೆ ಅವಕಾಶ ಸಿಗಬಹುದೆಂಬ ಲೆಕ್ಕಾಚಾರ ನಡೆಯುತ್ತಿದೆ. ಮೇಲುಕೋಟೆ ಕ್ಷೇತ್ರದಿಂದ 3 ಬಾರಿ ಶಾಸಕರಾಗಿ, ಒಮ್ಮೆ ಮಂತ್ರಿಯಾಗಿ, 2014ರಲ್ಲಿ ಮಂಡ್ಯ ಸಂಸದರಾಗಿ ಕಾರ್ಯ ನಿರ್ವಹಿಸಿರುವ ಪುಟ್ಟರಾಜು ಅವರಿಗೆ ಲೋಕಸಭಾ ಟಿಕೆಟ್ ಸಿಗುತ್ತಾ? ಸ್ಪರ್ಧೆಗೆ ಅವರು ಒಪ್ಪುತ್ತಾರಾ ಎಂಬುದನ್ನು ಕಾದು ನೋಡಬೇಕಿದೆ.


ಸಿ.ಎ. ಗಿರೀಶ್ ರವರ ಚಾಮರಾಜ ನಗರದ ಹೊಸ ಚಾರ್ಟರ್ಡ್ ಅಕೌಂಟೆಂಟ್ ಆಫೀಸನ್ನು ಸಂಸದ ವಿ. ಶ್ರೀನಿವಾಸ ಪ್ರಸಾದ್ ಉದ್ಘಾಟನೆ ಮಾಡಿದರು. ಚಿತ್ರದಲ್ಲಿ ಸಿ.ಎ. ಗಿರೀಶ್, ಕೃಷ್ಣಮೂರ್ತಿ, ಮಾಜಿ ಸಚಿವರಾದ ಎನ್.ಮಹೇಶ್, ಬಿ. ಹರ್ಷವರ್ಧನ್, ಕಿಂಗ್ಸ್ ಕೋರ್ಟ್ ವಿವೇಕ್, ಭರತ್ ರಾಮಸ್ವಾಮಿ, ರಮೇಶ್, ಪ್ರಸನ್ನ, ಆನಂದ್, ಮುರುರೇಶ್, ವೆಂಕಟರಾಜು, ಶಿವಕುಮಾರ್, ನಂದಕುಮಾರ್.ಪಿ ಮತ್ತಿತರರಿದ್ದಾರೆ.

ವಿದ್ಯಾರ್ಥಿಗಳು ಶಿಕ್ಷಣದ ಹಾದಿಯಲ್ಲಿ ಮುನ್ನಡೆಯಲು ಸಲಹೆ

ಮಂಡ್ಯ, ಸೆ.11– ಕಲಿಕೆ ಅವಧಿಯಲ್ಲಿ ಹೆಚ್ಚು ಅಂಕ ಪಡೆದೆ ಪಡೆಯುತ್ತೇನೆ ಎಂಬ ಆತ್ಮವಿಶ್ವಾಸ, ನಂಬಿಕೆ ಇಟ್ಟುಕೊಳ್ಳದೆ ಗೆಲ್ಲುವ ಮನೋಭಾವ ಇಟ್ಟುಕೊಂಡು ಶಿಕ್ಷಣದ ಹಾದಿಯಲ್ಲಿ ಮುನ್ನಡೆಯಬೇಕು ಎಂದು ಮನ್‌ಮುಲ್ ಅಧ್ಯಕ್ಷ ಬಿ. ಬೋರೇಗೌಡ ಸಲಹೆ ನೀಡಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘದ ಸಹಯೋಗದಲ್ಲಿ ಸೋಮವಾರ ನಡೆದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಅಭಿನಂದನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಪಿಯುಸಿಯಲ್ಲಿ ಕಡಿಮೆ ಅಂಕ ಪಡೆದ ನಿದರ್ಶನ ನೋಡಿದ್ದೇವೆ. ಇದಕ್ಕೆ ವಿದ್ಯಾರ್ಥಿಗಳ ಅತಿಯಾದ ಆತ್ಮವಿಶ್ವಾಸ ಕಾರಣ. ಹಾಗಾಗಿ ಗೆಲ್ಲುವ ಹಾದಿಯಲ್ಲಿ ಶಿಕ್ಷಣದ ಹೆಜ್ಜೆ ಇರಿಸಿ ಎಂದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಗೌರವಿಸಲಾಗುತ್ತಿದೆ. ಪ್ರತಿಯೊಬ್ಬ ಮಕ್ಕಳಲ್ಲೂ ಕೂಡ ಸುಪ್ತ ಪ್ರತಿಭೆ ಇರಲಿದೆ ಅದನ್ನು ಹೊರ ಹೊಮ್ಮಿಸುವ ಕೆಲಸ ಆಗಬೇಕು. ನಿರಂತರ ಪರಿಶ್ರಮದ ಮೂಲಕ ಸಾಧನೆಯ ಹೆಜ್ಜೆ ಇಡಬಹುದಾಗಿದೆ ಎಂದು ತಿಳಿಸಿದರು. ಮನ್‌ಮುಲ್ ನಿರ್ದೇಶಕ, ಶಾಸಕ ಹೆಚ್.ಟಿ.ಮಂಜು ಮಾತನಾಡಿ, ಗ್ರಾಮೀಣ ಮಕ್ಕಳಲ್ಲಿ ಹೆಚ್ಚು ಪ್ರತಿಭೆ ಇರುತ್ತದೆ. ಇಂತಹ ಮಕ್ಕಳನ್ನು ಪ್ರೋತ್ಸಾಹಿಸಿದರೆ ಕಲಿಕೆ ಸಾಮರ್ಥ್ಯ ಪೂರ್ತಿಯಾಗಲಿದೆ. ಶಿಕ್ಷಣದಲ್ಲಿ ಗ್ರಾಮೀಣ ಮಕ್ಕಳು ಮುನ್ನಡೆಯಬೇಕು. ಶಿಕ್ಷಣದಲ್ಲಿ ಗ್ರಾಮೀಣ ಮಕ್ಕಳು ಮುನ್ನಡೆಯಬೇಕು. ಹಾಗಾದಾಗ ಮಾತ್ರ ರೈತ ಕುಟುಂಬಗಳು ಸದೃಢ ಜೀವನ ನಡೆಸಬಹುದಾಗಿದೆ. ಮಂಡ್ಯ ಹಾಲು ಒಕ್ಕೂಟ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದರು.



ಜನರ ಆಶೀರ್ವಾದದಿಂದ ರಾಜಕೀಯದಲ್ಲಿ ನಾನು ಮೇಲೆ ಬಂದೆ



ಒಂದನೇ ಪುಟದಿಂದ

ಆಗ ಕಲಿತ ಅಕ್ಷರಕ್ಕೂ ಬೆಲೆ ಸಿಕ್ಕಿದಂತಾಗುತ್ತದೆ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ಸಮಾನತೆ ಸಾರುವ ಸಂವಿಧಾನದ ಪೀಠಿಕೆಯನ್ನು ಪ್ರತಿಯೊಬ್ಬರು ಅರಿಯುವುದನ್ನು ಕಡ್ಡಾಯಗೊಳಿಸಲಾಗುತ್ತಿದೆ. ಸೆ.13ರಂದು ಇದಕ್ಕೆ ಚಾಲನೆ ನೀಡಲಾಗುತ್ತಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಭಾರತದಲ್ಲಿ ಅನೇಕ ಜಾತಿ, ಧರ್ಮಗಳಿವೆ. ಆದರೆ ಭಾರತ ವೈವಿಧ್ಯತೆಯಲ್ಲಿ ಏಕತೆ ಹೊಂದಿರುವ ರಾಷ್ಟ್ರ. ಪ್ರತಿಯೊಬ್ಬರು ಆಕಸ್ಮಿಕವಾಗಿ ಯಾವುದೋ ಜಾತಿ, ಧರ್ಮದಲ್ಲಿ ಹುಟ್ಟುತ್ತಾರೆ. ಹುಟ್ಟುತ್ತಾ ವಿಶ್ವಮಾನವರಾಗಿಯೇ ಇರುತ್ತೇವೆ. ಆದರೆ ಬೆಳೆಯುತ್ತಾ ಅಲ್ಪ ಮಾನವರಾಗುತ್ತೇವೆ. ಆದರೆ ಪ್ರತಿಯೊಬ್ಬರು ವಿಶ್ವ ಮಾನವರಾಗಬೇಕು ಎಂದು ರಾಷ್ಟ್ರಕವಿ ಕುವೆಂಪು ಸಾರಿ ಹೇಳಿದರು ಎಂದರು. ಮನುಷ್ಯ ಮನುಷ್ಯನ ನಡುವೆ ಪ್ರೀತಿ, ವಿಶ್ವಾಸ ಇರಬೇಕು. ಆದರೆ ಕೆಲವರು ಜಾತಿಯ ಅಡ್ಡಗೋಡೆ ಹಾಕಿ ಮನುಷ್ಯರ ನಡುವಿನ ಪ್ರೀತಿಗೆ ಹುಳಿ ಹಿಂಡುತ್ತಾರೆ. ಈ ಹಿನ್ನೆಲೆಯಲ್ಲಿ ಪ್ರತಿಯೊಬ್ಬರು ಜಾಗೃತರಾಗಬೇಕು. ಇಂತಹ ಒಡೆದು ಆಳ್ವಿಕೆ ಮಾಡುವವರ ಸ್ವಾರ್ಥಕ್ಕೆ ಬಲಿಯಾಗಬಾರದು ಎಂದು ಸಿದ್ದರಾಮಯ್ಯ ಸಲಹೆ ನೀಡಿದರು.

ಧರ್ಮಕ್ಕಾಗಿ ಮನುಷ್ಯನಿಲ್ಲ ಎಂಬ ವಾಸ್ತವತೆಯನ್ನು ಅರ್ಥ ಮಾಡಿಕೊಳ್ಳಬೇಕು. ದಯೆಯೇ ಧರ್ಮದ ಮೂಲ ಎಂದು ಅರಿತುಕೊಳ್ಳಬೇಕು. ಕರುಣೆ ಹಾಗೂ ದಯೆ ಇರುವುದೇ ಧರ್ಮದ ಸಾರಾಂಶ ಎಂಬ ಸತ್ಯ ಅರಿಯಬೇಕು. ನನ್ನ ಪ್ರಕಾರ ದಯೆ ಹಾಗೂ ಕರುಣೆ ಇಲ್ಲದಿರುವುದು ಧರ್ಮವೇ ಅಲ್ಲ ಎಂದು ವ್ಯಾಖ್ಯಾನಿಸಿದರು.

ನಾನು ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲೇ ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ ಆರಂಭವಾಯಿತು. ಕೆಂಪೇಗೌಡರ ಪ್ರಾಧಿಕಾರ ಕೂಡ ನಾನೇ ರಚನೆ ಮಾಡಿದೆ. ಬೆಂಗಳೂರಿನ ದೇವನಹಳ್ಳಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ನಾಡಪ್ರಭು ಕೆಂಪೇಗೌಡರ ಹೆಸರನ್ನು ನಾಮಕರಣ ಮಾಡಲು ಹೆಸರನ್ನು ಕೂಡ ನಾನೇ ಸೂಚಿಸಿದ್ದೆ. ಈ ಮೂಲಕ ಬೆಂಗಳೂರು ನಿರ್ಮಾತೃ ಕೆಂಪೇಗೌಡರ ಹೆಸರು ಚಿರಸ್ಥಾಯಿಯಾಗಿ ಉಳಿಯಲು ಪ್ರಯತ್ನ ಮಾಡಿದ್ದೇನೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಸಮಾನತೆ ಸಮಾಜ ನಿರ್ಮಾಣಕ್ಕೆ ಶ್ರೀ ಮಠ ಶ್ರಮಿಸುತ್ತಿದೆ: ಮುಖ್ಯಮಂತ್ರಿ ಸಿದ್ದರಾಮಯ್ಯ

ಆದಿಚುಂಚನಗಿರಿ ಮಹಾ ಸಂಸ್ಥಾನಕ್ಕೆ 1,800 ವರ್ಷಗಳ ಇತಿಹಾಸವಿದೆ. ನಾಗಮಂಗಲದ ಶ್ರೀ ಕ್ಷೇತ್ರ ಆದಿಚುಂಚನಗಿರಿ ಕ್ಷೇತ್ರ ಈಶ್ವರನ ತಪೋ ಭೂಮಿ. ಅನೇಕ ಸಾಧು ಸಂತರನ್ನು ಕಂಡಿರುವ ಆದಿಚುಂಚನಗಿರಿ ಕ್ಷೇತ್ರ ಇಂದು ಹೆಮ್ಮರವಾಗಿ ಬೆಳೆದು ನಿಂತಿದೆ. ಶಿಕ್ಷಣ, ಆರೋಗ್ಯ, ಸಾಮಾಜಿಕ ಸೇವಾ ಕ್ಷೇತ್ರದಲ್ಲಿ ಆದಿಚುಂಚನಗಿರಿ ಮಠ ಇಷ್ಟು ಬೃಹತ್ತಾಗಿ ಬೆಳೆಯಲು ದಿವಂಗತ ಶ್ರೀ ಡಾ.ಬಾಲಗಂಗಾಧರನಾಥ ಸ್ವಾಮೀಜಿ ಅವರ ಶ್ರಮ ಬಹಳ ಪ್ರಮುಖವಾಗಿತ್ತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದರು.

ಆದಿಚುಂಚನಗಿರಿ ಮಠ ನಾಥ ಪಂಥದಿಂದ ಬೆಳೆದು ಬಂದಿದೆ. ನಾಥ ಪಂಥ ಅಂದರೆ ಜಾತ್ಯಾತೀತ ಪಂಥ. ಸಮಾಜದಲ್ಲಿರುವ ಸಾಮಾಜಿಕ, ಆರ್ಥಿಕ ಅಸಮಾನತೆ ಹೋಗಲಾಡಿಸಲು ನಾಥ ಪಂಥ ಅಸ್ತಿತ್ವಕ್ಕೆ ಬಂದಿತು. ಇದರಂತೆ ಕೆಳ ಹಾಗೂ ಮೇಲ್ವರ್ಗದ ಭೇದ ಭಾವ ಇಲ್ಲದೆ ಮಾನವ ಸಮಾಜ ನಿರ್ಮಿಸಲು ನಾಥ ಪಂಥದ ಕೊಡುಗೆ ಸ್ಮರಣೀಯ ಎಂದು ಸಿದ್ದರಾಮಯ್ಯ ಪ್ರಶಂಸಿಸಿದರು. ಸಮಾನತೆಯ ಸಮಾಜ ನಿರ್ಮಾಣ ಮಾಡಲು ಆದಿಚುಂಚನಗಿರಿ ಮಠ ಶಕ್ತಿ ತುಂಬುತ್ತಿದೆ. ಇಂದು ಮಠದಲ್ಲಿ 500ಕ್ಕೂ ಹೆಚ್ಚು ಸಂಸ್ಥೆಗಳಿದ್ದು, ಒಂದೂವರೆ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ ಎಂದು ಸಿದ್ದರಾಮಯ್ಯ ಹೇಳಿದರು.

ಸ್ವಾತಂತ್ರ್ಯ ನಂತರ ಶಿಕ್ಷಣ ಮೂಲಭೂತ ಹಕ್ಕಾಗಿದೆ. ಶಿಕ್ಷಣ ಪಡೆಯುವುದು ಪ್ರತಿಯೊಬ್ಬರ ಮೂಲಭೂತ ಹಕ್ಕಾಗಿದೆ. ಶೂದ್ರರಂತೆ ಮಹಿಳೆಯರು ಶಿಕ್ಷಣದಿಂದ ವಂಚಿತರಾಗಿದ್ದರು. ಈ ಹಿನ್ನೆಲೆಯಲ್ಲಿ ಶಿಕ್ಷಣದ ಹಕ್ಕನ್ನು ಚಲಾಯಿಸಿ ಮಹಿಳೆಯರು ಈಗ ಅಕ್ಷರ ಜ್ಞಾನಿಗಳಾಗಬೇಕು ಎಂದು ಸಿದ್ದರಾಮಯ್ಯ ಕರೆ ನೀಡಿದರು.

ಆದಿಚುಂಚನಗರಿ ಮಹಾ ಸಂಸ್ಥಾನ ಮಠ ಹೊರ ತಂದಿರುವ ಗೋರಕ್ಷನಾಥರ ಸಿದ್ಧ ಸಿದ್ಧಾಂತ ಪದ್ಧತಿ, ಗೋರಕ್ಷನಾಥರ ತತ್ವ ದರ್ಶನ, ಸಾಹುಕಾರ್ ಚೆನ್ನಯ್ಯ, ಕೆದಂಬಾಡಿ ರಾಮೇಗೌಡರ ಕುರಿತಾದ ಪುಸ್ತಕಗಳನ್ನು ಇದೇ ವೇಳೆ ಸಿದ್ದರಾಮಯ್ಯ ಬಿಡುಗಡೆ ಮಾಡಿದರು.

ಮೈಸೂರಿನ ಶ್ರೀ ರಾಮಕೃಷ್ಣ ಆಶ್ರಮದ ಶ್ರೀ ಮುಕ್ತಿದಾನಂದ ಸ್ವಾಮೀಜಿ, ವಿಜಯನಗರದ ಶ್ರೀ ಯೋಗಾನರಸಿಂಹ ಸ್ವಾಮಿ ದೇವಸ್ಥಾನದ ಸಂಸ್ಥಾಪಕ ಪ್ರೊ.ಭಾಷ್ಯಂ ಸ್ವಾಮೀಜಿ, ಕೃಷಿ ಸಚಿವ ಚಲುವರಾಯಸ್ವಾಮಿ, ಶಾಸಕರಾದ ತನ್ವೀರ್ ಸೇಠ್, ರಮೇಶ್ ಬಂಡಿಸಿದ್ದೇಗೌಡ, ಕೆ.ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ್, ಸಿ.ಎನ್.ಮಂಜೇಗೌಡ, ಡಾ.ತಿಮ್ಮಯ್ಯ, ಮರಿತಿಬ್ಬೇಗೌಡ, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಮೇಯರ್ ಶಿವಕುಮಾರ್, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಮುಡಾ ಮಾಜಿ ಅಧ್ಯಕ್ಷ ಸಿ.ಬಸವೇಗೌಡ ಸೇರಿದಂತೆ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸಿದ್ದರಾಮಯ್ಯ ಭಾಷಣ ಮಾಡುವಾಗ ಹುಷಾರ್...!

ಮೈಸೂರು, ಸೆ.11(ಬಿಎಲ್‌ಯು)–ನನ್ನ ಮಾತು ಕೇಳುತ್ತಿದ್ದಾರೊ ಇಲ್ಲವೋ ಎಂದು ಭಾಷಣ ಮಾಡುವಾಗ ಸಾಮಾನ್ಯವಾಗಿ ನಾನು ಆ ಕಡೆ, ಈ ಕಡೆ ನೋಡುತ್ತಾ ಸೂಕ್ಷ್ಮವಾಗಿ ಎಲ್ಲವನ್ನು ಗಮನಿಸುತ್ತೇನೆ ಎಂದು ಸಿದ್ದರಾಮಯ್ಯ ಹೇಳಿದರು.

ನಾನು ಮಾಡಿದ ಭಾಷಣ ವೇದಿಕೆಯಲ್ಲಿ ಆಸೀನರಾಗಿರುವವರು ಹಾಗೂ ಸಭಿಕರ ಮನಸಿನ ಆಳಕ್ಕೆ ಹೋಗಬೇಕು. ಈ ಹಿನ್ನೆಲೆಯಲ್ಲಿ ನಾನು ಆ ಕಡೆ ಈ ಕಡೆ ನೋಡಿಕೊಂಡು ಭಾಷಣ ಮಾಡುತ್ತೇನೆ ಎಂದರು. ನಾನು ಆಡಿದ ಮಾತುಗಳು ಎಲ್ಲರನ್ನು ತಲುಪಬೇಕು. ಇಲ್ಲದಿದ್ದರೆ ವ್ಯರ್ಥವಾಗುತ್ತದೆ ಎಂದರು. ಇದರ ಅರಿವಿರುವವರು ಸಾಮಾನ್ಯವಾಗಿ ಸಿದ್ದರಾಮಯ್ಯ ಮಾತನಾಡುವಾಗ ವೇದಿಕೆಯಲ್ಲಿರುವವರು ಮಾತನಾಡುವುದಿಲ್ಲ. ಜೊತೆಗೆ ಸಭಿಕರತ್ತಲೂ ಕಣ್ಣಾಯಿಸುವುದರಿಂದ ಜನರ ಚಿತ್ತವೂ ಬೇರೆ ಕಡೆ ಹೋಗದು.


ಒಂದು ವೇಳೆ ತಾವು ಮಾತನಾಡುವಾಗ ಯಾರಾದರೂ ಸದ್ದು ಮಾಡಿದರೆ, ಮಧ್ಯೆ ಮಾತನಾಡಿದರೆ ಗದರಿಸಿ ಕೂರಿಸುವುದು ಸರ್ವೆ ಸಾಮಾನ್ಯ.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪರೋಕ್ಷ ವಾಗ್ದಾಳಿ

ಬಿ.ಕೆ.ಹರಿಪ್ರಸಾದ್ ವಿರುದ್ಧ ಹೋರಾಟದ ಎಚ್ಚರಿಕೆ

ಮೈಸೂರು,ಸೆ.11(ಎಂಟಿವೈ)– ಸಚಿವ ಸ್ಥಾನ ಗಿಟ್ಟಿಸಿಕೊಳ್ಳುವ ಹಂಬಲದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಹೇಳಿಕೆ ನೀಡುವುದನ್ನು ಎಂಎಲ್ಸಿ ಬಿ.ಕೆ.ಹರಿಪ್ರಸಾದ್ ನಿಲ್ಲಿಸದಿದ್ದರೆ, ಪಕ್ಷದಿಂದ ಉಚ್ಚಾಟನೆ ಮಾಡುವಂತೆ ಹೋರಾಟ ಆರಂಭಿಸಬೇಕಾಗುತ್ತದೆ ಎಂದು ಶಫರ್ಡ್ ಇಂಡಿಯಾ ಇಂಟರ್‌ನ್ಯಾಷನಲ್ ಸಂಸ್ಥೆಯ ಜಿಲ್ಲಾಧ್ಯಕ್ಷ ದೊಳ್ಳೇಗೌಡ ಎಚ್ಚರಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಮುಖಂಡ ಬಿ.ಕೆ. ಹರಿಪ್ರಸಾದ್ ಕಳೆದ ಕೆಲವು ದಿನಗಳಿಂದ ಜಾತ್ಯಾತೀತ ನಾಯಕರಾದ, ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ವಿರುದ್ಧ ಹೇಳಿಕೆ ನೀಡುತ್ತಿದ್ದಾರೆ. ಸಚಿವ ಸ್ಥಾನಕ್ಕಾಗಿ ಹಿಂದುಳಿದ ವರ್ಗಗಳ ಹಾಗೂ ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ಅವರ ವಿರುದ್ಧ ಹೇಳಿಕೆ ನೀಡುವ ಮೂಲಕ ನಾನೊಬ್ಬ ನಾಯಕ ಎಂದು ಬಿಂಬಿಸಿಕೊಳ್ಳಲು ಮುಂದಾಗಿದ್ದಾರೆ. ವಿನಾಕಾರಣ ಟೀಕೆ ಮಾಡುವುದನ್ನು ನಿಲ್ಲಿಸದಿದ್ದರೆ, ರಾಜ್ಯದಾದ್ಯಂತ ಬಿ.ಕೆ.ಹರಿಪ್ರಸಾದ್ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದರು. ಸಿದ್ದರಾಮಯ್ಯ ಅವರು ತನ್ನ ರಾಜಕೀಯ ಜೀವನದಲ್ಲಿ ಜಾತಿವಾದ ಬೆಂಬಲಿಸಿಲ್ಲ. ಅವರ ವಿರುದ್ಧ ಬಿ.ಕೆ.ಹರಿಪ್ರಸಾದ್ ಅವರು ಜಾತಿ ವಿಚಾರ ಮುಂದಿಟ್ಟುಕೊಂಡು ಜನರನ್ನು ಎತ್ತಿಕಟ್ಟಲು ಪ್ರಯತ್ನಿಸುತ್ತಿರುವುದು ವಿಷಾದನೀಯ. ಈ ಇಬ್ಬರ ರಾಜಕೀಯ ಶೈಲಿಯಲ್ಲಿ ಭಿನ್ನತೆಯಿದೆ. ಇದುವರೆಗೆ ಬಿ.ಕೆ.ಹರಿಪ್ರಸಾದ್ ಯಾವುದೇ ಚುನಾವಣೆಯಲ್ಲಿ ಗೆದ್ದಿಲ್ಲ. ಇಂತಹ ವ್ಯಕ್ತಿ ಎರಡು ಬಾರಿ ಸಿಎಂ, ಎರಡು ಬಾರಿ ವಿರೋಧ ಪಕ್ಷದ ನಾಯಕ, ಎರಡು ಬಾರಿ ಉಪಮುಖ್ಯಮಂತ್ರಿಯಾಗಿ ಅಧಿಕಾರ ನಡೆಸಿರುವ ವ್ಯಕ್ತಿಯ ಬಗ್ಗೆ ಮಾತನಾಡಬಾರದು. ಟೀಕೆ ಮಾಡಿದರೆ ಮಾತ್ರ ಕೇಂದ್ರ ನಾಯಕರ ಮೂಲಕ ಮಂತ್ರಿ ಪದವಿ ಪಡೆಯಬಹುದು ಎಂಬ ಭ್ರಮೆಯಲ್ಲಿ ಮುಖ್ಯಮಂತ್ರಿಗಳ ವರ್ಚಸ್ಸಿನ ಬಗ್ಗೆ ಮಾತನಾಡಬಾರದು ಎಂದು ತಾಕೀತು ಮಾಡಿದರು. ಹೇಳಿಕೆ ನೀಡುವಾಗ ಏನು ಮಾತನಾಡುತ್ತಿದ್ದೇವೆ ಎಂಬ ಅರಿವು ಇರಬೇಕು. ರಾಷ್ಟ್ರಮಟ್ಟದ ನಾಯಕರೂ ಈ ರೀತಿ ಮಾತನಾಡುವವರಿಗೆ ಬೆಂಬಲ ನೀಡಬಾರದು. ಬಿಲ್ಲವ ಸಮುದಾಯದ ಚುನಾಯಿತ ಪ್ರತಿನಿಧಿಗಳು ಕಡಿಮೆಯಾಗಿದ್ದಾರೆ ಎಂದು ಸಿದ್ದರಾಮಯ್ಯ ಅವರ ಮೇಲೆ ಗೂಬೆ ಕೂರಿಸುವುದು ಸರಿಯಲ್ಲ. ಮಂಗಳೂರು ಭಾಗದಲ್ಲಿ ಯಾಕೆ ಈ ರೀತಿಯ ಪರಿಸ್ಥಿತಿ ಇದೆ ಎಂದು ಪರಾಮರ್ಶೆ ಮಾಡಲಿ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಪವನ್ ಸಿದ್ದರಾಮು, ಯಶವಂತ್ ರಾಮಪ್ಪ ಇದ್ದರು.



ಉಜ್ಜಯನಿ ಮಹಾಕಾಳೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಿ.ಎಸ್.ಯಡಿಯೂರಪ್ಪ



ಉಜ್ಜಯನಿ: ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿಯ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರು ಮಧ್ಯಪ್ರದೇಶದ ಉಜ್ಜಯನಿ ಮಹಾಕಾಳೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಪುತ್ರಿ ಬಿವೈ ಅರುಣಾದೇವಿ ಮತ್ತಿತರ ಕುಟುಂಬ ಸದಸ್ಯರೊಂದಿಗೆ ಇಂದು ಬೆಳಗ್ಗೆ ದೇವಾಲಯಕ್ಕೆ ಆಗಮಿಸಿದ ಬಿಎಸ್‌ವೈ, ಜ್ಯೋತಿರ್ಲಿಂಗಕ್ಕೆ ವಿಶೇಷ ಪೂಜೆ, ಪುನಸ್ಕಾರ ನೆರವೇರಿಸಿದರು. ಶಾಸಕ ಎಸ್.ಆರ್. ವಿಶ್ವನಾಥ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಯಡಿಯೂರಪ್ಪ ಜಿ–20 ಶೃಂಗಸಭೆಯನ್ನು ಯಶಸ್ವಿಯಾಗಿ ಆಯೋಜಿಸಿದ್ದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಇಡೀ ಜಗತ್ತು ಮತ್ತು ವಿಶ್ವಾದ್ಯಂತ ಆಗಮಿಸಿದ ನಾಯಕರು ಶ್ಲಾಘಿಸುತ್ತಿದ್ದಾರೆ. ಇಡೀ ದೇಶದ ಪರವಾಗಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು

ಕಂಪನಿಗಳು ನ್ಯಾಯೋಚಿತತೆ, ಪಾರದರ್ಶಕತೆ ಮೇಲೆ ನಿರ್ಮಾಣಗೊಳ್ಳಬೇಕು

ಮೈಸೂರಲ್ಲಿ ಸೆಂಟರ್ ಆಫ್ ಎಕ್ಸ್‌ಲನ್ಸ್ ಫಾರ್ ಎಂಟರ್‌ಪ್ರೈನರ್ಸ್ ಅಂಡ್ ಫ್ಯಾಮಿಲಿ ಬ್ಯುಸಿನೆಸ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಇನ್‌ಫೋಸಿಸ್ ಸಂಸ್ಥಾಪಕ ಎನ್.ಆರ್. ನಾರಾಯಣ ಮೂರ್ತಿ ಅಭಿಮತ

ಮೈಸೂರು,ಸೆ.11(ಆರ್‌ಕೆ)–ಯಾವುದೇ ಬ್ಯುಸಿನೆಸ್ ಸಕ್ಸಸ್ ಆಗಬೇಕಾದಲ್ಲಿ ಕಂಪನಿಗಳು ನ್ಯಾಯಸಮ್ಮತ, ಪಾರದರ್ಶಕ ಹಾಗೂ ಹೊಣೆಗಾರಿಕೆಯನ್ನು ಮೈಗೂಡಿಸಿಕೊಳ್ಳಬೇಕೆಂದು ಇನ್‌ಫೋಸಿಸ್ ಸಂಸ್ಥಾಪಕ ಹಾಗೂ ಅಧ್ಯಕ್ಷ ಗೌರವಕ್ಕೆ ಪಾತ್ರರಾದ ಎನ್.ಆರ್. ನಾರಾಯಣ ಮೂರ್ತಿ (NRN) ಅವರು ಇಂದಿಲ್ಲಿ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ತಾಲೂಕು ಇಲವಾಲ ಸಮೀಪ ಕೂರ್ಗಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಮೈರಾ ಸ್ಕೂಲ್ ಆಫ್ ಬ್ಯುಸಿನೆಸ್‌ನಲ್ಲಿ ಭೇರುಂಡ ಫೌಂಡೇಷನ್ ವತಿಯಿಂದ ಸ್ಥಾಪಿಸಿರುವ ಸೆಂಟರ್ ಆಫ್ ಎಕ್ಸ್‌ಲನ್ಸ್ ಫಾರ್ ಎಂಟರ್‌ಪ್ರೈನರ್ಸ್ ಅಂಡ್ ಫ್ಯಾಮಿಲಿ ಬ್ಯುಸಿನೆಸ್ ಉದ್ಘಾಟನಾ ಕಾರ್ಯಕ್ರಮದ ನಂತರ ಯುವ ಉದ್ಯಮಿಗಳೊಂದಿಗೆ ಸಂವಾದ ನಡೆಸಿದರು.

ಯಾವುದೇ ಬ್ಯುಸಿನೆಸ್, ಫ್ಯಾಮಿಲಿ ಬ್ಯುಸಿನೆಸ್ ಅಥವಾ ಕಂಪನಿಯಾಗಲೀ ಯಶಸ್ವಿಯಾಗಬೇಕಾದರೆ ಆಡಳಿತ ನಿರ್ವಹಣೆಯಲ್ಲಿ ನ್ಯಾಯಸಮ್ಮತ (Fairness), ಪಾರದರ್ಶಕತೆ (Transparency) ಹಾಗೂ ಬದ್ಧತೆ (Accountability) ಮೌಲ್ಯಗಳನ್ನು ಅಳವಡಿಸಿಕೊಳ್ಳುವುದು ಅತ್ಯವಶ್ಯ ಎಂದ ಅವರು, ಆ ಮೂಲಕ ಸಮಾಜದ ವಿಶ್ವಾಸ ಗಳಿಸಬೇಕು ಎಂದು ಸಲಹೆ ನೀಡಿದರು.

ನಾನು ಇನ್‌ಫೋಸಿಸ್ ಸ್ಥಾಪಿಸಿದ್ದು ಲಾಭ ಮಾಡಬೇಕೆಂಬ ಕನಸಿನಿಂದಲ್ಲ. ಬದಲಾಗಿ ಸಾಮಾಜಿಕ ಬದಲಾವಣೆ ಮೂಲಕ ಸರ್ವಾಂಗೀಣ ಅಭಿವೃದ್ಧಿಯಾಗಬೇಕೆಂಬ ಹಂಬಲದಿಂದ. ಮೌಲ್ಯವರ್ಧಿತ ಗುಣ ನಡವಳಿಕೆಗಳ ಮೂಲಕ ಕಂಪನಿಯಲ್ಲಿ ಕೆಲಸ ಮಾಡುವ ತಂಡದಲ್ಲಿ ವಿಶ್ವಾಸ ಮೂಡಿಸಿದಾಗ ಉತ್ಕೃಷ್ಟ ಫಲಿತಾಂಶ ಪಡೆಯಬಹುದು ಎಂದು ನಾರಾಯಣ ಮೂರ್ತಿ ಇದೇ ವೇಳೆ ನುಡಿದರು.

ಉದ್ಯಮಶೀಲತೆಯು ಜನರಲ್ಲಿ ವಿಶ್ವಾಸಾರ್ಹತೆ, ನಂಬಿಕೆ ಮೂಡಿಸುತ್ತದೆ. ತ್ಯಾಗ, ಪರಿಶ್ರಮದಿಂದ ಮಾತ್ರ ಯಶಸ್ಸು ಲಭಿಸಲು ಸಾಧ್ಯ. ಆಗ ಮಾತ್ರ ಉದ್ಯೋಗ ಸೃಷ್ಟಿಯಾಗಿ ಭವಿಷ್ಯದಲ್ಲಿ ಸಂಪತ್ತು ಲಭಿಸುತ್ತದೆ ಎಂದ ಅವರು, ಉದ್ಯಮಿಗಳಿಗೆ ದೂರದೃಷ್ಟಿ, ನಾಯಕ ಗುಣ (Leadership Qualities) ಗಳಿದ್ದರೆ ತಮ್ಮ ವೃತ್ತಿಯಲ್ಲಿ ಯಶಸ್ವಿಯಾಗಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ನಾರಾಯಣಮೂರ್ತಿಯವರೊಂದಿಗೆ ನಡೆದ ಸಂವಾದದಲ್ಲಿ ಇನ್‌ಸೈಡ್ ಔಟ್ ಸಂಸ್ಥಾಪಕ ಶ್ರೀಂಕಾಲ ಕುಶ್ವಾಹ, ದೇಸಿಯಡ್ಡ ಸಂಸ್ಥಾಪಕ ಆದರ್ಶ ರಮೇಶ್, ಓವೊಬೆಲ್ ನಿರ್ದೇಶಕಿ ಎಂ.ಎಸ್.ಸಂಜನಾ ಹಾಗೂ ಶ್ರೀ ಶಂಕರ್ ನ್ಯಾಷನಲ್ ಸೆಂಟರ್ ಫಾರ್ ಕ್ಯಾನ್ಸರ್ ಪ್ರಿವೆನ್ಷನ್ ಅಂಡ್ ರೀಸರ್ಚ್ ನಿರ್ದೇಶಕ ಅನಂತ ಶ್ರೀನಾಥ್ ಅವರು ಪಾಲ್ಗೊಂಡು ಉದ್ದಿಮೆ ಕುರಿತು ಹಲವು ಮಹತ್ವದ ಮಾಹಿತಿ ಪಡೆದುಕೊಂಡರು.

ನೆಕ್ಸ್‌ವೆಲ್ತ್ ಎಂಟರ್‌ಪ್ರೈನರ್ಸ್ ಸಂಸ್ಥಾಪಕ ಡಾ.ಶ್ರೀಧರ್ ಮಿಟ್ಟ ಮಾತನಾಡಿ, ಬ್ಯುಸಿನೆಸ್ ಬೆಳವಣಿಗೆಯ ಬದಲಾವಣೆ ಹಾಗೂ ಅಡಾಪ್ಟಬಿಲಿಟಿ ಪ್ರಾಮುಖ್ಯತೆಯನ್ನು ತಮ್ಮ ಕಂಪನಿಯ ಅನುಭವಗಳ ಮೂಲಕ ಹಂಚಿಕೊಂಡರು. ತಂತ್ರಜ್ಞಾನ, ಆರ್ಥಿಕತೆ, ಹವಾಮಾನ, ನೈಸರ್ಗಿಕ ವಿಪತ್ತುಗಳು ಬ್ಯುಸಿನೆಸ್ ಮೇಲೆ ಹೇಗೆ ಪರಿಣಾಮ ಬೀರಲಿವೆ ಎಂಬುದನ್ನು ವಿವರಿಸಿದರು.

ಮೈಸೂರು ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಮೈಸೂರಿನ ಭೌಗೋಳಿಕ ಇಂಡಿಕೇಷನ್‌ಗಳಾಗಿರುವ ಮೈಸೂರು ಮಲ್ಲಿಗೆ, ವೀಳ್ಯದೆಲೆ, ಮೈಸೂರು ಪಾಕ್, ಮೈಸೂರು ಪೇಟ, ನಂಜನಗೂಡು ರಸಬಾಳೆಯಂತಹ ಹಲವು ಉತ್ಪನ್ನಗಳನ್ನು ಮೈಸೂರು ಬ್ರಾಂಡ್‌ಗಳನ್ನೇ ಬಳಸಿಕೊಂಡು ಇಲ್ಲಿನ ಆರ್ಥಿಕತೆಯನ್ನು ವೃದ್ಧಿಸುವುದು ಸೆಂಟರ್ ಆಫ್ ಎಕ್ಸಲನ್ಸ್ ಫಾರ್ ಎಂಟರ್‌ಪ್ರೈನರ್‌ಶಿಪ್ ಅಂಡ್ ಫ್ಯಾಮಿಲಿ ಬ್ಯುಸಿನೆಸ್‌ನ ಮುಖ್ಯ ಉದ್ದೇಶವಾಗಿದ್ದು, ಗ್ರಾಮಾಂತರ ಹಾಗೂ ಬುಡಕಟ್ಟು ಸಮುದಾಯದವರ ಉತ್ಪನ್ನಗಳಿಗೂ ಮಾರುಕಟ್ಟೆ ಕಲ್ಪಿಸಿ ಅವರ ಆದಾಯ ವೃದ್ಧಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಮೈಸೂರನ್ನಾಳಿದ ನಮ್ಮ ಪೂರ್ವಿಕರು ಕೈಗಾರಿಕೆಗಳಿಗೆ ನೀಡಿದ ಆದ್ಯತೆಯಿಂದಾಗಿ ಇಂದಿಗೂ ಇಲ್ಲಿ ಕೈಗಾರಿಕೆ ಸ್ಥಾಪಿಸಲು ಪೂರಕ ವಾತಾವರಣ, ಸೌಲಭ್ಯಗಳಿರುವುದರಿಂದ ಪ್ರವಾಸೋದ್ಯಮ, ಆತಿಥ್ಯ ಕ್ಷೇತ್ರಗಳನ್ನು ಬಳಸಿಕೊಂಡು ಸಮಾಜಮುಖಿಯಾಗಿ ಸೇವೆ ಸಲ್ಲಿಸಬೇಕಾಗಿದೆ ಎಂದು ಯದುವೀರ್ ನುಡಿದರು. ಭೇರುಂಡ ಫೌಂಡೇಷನ್ ನಿರ್ದೇಶಕಿ ತ್ರಿಷಿಕಾ ಕುಮಾರಿ ಒಡೆಯರ್, ಮೈಲಾರ ಸ್ಕೂಲ್ ಆಫ್ ಬ್ಯುಸಿನೆಸ್ ಮ್ಯಾನೇಜಿಂಗ್ ಟ್ರಸ್ಟಿ ಕಾಂತರಾಜ ಅರಸ್, ಬೋರ್ಡ್ ಆಫ್ ಗವರ್ನರ್ಸ್ ಅಧ್ಯಕ್ಷ ಡಾ. ರಾಮಶಾಸ್ತ್ರಿ ಅಂಬರೀಶ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ನಂತರ ನಡೆದ ಚರ್ಚೆಯಲ್ಲಿ ಐಡಿಯಾ ಸ್ಪ್ರಿಂಗ್ ಕ್ಯಾಪಿಟಲ್‌ನ ಮ್ಯಾನೇಜಿಂಗ್ ಪಾರ್ಟನರ್ ನಾರಾಸಂದು ದೊರೆಸ್ವಾಮಿ, ಎ.ಎ. ಪ್ರೊಬಿಕ್ಸ್‌ನ ಶ್ರೀಲಕ್ಷ್ಮಿ ದೇಶೀರಾಜು, ಎಕ್ಸಲ್ ಸಾಫ್ಟ್ ಟೆಕ್ನಾಲಜೀಸ್‌ನ ಸುಧನ್ವ ಧನಂಜಯ, ಎನ್.ರಂಗರಾವ್ ಅಂಡ್ ಸನ್ಸ್ ಪ್ರೈ.ಲಿ. ಯ ಅರ್ಜುನ್ ರಂಗ, ತ್ರಿವೇಣಿ ಎಂಟರ್‌ಪ್ರೈಸಸ್‌ನ ಆಶೀರ್ವಾದ ಅಗರ್‌ವಾಲ್, ಸದಾಶಿವ ಫೈನಾನ್ಸಿಯಲ್ ಸರ್ವೀಸಸ್ ಹೋಲ್ಡಿಂಗ್ಸ್ ಪ್ರೈ.ಲಿ. ನ ಎಸ್.ಎಸ್. ಗೋಪಾಲರತ್ನಂ ಹಾಗೂ ಡಾ. ಸಂಪತ್ ದೊರೈರಾಜನ್ ಭಾಗವಹಿಸಿದ್ದರು.



ಮೈಸೂರಿನ ಮೈರಾ ಸ್ಕೂಲ್ ಆಫ್ ಬ್ಯುಸಿನೆಸ್‌ನಲ್ಲಿ ಸೋಮವಾರ ಇನ್‌ಫೋಸಿಸ್ ಸಂಸ್ಥಾಪಕ ಹಾಗೂ ಛೇರ್ಮನ್ ಎಮೆರಿಟಸ್ ಪದ್ಮಭೂಷಣ ಎನ್.ಆರ್. ನಾರಾಯಣಮೂರ್ತಿ (ಬಲದಿಂದ ಮೂರನೇಯವರು) ಅವರು ಗಿಡಕ್ಕೆ ನೀರೆರೆಯುವ ಮೂಲಕ ಸೆಂಟರ್ ಆಫ್ ಎಕ್ಸ್‌ಲನ್ಸ್ ಫಾರ್ ಎಂಟರ್‌ಪ್ರೈನರ್ಸ್ ಅಂಡ್ ಫ್ಯಾಮಿಲಿ ಬ್ಯುಸಿನೆಸ್ ಅನ್ನು ಉದ್ಘಾಟಿಸಿದರು. (ಎಡದಿಂದ) ಮೈರಾ ಸ್ಕೂಲ್ ಆಫ್ ಬ್ಯುಸಿನೆಸ್ ಮ್ಯಾನೇಜಿಂಗ್ ಟ್ರಸ್ಟಿ ಕಾಂತರಾಜ ಅರಸ್, ನೆಕ್ಸ್‌ವೆಲ್ಸ್ ಎಂಟರ್‌ಪ್ರೈನರ್ಸ್ ಸಂಸ್ಥಾಪಕ ಡಾ. ಶ್ರೀಧರ್ ಮಟ್ಟ, ಯುವರಾಜ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಮೈರಾ ಸ್ಕೂಲ್ ಆಫ್ ಬ್ಯುಸಿನೆಸ್ ಬೋರ್ಡ್ ಆಫ್ ಗವರ್ನರ್ ಡೀನ್ ಅಂಡ್ ಛೇರ್ಮನ್ ರಾಮಶಾಸ್ತ್ರಿ ಅಂಬರೀಶ್ ಹಾಗೂ ಬೇರುಂಡ ಫೌಂಡೇಷನ್ ನಿರ್ದೇಶಕಿ ತ್ರಿಷಿಕಾ ಕುಮಾರಿ ಒಡೆಯರ್ ಅವರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರಿನ ಪಾರಂಪರಿಕ ಕಟ್ಟಡಗಳ ಸಂರಕ್ಷಣೆಯಾಗಬೇಕು: ಯದುವೀರ್

ಮೈಸೂರು,ಸೆ.11(ಆರ್‌ಕೆ)–ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿರುವ ಪಾರಂಪರಿಕ ಕಟ್ಟಡ, ಸ್ಮಾರಕಗಳನ್ನು ಸಂರಕ್ಷಿಸಬೇಕಾಗಿದೆ ಎಂದು ಯುವರಾಜ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಮೈಸೂರಿನ ಹೂಟಗಳ್ಳಿ ಕೈಗಾರಿಕಾ ಪ್ರದೇಶದ ಮೈರಾ ಸ್ಕೂಲ್ ಆಫ್ ಬ್ಯುಸಿನೆಸ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡಿದ್ದ ಅವರು, ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದರು. ಮೈಸೂರು ಪರಂಪರೆ, ಸಂಪ್ರದಾಯ, ಸಂಸ್ಕೃತಿ, ಕಲೆಗೆ ಹೆಸರುವಾಸಿಯಾಗಿರುವ ನಗರ. ಇಲ್ಲಿನ ಪಾರಂಪರಿಕ ಕಟ್ಟಡಗಳು, ಸ್ಮಾರಕಗಳನ್ನು ರಾಜ ಮಹಾರಾಜರು ನಿರ್ಮಿಸಿದ್ದಾರೆ. ನಂತರ ಆಡಳಿತ ನಡೆಸಿದ ಜನಪ್ರತಿನಿಧಿಗಳ ಸರ್ಕಾರ ಅವುಗಳನ್ನು ನಿರ್ವಹಿಸುತ್ತಾ ಬಂದಿದೆಯಾದರೂ, ಕೆಲ ಹಳೆ ಕಟ್ಟಡಗಳು ಶಿಥಿಲ ಗೊಂಡಿವೆ. ಅವುಗಳನ್ನು ಯಥಾವತ್ತಾಗಿ ರಿಪೇರಿ ಮಾಡಿ ಪುನರುಜ್ಜೀವನಗೊಳಿಸಬಹುದೆಂದು ತಜ್ಞರು ಹೇಳುತ್ತಿದ್ದಾರೆ. ನಮ್ಮ ತಾಯಿಯವರ ಸಲಹೆಯಂತೆ ಕೆಲ ಕಟ್ಟಡಗಳನ್ನು ಸಂರಕ್ಷಿಸಲಾಗಿದೆ ಎಂದರು.

ದೇವರಾಜ ಮಾರುಕಟ್ಟೆ ಮತ್ತು ಲ್ಯಾನ್ಸ್ ಡೌನ್ ಕಟ್ಟಡಗಳ ವಿಷಯದಲ್ಲೂ ಪರಿ ಶೀಲನೆ ನಡೆಸಿರುವ ಪಾರಂಪರಿಕ ತಜ್ಞರು ಅವುಗಳು ಸದೃಢವಾಗಿರುವುದರಿಂದ ಕಡಿಮೆ ವೆಚ್ಚದಲ್ಲಿ ದುರಸ್ತಿಗೊಳಿಸಿ ಯಥಾವತ್ತಾಗಿ ಸಂರಕ್ಷಿಸುವುದು ಸೂಕ್ತ ಎಂದು ಪರಂಪರೆ ಮತ್ತು ಸಂರಕ್ಷಣಾ ಸಮಿತಿ ಸದಸ್ಯರು ಅಭಿಪ್ರಾಯಪಟ್ಟಿದ್ದಾರೆ. ಹಳೇ ಕಟ್ಟಡಗಳು ಶಿಥಿಲಗೊಂಡಿರುವುದರಿಂದ ಅವುಗಳನ್ನು ಕೆಡವಿ ಹೊಸದಾಗಿ ನಿರ್ಮಿಸಬೇಕೆಂದು ಕೆಲವರು ಅಭಿಪ್ರಾಯಿಸಿರುವುದರಿಂದ ಈ ಕಟ್ಟಡಗಳ ಬಗ್ಗೆ ಒಂದು ನಿಲುವು ತಾಳಲು ಸಾಧ್ಯವಾಗಿಲ್ಲ ಎಂದು ನುಡಿದರು. ಪಾರಂಪರಿಕ ಕಟ್ಟಡಗಳು ಮೈಸೂರಿಗೆ ಪ್ರವಾಸಿಗರನ್ನು ಆಕರ್ಷಿಸುತ್ತಿವೆ. ಅಲ್ಲದೆ, ಇಲ್ಲಿನ ಸೌಂದರ್ಯವನ್ನು ಹೆಚ್ಚಿಸುತ್ತಿವೆ. ಅದೇ ಕಾರಣಕ್ಕಾಗಿ ಇಲ್ಲಿಗೆ ಪಾರಂಪರಿಕ ನಗರಿ ಎಂಬ ಹೆಸರೂ ಬಂದಿದೆ. ಆದ್ದರಿಂದ ಅಪರೂಪದ ಪಾರಂಪರಿಕ ಕಟ್ಟಡಗಳನ್ನು ನಾವೆಲ್ಲರೂ ಉಳಿಸಿಕೊಳ್ಳಬೇಕಿದೆ ಎಂದರು.

ಭಾರತ–ಸೌದಿ ನಡುವೆ 24 ಒಪ್ಪಂದಗಳಿಗೆ ಸಹಿ

ನವದೆಹಲಿ: ಭಾರತ–ಸೌದಿ ಇಂದು 24 ಒಪ್ಪಂದಗಳಿಗೆ ಸಹಿ ಹಾಕಿವೆ. ಮಾಹಿತಿ ತಂತ್ರಜ್ಞಾನ, ಕೃಷಿ, ಔಷಧ (ಫಾರ್ಮಾಸ್ಯುಟಿಕಲ್ಸ್), ಪೆಟ್ರೋಕೆಮಿಕಲ್ಸ್ ಮತ್ತು ಮಾನವ ಸಂಪನ್ಮೂಲಗಳು ಮತ್ತಿತರ ಕ್ಷೇತ್ರಗಳಿಗೆ ಸಂಬಂಧಿಸಿದ ಒಪ್ಪಂದಗಳು ಇದಾಗಿದೆ.



ಸೆರಮ್ ಇನ್ಸ್‌ಟಿಟ್ಯೂಟ್ ಆಫ್ ಇಂಡಿಯಾ, ಹೆಚ್‌ಪಿ, ವಿಎಫ್‌ಎಸ್ ಗ್ಲೋಬಲ್, ಐಸಿಐಸಿಐ ಬ್ಯಾಂಕ್ ಸೇರಿದಂತೆ ಉಭಯ ರಾಷ್ಟ್ರಗಳ ಖಾಸಗಿ ಸಂಸ್ಥೆಗಳ ನಡುವೆಯೂ ಒಪ್ಪಂದ ನಡೆದಿದೆ. ಎಂಒಯುಗಳನ್ನು ಇನ್ವೆಸ್ಟ್ ಇಂಡಿಯಾ ಹಾಗೂ ಸೌದಿ ಅರೇಬಿಯಾದ ಹೂಡಿಕೆ ಸಚಿವಾಲಯ ಸುಗಮಗೊಳಿಸಿದ್ದು ಜಿ–20 ಸಭೆ ಬಳಿಕ ನಡೆದ ಸಭೆಯಲ್ಲಿ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

ಸೌದಿ ಪ್ರಿನ್ಸ್ ಶನಿವಾರ ಮೂರು ದಿನಗಳ ಭೇಟಿಗಾಗಿ ದೆಹಲಿಗೆ ಆಗಮಿಸಿದ್ದರು. ಸಂಕ್ಷಿಪ್ತ ಹೇಳಿಕೆಯಲ್ಲಿ, ಪ್ರಿನ್ಸ್ ಮೊಹಮ್ಮದ್ ಬಿನ್ ಸಲ್ಮಾನ್ ಜಿ–20 ಅಧ್ಯಕ್ಷತೆಯನ್ನು ಯಶಸ್ವಿಯಾಗಿ ನಿಭಾಯಿಸಿದ್ದಕ್ಕಾಗಿ ಭಾರತವನ್ನು ಅಭಿನಂದಿಸಿದರು.

ನಮ್ಮ ದೇಶಗಳು, ಜಿ–20 ದೇಶಗಳು ಮತ್ತು ಇಡೀ ಜಗತ್ತಿಗೆ ಪ್ರಯೋಜನವನ್ನು ತರುವಂತಹ ಬಹಳಷ್ಟು ಘೋಷಣೆಗಳನ್ನು ಮಾಡಲಾಗಿದೆ. ಹಾಗಾಗಿ ಅತ್ಯುತ್ತಮ ಸಭೆ ನಡೆಸಲಾಗಿದೆ ಎಂದು ಭಾರತಕ್ಕೆ ಹೇಳಲು ಬಯಸುತ್ತೇನೆ, ಮತ್ತು ಉಭಯ ದೇಶಗಳಿಗೆ ಭವಿಷ್ಯವನ್ನು ಸೃಷ್ಟಿಸುವತ್ತ ಕೆಲಸ ಮಾಡುತ್ತೇವೆ ಎಂದು ಸೌದಿ ಪ್ರಿನ್ಸ್ ಹೇಳಿದ್ದಾರೆ.

ಗ್ಯಾರಂಟಿಗೆ ಎಸ್‌ಸಿ, ಎಸ್‌ಟಿ ಹಣ 11,144 ಕೋಟಿ ದುರುಪಯೋಗ ವಿರುದ್ಧ ಹೋರಾಟ

ಈ ಸಂಬಂಧಿತ ವಿಚಾರ ಸಂಕಿರಣದಲ್ಲಿ ಮಾಜಿ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ಕರೆ

ಬೆಂಗಳೂರು ಸೆ.11(ಕೆಎಂಶಿ)–ಸೋಲನ್ನು ಸವಾಲಾಗಿ ಸ್ವೀಕರಿಸಿ ಮತ್ತೆ ಆಡಳಿತ ಮಾಡುವ ಪ್ರತಿಜ್ಞೆ ಸ್ವೀಕರಿಸುವ ಮನಸ್ಸು ನಮ್ಮದಾಗಲಿ ಎಂದು ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಕರೆನೀಡಿದರು.

'ಸಿಟಿಜನ್ ಫಾರ್ ಸೋಶಿಯಲ್ ಜಸ್ಟೀಸ್ –ಬೆಂಗಳೂರು' ಇವರ ನೇತೃತ್ವದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಸಭಾಂಗಣದಲ್ಲಿ ಇಂದು ನಡೆದ "ಎಸ್ಸಿ, ಎಸ್ಟಿ ಮೀಸಲು ಹಣ ಮುಳುಗಿಸುತ್ತಿರುವ ರಾಜ್ಯ ಸರ್ಕಾರ" ಎಂಬ ವಿಚಾರ ಸಂಕಿರಣದ ಅಧ್ಯಕ್ಷತೆ ವಹಿಸಿದ್ದ ಅವರು, ಎಸ್ಸಿ, ಎಸ್ಟಿ ಮೀಸಲು ಮೊತ್ತದಿಂದ 11,144 ಕೋಟಿ ದುರುಪಯೋಗ ವಿರುದ್ಧ ಎಲ್ಲ ಜಿಲ್ಲೆಗಳಲ್ಲಿ ಹೋರಾಟ ಪ್ರಾರಂಭಿಸಿ ಎಂದು ಮನವಿ ಮಾಡಿದರು.

11,144 ಕೋಟಿ ಮೊತ್ತವನ್ನು ವಾಪಸ್ ಕೊಡುವವರೆಗೆ ನಮ್ಮ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದರು.

ಡೋಂಗಿ ಮಾತು, ಸುಳ್ಳು ಭರವಸೆ ಮೂಲಕ ಮೋಸ ಮಾಡಲು ಸಿದ್ದರಾಮಯ್ಯರವರು ಮುಂದಾಗಿದ್ದಾರೆ. ಎಸ್ಸಿ ಎಸ್ಟಿ ಜನಾಂಗದ ಶಿಕ್ಷಣ, ಆರೋಗ್ಯ, ಕಲ್ಯಾಣಕ್ಕಾಗಿ ಈ ಹಣವನ್ನು ಬಳಸಬೇಕಿದೆ. ಸರ್ಕಾರದ ಮನಸ್ಸಿಗೆ ಬಂದಂತೆ ಬಳಸಲು ಅಲ್ಲ ಎಂದು ಆಕ್ಷೇಪಿಸಿದರು.



ಈ ಜನಾಂಗದಲ್ಲಿ ಹುಟ್ಟಿದ ಮಲ್ಲಿಕಾರ್ಜುನ ಖರ್ಗೆಯವರು ಇದನ್ನು ಸಹಿಸಿಕೊಂಡದ್ದು ಹೇಗೆ? ಮತಬ್ಯಾಂಕ್ ರಾಜಕಾರಣಕ್ಕೆ ಅವರೂ ಜೋತುಬಿದ್ದರೇ ಎಂದು ಪ್ರಶ್ನಿಸಿದರು. ಇದೇ ವೇಳೆ ಬಿಜೆಪಿ ಸರಕಾರದ ಸಾಧನೆಗಳನ್ನು ವಿವರಿಸಿದರು. ಎಸ್ಸಿ, ಎಸ್ಟಿ ಜನಾಂಗವು ಗೌರವಯುತವಾಗಿ ಬಾಳಲು ನಾವು ಶ್ರಮಿಸಿದ್ದೇವೆ. ಇವರಂತೆ ಸುಳ್ಳು ಹೇಳಿಲ್ಲ ಎಂದು ಅವರು ಟೀಕಿಸಿದರು.

ನೀರಾವರಿ, ಪಿಡಬ್ಲ್ಯುಡಿ ಇಲಾಖೆ ಸಚಿವನಾದಾಗ ಮೀಸಲು ಹಣವನ್ನು ಹಾಸ್ಟೆಲ್‌ಗಳ ನಿರ್ಮಾಣಕ್ಕೆ ಬಳಸಿದ್ದೇವೆ. ವಸತಿಯುತ ಶಾಲೆ ನಿರ್ಮಾಣಕ್ಕೆ ನೀರಾವರಿ ಇಲಾಖೆಯಿಂದ 500 ಕೋಟಿ ನೀಡಿದ್ದೇನೆ. ನೀರಾವರಿ ಇಲಾಖೆಯಲ್ಲಿ ಗಂಗಾ ಕಲ್ಯಾಣ ಯೋಜನೆ ಪ್ರಾರಂಭವಾದುದ್ದೇ ನಮ್ಮ ಸರಕಾರ ಇದ್ದಾಗ ಎಂದು ವಿವರಿಸಿದರು.

ಎಸ್ಸಿ, ಎಸ್ಟಿ ಯುವಕರನೇಕರು ಇಂಜಿನಿಯರ್, ಪದವೀಧರ ಆಗಿದ್ದಾರೆ. ಅವರು ಕೈಗಾರಿಕೆ ಪ್ರಾರಂಭಿಸಲು ಶೇ.50 ಸಬ್ಸಿಡಿಯಲ್ಲಿ ಕೆಐಎಡಿಬಿಯಿಂದ ನಿವೇಶನ ಕೊಡಲಾಗುತ್ತಿತ್ತು. ಅದನ್ನು ಶೇ. 75ಕ್ಕೆ ಏರಿಸಲಾಗಿದೆ. ಇದರಿಂದ ಸಾವಿರಾರು ಜನರು ನಿವೇಶನ ಪಡೆಯುವಂತಾಗಿದೆ. ಇದು ನಮ್ಮ ಸಾಧನೆ ಸಿದ್ದರಾಮಯ್ಯನವರೇ ಎಂದು ಗಮನ ಸೆಳೆದರು.

60 ವರ್ಷ ದೇಶವನ್ನು ಆಳಿದ ಕಾಂಗ್ರೆಸ್ ಪಕ್ಷ ಎಸ್ಸಿ, ಎಸ್ಟಿ ಸಮಾಜಕ್ಕೆ ನಿರಂತರ ಮೋಸ ಮಾಡುತ್ತಲೇ ಬಂತು. ಬಡತನ ನಿರ್ಮೂಲನೆ ಮಾಡುವುದಾಗಿ ಹೇಳುತ್ತಲೇ ಬಂದ ಇಂದಿರಾಗಾಂಧಿಯವರು ಬಡವರಿಗೆ ಮೋಸ ಮಾಡುತ್ತ ಬಂದರು. ಈ ಚುನಾವಣೆಯಲ್ಲಿ ನಾವು ಸೋತರೆ ಆಕಾಶ ಕೆಳಗೆ ಬಿದ್ದಿಲ್ಲ. ಪ್ರಳಯ ಆಗಿಲ್ಲ. ನಮಗೆ ಮುಂದೆ ಅವಕಾಶ ಲಭಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಾಜಿ ಸಚಿವ ಕೋಟ ಶ್ರೀನಿವಾಸ ಪೂಜಾರಿ ಮಾತನಾಡಿ, ಮೀಸಲಿಟ್ಟ ಹಣದ ದುರ್ಬಳಕೆ ಆಗಿದೆ. ಸಂಬಂಧಿತರ ಕಿವಿ ಹಿಂಡಿ ಅದನ್ನು ಬಡವರಿಗೆ ಕೊಡಿಸುವುದು ಹೇಗೆ ಎಂಬ ಚರ್ಚೆ ನಮ್ಮದು ಎಂದರು. ಬೆಕ್ಕಿಗೆ ಗಂಟೆ ಕಟ್ಟುವ ಕೆಲಸಕ್ಕೆ ನಾವು ಮುಂದಾಗಬೇಕಿದೆ ಎಂದು ತಿಳಿಸಿದರು.

ಆ ನೆಲೆಯಲ್ಲಿ ಕಾಂಗ್ರೆಸ್ ಸರಕಾರದ ವಿರುದ್ಧ ಹೋರಾಟ ಮುಂದುವರೆಸಬೇಕಿದೆ. ಜನರ ಪರವಾಗಿ ಇರುವವರಾದ ನಾವು ಹೋರಾಟಕ್ಕೆ ಧುಮುಕಲೇಬೇಕಿದೆ ಎಂದು ಅಭಿಪ್ರಾಯಪಟ್ಟರು. ಸುಳ್ಳು ಭರವಸೆ, ಗ್ಯಾರಂಟಿಗಳಿಂದ ಈ ಸರಕಾರ ರಚಿಸಲಾಗಿದೆ ಎಂದು ಅವರು ಟೀಕಿಸಿದರು.

ಮಾಜಿ ಸಚಿವ ಬಿ.ಶ್ರೀರಾಮುಲು ಮಾತನಾಡಿ, ಪರಿಶಿಷ್ಟ ಜಾತಿ–ವರ್ಗಕ್ಕೆ ಮೀಸಲಿಟ್ಟ ಹಣದಲ್ಲಿ ಸುಮಾರು 11 ಸಾವಿರ ಕೋಟಿಯನ್ನು ಬೇರೆ ಬೇರೆ ಇಲಾಖೆಗಳಿಗೆ ವರ್ಗಾಯಿಸಲಾಗಿದೆ. ಡಾ.ಬಾಬಾ ಸಾಹೇಬ ಅಂಬೇಡ್ಕರರ ವಿಚಾರಗಳನ್ನು ಮನಸ್ಸಿನಲ್ಲಿ ಇಟ್ಟುಕೊಂಡು ನಾವು ಹೋರಾಟ ಮಾಡುವುದು ಅನಿವಾರ್ಯವಾಗಿದೆ ಎಂದು ನುಡಿದರು. ಒಳ್ಳೆಯ ಕೆಲಸಗಳನ್ನು ಮರೆತು ಬಿಡುತ್ತೇವೆ. ಬಿಜೆಪಿ ಸರಕಾರ ಮಾಡಿದ ಒಳ್ಳೆಯ ವಿಚಾರ ಮರೆತುಹೋಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಮೀಸಲಾತಿ ವಿಚಾರದಲ್ಲಿ ಸಾಮಾಜಿಕ ನ್ಯಾಯವನ್ನು ಬಿಜೆಪಿ ಸರಕಾರ ನೀಡಿತ್ತು ಎಂದು ನೆನಪಿಸಿದರು. ಜಾತಿ ಪ್ರಮಾಣ ಪತ್ರದ ವಿಚಾರದಲ್ಲೂ ಇವತ್ತು ಸಾಕಷ್ಟು ಗೊಂದಲಗಳು ನಡೆದಿವೆ. ನ್ಯಾಯಕ್ಕಾಗಿ ಹೋರಾಟ ಮಾಡಿ ಹಕ್ಕುಗಳನ್ನು ಪಡೆಯೋಣ ಎಂದು ತಿಳಿಸಿದರು.

ಮಾಜಿ ಶಾಸಕ ಎನ್.ಮಹೇಶ್ ಮಾತನಾಡಿ, ಶೇ.80ರಷ್ಟು ಎಸ್ಸಿ, ಎಸ್ಟಿಗಳು ಬಿಪಿಎಲ್ ರೇಖೆ ಕೆಳಗಿದ್ದಾರೆ. ತಿಂಗಳ ಆದಾಯ ಗಳಿಸುವ ಆಸ್ತಿ ನಮ್ಮಲ್ಲಿ ಇಲ್ಲದಿರುವುದೇ ಇದಕ್ಕೆ ಕಾರಣ ಎಂದು ತಿಳಿಸಿದರು. ಸ್ಪೆಷಲ್ ಕಾಂಪೋನೆಂಟ್ ಪ್ಲಾನನ್ನು ಗ್ಯಾರಂಟಿಗಳಿಗೆ ಬಳಸುವುದು ಮೋಸ, ದ್ರೋಹ ಮತ್ತು ಅನ್ಯಾಯ ಎಂದು ಅವರು ಆಕ್ಷೇಪಿಸಿದರು.

ವಿದೇಶಿ ಉಡುಗೊರೆಗೆ ಮರುಳಾಗಿ ಲಕ್ಷ ರೂ. ಕಳೆದುಕೊಂಡ ಯುವತಿ!

ಮೈಸೂರು, ಸೆ. 11– ವಿದೇಶದಿಂದ ಉಡುಗೊರೆ ಕಳುಹಿಸುವುದಾಗಿ ನಂಬಿಸಿ ಯುವತಿಗೆ ಒಂದು ಲಕ್ಷ ರೂ. ವಂಚಿಸಲಾಗಿದೆ. ಮೈಸೂರಿನ ರಾಜೀವ್‌ನಗರ ನಿವಾಸಿ ಬೀಬೀ ಅಮೀನಾ ಅನ್ಸಾರಿ (19) ವಂಚನೆಗೊಳಗಾದವರಾಗಿದ್ದು, ಇವರ ವಾಟ್ಸಾಪ್‌ಗೆ ಜಾರ್ಜ್ ವಿಲಿಯನ್ ಎಂಬ ಹೆಸರಿನಲ್ಲಿ ವಂಚಕ ರಿಕ್ವೆಸ್ಟ್ ಕಳುಹಿಸಿದ್ದು, ಅದನ್ನು ಅವರು ಅಕ್ಸೆಪ್ಟ್ ಮಾಡಿದಾಗ ವಂಚಕ ತಾನು ಲಂಡನ್‌ನಲ್ಲಿ ಇರುವುದಾಗಿಯೂ ಅಲ್ಲಿಂದ ಉಡುಗೊರೆ ಕಳುಹಿಸುವುದಾಗಿಯೂ ತಿಳಿಸಿದ್ದಾನೆ.

ಕೆಲ ದಿನಗಳ ನಂತರ ದೆಹಲಿ ಏರ್‌ಪೋರ್ಟ್‌ನಿಂದ ಕರೆ ಮಾಡುತ್ತಿರುವುದಾಗಿ ತಿಳಿಸಿದ ವ್ಯಕ್ತಿ, ಲಂಡನ್‌ನಿಂದ ಪಾರ್ಸೆಲ್ ಬಂದಿದ್ದು, ಕಸ್ಟಮ್ಸ್ ಕ್ಲಿಯರೆನ್ಸ್ ಶುಲ್ಕ ಎಂದು ಒಂದು ಲಕ್ಷ ರೂ. ಆನ್‌ಲೈನ್ ಮೂಲಕ ವರ್ಗಾವಣೆ ಮಾಡಿಸಿಕೊಂಡು ವಂಚಿಸಲಾಗಿದೆ. ಈ ಸಂಬಂಧ ಮೈಸೂರು ನಗರ ಸೆನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆಪಲ್ ಮೊಬೈಲ್ ಫೋನ್ ಆಫರ್ ನೀಡಿ 55,958 ರೂ. ವಂಚನೆ

ನಂಜನಗೂಡು, ಸೆ. 11– ಆನ್‌ಲೈನ್ ಮೂಲಕ ಆಪಲ್ ಮೊಬೈಲ್ ಫೋನ್ ಮಾರಾಟದ ನೆಪದಲ್ಲಿ ನೆಸ್ಲೆ ಕಂಪನಿ ನೌಕರನಿಗೆ 55,958 ರೂ. ವಂಚಿಸಲಾಗಿದೆ.

ನಂಜನಗೂಡು ತಾಲೂಕು ದೇವೀರಮ್ಮನಹುಂಡಿ ನಿವಾಸಿ ಆರ್. ರಮೇಶ್(36) ವಂಚನೆಗೊಳಗಾದವರಾಗಿದ್ದು, ಆಪಲ್ ಕಂಪನಿಯ ಮೊಬೈಲ್ ಬಗ್ಗೆ ಇನ್‌ಸ್ಟಾಗ್ರಾಂನಲ್ಲಿ ಬಂದಿದ್ದ ಜಾಹೀರಾತು ನೋಡಿ ಇವರು ಮೊಬೈಲ್ ಖರೀದಿಸುವ ಉದ್ದೇಶದಿಂದ 9839526035 ಸಂಖ್ಯೆಗೆ ವಾಟ್ಸಾಪ್ ಮೂಲಕ ಚಾಟ್ ಮಾಡಿದ್ದಾರೆ. ಮೊದಲಿಗೆ ಮೊಬೈಲ್ ಬುಕ್ಕಿಂಗ್‌ಗಾಗಿ 6750 ರೂ. ವರ್ಗಾವಣೆ ಮಾಡಿಸಿಕೊಂಡ ವಂಚಕ, ನಂತರ ಮೊಬೈಲ್ ಬುಕ್ ಆಗಿದೆ. ಉಳಿಕೆ ಹಣ ಕಳುಹಿಸಿ ಎಂದು 15,750 ರೂ. ವರ್ಗಾವಣೆ ಮಾಡಿಸಿಕೊಂಡಿದ್ದಾನೆ. ನಂತರ 33,458 ರೂ. ಜಿಎಸ್‌ಟಿ ಶುಲ್ಕವೆಂದು ವರ್ಗಾವಣೆ ಮಾಡಿಸಿಕೊಂಡಿದ್ದು, 2 ದಿನ ಬಿಟ್ಟು ಮತ್ತೆ 44 ಸಾವಿರ ರೂ. ಕಳುಹಿಸುವಂತೆ ಮೆಸೇಜ್ ರವಾನಿಸಿದ್ದಾನೆ. ಅದಾಗಲೇ 55,958 ರೂ. ವರ್ಗಾವಣೆ ಮಾಡಿದ್ದ ರಮೇಶ್ ಅವರಿಗೆ ತಾನು ವಂಚನೆಗೊಳಗಾಗಿರುವುದು ತಿಳಿದು ನಂಜನಗೂಡು ಗ್ರಾಮಾಂತರ ಠಾಣೆಗೆ ದೂರು ಸಲ್ಲಿಸಿದ್ದಾರೆ.

ಬೈಕ್ ಡಿಕ್ಕಿ: ಚಾಲಕ ಸಾವು

ಬೆಟ್ಟದಪುರ, ಸೆ. 11– ಬೈಕ್ ಡಿಕ್ಕಿ ಹೊಡೆದ ಪರಿಣಾಮ ಪಾದಚಾರಿ ಸಾವನ್ನಪ್ಪಿದ ಘಟನೆ ಪಿರಿಯಾಪಟ್ಟಣ–ಬೆಟ್ಟದಪುರ ಮುಖ್ಯ ರಸ್ತೆಯ ಕೂರ್ಗಲ್ಲು ಗ್ರಾಮದ ಬಳಿ ಸಂಭವಿಸಿದೆ. ಈ ಗ್ರಾಮದ ನಿವಾಸಿ, ಚಾಲಕ ಸಿದ್ದೇಶ (35) ಅಪಘಾತದಲ್ಲಿ ಸಾವನ್ನಪ್ಪಿದವರಾಗಿದ್ದು, ಈತ ಸೆ.9ರಂದು ರಾತ್ರಿ 10.15ರ ಸುಮಾರಿನಲ್ಲಿ ಕೂರ್ಗಲ್ಲು ಕಡೆಯಿಂದ ಟೋಲ್ ಗೇಟ್ ಕಡೆಗೆ ನಡೆದುಕೊಂಡು ಹೋಗುತ್ತಿದ್ದಾಗ ಪಿರಿಯಾಪಟ್ಟಣ ತಾಲೂಕು ವಡೆಯರ ಹೊಸಹಳ್ಳಿ ಗ್ರಾಮದ ಪುನೀತ್ ಎಂಬಾತ ಚಾಲನೆ ಮಾಡಿಕೊಂಡು ಬಂದ ಸ್ಪ್ಲೆಂಡರ್ ಬೈಕ್ (ಕೆಎ 09–ಜೆಜಿ 3077) ಈತನಿಗೆ ಡಿಕ್ಕಿ ಹೊಡೆದ ಪರಿಣಾಮ ಸಿದ್ದೇಶ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಈ ಸಂಬಂಧ ಬೆಟ್ಟದಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಸ್ ಡಿಕ್ಕಿ; ಬೈಕ್ ಸವಾರ ಸಾವು

ಕೆ.ಆರ್.ನಗರ, ಸೆ.11–ಬೈಕ್‌ಗೆ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದ ಪರಿಣಾಮ ಹಾಸನ–ಮೈಸೂರು ಮುಖ್ಯ ರಸ್ತೆಯ ಚೌಕಳ್ಳಿ ಕ್ರಾಸ್ ಬಳಿ ಸಂಭವಿಸಿದೆ. ಕೆ.ಆರ್.ನಗರ ತಾಲೂಕು ಅರಕೆರೆ ಕೊಪ್ಪಲು ಗ್ರಾಮದ ಹರೀಶ್(28) ಅಪಘಾತದಲ್ಲಿ ಮೃತಪಟ್ಟವನಾಗಿದ್ದು, ಸೆ.9ರಂದು ರಾತ್ರಿ 8.50ರ ಸುಮಾರಿನಲ್ಲಿ ಈತ ತೆರಳುತ್ತಿದ್ದ ಯಮಹಾ ಕ್ರಕ್ಸ್ ಬೈಕ್‌ಗೆ (ಕೆಎ 45–ವಿ 4992) ಕೆಎಸ್‌ಆರ್‌ಟಿಸಿ ಬಸ್ (ಕೆಎ 09–ಎಫ್ 5079) ಡಿಕ್ಕಿ ಹೊಡೆದ ಪರಿಣಾಮ ಹರೀಶ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಈ ಸಂಬಂಧ ಕೆ.ಆರ್.ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ದಸರಾಗೂ ಮುನ್ನ ಮೈಸೂರಲ್ಲಿ 200ಕ್ಕೂ ಹೆಚ್ಚು ಮಾರ್ಗಸೂಚಕ ಫಲಕ ಅಳವಡಿಸಲು ಕ್ರಮ

● ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸೂಚನೆ ● ಮೈಸೂರು ಪರಂಪರೆಗೆ ಪೂರಕವಾಗಿ ಏಕರೂಪದಲ್ಲಿ ವಿನ್ಯಾಸಗೊಳಿಸಲು ನಿರ್ದೇಶನ



ಮೈಸೂರಿನ ಹಳೇ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅಧಿಕಾರಿಗಳು ಹಾಗೂ ಪರಂಪರೆ ಸಂರಕ್ಷಣಾ ತಜ್ಞರ ಉಪಸಮಿತಿ ಸದಸ್ಯರೊಂದಿಗೆ ಸಭೆ ನಡೆಸಿದರು.

ಮೈಸೂರು,ಸೆ.11(ಪಿಎಂ)– ದಸರಾ ಮಹೋತ್ಸವ ಆರಂಭಗೊಳ್ಳುವ ಮುನ್ನ ಮೈಸೂರು ನಗರದಲ್ಲಿ 200ಕ್ಕೂ ಹೆಚ್ಚು ಕಡೆಗಳಲ್ಲಿ ಮಾರ್ಗಸೂಚಕ ಫಲಕಗಳನ್ನು ಮೈಸೂರಿನ ಪರಂಪರೆಗೆ ಪೂರಕವಾಗಿ ಒಂದೇ ವಿನ್ಯಾಸದಲ್ಲಿ ಸಿದ್ಧಪಡಿಸಿ ಅಳವಡಿಸಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಅಧಿಕಾರಿಗಳಿಗೆ ಸೂಚಿಸಿದರು.

ಮೈಸೂರಿನ ಹಳೇ ಜಿಲ್ಲಾಧಿಕಾರಿ ಕಚೇರಿಯ ಕೆಸ್ವಾನ್ ವೀಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ಸೋಮವಾರ ದಸರಾ ಪೂರ್ವ ಸಿದ್ಧತೆ ಸಂಬಂಧ ವಿವಿಧ ಇಲಾಖಾಧಿಕಾರಿಗಳು ಹಾಗೂ ಮೈಸೂರು ಪರಂಪರೆ ಸಂರಕ್ಷಣಾ ತಜ್ಞರ ಉಪಸಮಿತಿ ಸದಸ್ಯರೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ನಗರದ ಹಲವೆಡೆ ಮಾರ್ಗಸೂಚಕ ಫಲಕಗಳು ಸಮರ್ಪಕವಾಗಿಲ್ಲ. ಇದರಿಂದ ಪ್ರವಾಸಿಗರು ನಗರದ ವಿವಿಧ ಪ್ರವಾಸಿ ತಾಣಕ್ಕೆ ಸರಾಗವಾಗಿ ಭೇಟಿ ನೀಡಲು ಸಾಧ್ಯವಾಗುತ್ತಿಲ್ಲ. ಅಲ್ಲದೆ, ಸಾರ್ವಜನಿಕರು ಬೆಂಗಳೂರು ಸೇರಿದಂತೆ ವಿವಿಧ ಸ್ಥಳಗಳ ಮಾರ್ಗ ತಿಳಿಯಲು ತೊಂದರೆ ಉಂಟಾಗಿದೆ. ಹಾಗಾಗಿ ದಸರಾ ಒಳಗಾಗಿ 200ಕ್ಕೂ ಹೆಚ್ಚು ಕಡೆಗಳಲ್ಲಿ ಮಾರ್ಗಸೂಚಕ ಫಲಕಗಳನ್ನು ಅಳವಡಿಸಲು ಕ್ರಮ ವಹಿಸಬೇಕೆಂದು ನಿರ್ದೇಶನ ನೀಡಿದರು.

ಏಕರೂಪದಲ್ಲಿ ಮಾರ್ಗಸೂಚಕ ಫಲಕಗಳನ್ನು ಸಿದ್ಧಪಡಿಸಿ ಅಳವಡಿಸಬೇಕು. ಜೊತೆಗೆ ಅವು ಮೈಸೂರು ಪರಂಪರೆಗೆ ಪೂರಕವಾಗಿರಬೇಕು. ಪರಂಪರೆಗೆ ಪೂರಕವಾಗಿ ವಿನ್ಯಾಸಗೊಳಿಸುವ ಸಂಬಂಧ ಪರಂಪರೆ ಸಂರಕ್ಷಣಾ ತಜ್ಞರ ಉಪ ಸಮಿತಿ ಶಿಫಾರಸು ಪಡೆದುಕೊಳ್ಳಬೇಕು. ಬಹುಮುಖ್ಯವಾಗಿ ಈ ಫಲಕಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಗಳಲ್ಲಿಯೂ ಮಾಹಿತಿ ಇರುವುದು ಅಗತ್ಯ ಎಂದರು.

ಎರಡು ಮೂರು ದಿನಗಳಲ್ಲಿ ಈ ಸಂಬಂಧ ಕ್ರಮ ವಹಿಸಬೇಕು. ಮುಡಾ ಮತ್ತು ಪಾಲಿಕೆಯಿಂದ ಇದಕ್ಕೆ ಅಗತ್ಯವಿರುವ ಅನುದಾನ ಭರಿಸುವ ಸಂಬಂಧ ಪರಿಶೀಲಿಸಿ ಮುಂದುವರೆಯಬೇಕು. ದಸರಾಗೂ ಮುನ್ನ ಅಲ್ಪಾವಧಿ ಟೆಂಡರ್ ಮೂಲಕ ಇದನ್ನು ಜಾರಿಗೊಳಿಸಲು ಕ್ರಮ ವಹಿಸಬೇಕೆಂದು ಮುಡಾ ಆಯುಕ್ತ ದಿನೇಶ್ ಅವರಿಗೆ ಸೂಚಿಸಿರು.

ಅಲ್ಲದೆ, ಪಾಲಿಕೆ ಆಯುಕ್ತರಿಗೆ ಕರೆ ಮಾಡಿದ ಜಿಲ್ಲಾಧಿಕಾರಿಗಳು, ಮಾರ್ಗಸೂಚಕ ಫಲಕಗಳ ಸಂಬಂಧ ಈ ಶನಿವಾರದೊಳಗೆ ಅಲ್ಪಾವಧಿ ಟೆಂಡರ್ ಆಗಬೇಕೆಂದು ಸೂಚನೆ ನೀಡಿದರಲ್ಲದೆ, ಮುಕ್ತ ವಿವಿ ಆವರಣ ಸೇರಿದಂತೆ ಕೆಲ ಖಾಸಗಿ ಶಿಕ್ಷಣ ಸಂಸ್ಥೆ ಆವರಣದಲ್ಲಿ ಅಳವಡಿಸಿರುವ ಡಿಜಿಟಲ್ ಡಿಸ್‌ಪ್ಲೇಗಳನ್ನು ನಿಯಂತ್ರಣಕ್ಕೆ ತೆಗೆದುಕೊಂಡು ಸಾಮಾಜಿಕ ಸಂದೇಶ ರವಾನಿಸಲು ಕ್ರಮವಹಿಸುವಂತೆ ನಿರ್ದೇಶನ ನೀಡಿದರು.

ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ ಮಾತನಾಡಿ, ಮೈಸೂರು ಅರಮನೆ ವರಹಾ ದ್ವಾರ ಸಮೀಪದ ಪಾರ್ಕಿಂಗ್ ಪ್ರದೇಶದಲ್ಲಿ (ಕೋಟೆ ಮಾರಮ್ಮ ದೇವಸ್ಥಾನ ಸಮೀಪ) ಈ ಹಿಂದೆ ಇದ್ದ ಅನಧಿಕೃತ ಮಳಿಗೆಗಳನ್ನು ತೆರವುಗೊಳಿಸಲಾಗಿದೆ. ಇಲ್ಲಿ ಪಾರಂಪರಿಕ ಕಟ್ಟಡಕ್ಕೆ ಪೂರಕವಾಗಿ ಪಾರ್ಕಿಂಗ್ ಪ್ರದೇಶವನ್ನು ಅಭಿವೃದ್ಧಿಪಡಿಸುವ ಪ್ರಸ್ತಾಪವಿದೆ ಎಂದು ಸಭೆಗೆ ಮಾಹಿತಿ ನೀಡಿದರಲ್ಲದೆ, ಈ ಸಂಬಂಧ ಸಿದ್ಧಪಡಿಸಿರುವ ನೀಲನಕ್ಷೆಯನ್ನು ಅರಮನೆ ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೂ ಆದ ಜಿಲ್ಲಾಧಿಕಾರಿಗಳಿಗೆ ನೀಡಿದರು. ಈ ಸಂಬಂಧ ಪರಿಶೀಲಿಸಿ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಅಲ್ಲದೆ, ಹಳೇ ಜಿಲ್ಲಾಧಿಕಾರಿ ಕಚೇರಿ ನಿರ್ವಹಣೆ ಮತ್ತು ನವೀಕರಣ ಸಂಬಂಧ ಡಿಪಿಆರ್ ಸಿದ್ಧಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮೈಸೂರು ಪರಂಪರೆ ಸಂರಕ್ಷಣಾ ತಜ್ಞರ ಉಪಸಮಿತಿ ಸದಸ್ಯರಾದ ಪ್ರೊ.ಎನ್.ಎಸ್. ರಂಗರಾಜು, ಸೈಯದ್ ಶಕೀಬ್ ಉರ್ ರೆಹಮಾನ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ಮೈಸೂರು ಅರಮನೆ ಗೋಪುರದ ಗಾಜಿನಲ್ಲಿ ಬಿರುಕು; ದುರಸ್ತಿಗೆ ಕ್ರಮ ವಹಿಸಲು ಮುಂದಾದ ಅರಮನೆ ಮಂಡಳಿ

'ಮೈಸೂರು ಮಿತ್ರ'ನ ವಿಶೇಷ ವರದಿಯ ಫಲಶ್ರುತಿ

ಮೈಸೂರು,ಸೆ.11(ಪಿಎಂ)– ಮೈಸೂರು ಅರಮನೆಯ ದರ್ಬಾರ್ ಹಾಲ್ ಹಾಗೂ ಕಲ್ಯಾಣ ಮಂಟಪದ ಗೋಪುರದ ಗಾಜುಗಳಲ್ಲಿ ಉಂಟಾಗಿರುವ ಬಿರುಕು ದುರಸ್ತಿಗೆ ತಜ್ಞರ ಶಿಫಾರಸು ಅಗತ್ಯ ಎಂದು ಅಭಿಪ್ರಾಯಪಟ್ಟ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಈ ಸಂಬಂಧ ತಜ್ಞರ ಸಮಿತಿ ರಚಿಸಲು ನಾಲ್ವರು ತಜ್ಞರ ಹೆಸರುಗಳನ್ನು ಶಿಫಾರಸು ಮಾಡುವಂತೆ ಪರಂಪರೆ ಸಂರಕ್ಷಣಾ ತಜ್ಞರ ಉಪಸಮಿತಿ ಸದಸ್ಯರಿಗೆ ತಿಳಿಸಿದರು.

ಈ ಸಂಬಂಧ 'ಮೈಸೂರು ಅರಮನೆ ದರ್ಬಾರ್ ಹಾಲ್, ಕಲ್ಯಾಣ ಮಂಟಪದ ಗಾಜಿನ ಗೋಪುರದಲ್ಲಿ ಭಾರಿ ಬಿರುಕು' ಶೀರ್ಷಿಕೆಯಡಿ 'ಮೈಸೂರು ಮಿತ್ರ'ನ ಆ. 29ರ ಸಂಚಿಕೆಯಲ್ಲಿ ವಿಶೇಷ ವರದಿ ಪ್ರಕಟವಾಗಿತ್ತು. ಮೈಸೂರು ಅರಮನೆ ಮಂಡಳಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಯೂ ಆದ ಜಿಲ್ಲಾಧಿಕಾರಿಗಳು, ಹಳೇ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ನಡೆದ ಸಭೆಯಲ್ಲಿ ಪ್ರಸ್ತಾಪಿಸಿದರು.

ಇದು ಪರಿಹರಿಸಲಾಗದ ಸಮಸ್ಯೆಯೇನಲ್ಲ. ಪರಿಹಾರ ಇದ್ದೇ ಇದೆ. ಪರಂಪರೆ ಸಂರಕ್ಷಣಾ ತಜ್ಞರ ಉಪಸಮಿತಿಯಿಂದ ನಾಲ್ವರು ತಜ್ಞರನ್ನು ಶಿಫಾರಸು ಮಾಡಬೇಕು. ಅವರನ್ನು ಅರಮನೆ ಮಂಡಳಿ ವತಿಯಿಂದ ಆಹ್ವಾನಿಸಿ, ಅವರ ಶಿಫಾರಸ್ಸಿನ ಆಧಾರದಲ್ಲಿ ಕ್ರಿಯಾ ಯೋಜನೆ ಸಿದ್ಧಪಡಿಸಿ ದುರಸ್ತಿಪಡಿಸುವ ಕೆಲಸವಾಗಬೇಕೆಂದು ನಿರ್ದೇಶನ ನೀಡಿದ ಅವರು, ಅರಮನೆ ಮಂಡಳಿಯಿಂದ ಅದಕ್ಕೆ ತಗಲುವ ವೆಚ್ಚ ಭರಿಸಲಾಗುವುದು ಎಂದು ಹೇಳಿದರು.

ರಾಷ್ಟ್ರೀಯ ಬ್ಯಾಡ್ಮಿಂಟನ್ ಪಂದ್ಯಾವಳಿಗೆ ದಿಯಾ ಬೋಪಣ್ಣ



ಮಡಿಕೇರಿ, ಸೆ.11– ಹೈದರಾಬಾದ್‌ನ ಜ್ವಾಲಾ ಗುಟ್ಟ ಕ್ರೀಡಾಂಗಣದಲ್ಲಿ ಸೆ.14 ರಿಂದ 19ರವರೆಗೆ ನಡೆಯುವ 35ನೇ ಜೂನಿಯರ್ ರಾಷ್ಟ್ರೀಯ ಬ್ಯಾಡ್ಮಿಂಟನ್ ಪಂದ್ಯಾವಳಿಗೆ ಕೊಡಗಿನ ಬೊಪ್ಪಂಡ ದಿಂಯಾ ಭೀಮಯ್ಯ ಆಯ್ಕೆಯಾಗಿದ್ದಾರೆ.

17 ವರ್ಷದೊಳಗಿನ ಸಿಂಗಲ್ಸ್ ಮತ್ತು ಡಬಲ್ಸ್‌ನಲ್ಲಿ ದಿಯಾ ಕರ್ನಾಟಕ ತಂಡವನ್ನು ಪ್ರತಿನಿಧಿಸಲಿದ್ದಾರೆ. ಮಡಿಕೇರಿ ನಗರದ ದೇಚೂರಿನ ಬೊಪ್ಪಂಡ ಕುಸುಮ ಹಾಗೂ ಭೀಮಯ್ಯ ಅವರ ಪುತ್ರಿಯಾಗಿರುವ ಈಕೆ ಮೈಸೂರಿನ ಪ್ರಗತಿ ಎಲೈಟ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿ. ಮೈಸೂರಿನ ಸ್ಪೋರ್ಟ್ಸ್ ಪಾರ್ಕ್‌ನಲ್ಲಿ ಮೇದುರ ಅರುಣ್ ಪೆಮ್ಮಯ್ಯ ಹಾಗೂ ಬಿ.ಪಿ.ಭೀಮಯ್ಯ ಅವರ ಬಳಿ ತರಬೇತಿ ಪಡೆಯುತ್ತಿದ್ದಾರೆ.

ಇಂದು ವಾರ್ಷಿಕ ಮಹಾಸಭೆ

ಮಡಿಕೇರಿ, ಸೆ.11– ಕೊಡಗು ಜಿಲ್ಲಾ ಸಹಕಾರ ಯೂನಿಯನ್‌ನ ವಾರ್ಷಿಕ ಮಹಾಸಭೆಯು ಯೂನಿಯನ್ ಅಧ್ಯಕ್ಷ ಎ.ಕೆ.ಮನುಮುತ್ತಪ್ಪ ಅವರ ಅಧ್ಯಕ್ಷತೆಯಲ್ಲಿ ಸೆ.12 ರಂದು ಬೆಳಗ್ಗೆ 11.30 ಗಂಟೆಗೆ ಯೂನಿಯನ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಕೊಡಗು ಜಿಲ್ಲಾ ಸಹಕಾರ ಯೂನಿಯನ್‌ನ ಸಿಇಓ ಯೋಗೇಂದ್ರ ನಾಯಕ್ ತಿಳಿಸಿದ್ದಾರೆ.

ಮಮ್ಮುಕುಂಜಿ ಹಾಜಿ ನಿಧನ

ನಾಪೋಕ್ಲು, ಸೆ.11– ಸಮೀಪದ ಹೊದವಾಡ ಗ್ರಾಮದ ಕೊಟ್ಟಮುಡಿ ಹೆಚ್.ಎ. ಮಮ್ಮುಕುಂಜಿ ಹಾಜಿ (70) ಅವರು ಸೋಮವಾರ ಮಧ್ಯಾಹ್ನ ನಿಧನರಾದರು.



ಮೃತರು ಮಡಿಕೇರಿ ಬ್ಲಾಕ್ ಕಾಂಗ್ರೆಸ್ ಮತ್ತು ಹೊದ್ದೂರು ಗ್ರಾಪಂ ಅಧ್ಯಕ್ಷರಾಗಿರುವ ಎಚ್.ಎ. ಹಂಸ ಮತ್ತು ಕೊಡಗು ಸುನ್ನಿ ವೆಲ್ಫೇರ್ ಅಸೋಸಿಯೇಷನ್‌ನ ಜಿಸಿಸಿ ಅಧ್ಯಕ್ಷ ಎಚ್. ಎ. ಅಬೂಬಕರ್ ಹಾಜಿ ಅವರ ಹಿರಿಯ ಸಹೋದರರಾಗಿದ್ದಾರೆ. ಮೃತರ ಅಂತ್ಯಕ್ರಿಯೆಯು ಕೊಟ್ಟಮುಡಿಯ ಜುಮಾ ಮಸೀದಿ ಆವರಣದ ಖಬರ್‌ಸ್ಥಾನದಲ್ಲಿ ಜರುಗಿತು. ಮೃತರು ಪತ್ನಿ, ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಾಂಧವರನ್ನು ಅಗಲಿದ್ದಾರೆ.

ಕುಶಾಲನಗರ ತಾಲೂಕು ಕಸಾಪ ಪದಾಧಿಕಾರಿಗಳ ಪದಗ್ರಹಣ

ಕೊಡಗಿನ ಪ್ರಕೃತಿ ಸೌಂದರ್ಯದ ಉಳಿವಿಗಾಗಿ ವಿಶೇಷ ಕಾಳಜಿ ಅಗತ್ಯ

ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್



ಕುಶಾಲನಗರ, ಸೆ.11– ಕೊಡಗಿನ ಪ್ರಕೃತಿ ಸೌಂದರ್ಯ, ಸಂಸ್ಕೃತಿ, ಪರಂಪರೆಯನ್ನು ಉಳಿಸಿ ಬೆಳೆಸಬೇಕು ಎಂದು ಮೈಸೂರು ರಾಜವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.

ಇಲ್ಲಿನ ಕಲಾ ಭವನದಲ್ಲಿ ಭಾನುವಾರ ಏರ್ಪಡಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತು ಕುಶಾಲನಗರ ತಾಲೂಕು ಘಟಕದ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಜೊತೆಗೆ ಪರಿಸರ ಕಾಳಜಿಯನ್ನು ಹೊಂದಬೇಕು ಎಂದು ಸಲಹೆ ನೀಡಿದರು.

ನಮ್ಮ ಪೂರ್ವಜರು ನೂರು ವರ್ಷ ದೂರದೃಷ್ಟಿ ಇಟ್ಟುಕೊಂಡು ಅಭಿವೃದ್ಧಿಗೆ ಒತ್ತು ನೀಡಿದ್ದರು. ಅದೇ ರೀತಿ ಅವರು ಹಾಕಿಕೊಂಡ ಮಾರ್ಗವನ್ನು ಮುಂದುವರೆಸುವ ಮೂಲಕ ಮುಂದಿನ ಪೀಳಿಗೆಯ ಭವಿಷ್ಯಕ್ಕೆ ಅನುಕೂಲವಾಗವಂತೆ ನಾಡಿನ ಅಭಿವೃದ್ಧಿಗೆ ವಿಶೇಷ ಗಮನ ಹರಿಸುವುದು ಅಗತ್ಯವಾಗಿದೆ ಎಂದರು. ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಟಿ.ಪಿ.ರಮೇಶ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಕನ್ನಡ ನಾಡು, ನುಡಿ ಸೇರಿದಂತೆ ಸಾಹಿತ್ಯ ಪರಿಷತ್ತು ಬೆಳವಣಿಗೆಯಲ್ಲಿ ಮೈಸೂರು ರಾಜಮನೆತನದವರ ಕೊಡುಗೆ ಅವಿಸ್ಮರಣೀಯ. 1915 ರಲ್ಲಿ ಸ್ಥಾಪನೆಗೊಂಡ ಸಾಹಿತ್ಯ ಪರಿಷತ್ತಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಕೊಡುಗೆ ಅಮೂಲ್ಯವಾಗಿದ್ದು, ಇವರು ಕನ್ನಡ ಭಾಷಾ ಬೆಳವಣಿಗೆಗೆ ಪೂರಕ ಶಕ್ತಿಯಾಗಿದ್ದರು ಎಂದರು.

ಶಾಸಕ ಡಾ.ಮಂಥರ್ ಗೌಡ ಮಾತನಾಡಿ, ನಾಡು, ನುಡಿ, ಸಾಹಿತ್ಯ, ಕಲೆ ಬಗ್ಗೆ ಮಕ್ಕಳಲ್ಲಿ ಜಾಗೃತಿ ಹಾಗೂ ಜ್ಞಾನ ಬೆಳೆಸಬೇಕು. ಕನ್ನಡ ಭಾಷೆ ರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದರು. ಪರಿಷತ್ತು ಚಟುವಟಿಕೆಗಳಿಗೆ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ಅಪೂರ್ಣಗೊಂಡಿರುವ ಕಲಾಭವನದ ಕಾಮಗಾರಿ ಪೂರ್ಣಗೊಳಿಸಲು ಈಗಾಗಲೇ ಸಚಿವರೊಂದಿಗೆ ಮಾತನಾಡಿದ್ದೇನೆ ಮುಂದಿನ ದಿನಗಳಲ್ಲಿ ಅನುದಾನ ತಂದು ಅಭಿವೃದ್ಧಿಗೆ ಕ್ರಮ ಕೈಗೊಳ್ಳುತ್ತೇನೆ ಎಂದರು.

ಜಿಲ್ಲಾ ಕಸಾಪ ಪ್ರಧಾನ ಕಾರ್ಯದರ್ಶಿ ಮುನೀರ್ ಅಹ್ಮದ್ ಕುಶಾಲನಗರ ತಾಲೂಕು ಕಸಾಪ ನೂತನ ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋಧಿಸಿದರು. ಈ ಸಂದರ್ಭ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಘಟಕದ ನೂತನ ಅಧ್ಯಕ್ಷ ಕೆ.ಎಸ್.ನಾಗೇಶ್, ತಾಲೂಕು ಕಸಾಪ ಘಟಕದ ಗೌರವ ಕಾರ್ಯದರ್ಶಿ ಎಸ್.ನಾಗರಾಜು, ಟಿ.ವಿ. ಶೈಲಾ, ಕೋಶಾಧಿಕಾರಿ ಕೆ.ವಿ.ಉಮೇಶ್, ಸಂಘಟನಾ ಕಾರ್ಯದರ್ಶಿ ಕೆ.ಬಿ.ದೇವರಾಜು, ರತ್ನಾವತಿ ಸೂದನ ಇದ್ದರು.

ಇದೇ ಸಂದರ್ಭ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಜಿಲ್ಲೆಯ ನಾಗರಿಕರ ಪರವಾಗಿ ಸನ್ಮಾನಿಸಿ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು. ಮೊದಲಿಗೆ ಕಾವೇರಿ ಪ್ರತಿಮೆಗೆ ಪೂಜೆ ಸಲ್ಲಿಸಿದ ಒಡೆಯರ್ ಅವರನ್ನು ಮೆರವಣಿಗೆ ಮೂಲಕ ಕರೆತರಲಾಯಿತು. ಕಲಾಭವನದ ಆವರಣದಲ್ಲಿ ಒಡೆಯರ್ ಹಾಗೂ ಶಾಸಕರು ತೆಂಗಿನ ಸಸಿ ನೆಟ್ಟು ನೀರು ಹಾಕಿದರು.

ಮಡಿಕೇರಿಯಲ್ಲಿ ಅರಣ್ಯ ಹುತಾತ್ಮರಿಗೆ ಗೌರವ



ಮಡಿಕೇರಿ, ಸೆ.11– ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯು ನಗರದ ಅರಣ್ಯ ಭವನದಲ್ಲಿ ಸೋಮವಾರ ನಡೆಯಿತು.

ನಾಡಿನ ಅರಣ್ಯ ಮತ್ತು ವನ್ಯಜೀವಿ ಸಂಪತ್ತು ಸಂರಕ್ಷಿಸುವ ಸಂದರ್ಭದಲ್ಲಿ ಪ್ರಾಣತ್ಯಾಗ ಮಾಡಿದ ಅರಣ್ಯ ಇಲಾಖೆಯ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಏರ್ ಮಾರ್ಷಲ್ (ನಿವೃತ್ತ) ಕೆ.ಸಿ.ಕಾರ್ಯಪ್ಪ ಕೊಡಗು ವೃತ್ತ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮನೋಜ್ ಕುಮಾರ್ ತ್ರಿಪಾಠಿ, ಜಿ.ಪಂ.ಸಿಇಓ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಶಿವರಾಮ್ ಬಾಬು, ಮಡಿಕೇರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಎ.ಟಿ.ಪೂವಯ್ಯ, ವಿರಾಜಪೇಟೆ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿ.ಎಂ.ಶರಣಬಸಪ್ಪ, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಎಂ.ಎಸ್.ಚಂಗಪ್ಪ ಇತರರು ಅರಣ್ಯ ಹುತಾತ್ಮ ಸ್ಮಾರಕಕ್ಕೆ ಹೂಗುಚ್ಛ ಸಮರ್ಪಿಸಿ, ಗೌರವ ಸಲ್ಲಿಸಿದರು.

ಏರ್ ಮಾರ್ಷಲ್ (ನಿವೃತ್ತ) ಕೆ.ಸಿ. ಕಾರ್ಯಪ್ಪ ಮಾತನಾಡಿ, ಅರಣ್ಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುವುದು ಸವಾಲಿನ ಕೆಲಸವಾಗಿದೆ ಅರಣ್ಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುವವರಿಗೆ ಆರೋಗ್ಯ ಸೇವೆ ಸೇರಿದಂತೆ ಕಲ್ಯಾಣ ಸೇವೆಗಳು ತಲುಪಬೇಕು. ಎಲ್ಲಾ ಹಂತದ ಸಿಬ್ಬಂದಿಗಳು ತಮ್ಮ ಹಾಗೂ ಸಾರ್ವಜನಿಕರ ಸುರಕ್ಷತೆ ಕಡೆಗೂ ಗಮನಹರಿಸಬೇಕಿದೆ ಎಂದು ಸಲಹೆ ಮಾಡಿದರು.

ಜಿಪಂ ಸಿಇಓ ವರ್ಣಿತ್ ನೇಗಿ ಮಾತನಾಡಿ, ಅರಣ್ಯವಿದ್ದಲ್ಲಿ ಉತ್ತಮ ಪರಿಸರ ಉಳಿಯಲು ಸಾಧ್ಯ. ಒಳ್ಳೆಯ ಪರಿಸರ ಇದ್ದಲ್ಲಿ ಮಳೆ–ಬೆಳೆ ಕಾಣಲು ಸಾಧ್ಯ ಎಂದು ಹೇಳಿದರು. ಅರಣ್ಯ ಹುತಾತ್ಮರ ದಿನಾಚರಣೆಯ ಪಕ್ಷಿನೋಟ ಮತ್ತು ಅರಣ್ಯ ಹುತಾತ್ಮರ ಸ್ಮರಣೆಯನ್ನು ಮಡಿಕೇರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಎ.ಟಿ. ಪೂವಯ್ಯ ಅವರು ಓದಿದರು. ಅರಣ್ಯ ಇಲಾಖೆಯ ಸಿದ್ದಲಿಂಗಪ್ಪ ಅವರು ಪೆರೇಡ್ ನಡೆಸಿಕೊಟ್ಟರು. ಪೊಲೀಸ್ ಇಲಾಖೆಯ ಸಿದ್ದೇಶ್ ಮತ್ತು ತಂಡದವರು ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ಪಾಲ್ಗೊಂಡು ಗೌರವ ಸಲ್ಲಿಸಿದರು.

ಬದುಕಿರುವ ಮಹಿಳೆ ಶವಕ್ಕಾಗಿ ಅಬ್ಬಿಫಾಲ್ಸ್‌ನಲ್ಲಿ ಶೋಧನೆ...!

- ತಾನು ಬದುಕಿರುವುದಾಗಿ ಕರೆ ಮಾಡಿದ ಗೃಹಿಣಿ • 3 ದಿನದ ಶೋಧನಾ ಕಾರ್ಯಾಚರಣೆ ಸ್ಥಗಿತ
- ಫಾಲ್ಸ್ ಬಳಿ ದೊರೆತ ಬ್ಯಾಗ್‌ನಲ್ಲಿ ಮಹಿಳೆಯ ದಾಖಲೆ ಪತ್ತೆ ಹಿನ್ನೆಲೆ ಆತ್ಮಹತ್ಯೆ ಶಂಕೆ ವ್ಯಕ್ತವಾಗಿತ್ತು

ಮಡಿಕೇರಿ, ಸೆ.11– ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಗ್ರಾಮದ ವಿವಾಹಿತ ಮಹಿಳೆ ಎಂ.ಸರಸ್ವತಿ ಅವರ ನಾಪತ್ತೆ ಪ್ರಕರಣ ತಿರುವು ಪಡೆದಿದೆ. ಎಂ.ಸರಸ್ವತಿ ಜೀವಂತ ವಾಗಿದ್ದು, ಬೆಂಗಳೂರಿನಲ್ಲಿರುವುದಾಗಿ ಸಹೋದರನಿಗೆ ಕರೆ ಮಾಡಿ ತಿಳಿಸಿದ್ದಾಳೆ. ಈ ಹಿನ್ನೆಲೆಯಲ್ಲಿ ಕಳೆದ 3 ದಿನಗಳಿಂದ ಮಡಿಕೇರಿಯ ಪ್ರಸಿದ್ಧ ಪ್ರವಾಸಿ ತಾಣ ಅಬ್ಬಿ ಜಲಪಾತದಲ್ಲಿ ನಡೆಸಲಾಗುತ್ತಿದ್ದ ಶೋಧ ಕಾರ್ಯಾಚರಣೆಯನ್ನು ಸ್ಥಗಿತ ಮಾಡಲಾಗಿದೆ.

ಬ್ಯಾಗ್‌ನಿಂದ ಮೂಡಿದ ಸಂಶಯ: ಸೆ.8ರ ಶುಕ್ರವಾರ ಬೆಳಗಿನ 7 ಗಂಟೆ ಸುಮಾರಿನಲ್ಲಿ ಅಬ್ಬಿ ಫಾಲ್ಸ್‌ನ ಪ್ರವೇಶ ದ್ವಾರದ ಬಳಿಯೇ ಒಂದು ಬ್ಯಾಗ್ ಮತ್ತು ಚೂಡಿದಾರದ ಟಾಪ್ ಪತ್ತೆಯಾಗಿತ್ತು. ಪ್ರವಾಸಿಗರೋರ್ವರು ಈ ಬ್ಯಾಗ್ ಅನ್ನು ಅಲ್ಲಿನ ಟಿಕೆಟ್ ಕೌಂಟರ್ ಸಿಬ್ಬಂದಿಗೆ ನೀಡಿ ಪರಿಶೀಲಿಸುವಂತೆ ಹೇಳಿದ್ದರು. ಬ್ಯಾಗ್ ಅನ್ನು ಪರಿಶೀಲಿಸಿದ ಸಂದರ್ಭ ಸರಸ್ವತಿ ಎಂಬವರಿಗೆ ಸೇರಿದ ದಾಖಲಾತಿಗಳು ಪತ್ತೆಯಾಗಿತ್ತು. ಹಿನ್ನೆಲೆಯಲ್ಲಿ ಆಕೆ ನೀರಿಗೆ ಧುಮುಕಿ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾದ ಹಿನ್ನೆಲೆಯಲ್ಲಿ ಅಬ್ಬಿಫಾಲ್ಸ್ ಸಿಬ್ಬಂದಿ ಮಡಿಕೇರಿ ಗ್ರಾಮಾಂತರ ಠಾಣೆಯ ಪೊಲೀಸರಿಗೆ ಮಾಹಿತಿ ನೀಡಿದ್ದರು.



ಮೂರು ದಿನ ತೀವ್ರ ಶೋಧ: ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ಬೆಟ್ಟದಪುರ ಪೊಲೀಸರಿಗೆ ಮಾಹಿತಿ ನೀಡಿ ಸರಸ್ವತಿ ಜಲಪಾತಕ್ಕೆ ಧುಮುಕಿ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂಬ ಶಂಕೆಯಿಂದ ಶೋಧ ಕಾರ್ಯ ನಡೆಸಿದ್ದರು. ಅಗ್ನಿ ಶಾಮಕ ದಳ, ಎನ್.ಡಿ.ಆರ್.ಎಫ್ ಯೋಧರ ತಂಡ ಮತ್ತು ಬೆಟ್ಟದಪುರ ಪೊಲೀಸರು ಅಬ್ಬಿ ಜಲಪಾತದಲ್ಲಿ ಶುಕ್ರವಾರದಿಂದ ಭಾನುವಾರ ಸಂಜೆ ಕತ್ತಲಿನವರೆಗೆ ನಾಪತ್ತೆಯಾಗಿದ್ದ ಸರಸ್ವತಿ ಅವರಿಗಾಗಿ ಜಲಪಾತದ ಮುಂಭಾಗದ 1 ಕಿ.ಮೀ. ವ್ಯಾಪ್ತಿ ಉದ್ದಕ್ಕೂ ಶೋಧ ಕಾರ್ಯ ನಡೆಸಿದ್ದರು. ಆದರೂ ಆಕೆಯ ಬಗ್ಗೆ ಯಾವುದೇ ಸುಳಿವು ಲಭ್ಯವಾಗಿರಲಿಲ್ಲ. ಈ ನಡುವೆ ಪೊಲೀಸರು ಸರಸ್ವತಿ ಆತ್ಮಹತ್ಯೆ ಬಗ್ಗೆಯೇ ಸಂಶಯ ವ್ಯಕ್ತಪಡಿಸಿದ್ದರು.

ಸಹೋದರನಿಗೆ ಕರೆ: ಇತ್ತ ಮಡಿಕೇರಿಯಲ್ಲಿ ತೀವ್ರ ಶೋಧ ಕಾರ್ಯ ನಡೆಯುತ್ತಿದ್ದರೂ, ಮಾಹಿತಿ ನೀಡದ ಸರಸ್ವತಿ ಭಾನುವಾರ ಸಹೋದರನಿಗೆ ಬೇರೊಂದು ಮೊಬೈಲ್ ಸಂಖ್ಯೆಯಿಂದ ಕರೆ ಮಾಡಿ 'ತಾನು ಸತ್ತಿಲ್ಲ, ಬೆಂಗಳೂರಿನಲ್ಲಿ ಇರುವುದಾಗಿ' ಮಾಹಿತಿ ನೀಡಿದ್ದಾಳೆ. ಈ ಮಾಹಿತಿಯನ್ನು ಆಕೆಯ ಸಹೋದರ ಬೆಟ್ಟದಪುರ ಪೊಲೀಸರಿಗೆ ನೀಡಿದ್ದಾನೆ. ಬೆಟ್ಟದಪುರ ಪೊಲೀಸರು ಮಡಿಕೇರಿ ಗ್ರಾಮಾಂತರ ಪೊಲೀಸರಿಗೆ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ಮಡಿಕೇರಿಯ ಅಬ್ಬಿಫಾಲ್ಸ್‌ನಲ್ಲಿ ನಡೆಸಲಾಗುತ್ತಿದ್ದ ಶೋಧ ಕಾರ್ಯವನ್ನು ಕೈಬಿಡಲಾಗಿದೆ. ಬೆಟ್ಟದಪುರ ಪೊಲೀಸರು ಅಪರಿಚಿತ ಮೊಬೈಲ್ ಸಂಖ್ಯೆಯನ್ನು ಸಂಪರ್ಕಿಸಿದ ಸಂದರ್ಭ ತಾನು ಬೆಟ್ಟದಪುರ ಪೊಲೀಸ್ ಠಾಣೆಗೆ ಬರುವುದಾಗಿ ಸರಸ್ವತಿ ಮಾಹಿತಿ ನೀಡಿರುವುದಾಗಿ ಬೆಟ್ಟದಪುರ ಪೊಲೀಸ್ ಮೂಲಗಳು ತಿಳಿಸಿವೆ.

ಪತ್ತೆಯಾಗದ ಲೋಕೇಷನ್: ಬೆಟ್ಟದಪುರ ಠಾಣಾ ಪೊಲೀಸ್ ಮೂಲಗಳು ನೀಡಿದ ಮಾಹಿತಿಯಂತೆ ಸರಸ್ವತಿ ಅವರು ಬೆಂಗಳೂರಿನಲ್ಲಿ ಉಳಿದಿರುವ ನಿಖರ ಲೊಕೇಷನ್ ಪತ್ತೆಯಾಗಿಲ್ಲ. ಆಕೆಯನ್ನು ಸಂಪರ್ಕಿಸಿರುವ ಪೊಲೀಸರು ಆಕೆಯ ಮನವೊಲಿಸುವಲ್ಲಿ ಸಫಲವಾಗಿದ್ದು, ಠಾಣೆಗೆ ಬರಲು ಹೇಳಿದ್ದಾರೆ. ಸರಸ್ವತಿ ಕೂಡ ಪೊಲೀಸರ ಮನವಿಯಂತೆ ಠಾಣೆಗೆ ಬರಲು ಒಪ್ಪಿಕೊಂಡಿದ್ದಾಳೆ ಎಂದು ಮಾಹಿತಿ ನೀಡಿದ್ದಾರೆ. ಆಕೆ ಬಳಸುತ್ತಿರುವ ಮೊಬೈಲ್ ಸಂಖ್ಯೆ, ಕರೆಗಳ ಮಾಹಿತಿ ಕಲೆ ಹಾಕಿರುವ ಪೊಲೀಸರು, ಲೊಕೇಷನ್ ಪತ್ತೆಗೆ ಮುಂದಾಗಿದ್ದಾರೆ. ಆದರೆ ಆಕೆ ಬಳಸುತ್ತಿರುವ ಮೊಬೈಲ್ ನಿರಂತರವಾಗಿ ಸಂಚರಿಸುತ್ತಿರುವುದು 'ಕಾಲ್ ಡಿಟೇಲ್ ರೆಕಾರ್ಡ್' ಮೂಲಕ ಕಂಡು ಬಂದಿದೆ. ಈ ನಡುವೆ ನಾಪತ್ತೆ ಪ್ರಕರಣ ಪತ್ತೆಯಾಗುವ ಮೂಲಕ ಸುಖಾಂತ್ಯ ಕಂಡಿದ್ದು, ಪೊಲೀಸರು, ಅಗ್ನಿ ಶಾಮಕ ದಳ, ಎನ್‌ಡಿಆರ್‌ಎಫ್ ಯೋಧರ ತಂಡ ಸಹಿತ ಅಬ್ಬಿ ಫಾಲ್ಸ್ ಸಿಬ್ಬಂದಿಗಳು ನಿಟ್ಟುಸಿರು ಬಿಟ್ಟಿದ್ದಾರೆ.

ಲೆಫ್ಟಿನೆಂಟ್ ಪದವಿಗೇರಿದ ಮುರುವಂಡ ತನುಷ್ ಅಪ್ಪಯ್ಯ

ಪೊನ್ನಂಪೇಟೆ, ಸೆ.11– ಕೊಡಗಿನ ಮುರುವಂಡ ತನುಷ್ ಅಪ್ಪಯ್ಯ ಭಾರತೀಯ ಸೇನೆಯಲ್ಲಿ ಲೆಫ್ಟಿನೆಂಟ್ ಪದವಿಗೇರಿದ್ದಾರೆ. ಚೆನ್ನೈನಲ್ಲಿರುವ ಆಫೀಸರ್ಸ್ ಟ್ರೈನಿಂಗ್ ಅಕಾಡೆಮಿಯಿಂದ ಇದೇ ತಿಂಗಳ 9 ರಂದು ತೇರ್ಗಡೆಯಾಗಿ ಲೆಫ್ಟಿನೆಂಟ್ ಪದವಿಯೊಂದಿಗೆ ಹೊರಹೊಮ್ಮಿರುವ ಕೊಳ ತೋಡು ಬೈಗೋಡು ಗ್ರಾಮದ ತನುಷ್ ಅಪ್ಪಯ್ಯ ಭಾರತೀಯ ಸೇನೆಯ ಉನ್ನತಾಧಿಕಾರಿಯಾಗಿ ಪದೋನ್ನತಿ ಪಡೆಯಲಿರುವ ಕೊಡಗಿನ ಸೇನಾಧಿಕಾರಿಗಳ ಸಾಲಿಗೆ ಸೇರ್ಪಡೆಯಾಗಿದ್ದಾರೆ.



ಗೋಣಿಕೊಪ್ಪಲಿನ ಕೂರ್ಗ್ ಪಬ್ಲಿಕ್ ಶಾಲೆಯಲ್ಲಿ (ಕಾಪ್ಸ್) ದ್ವಿತೀಯ ಪಿಯುಸಿವರೆಗೆ ವ್ಯಾಸಂಗ ಮಾಡಿರುವ ತನುಷ್, ಬೆಂಗಳೂರಿನ ದಯಾನಂದ ಸಾಗರ ಇಂಜಿನಿಯರಿಂಗ್ ಕಾಲೇಜಿನಿಂದ ಸಿವಿಲ್ ಇಂಜಿನಿಯರಿಂಗ್ ಪದವಿ ಪಡೆದಿದ್ದಾರೆ. ಅಲಹಾಬಾದ್‌ನಲ್ಲಿ ಎಸ್.ಎಸ್.ಬಿ. ಪೂರ್ಣಗೊಳಿಸಿದ್ದ ಅವರು, ಶಾರ್ಟ್ ಸರ್ವಿಸ್ ಕಮಿಷನ್ ಪರೀಕ್ಷೆಯಲ್ಲಿ ಅಖಿಲ ಭಾರತ ಮಟ್ಟದ 8ನೇ ರ‍್ಯಾಂಕ್ ಪಡೆದು ಚೆನ್ನೈನ ಆಫೀಸರ್ಸ್ ಟ್ರೈನಿಂಗ್ ಅಕಾಡೆಮಿಗೆ ಸೇರಿದ್ದರು. ಇವರು ಕೊಳತೋಡು ಬೈಗೋಡು ಗ್ರಾಮದ ಮುರುವಂಡ ಎ.ಬೋಪಣ್ಣ (ಮುತ್ತು), ವಿನುತಾ (ತಾಮನೆ ಬೊಜ್ಜಂಗಡ) ದಂಪತಿಯ ಪುತ್ರ

ದಡದಹಳ್ಳಿ ರಮೇಶ್ ಅನುಮಾನಾಸ್ಪದ ಸಾವು ಪ್ರಕರಣ

ನ್ಯಾಯಾಂಗ ತನಿಖೆ, ಪತ್ನಿಗೆ ಉದ್ಯೋಗ, 50 ಲಕ್ಷ ಪರಿಹಾರಕ್ಕೆ ಆಗ್ರಹ



ಚಾಮರಾಜನಗರ ಸೆ.11– ನಗರದಲ್ಲಿ ಆಗಸ್ಟ್ 30ರಂದು ಅನುಮಾನಾಸ್ಪದವಾಗಿ ಮೃತಪಟ್ಟಿರುವ ತಾಲೂಕಿನ ದಡದಹಳ್ಳಿ ಗ್ರಾಮದ ನಿವಾಸಿ ರಮೇಶ್ ಅವರ ಸಾವಿನ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ಒಪ್ಪಿಸಬೇಕು. ಅವರ ಪತ್ನಿಗೆ ಸರ್ಕಾರಿ ಉದ್ಯೋಗ ನೀಡುವುದರ ಜೊತೆಗೆ 50ಲಕ್ಷ ರೂ. ಪರಿಹಾರ ನೀಡಬೇಕು ಎಂದು ದಲಿತ, ಪ್ರಗತಿಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಸಿ.ಎಂ. ಕೃಷ್ಣಮೂರ್ತಿ ಒತ್ತಾಯಿಸಿದರು.

ನಗರದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇನ್ನೊಂದು ವಾರದೊಳಗೆ ರಮೇಶ್ ಸಾವಿನ ಪ್ರಕರಣದ ಸತ್ಯಾಂಶ ಹೊರಬರಬೇಕು. ಇಲ್ಲದಿದ್ದಲ್ಲಿ ಜಿಲ್ಲೆಯಾದ್ಯಂತ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕಾರ್ಯಾಂಗದ ಮೇಲೆ ನಂಬಿಕೆ ಇಲ್ಲವಾಗಿದೆ. ಆದ್ದರಿಂದ ನಿವೃತ್ತ ನ್ಯಾಯಾಧೀಶರಿಂದ ಈ ಬಗ್ಗೆ ತನಿಖೆ ನಡೆಸಬೇಕು. ಈ ಮೂಲಕ ಸತ್ಯಾಂಶ ಹೊರಬರಬೇಕು. ಮೃತ ರಮೇಶ್ ಕುಟುಂಬಕ್ಕೆ ನ್ಯಾಯ ದೊರೆಯಬೇಕು ಎಂದು ಒತ್ತಾಯಿಸಿದರು. ಸರ್ಕಾರ ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಸಿದ್ದರಾಮಯ್ಯ ಅವರು ಅಹಿಂದ ಹೆಸರನ್ನು ಹೇಳಿಕೊಂಡು ಅಧಿಕಾರಕ್ಕೆ ಬಂದರು. ಅವರಿಂದ ಅಹಿಂದೂ ವರ್ಗಕ್ಕೆ ಏನೂ ಪ್ರಯೋಜನ ಆಗಿಲ್ಲ. ಕಾಂಗ್ರೆಸ್ ನಂಬಿ ದಲಿತರು ಹೆಚ್ಚಿನ ಸಂಖ್ಯೆಯಲ್ಲಿ ಆ ಪಕ್ಷವನ್ನು ಬೆಂಬಲಿಸಿ ಅಧಿಕಾರಕ್ಕೆ ತಂದರು. ಜಿಲ್ಲೆಯಲ್ಲಿ ಮೂವರು ಕಾಂಗ್ರೆಸ್ ಶಾಸಕರಿದ್ದಾರೆ. ತಮ್ಮ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದ ರಮೇಶ್ ಕುಟುಂಬಕ್ಕೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಪ್ರಯತ್ನಪಟ್ಟಿಲ್ಲ ಎಂದು ಸಿ.ಎಂ. ಕೃಷ್ಣಮೂರ್ತಿ ಆಪಾದಿಸಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಯರಿಯೂರು ರಾಜಣ್ಣ, ದಡದಹಳ್ಳಿ ಶಂಕರ್, ರಾಜಣ್ಣ, ಕುಮಾರ್, ನಾರಾಯಣಸ್ವಾಮಿ, ಚಕ್ರವರ್ತಿ, ಎಸ್.ಪಿ. ಮಹೇಶ್ ಹಾಜರಿದ್ದರು.

> ‘ಅನುಮಾನಾಸ್ಪದವಾಗಿ ಮೃತಪಟ್ಟಿರುವ ದಡದಹಳ್ಳಿ ರಮೇಶ್ ನಿಷ್ಠಾವಂತ, ಕಾಂಗ್ರೆಸ್ ಕಾರ್ಯಕರ್ತ. ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರ ಕಟ್ಟಾ ಬೆಂಬಲಿಗ. ಹೀಗಿದ್ದರೂ ಸಹ ಶಾಸಕ ಸಿ. ಪುಟ್ಟರಂಗಶೆಟ್ಟಿ ಇದುವರೆಗೂ ರಮೇಶ ಸಾವಿನ ಬಗ್ಗೆ ಎಲ್ಲೂ ಚಕಾರ ಎತ್ತಿಲ್ಲ. ಈ ಸಾವಿನ ಬಗ್ಗೆ ಪುಟ್ಟರಂಗಶೆಟ್ಟಿ ಮೌನ ವಹಿಸಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಪುಟ್ಟರಂಗಶೆಟ್ಟಿ ಅವರಿಗೆ ನೈತಿಕತೆ ಇದ್ದರೆ, ಈ ಪ್ರಕರಣವನ್ನು ಸಿಬಿಐ ಅಥವಾ ಸಿಐಡಿ ತನಿಖೆಗೆ ಒಪ್ಪಿಸಲು ಕ್ರಮ ಕೈಗೊಳ್ಳಬೇಕು. ರಮೇಶ್ ಸಾವಿನ ಪ್ರಕರಣವನ್ನು ಸರ್ಕಾರ ಮುಚ್ಚಿ ಹಾಕುವ ಪ್ರಯತ್ನ ಮಾಡುತ್ತಿದೆ. ಈ ಬಗ್ಗೆ ಸೆಪ್ಟೆಂಬರ್ 15ರ ಶುಕ್ರವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಗುವುದು.
>
> -ಸಿ.ಎಂ. ಕೃಷ್ಣಮೂರ್ತಿ, *ದಲಿತ, ಪ್ರಗತಿಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ*

ಡಿಸಿಎಫ್ ಶ್ರೀನಿವಾಸ್ ಸ್ಮಾರಕ ಬಳಿ ಅರಣ್ಯ ಹುತಾತ್ಮರ ಸ್ಮರಣೆ



ಹನೂರು, ಸೆ.11– ಸೈನಿಕರು, ಪೊಲೀಸರಂತೆ ಅರಣ್ಯ ಇಲಾಖೆ ಸಿಬ್ಬಂದಿಗಳು ಸಹ ಹಗಲಿರುಲೆನ್ನದೆ ಕರ್ತವ್ಯ ನಿರ್ವಹಿಸುತ್ತಿದ್ದೇವೆ, ಅರಣ್ಯ ಇಲಾಖೆಯ ನೂರಾರು ಸಿಬ್ಬಂದಿಗಳು ತಮ್ಮ ಪ್ರಾಣವನ್ನೇ ಕಳೆದುಕೊಂಡಿದ್ದಾರೆ ಎಂದು ಮಲೆ ಮಹದೇಶ್ವರ ವನ್ಯಜೀವಿಧಾಮದ ಡಿಎಫ್‌ಓ ಡಾ. ಸಂತೋಷ್ ಕುಮಾರ್ ತಿಳಿಸಿದರು.

ಹನೂರು ತಾಲೂಕಿನ ಕಾವೇರಿ ವನ್ಯಜೀವಿ ವಿಭಾಗ ವ್ಯಾಪ್ತಿಯ ಗೋಪಿನಾಥಂ ವಲಯದ ಯರಕೆಹಳ್ಳ ಸಮೀಪದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಅರಣ್ಯ ಮತ್ತು ವನ್ಯಪ್ರಾಣಿ ಸಂರಕ್ಷಣೆ ಕೇವಲ ಅರಣ್ಯ ಇಲಾಖೆಗೆ ಸಂಬಂಧಪಟ್ಟಿದಲ್ಲ. ಅದು ದೇಶದ ಪ್ರತಿಯೊಬ್ಬರ ಆಸ್ತಿ, ಇದನ್ನು ಪ್ರತಿಯೊಬ್ಬರು ಕಾಪಾಡುವುದು ತಮ್ಮ ಕರ್ತವ್ಯ. ನಮ್ಮ ದೇಶ ಹುಲಿಗಳ ಸಂಖ್ಯೆಯಲ್ಲಿ ನಂಬರ್ ಒನ್ ಸ್ಥಾನ ಪಡೆದಿದೆ. ಕರ್ನಾಟಕ ರಾಜ್ಯ ಎರಡನೇ ಸ್ಥಾನ ಪಡೆದಿದೆ. ಆನೆ ಗಣತಿಯಲ್ಲಿಯೂ ನಮ್ಮ ಜಿಲ್ಲೆಯು ಮುಂದಿದೆ. ನಂಬರ್ ಒನ್ ಸ್ಥಾನ ಕೇವಲ ಇಲಾಖೆಗೆ ಮಾತ್ರವಲ್ಲ ದೇಶದ ಜನರ ಆಸ್ತಿ ಎಂದು ತಿಳಿಸಿದರು.

ಕಾವೇರಿ ವನ್ಯಜೀವಿ ವಿಭಾಗದ ಎಸಿಎಫ್ ಅಂಕರಾಜು ಮಾತನಾಡಿ, ಕಾಡುಗಳ್ಳ ನರಹಂತಕ ವೀರಪ್ಪನ್‌ನಿಂದ 1990 ನವೆಂಬರ್ 10 ರಂದು ಕೀರ್ತಿಚಕ್ರ ದಿವಂಗತ ಪಿ.ಶ್ರೀನಿವಾಸ್‌ರವರ ಹತ್ಯೆಯಾದ ಹಿನ್ನೆಲೆ 1992ರಿಂದ ಕರ್ನಾಟಕ ಅರಣ್ಯ ಇಲಾಖೆ ಹುತಾತ್ಮರ ದಿನಾಚರಣೆಯನ್ನು 2012ರವರೆಗೆ ಆಚರಣೆ ಮಾಡಲಾಗುತ್ತಿತ್ತು. ನಂತರ ಭಾರತ ಸರ್ಕಾರ, ಪರಿಸರ ಮತ್ತು ಅರಣ್ಯ ಸಚಿವಾಲಯದ ನಿರ್ದೇಶನದ ಮೇರೆಗೆ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನಾಗಿ ಘೋಷಣೆ ಮಾಡಿದ ಹಿನ್ನೆಲೆ ಸೆಪ್ಟೆಂಬರ್ 11ರಂದು ಆಚರಣೆ ಮಾಡುತ್ತಿದ್ದೇವೆ. ಅರಣ್ಯ ಇಲಾಖೆಯ ಸಿಬ್ಬಂದಿಗಳು ಅರಣ್ಯ ಸಂಪತ್ತು ವನ್ಯಜೀವಿ ಸಂರಕ್ಷಣೆಗಾಗಿ ಮಾಡಿದ ತ್ಯಾಗ ಮತ್ತು ಬಲಿದಾನದ ಸ್ಮರಣೆಗಾಗಿ ಈ ದಿನವನ್ನು ಆಚರಣೆ ಮಾಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಕಾವೇರಿ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಎಂ.ಸಿ. ಸುರೇಂದ್ರ, ಎಸಿಎಫ್ ಗಳಾದ ಅಂಕರಾಜು, ನಂದಗೋಪಾಲ್, ನಿವೃತ್ತ ಡಿಎಫ್‌ಓ ಉದಯ್ ಕುಮಾರ್, ನಿವೃತ್ತ ಎಸಿಎಫ್ ವಾಸುದೇವ್, ತಮಿಳುನಾಡು ಚನ್ನಂಪಟ್ಟಿ ವಲಯ ಡಿಆರ್‌ಎಫ್ ಅರುಣ್ ಕುಮಾರ್, ಗೋಪಿನಾಥಂ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸೆಲ್ವಿ, ಉಪಾಧ್ಯಕ್ಷೆ ಮೈನಾಬಾಯಿ, ಪುದುರು ಇಡಿಸಿ ಅಧ್ಯಕ್ಷ ಕೃಷ್ಣ, ಪೊಲೀಸ್ ಇನ್ಸ್‌ಪೆಕ್ಟರ್ ನಂಜುಂಡಸ್ವಾಮಿ, ಮಲೆ ಮಹದೇಶ್ವರ ಹಾಗೂ ಕಾವೇರಿ ವನ್ಯಜೀವಿ ವಿಭಾಗದ ವಲಯ ಅರಣ್ಯಾಧಿಕಾರಿ, ಉಪವಲಯ ಅರಣ್ಯಾಧಿಕಾರಿ, ಸಿಬ್ಬಂದಿಗಳು ಸೇರಿದಂತೆ ಇನ್ನಿತರರು ಹಾಜರಿದ್ದರು.

‘ನನ್ನ ಮಣ್ಣು, ನನ್ನ ದೇಶ’ ಅಭಿಯಾನಕ್ಕೆ ಚಾಲನೆ

ಚಾಮರಾಜನಗರ, ಸೆ.11– ದೇಶಕ್ಕಾಗಿ ಪ್ರಾಣತೆತ್ತ ಹುತಾತ್ಮರಾದ ಸೈನಿಕರ ಸ್ಮರಣಾರ್ಥ ದೆಹಲಿಯ ಅಮೃತವಾಟಿಕಾದಲ್ಲಿ ನಿರ್ಮಾಣ ಮಾಡುತ್ತಿರುವ ಉದ್ಯಾನವನಕ್ಕಾಗಿ ಪ್ರತಿ ಗ್ರಾಮಗಳಲ್ಲೂ ಮಣ್ಣನ್ನು ಸಂಗ್ರಹಿಸಿ ದೆಹಲಿಗೆ ರವಾನೆ ಮಾಡುವ 'ನನ್ನ ಮಣ್ಣು, ನನ್ನ ದೇಶ' ಅಭಿಯಾನಕ್ಕೆ ಜಿಲ್ಲಾ ಬಿಜೆಪಿಯಿಂದ ನಗರದಲ್ಲಿ ಭಾನುವಾರ ಚಾಲನೆ ನೀಡಲಾಯಿತು.

ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದ ಅರಳಿ ಮರದ ಬಳಿ ಮಡಿಕೆ ಇಟ್ಟು ಪೂಜೆ ಸಲ್ಲಿಸಿ ಪಕ್ಷದ ಮಾಜಿ ಶಾಸಕರು ಸೇರಿದಂತೆ ನಾನಾ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು ಮಡಿಕೆಗೆ ಮಣ್ಣು ತುಂಬಿಸಿ ಭಾರತ್ ಮಾತಾಕೀ ಜೈ ಎಂದು ಘೋಷಣೆ ಕೂಗಿ. ಪ್ರತಿ ಮನೆ ಮನೆಗಳಿಗೆ ತೆರಳಿ ಮಣ್ಣು ಸಂಗ್ರಹಿಸುವ ಕಾರ್ಯಕ್ಕೆ ಮುಂದಾದರು.



ಅಭಿಯಾನದ ನೇತೃತ್ವ ವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಜಿ. ನಾರಾಯಣ ಪ್ರಸಾದ್ ಮಾತನಾಡಿ, ನನ್ನ ಮಣ್ಣು, ನನ್ನ ದೇಶ ಅಭಿಯಾನಕ್ಕೆ ರಾಷ್ಟ್ರ ಮಟ್ಟದಲ್ಲಿ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಷ್ಟ್ರಿಯ ಅಧ್ಯಕ್ಷ ಜೆ.ಪಿ. ನಡ್ಡಾ ನೇತೃತ್ವದಲ್ಲಿ ಚಾಲನೆ ದೊರೆತಿದೆ. ದೇಶಕ್ಕಾಗಿ ಪ್ರಾಣತೆತ್ತ ಹುತಾತ್ಮರಾದ ಸೈನಿಕರ ಸ್ಮರಣಾರ್ಥ ದೆಹಲಿಯ ಅಮೃತವಾಟಿಕಾ ಎಂಬ ಸ್ಥಳದಲ್ಲಿ ಉದ್ಯಾನ ನಿರ್ಮಿಸಲು ಈ ಮಣ್ಣನ್ನು ಸಂಗ್ರಹ ಮಾಡಲಾಗುತ್ತಿದೆ. ಪ್ರತಿ ಗ್ರಾಮಗಳಲ್ಲೂ ಮಣ್ಣನ್ನು ಸಂಗ್ರಹಿಸಿ ದೆಹಲಿಗೆ ರವಾನೆ ಮಾಡಲಾಗುತ್ತದೆ ಎಂದರು.

'ನಾವೆಲ್ಲ ಒಂದೇ' ಎಂಬ ಐಕ್ಯತಾ ಭಾವನೆ ಮೂಡಿಸುವ ಮೂಲಕ ಒಗ್ಗಟ್ಟು ಪ್ರದರ್ಶನ ಮಾಡುವುದು ನನ್ನ ಮಣ್ಣು, ನನ್ನ ದೇಶ ಅಭಿಯಾನದ ಉದ್ದೇಶವಾಗಿದೆ ಎಂದರು. ಬಳಿಕ ರಥದ ಬೀದಿಯಲ್ಲಿ ಸಾಂಕೇತಿಕವಾಗಿ ಗಣೇಶ್ ದೀಕ್ಷಿತ್, ಸುಂದರ್ ಸೇರಿದಂತೆ ಅನೇಕರ ಮನೆಗಳಿಗೆ ತೆರಳಿ ಮಣ್ಣು ಸಂಗ್ರಹಿಸಲಾಯಿತು. ಈ ಅಭಿಯಾನ ಪ್ರತಿ ಮಂಡಲ, ಮಹಾಶಕ್ತಿ, ಶಕ್ತಿ ಕೇಂದ್ರ, ಬೂತ್ ಮಟ್ಟದಲ್ಲಿ ನಡೆಯಲಿದ್ದು, ಮಣ್ಣು ಸಂಗ್ರಹ ಮಾಡಿ, ದೆಹಲಿಗೆ ಕಳುಹಿಸಿಕೊಡಲಾಗುತ್ತದೆ ಎಂದರು.

ಅಭಿಯಾನದಲ್ಲಿ ಮಾಜಿ ಶಾಸಕ ಎನ್. ಮಹೇಶ್, ಮಾಜಿ ಜಿಲ್ಲಾಧ್ಯಕ್ಷ ಆರ್. ಸುಂದರ್, ಕಾಡಾ ಮಾಜಿ ಅಧ್ಯಕ್ಷ ನಿಜಗುಣರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗಶ್ರೀ ಪ್ರತಾಪ್, ನಗರ ಘಟಕದ ಅಧ್ಯಕ್ಷ ರಾಜು, ಮುಖಂಡರಾದ ಹನುಮಂತಶೆಟ್ಟಿ, ಶಿವಣ್ಣ, ರಂಗಸ್ವಾಮಿ, ಬಿಜೆಪಿ ಜಿಲ್ಲಾ ವಕ್ತಾರ ಅಯ್ಯನಪುರ ಶಿವಕುಮಾರ್, ಓಬಿಸಿ ಜಿಲ್ಲಾ ಮೋರ್ಚಾ ಅಧ್ಯಕ್ಷ ನಟರಾಜೇಗೌಡ, ಪ್ರಧಾನ ಕಾರ್ಯದರ್ಶಿ ಗೋಪಾಲಕೃಷ್ಣ, ಸಾಮಾಜಿಕ ಜಾಲತಾಣ ವಿಭಾಗದ ಮಹದೇವಸ್ವಾಮಿ, ಜಿಲ್ಲಾ ಎಸ್‌ಸಿ ಮೋರ್ಚಾ ಅಧ್ಯಕ್ಷ ಮೂಡ್ನಾಕೂಡು ಪ್ರಕಾಶ್, ರೈತ ಮೋರ್ಚಾ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನಪ್ಪ, ಯುವ ಘಟಕದ ಪ್ರಧಾನ ಕಾರ್ಯದರ್ಶಿ ಸೂರ್ಯ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ಕಮಲಮ್ಮ, ಸುಕೇಶಿನಿ, ವನಜಾಕ್ಷಿ, ಮಹದೇವಮ್ಮ, ವೇಣುಗೋಪಾಲ್, ನಗರಸಭಾ ಸದಸ್ಯರಾದ ಮಮತಾ ಬಾಲಸುಬ್ರಮಣ್ಯ, ಮಾಜಿ ಸದಸ್ಯ ಬಸವರಾಜು, ಕೇಬಲ್ ಪಿ. ರಂಗಸ್ವಾಮಿ ಮೊದಲಾದವರು ಇದ್ದರು.

ಮಹಾದೇವಪ್ಪ ನಿಧನ

ಚಾಮರಾಜನಗರ, ಸೆ.11– ಚಾಮರಾಜನಗರದಲ್ಲಿ ಆಹಾರ ಇಲಾಖೆಯ ನಿರೀಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದ ದಾಸನೂರು ಮಹಾದೇವಪ್ಪ (72) ಭಾನುವಾರ ರಾತ್ರಿ ಅನಾರೋಗ್ಯದಿಂದ ಮೈಸೂರು ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರಿಗೆ ಪತ್ನಿ, ಪುತ್ರ ಇದ್ದಾರೆ. ಅಂತ್ಯಕ್ರಿಯೆ ಸೋಮವಾರ ದಾಸನೂರು ಗ್ರಾಮದಲ್ಲಿ ನೆರವೇರಿತು.



ಶ್ರೀವಿದ್ಯಾಗಣಪತಿ ಮಂಡಳಿ ಅಧ್ಯಕ್ಷರಾಗಿ ಕೃಷ್ಣಕುಮಾರ್

ಚಾಮರಾಜನಗರ, ಸೆ.11– ನಗರದ ರಥದ ಬೀದಿಯಲ್ಲಿರುವ ಶ್ರೀವಿದ್ಯಾ ಗಣಪತಿ ಮಂಡಳಿಗೆ 61ನೇ ಸಾಲಿನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ಸಿ.ಎಂ. ಕೃಷ್ಣಕುಮಾರ್ (ಕೃಷ್ಣಪ್ಪ) ಆಯ್ಕೆಯಾಗಿದ್ದಾರೆ.



ಪದಾಧಿಕಾರಿಗಳು: ಸಿ.ಎಂ. ಕೃಷ್ಣಕುಮಾರ್ (ಅಧ್ಯಕ್ಷರು), ಗುರುನಾಥ್ (ಗೌರವಾಧ್ಯಕ್ಷ), ಮಾದಣ್ಣ (ಗೌರವ ಕಾರ್ಯದರ್ಶಿ), ಮಹದೇವನಾಯ್ಕ (ಕಾರ್ಯಾಧ್ಯಕ್ಷರು), ಶಿವಣ್ಣ, ನಟರಾಜು, ಚಂದ್ರಶೇಖರ್ ರಾವ್, ಕೂಸಣ್ಣ, ನವೀನ್ (ಉಪಾಧ್ಯಕ್ಷರು), ಶಿವು ವಿರಾಟ್ (ಪ್ರಧಾನ ಕಾರ್ಯದರ್ಶಿ), ಚಿಕ್ಕರಾಜು (ಖಜಾಂಚಿ), ಶ್ರೀನಿಧಿ, ಶಂಕರ್, ಶಿವರಾಜ್, ಮಾರ್ಕೆಟ್ ಕುಮಾರ್, ಸಿ.ಎಸ್. ಮಹೇಶ್ (ಕಾರ್ಯದರ್ಶಿ), ಗಣೇಶ್ ದೀಕ್ಷಿತ್, ಎಸ್. ಬಾಲಸುಬ್ರಹ್ಮಣ್ಯ, ಸುರೇಶ್ ನಾಯ್ಕ, ಸುಂದರ್‌ರಾಜ್, ಮನೋಜ್ ಪಟೇಲ್, ಮಂಜುನಾಥ್‌ಗೌಡ, ಸಿ.ಎಂ. ಮಂಜುನಾಥ್, ಪ್ರದೀಪ್ ದೀಕ್ಷಿತ್ (ಗೌರವ ಸಲಹೆಗಾರರು) ಆಯ್ಕೆಯಾಗಿದ್ದಾರೆ.

ಶೈಕ್ಷಣಿಕ ಪ್ರಗತಿಗಾಗಿ ಚಾ.ನಗರ ವಿವಿ–ಯುರೋಪಿಯನ್ ಅಂತಾರಾಷ್ಟ್ರೀಯ ವಿವಿ ನಡುವೆ ಒಡಂಬಡಿಕೆ

ಚಾಮರಾಜನಗರ, ಸೆ.11– ಬೋಧನೆ ಮತ್ತು ಕಲಿಕೆಯ ಪ್ರಗತಿಗಾಗಿ ಶೈಕ್ಷಣಿಕ ವಿನಿಮಯ ಮತ್ತು ಸಹಕಾರವನ್ನು ಉತ್ತೇಜಿಸಲು ಚಾಮರಾಜನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ಮತ್ತು ತರ್ನಿಪ್ ಕಾಂಗ್ವೆವೆತ್, ನಿರ್ದೇಶಕರು, ಯುರೋಪಿಯನ್ ಅಂತಾರಾಷ್ಟ್ರೀಯ ವಿಶ್ವವಿದ್ಯಾಲಯ, ಪ್ಯಾರಿಸ್ ಫ್ರಾನ್ಸ್ ನಡುವೆ ಐದು ವರ್ಷಗಳ ಅವಧಿಗೆ ಒಡಂಬಡಿಕೆಗೆ ಸಹಿ ಹಾಕಿದರು.



ಅಧ್ಯಾಪಕರು, ಸಂಶೋಧಕರು ಮತ್ತು ವಿದ್ಯಾರ್ಥಿಗಳ ನಡುವಿನ ಶೈಕ್ಷಣಿಕ ಮತ್ತು ಸಂಶೋಧನಾ ಚಟುವಟಿಕೆಗಳ ವಿನಿಮಯ ಮಾಡಿಕೊಳ್ಳುವುದರ ಮೂಲಕ ಶೈಕ್ಷಣಿಕ ಸಹಕಾರವನ್ನು ಉತ್ತೇಜಿಸುವುದು ಮತ್ತು ಕಲಿಕೆಗಾಗಿ ಬೋಧನೆಗೆ ಅಧ್ಯಾಪಕರ ಪರಿಣತಿಯನ್ನು ಪರಸ್ಪರ ವಿನಿಮಯದ ಮೂಲಕ ಬೋಧನೆ ಮತ್ತು ಕಲಿಕೆಯ ಗುಣಮಟ್ಟವನ್ನು ಹೆಚ್ಚಿಸುವುದು ಈ ಒಡಂಬಡಿಕೆಯ ಮುಖ್ಯ ಉದ್ದೇಶವಾಗಿದೆ. ಇದರಿಂದ ನಮ್ಮ ವಿಶ್ವವಿದ್ಯಾಲಯದ ಅಧ್ಯಾಪಕರು, ಸಂಶೋಧಕರು ಮತ್ತು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ಹೆಚ್ಚಿನ ಅವಕಾಶ ಸಿಗುವುದಲ್ಲದೆ ನಮ್ಮ ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ವಿದೇಶದಲ್ಲಿ ಕೆಲವು ವಿಶೇಷ ಕೋರ್ಸ್‌ಗಳನ್ನು ಯುರೋಪಿಯನ್ ಅಂತಾರಾಷ್ಟ್ರೀಯ ವಿಶ್ವವಿದ್ಯಾಲಯ ಅಡಿಯಲ್ಲಿ ಮಾಡಲು ಅವಕಾಶವಿದೆ ಎಂದು ಚಾಮರಾಜನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸಿದ್ದರಾಮಯ್ಯ–ಬಿ.ಕೆ.ಹರಿಪ್ರಸಾದ್ ನಡುವಿನ ಭಿನ್ನಾಭಿಪ್ರಾಯ ಹೈಕಮಾಂಡ್ ಅಂಗಳಕ್ಕೆ

ನವದೆಹಲಿ: ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ನಡುವಿನ ಭಿನ್ನಾಭಿಪ್ರಾಯವು ಇದೀಗ ಕಾಂಗ್ರೆಸ್ ಹೈಕಮಾಂಡ್ ಅನ್ನು ತಲುಪಿದೆ. ಹರಿಪ್ರಸಾದ್ ವಿರುದ್ಧ ಕ್ರಮ ಕೈಗೊಳ್ಳುವಂತೆ ಸಿದ್ದರಾಮಯ್ಯ ಅವರು ವರಿಷ್ಠರಿಗೆ ಮನವಿ ಮಾಡಿದ್ದಾರೆ. ಹರಿಪ್ರಸಾದ್ ಶನಿವಾರ ನೀಡಿರುವ ಹೇಳಿಕೆ ಕುರಿತು ಮುಖ್ಯಮಂತ್ರಿಯವರು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಹಾಗೂ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ.ಸಿ.ವೇಣುಗೋಪಾಲ್ ಅವರೊಂದಿಗೆ ದೂರವಾಣಿ ಕರೆಮಾಡಿ ಮಾತನಾಡಿದ್ದಾರೆ. ಹರಿಪ್ರಸಾದ್ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಭವಿಷ್ಯದಲ್ಲಿ ಅವರು ಇಂತಹ ಹೇಳಿಕೆ ನೀಡದಿರುವಂತೆ ಎಚ್ಚರಿಕೆ ನೀಡಬೇಕು ಎಂದು ಕೋರಿದ್ದಾರೆ. ಇಂತಹ ಹೇಳಿಕೆಗಳಿಂದ ಲೋಕಸಭಾ ಚುನಾವಣೆ ಮೇಲೆ ಪರಿಣಾಮ ಬೀರಲಿದೆ ಎಂಬುದಾಗಿಯೂ ಅವರು ಹೇಳಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಒಂದನೇ ಪುಟದಿಂದ

ಕೆಂಪೇಗೌಡರ ಹೆಸರು ನಾಮಕರಣ ಮಾಡಿ

ವೇಳೆಯಲ್ಲಿ ಸಮೀಕ್ಷೆ ನಡೆಸಿದಾಗ ಮೈಸೂರಿನಲ್ಲಿ ಶೇಕಡ 5 ರಷ್ಟು ಸಾಕ್ಷರತೆ ಇತ್ತು. ಆದರೆ ಈಗ ಶೇಕಡ 80 ರಷ್ಟಾಗಿದೆ ಎಂದು ಹೇಳಿದರು. ಸಾಕ್ಷರತೆ ಇಷ್ಟು ಪ್ರಮಾಣದಲ್ಲಿ ಹೆಚ್ಚಾಗಲು ಸರ್ಕಾರದಷ್ಟೇ ಮಠಗಳ ಪಾತ್ರವೂ ಮುಖ್ಯವಾಗಿದೆ. ಶಿಕ್ಷಣ ಕ್ಷೇತ್ರಕ್ಕೆ ಎಲ್ಲಾ ಮಠಗಳು ನೀಡುತ್ತಿರುವ ಕೊಡುಗೆ ಸ್ಮರಣೀಯ ಎಂದು ಸ್ವಾಮೀಜಿ ಹೇಳಿದರು.

ಇದೇ ವೇಳೆ ಮಾತನಾಡಿದ ಮೈಸೂರಿನ ರಾಮಕೃಷ್ಣ ಆಶ್ರಮದ ಅಧ್ಯಕ್ಷ ಶ್ರೀ ಮುಕ್ತಿದಾನಂದಜೀಯವರು, ತ್ರಿವಿಧ ದಾಸೋಹದ ಮೂಲಕ ಆದಿಚುಂಚನಗಿರಿ ಮಠ ಸ್ಮರಣೀಯ ಕೆಲಸ ಮಾಡುತ್ತಿದೆ. ಧಾರ್ಮಿಕ ಕಾರ್ಯದ ಜೊತೆ ಜೊತೆಗೆ ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಸೇವೆ ಮಾಡುತ್ತಿರುವ ಕಾರಣ ಜನ ಸಾಮಾನ್ಯರಿಗೆ ತುಂಬಾ ಪ್ರಯೋಜನಕಾರಿಯಾಗಿದೆ ಎಂದರು. ದಿವಂಗತ ಶ್ರೀ ಡಾ.ಬಾಲಗಂಗಾಧರ ಸ್ವಾಮಿ ಅವರ ದೂರದೃಷ್ಟಿಯ ಫಲವಾಗಿ ಮಠ ಇವತ್ತು ವಿಸ್ತಾರವಾಗಿ ಬೆಳೆದಿದೆ. ಶ್ರೀ ಬಾಲಗಂಗಾಧರ ಸ್ವಾಮೀಜಿ ಅವರು ತೋರಿಸಿದ ಮಾರ್ಗದಲ್ಲಿ ಈಗಿನ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಸಾಗುತ್ತಿದ್ದಾರೆ. ಧಾರ್ಮಿಕ ಹಾಗೂ ಆಧ್ಯಾತ್ಮಿಕ ಚಿಂತನೆಯ ಜೊತೆಗೆ ಸ್ವಾಮೀಜಿ ವಿಜ್ಞಾನ ಮತ್ತು ತಂತಜ್ಞಾನ ಕ್ಷೇತ್ರದ ಬಗ್ಗೆಯೂ ಅಪಾರವಾದ ಜ್ಞಾನ ಹೊಂದಿದ್ದಾರೆ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಹೇಳಿದರು.

ಸಿದ್ದರಾಮಯ್ಯ ಅವರು 2013 ರಿಂದ 2018 ರವರೆಗೆ ಮುಖ್ಯಮಂತ್ರಿ ಆಗಿದ್ದ ಸಮಯದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ ಆರಂಭಿಸಿದರು. ಕೆಂಪೇಗೌಡರ ಹೆಸರಿನಲ್ಲಿ ಪ್ರಾಧಿಕಾರ ರಚನೆ ಮಾಡಿದರು. ಈ ಮೂಲಕ ಸಿದ್ದರಾಮಯ್ಯ ಅವರ ಬಗ್ಗೆ ಒಕ್ಕಲಿಗ ಸಮಾಜ ಹೆಚ್ಚಿನ ಅಭಿಮಾನ ತೋರಬೇಕು ಎಂದು ಅಭಿಪ್ರಾಯಪಟ್ಟರು.

ಬಿಜೆಪಿ–ಜೆಡಿಎಸ್ ಮೈತ್ರಿ

ಬಿಜೆಪಿ ವರಿಷ್ಠರು ಇದುವರೆಗೂ ರಾಜ್ಯ ನಾಯಕರೊಂದಿಗೆ ಸಮಾಲೋಚನೆ ನಡೆಸಿಲ್ಲ ಮತ್ತು ಅವರನ್ನು ವಿಶ್ವಾಸಕ್ಕೂ ತೆಗೆದುಕೊಂಡಿಲ್ಲ. ಕರ್ನಾಟಕ ವಿಧಾನಸಭೆ ಚುನಾವಣೆ ಸೋಲಿನ ನಂತರ ರಾಜ್ಯ ನಾಯಕರಿಗೆ ವರಿಷ್ಠರು ಸೊಪ್ಪು ಹಾಕದೇ ನಿರ್ಲಕ್ಷ್ಯ ಮಾಡಿದ್ದಾರೆ.

ಪಕ್ಷವನ್ನು ಕೆಲವರ ಕುಟುಂಬದ ಹಿಡಿತದಿಂದ ಹೊರತಂದು ಹೋರಾಟ ಮಾಡಲು ಬಿಜೆಪಿ ವರಿಷ್ಠರು ಜೆಡಿಎಸ್ ಜತೆ ಕೈ ಜೋಡಿಸಿದ್ದಾರೆ ಎನ್ನಲಾಗಿದೆ. ಮೈತ್ರಿ ಬಗ್ಗೆ ವರಿಷ್ಠರಿಂದ ಖಚಿತ ಮಾಹಿತಿ ದೊರೆಯದೇ ರಾಜ್ಯ ಬಿಜೆಪಿ ನಾಯಕರು ಗೊಂದಲಕ್ಕೆ ಸಿಲುಕಿದ್ದಾರೆ. ಈ ಬಗ್ಗೆ ಧೈರ್ಯವಾಗಿ ವರಿಷ್ಠರನ್ನು ಸಂಪರ್ಕಿಸಿ ಮಾಹಿತಿ ಪಡೆಯಲು ಹಿಂದೇಟು ಹಾಕಿದ್ದಾರೆ. ಮೈತ್ರಿ ವಿಚಾರ ಒಂದು ಹಂತ ತಲುಪುತ್ತಿದ್ದಂತೆ ವಿಧಾನಸಭೆ ಪ್ರತಿಪಕ್ಷದ ನಾಯಕನ ಆಯ್ಕೆ ಮತ್ತು ಬಿಜೆಪಿ ರಾಜ್ಯಾಧ್ಯಕ್ಷರ ನೇಮಕಕ್ಕೂ ವರಿಷ್ಠರು ಚಾಲನೆ ನೀಡಲಿದ್ದಾರೆ ಎನ್ನಲಾಗಿದೆ.

ಬೆಂಗಳೂರು ಬಂದ್ ವಾಪಸ್

ಅವರು, ಖಾಸಗಿ ಸಾರಿಗೆ ಒಕ್ಕೂಟಕ್ಕೆ ಕೆಲ ಬೇಡಿಕೆ ಈಡೇರಿಸಲು ಭರವಸೆ ನೀಡಿದ್ದೇನೆ. ಮತ್ತೆ ಕೆಲವು ಬೇಡಿಕೆಗಳನ್ನು ಈಡೇರಿಸಲು ಸಮಯಬೇಕಾಗುತ್ತದೆ. ನಾನು ಖಾಸಗಿ ಸಾರಿಗೆಯವರ ಪರ ಇದ್ದೇನೆ. ರಾಜ್ಯದಲ್ಲಿ ಯಾವುದೇ ಅನುಮತಿ ಇಲ್ಲದೆ ಬೈಕ್, ಟ್ಯಾಕ್ಸಿ ಓಡಿಸುತ್ತಿದ್ದಾರೆ. ಸದ್ಯದಲ್ಲೇ ಹೊಸ ಆಪ್ ಮಾಡಿಕೊಡುತ್ತೇವೆ ಎಂದು ತಿಳಿಸಿದರು.

ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆಗೆ ಸಭೆ ಮಾಡುತ್ತೇನೆ. ವಸತಿ ನೀಡುವ ಬಗ್ಗೆ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಜೊತೆ ಮತ್ತೊಮ್ಮೆ ಚರ್ಚಿಸುತ್ತೇನೆ. ಖಾಸಗಿ ಬಸ್ ಮಾಲೀಕರ ಸಮಸ್ಯೆ ಬಗ್ಗೆ ಸಿದ್ದರಾಮಯ್ಯ ಜತೆ ಚರ್ಚಿಸುತ್ತೇನೆ. ಕಾನೂನು ಬಾಹಿರವಾಗಿ ಗೂಡ್ಸ್ ವಾಹನ ಓಡಿಸಿದರೆ ಕ್ರಮ ಕೈಗೊಳ್ಳುತ್ತೇವೆ ಎಂದು ರಾಮಲಿಂಗಾ ರೆಡ್ಡಿ ಎಚ್ಚರಿಸಿದ್ದಾರೆ. ಓಲಾ, ಉಬರ್, ರಾಪಿಡೊ ಬಗ್ಗೆ ನ್ಯಾಯಾಲಯದಲ್ಲಿ ಪ್ರಕರಣ ನಡೆಯುತ್ತಿದೆ. ಒಂದು ನಗರ, ಒಂದು ದರ ಮಾಡುವ ಬಗ್ಗೆಯೂ ಕ್ರಮ ಕೈಗೊಳ್ಳುತ್ತೇವೆ. ಚಾಲಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ 17 ಕೋಟಿ ರೂ. ಅನುದಾನ ನೀಡಲಿದ್ದೇವೆ. ಬಸ್ ಮಾಲೀಕರ ಸಂಘದ ಬೇಡಿಕೆ ಬಗ್ಗೆ ಸಿಎಂ ಜತೆ ಚರ್ಚೆ ಆಗಬೇಕು ಎಂದು ರಾಮಲಿಂಗಾ ರೆಡ್ಡಿ ಹೇಳಿದ್ದಾರೆ.

ಎಕ್ಸ್‌ಪ್ರೆಸ್ ವೇನಲ್ಲಿ ದರೋಡೆ

ಶ್ರೀರಂಗ ಪಟ್ಟಣದ ಗಂಜಾಂ ಬಳಿ ಸೋಮವಾರ ಮುಂಜಾನೆ ಸಂಭವಿಸಿದೆ. ಕೊಡಗು ಮೂಲದ ಚಲನ್ ದಂಪತಿ ಚಿನ್ನ ಕಳೆದುಕೊಂಡವರು. ಬೆಂಗಳೂರಿನಿಂದ ಮಡಿಕೇರಿಗೆ ಕಾರಿನಲ್ಲಿ ತೆರಳುತ್ತಿದ್ದಾಗ ತಡೆದು, ತಾವು ಪೊಲೀಸ ರೆಂದು ಹೇಳಿ, ಕೊನೆಗೆ ಮಾರಕಾಸ್ತ್ರ ತೋರಿ ಸಿದ ದುಷ್ಕರ್ಮಿಗಳು ಸುಮಾರು 2 ಲಕ್ಷ ರೂ. ಮೌಲ್ಯದ 30 ಗ್ರಾಂ ತೂಕದ ಚಿನ್ನದ ಸರ ದರೋಡೆ ಮಾಡಿದ್ದಾರೆ.

ಈಗಾಗಲೇ ಎಕ್ಸ್‌ಪ್ರೆಸ್ ವೇನಲ್ಲಿ ಪೊಲೀಸರೆಂದು ಹೇಳಿಕೊಂಡು 3 ಬಾರಿ ದರೋಡೆ ಮಾಡಿರುವ ದುಷ್ಕರ್ಮಿಗಳು ಈಗ 4ನೇ ದರೋಡೆಯನ್ನು ಯಶಸ್ವಿಯಾಗಿ ಮುಗಿಸಿದ್ದಾರೆ. ನಿಂತಿರುವ ಕಾರು ಅಥವಾ ನಿಧಾನವಾಗಿ ಸಾಗುವ ಕಾರುಗಳನ್ನೇ ಟಾರ್ಗೆಟ್ ಮಾಡಿ, ನಾವು ಪೊಲೀಸರು ಎಂದು ಹೇಳಿಕೊಂಡು ಕಾರಿನಿಂದ ಪ್ರಯಾಣಿಕರನ್ನು ಇಳಿಸಿ, ದರೋಡೆ ಮಾಡುತ್ತಿರುವುದು ಸಾರ್ವಜನಿಕರಲ್ಲಿ ಭಯ ಮೂಡಿಸಿದೆ. ಸೋಮವಾರ ಬೆಳಗಿನ ಜಾವ ಕೂಡ ಪೊಲೀಸರು ಎಂದು ಹೇಳಿಕೊಂಡು ದರೋಡೆ ಮಾಡಿದ್ದು, ದರೋಡೆಗೊಳಗಾದ ದಂಪತಿ ಶ್ರೀರಂಗಪಟ್ಟಣ ಪೊಲೀಸರಿಗೆ ದೂರು ನೀಡಿದ್ದು, ಪ್ರಕರಣ ದಾಖಲಾಗಿದೆ.

ಪಾಕಿಸ್ತಾನ ಧೂಳೀಪಟ

ಆಟವಾಡಿದರು. ಬಳಿಕ ಪಾಕ್ ಬೌಲರ್‌ಗಳ ಮೇಲೆ ಸವಾರಿ ಮಾಡಿದ ಈ ಜೋಡಿ 3ನೇ ವಿಕೆಟ್‌ಗೆ ದಾಖಲೆಯ 233ರನ್‌ಗಳ ಜೊತೆಯಾಟವಾಡಿ ತಂಡದ ಬೃಹತ್ ಮೊತ್ತಕ್ಕೆ ಕಾರಣರಾದರು. ಭಾರತ ತಂಡದ ಪರ ಅದ್ಭುತ ಬ್ಯಾಟಿಂಗ್ ಪ್ರದರ್ಶನ ತೋರಿದ ವಿರಾಟ್ ಕೊಹ್ಲಿ ಕೇವಲ 94 ಎಸೆತಗಳಲ್ಲಿ 3 ಸಿಕ್ಸರ್, 9 ಬೌಂಡರಿ ಒಳಗೊಂಡ ಅಜೇಯ 122 ರನ್ ಗಳಿಸಿದರು. ಆ ಮೂಲಕ ಏಕದಿನ ಕ್ರಿಕೆಟ್‌ನಲ್ಲಿ 47ನೇ ಶತಕ ಸಿಡಿಸಿ ಸಂಭ್ರಮಿಸಿದರು. ಇದಕ್ಕೂ ಮುನ್ನ 90 ರನ್ ಗಳಿಸುತ್ತಿದ್ದಂತೆ ಕೊಹ್ಲಿ 13000 ಏಕದಿನ ರನ್‌ಗಳನ್ನು ದಾಖಲಿಸಿದರು. ಇನ್ನು ವಿರಾಟ್ ಕೊಹ್ಲಿಗೆ ಮತ್ತೊಂದು ತುದಿಯಲ್ಲಿ ದೀರ್ಘಾವಧಿ ಸಾಥ್ ನೀಡಿದ್ದ ಕೆ.ಎಲ್ ರಾಹುಲ್ 106 ಎಸೆತಗಳಲ್ಲಿ 2 ಸಿಕ್ಸರ್, 12 ಬೌಂಡರಿ ಒಳಗೊಂಡ ಅಜೇಯ 111 ರನ್‌ಗಳನ್ನು ಗಳಿಸಿದರು. ಆ ಮೂಲಕ ದೀರ್ಘಾವಧಿ ಬಳಿಕ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಭರ್ಜರಿ ಕಮ್ ಬ್ಯಾಕ್ ಮಾಡಿದರು. ಅಂತಿಮವಾಗಿ ಭಾರತ ನಿಗದಿತ 50 ಓವರ್‌ಗಳಲ್ಲಿ 2ವಿಕೆಟ್ ನಷ್ಟಕ್ಕೆ 356 ರನ್ ಗಳಿಸಿತು. ಪಾಕ್ ಪರ ಶಹೀನ್ ಅಫ್ರಿದಿ, ಶದಾಬ್ ಖಾನ್ ತಲಾ ಒಂದೊಂದು ವಿಕೆಟ್ ಕಬಳಿಸಿದರು.

ಭಾರತ ನೀಡಿದ 357ರನ್‌ಗಳ ಕಠಿಣ ಗುರಿ ಬೆನ್ನತ್ತಿದ ಪಾಕಿಸ್ತಾನ ಕುಲದೀಪ್ ಯಾದವ್ ಅವರ ಸ್ಪಿನ್ ದಾಳಿಗೆ ತತ್ತರಿಸಿ 32 ಓವರ್‌ಗಳಲ್ಲಿ ಕೇವಲ 128ರನ್‌ಗಳಿಗೆ ಆಲೌಟಾಗುವ ಮೂಲಕ 228ರನ್‌ಗಳ ಹೀನಾಯ ಸೋಲು ಅನುಭವಿಸಿತು. ಪಾಕ್ ಪರ ಫಖಾರ್ ಜಮಾನ್ 27, ಆಘ ಸಲ್ಮಾನ್ ಹಾಗೂ ಈಫ್ತಿಕರ್ ಅಹಮದ್ ತಲಾ 23 ರನ್ ಗಳಿಸಿದರು. ಭಾರತದ ಪರ ಕುಲದೀಪ್ ಯಾದವ್ 25 ರನ್ ನೀಡಿ 5 ವಿಕೆಟ್ ಪಡೆದು ಮಿಂಚಿದರು. ಉಳಿದಂತೆ ಬೂಮ್ರಾ, ಹಾರ್ದಿಕ್ ಪಾಂಡ್ಯ, ಶಾರ್ದೂಲ್ ಠಾಕೂರ್ ತಲಾ ಒಂದೊಂದು ವಿಕೆಟ್ ಪಡೆದರು. ಪಂದ್ಯದಲ್ಲಿ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶನ ನೀಡಿದ ಕೊಹ್ಲಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ವಿರಾಟ್‌ನ ವಿಶ್ವ ದರ್ಶನ

ಸಚಿನ್ ದಾಖಲೆ ಮುರಿದ ಬರೆದ ಕೊಹ್ಲಿ: ಏಕದಿನ ಕ್ರಿಕೆಟ್ ಇತಿಹಾಸದಲ್ಲಿ ಅತ್ಯಂತ ವೇಗವಾಗಿ 13000 ರನ್‌ಗಳನ್ನು ಪೂರ್ಣಗೊಳಿಸಿದ ವಿಶ್ವದ ಮೊದಲ ಬ್ಯಾಟ್ಸ್‌ಮನ್ ಎಂಬ ದಾಖಲೆ ವಿರಾಟ್ ಕೊಹ್ಲಿ ಬರೆದಿದ್ದಾರೆ. ಆ ಮೂಲಕ ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ದಾಖಲೆ ಮುರಿದಿದ್ದಾರೆ. ಸಚಿನ್ 321 ಇನಿಂಗ್ಸ್‌ಗಳಲ್ಲಿ ಈ ದಾಖಲೆ ಬರೆದಿದ್ದರು. ಇದೀಗ ಕೊಹ್ಲಿ ಕೇವಲ 267 ಇನಿಂಗ್ಸ್‌ಗಳಲ್ಲಿ ಈ ಮೈಲುಗಲ್ಲು ತಲುಪಿದ್ದಾರೆ. ಪಾಕಿಸ್ತಾನ ವಿರುದ್ಧದ ಪಂದ್ಯಕ್ಕೂ ಮುನ್ನ ಈ ಸಾಧನೆ ಮಾಡಲು ವಿರಾಟ್ ಕೊಹ್ಲಿಗೆ 90 ರನ್‌ಗಳ ಅಗತ್ಯವಿತ್ತು. ಅದರಂತೆ ಸೋಮವಾರ ವೃತ್ತಿ ಜೀವನದ 47ನೇ ಏಕದಿನ ಶತಕ ಸಿಡಿಸಿ ಈ ಮೈಲುಗಲ್ಲು ಸ್ಥಾಪಿಸಿದರು. ವಿರಾಟ್ ಕೊಹ್ಲಿ ಇದಕ್ಕೂ ಮುನ್ನ ಏಕದಿನ ಕ್ರಿಕೆಟ್‌ನಲ್ಲಿ ವೇಗವಾಗಿ 8000 ರನ್‌ಗಳು (175 ಇನಿಂಗ್ಸ್‌ಗಳು), 9000 ರನ್‌ಗಳು (194 ಇನಿಂಗ್ಸ್‌ಗಳು), 10,000 ರನ್‌ಗಳು (205 ಇನಿಂಗ್ಸ್‌ಗಳು), 11,000 ರನ್‌ಗಳು (222 ಇನಿಂಗ್ಸ್‌ಗಳು), 12,000 (242 ಇನಿಂಗ್ಸ್‌ಗಳು) ರನ್‌ಗಳನ್ನು ಪೂರ್ಣಗೊಳಿಸಿದ ಮೊದಲ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದರು. ಇದೀಗ 13,000 ರನ್‌ಗಳಲ್ಲಿಯೂ ದಾಖಲೆಯನ್ನು ತನ್ನದಾಗಿಸಿಕೊಂಡಿದ್ದಾರೆ.

ವೇಗವಾಗಿ 13000 ರನ್ ಪೂರ್ಣಗೊಳಿಸಿದ ಅಗ್ರ ಐವರು: ವಿರಾಟ್ ಕೊಹ್ಲಿ: 267 ಇನಿಂಗ್ಸ್‌ಗಳು, ಸಚಿನ್ ತೆಂಡೂಲ್ಕರ್: 321 ಇನಿಂಗ್ಸ್‌ಗಳು, ರಿಕಿ ಪಾಂಟಿಂಗ್: 341 ಇನಿಂಗ್ಸ್‌ಗಳು, ಕುಮಾರ ಸಂಗಕ್ಕಾರ: 362 ಇನಿಂಗ್ಸ್‌ಗಳು. ಸನತ್ ಜಯಸೂರ್ಯ: 416 ಇನಿಂಗ್ಸ್‌ಗಳು

ಹುತಾತ್ಮ ಅರಣ್ಯ ಇಲಾಖೆ ಸಿಬ್ಬಂದಿಗೆ ನಮನ

ಅರಣ್ಯ, ವನ್ಯಜೀವಿ ಸಂಪತ್ತು ಸಂರಕ್ಷಣೆಗೆ ಜೀವನವನ್ನೇ ಮುಡಿಪಾಗಿಟ್ಟವರ ಸ್ಮರಣೆ



ಮೈಸೂರು, ಸೆ.11(ಎಂಟಿವೈ)– ಮೈಸೂರಿನ ಅಶೋಕಪುರಂನ ಅರಣ್ಯ ಭವನದ ಆವರಣದಲ್ಲಿ ಸೋಮವಾರ 'ಹುತಾತ್ಮರ ದಿನ' ಆಚರಿಸಲಾಯಿತು. ವನ್ಯ ಸಂಪತ್ತಿನ ಸಂರಕ್ಷಣೆಯ ಕರ್ತವ್ಯ ವೇಳೆ ಹುತಾತ್ಮರಾದ ಅರಣ್ಯ ಸಿಬ್ಬಂದಿಯನ್ನು ಸ್ಮರಿಸಿ, ಅವರ ಆತ್ಮಕ್ಕೆ ಶಾಂತಿ ಕೋರಲಾಯಿತು.

ಇಂದು ನಡೆದ ಜಿಲ್ಲಾ ಮಟ್ಟದ ಹುತಾತ್ಮರ ದಿನ ಕಾರ್ಯಕ್ರಮದಲ್ಲಿ ಮೈಸೂರು ನಗರ ಪೊಲೀಸ್ ಆಯುಕ್ತ ರಮೇಶ್ ಬಾನೊತ್ ಹುತಾತ್ಮರ ಸ್ಮಾರಕಕ್ಕೆ ಹೂಗುಚ್ಛ ಸಮರ್ಪಿಸಿ, ಗೌರವ ಸಲ್ಲಿಸಿದರು. ಬಳಿಕ ನಗರ ಸಶಸ್ತ್ರ ಮೀಸಲು ಪಡೆಯ ಪೊಲೀಸರು ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸಿ, ಹುತಾತ್ಮ ಅರಣ್ಯ ಸಿಬ್ಬಂದಿಯ ಆತ್ಮಕ್ಕೆ ಶಾಂತಿ ಕೋರಿದರು.

ಬಳಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಗಣ್ಯರು ಹಾಗೂ ಅರಣ್ಯ ಸಿಬ್ಬಂದಿ ಹುತಾತ್ಮರ ಸ್ಮಾರಕಕ್ಕೆ ಹೂಗುಚ್ಛ ಸಮರ್ಪಿಸಿ, ನಮಿಸಿದರು. ನರಹಂತಕ ವೀರಪ್ಪನ್‌ನಿಂದ ಹತ್ಯೆಗೀಡಾದ ಡಿಸಿಎಫ್ ಶ್ರೀನಿವಾಸನ್ ಹಾಗೂ ಆನೆ ದಾಳಿಗೆ ತುತ್ತಾದ ಸಿಎಫ್ ಮಣಿಕಂದನ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಇದೇ ವೇಳೆ ಪೊಲೀಸ್ ಆಯುಕ್ತ ರಮೇಶ್ ಬಾನೊತ್ ಮಾತನಾಡಿ, ಪೊಲೀಸ್ ಹಾಗೂ ಅರಣ್ಯ ಇಲಾಖೆ ವತಿಯಿಂದ ಹುತಾತ್ಮರ ದಿನವನ್ನು ಆಚರಿಸಿ, ಕರ್ತವ್ಯದ ವೇಳೆ ಪ್ರಾಣ ತ್ಯಾಗ ಮಾಡಿದ ಸಿಬ್ಬಂದಿಯನ್ನು ಸ್ಮರಿಸಿಕೊಳ್ಳುವುದರೊಂದಿಗೆ ಅವರ ಕುಟುಂಬದವರೊಂದಿಗೆ ನಾವಿದ್ದೇವೆ ಎಂಬ ಸಂದೇಶ ನೀಡಲಾಗುತ್ತಿದೆ. ಮರಗಳ ಸಾಮೂಹಿಕ ಹನನ ತಡೆಗಟ್ಟಲು ಹಾಗೂ ಅರಣ್ಯ ಸಂರಕ್ಷಣೆಗಾಗಿ ಬುಡಕಟ್ಟು ಸಮುದಾಯವಾದ ಬಿಷ್ಣೋಯಿ ಪಂಗಡದ 363 ಮಂದಿ ಜೀವ ತೆತ್ತಿದ್ದಾರೆ. ಅವರ ಸ್ಮರಣಾರ್ಥ ಹುತಾತ್ಮರ ದಿನ ಆಚರಿಸಲಾಗುತ್ತಿದೆ ಎಂದರು.

ಅರಣ್ಯ ಸಿಬ್ಬಂದಿಯ ಕೆಲಸ ಸುಲಭವಾದುದ್ದಲ್ಲ. ಪ್ರತಿ ದಿನವೂ ಹೊಸ ಹೊಸ ಸವಾಲು ಎದುರಾಗುತ್ತಲೇ ಇರುತ್ತವೆ. ಗಸ್ತಿನಲ್ಲಿದ್ದಾಗ ಅರಣ್ಯದ ಒಳಗೆ ಎದುರಾಗುವ ಸವಾಲು, ಸ್ಮಗ್ಲರ್ಸ್ ಹಾಗೂ ಬೇಟೆಗಾರರಿಂದಾಗುವ ಸಮಸ್ಯೆ, ಅರಣ್ಯ ಒತ್ತುವರಿ ತೆರವು ಕಾರ್ಯಾಚರಣೆ ಮಾಡಬೇಕಾದ ಸಂದರ್ಭದಲ್ಲೂ ಅನೇಕ ಸವಾಲುಗಳು ಅರಣ್ಯ ಸಿಬ್ಬಂದಿಗೆ ಎದುರಾಗುತ್ತವೆ. ಇದರೊಂದಿಗೆ ಪ್ಲಾಂಟೇಷನ್ ಮಾಡುವುದು, ಅರಣ್ಯ ಸಂಪತ್ತಿನ ಬಗ್ಗೆ ಜಾಗೃತಿ ಮೂಡಿಸುವುದು ಸೇರಿದಂತೆ ಇನ್ನಿತರ ಕಾರ್ಯಗಳ ಸಂದರ್ಭದಲ್ಲಿ ಸಮರ್ಥವಾಗಿ ಎದುರಿಸಿ ಉತ್ತಮ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದರು.

ಪರಿಸರ, ವನ್ಯಜೀವಿ ಸಂರಕ್ಷಣೆಯ ಜವಾಬ್ದಾರಿ ಅರಣ್ಯ ಸಿಬ್ಬಂದಿಯ ಮೇಲಿದೆ. ತಮ್ಮ ಜವಾಬ್ದಾರಿಯನ್ನು ಅತ್ಯುತ್ತಮ ರೀತಿ ನಿರ್ವಹಿಸಿ, ಮುಂದಿನ ಪೀಳಿಗೆಗೆ ಉತ್ತಮ ಅರಣ್ಯ, ಪರಿಸರ ಕೊಡುಗೆ ನೀಡುವಲ್ಲಿ ನಿಮ್ಮ ಪಾತ್ರ ಬಹುಮುಖ್ಯ. ಇತ್ತೀಚಿನ ದಿನಗಳಲ್ಲಿ ವಿವಿಧ ಕಾರಣದಿಂದ ಪ್ರಾಣಿ, ಪಕ್ಷಿ, ಸಸ್ಯ ಸಂಕುಲಕ್ಕೆ ಹಾನಿಯಾಗುತ್ತಿದೆ. ಇಂದು ಪರಿಸರ ಸಂರಕ್ಷಿಸದಿದ್ದರೆ, ಜನರ ಜೀವನ ಕಷ್ಟಕರವಾಗಿರುತ್ತದೆ. ಪರಿಸರದ ಸಮತೋಲನ ತಪ್ಪುತ್ತದೆ. ಈಗಾಗಲೇ ಮಳೆಗಾಲದಲ್ಲೇ ಮಳೆ ಬರದಂತಹ ಸ್ಥಿತಿ ನಿರ್ಮಾಣವಾಗಿದೆ. ಈ ಎಲ್ಲವೂ ಪರಿಸರ ಮಾಲಿನ್ಯ, ಅರಣ್ಯದ ಕೊರತೆಯಿಂದಲೇ ಸಂಭವಿಸುತ್ತಿದೆ. ಹಾಗಾಗಿ ಪರಿಸರ ಸಂರಕ್ಷಣೆಯಲ್ಲಿ ಅರಣ್ಯ ಇಲಾಖೆಗೆ ಜನರ ಸಹಕಾರವೂ ಅಗತ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ(ಸಿಎಫ್) ಡಾ.ಮಾಲತಿಪ್ರಿಯಾ ಮಾತನಾಡಿ, ಕರ್ತವ್ಯದ ವೇಳೆ ಹುತಾತ್ಮರಾದ ಸಿಬ್ಬಂದಿಯನ್ನು ಸ್ಮರಿಸುವುದರೊಂದಿಗೆ, ಕರ್ತವ್ಯದ ವೇಳೆ ಎಲ್ಲರೂ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು. ಅರಣ್ಯ ಸಂಪತ್ತಿನ ಸಂರಕ್ಷಣೆಗೆ ಪಣ ತೊಡಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಡಿಸಿಎಫ್ ಡಾ.ಕೆ.ಎನ್. ಬಸವರಾಜು 1966ರಿಂದ 2023ರ ಸೆಪ್ಟೆಂಬರ್‌ವರೆಗೆ ಹುತಾತ್ಮರಾದ 59 ಮಂದಿ ಅರಣ್ಯ ಸಿಬ್ಬಂದಿಯ ನಾಮ ವಾಚನ ಮಾಡಿದರು. ಬಳಿಕ ಎಲ್ಲರೂ 2 ನಿಮಿಷ ಮೌನಾಚರಣೆ ಮಾಡಿದರು.

ಕಾರ್ಯಕ್ರಮದಲ್ಲಿ ಮೈಸೂರು ವನ್ಯಜೀವಿ ವಿಭಾಗದ ಡಿಸಿಎಫ್ ಸೌರಭ್ ಕುಮಾರ್, ಕಾರ್ಯಯೋಜನೆ ವಿಭಾಗದ ಡಿಸಿಎಫ್ ಲಿಂಗರಾಜ, ಮೃಗಾಲಯದ ಕಾರ್ಯ ನಿರ್ವಾಹಕ ನಿರ್ದೇಶಕ ಡಿ.ಮಹೇಶ್ ಕುಮಾರ್, ಎಸಿಎಫ್ ಲಕ್ಷ್ಮೀಕಾಂತ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

> ಖಾಕಿ ಸಮವಸ್ತ್ರ ಧರಿಸಿದ ಅರಣ್ಯ ಹಾಗೂ ಪೊಲೀಸ್ ಸಿಬ್ಬಂದಿ, ಹಗಲು–ರಾತ್ರಿ ಎನ್ನದೆ ಕೆಲಸ ಮಾಡಬೇಕಾಗುತ್ತದೆ. ಈ ಸಮವಸ್ತ್ರ ಧರಿಸಿರುವ ಸಿಬ್ಬಂದಿಗೆ ಹಬ್ಬ, ವಾರದ ಬಿಡುವು ಸೇರಿದಂತೆ ಯಾವುದೇ ರಜಾ ದಿನಗಳನ್ನು ಕಳೆಯಲು ಸಾಧ್ಯವಾಗುವುದಿಲ್ಲ. ರಜೆ ಇದ್ದೂ ಅನಿವಾರ್ಯವಾದರೆ ಕರ್ತವ್ಯಕ್ಕೆ ಹಾಜರಾಗಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿಯ ಕೆಲಸ ಶ್ಲಾಘನೀಯ ಎಂದು ಅಭಿಪ್ರಾಯಪಟ್ಟರು.
>
> **ರಮೇಶ್ ಬಾನೊತ್,**
> ಪೊಲೀಸ್ ಆಯುಕ್ತ

ಪ್ರತಿ ವೃತ್ತಿಯಲ್ಲೂ ಭಗವಂತನ ಕಾಣಬಹುದು

ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳವರ ಅಭಿಮತ



ಮೈಸೂರು, ಸೆ.11(ಎಸ್‌ಪಿಎನ್)–ನಾವು ಮಾಡುವ ವೃತ್ತಿಯಲ್ಲಿ ನಿತ್ಯ ಪೂಜೆ ಮಾಡುವ ಭಗವಂತನನ್ನು ಕಾಣಬಹುದು. ಇದು ವೃತ್ತಿಯನ್ನು 'ದೇವರ ಸೇವೆ' ಎಂದು ಭಾವಿಸಿದಾಗ ಮಾತ್ರ ಸಾಧ್ಯ ಎಂದು ಉಡುಪಿ ಪೇಜಾವರ ಅಧೋಕ್ಷಜ ತೀರ್ಥ ಪೀಠದ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀಪಾದಂಗಳವರು ಅಭಿಪ್ರಾಯಪಟ್ಟರು.

ಮೈಸೂರು–ಕೆಆರ್‌ಎಸ್ ರಸ್ತೆಯಲ್ಲಿರುವ ಶ್ರೀ ರಾಮಕೃಷ್ಣಾಶ್ರಮದಲ್ಲಿ ಆಶೀರ್ವಚನ ನೀಡುತ್ತ, ದೇಶದಲ್ಲಿ ಕೋಟ್ಯಾಂತರ ಭಾರತೀಯರ ಕನಸಾಗಿರುವ ಶ್ರೀ ರಾಮಮಂದಿರ ನಿರ್ಮಾಣ ಕಾರ್ಯ ಮುಕ್ತಾಯ ಹಂತದಲ್ಲಿದೆ. ಆದರೆ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ರಾಮರಾಜ್ಯ ಕನಸು ನನಸಾಗಬೇಕು ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಆಧ್ಯಾತ್ಮಿಕವಾಗಿ ತೊಡಗಿಸಿಕೊಳ್ಳಲು ಅನೇಕರು ಇಚ್ಛಿಸುತ್ತಿದ್ದಾರೆ. ಓರ್ವ ವ್ಯಕ್ತಿ ದೇವರನ್ನು ಪೂಜಿಸಲು ಇಂತಿಷ್ಟು ಸಮಯ ಎಂದು ಮೀಸಲಿಡುತ್ತಾರೆ. ಆದರೆ, ದಿನದ 24 ಗಂಟೆಯೂ ದೇವರ ಸೇವೆಯಲ್ಲಿ ತೊಡಗಬೇಕಾ ಎಂಬುದಕ್ಕೆ ಯಾರ ಬಳಿಯೂ ಉತ್ತರವಿಲ್ಲ. ಹಾಗಾಗಿ ದೇವರ ಪೂಜೆ ಮಾಡಬೇಕು. ಆದರೆ, ಇತರೆ ಸೇವೆಗಳತ್ತಲೂ ಗಮನಹರಿಸಬೇಕು ಎಂದು ಕಿವಿಮಾತು ಹೇಳಿದರು.

ಅದಕ್ಕಾಗಿಯೇ ಶ್ರೀರಾಮ ಸೇವೆ ಎಂದರೆ, ದೇಶ ಸೇವೆ ಮಾಡಿದಂತೆ. ಶ್ರೀರಾಮಮಂದಿರದಲ್ಲಿ ಶ್ರೀರಾಮಪ್ರಭುವಿನ ಹೆಸರಿನಲ್ಲಿ ವಿವಿಧ ರೀತಿ ಪೂಜೆ ಸಲ್ಲಿಸಲು ಇಂತಿಷ್ಟು ಎಂದು ಸೇವಾಕಾಣಿಕೆ ಪಟ್ಟಿಯನ್ನು ಹಾಕುವುದಿಲ್ಲ. ಅಲ್ಲದೆ, ಶ್ರೀರಾಮನಿಗೆ ಇಂತಹದೇ ಪೂಜೆ ಎಂದು ನಾಮಫಲಕ ಲಭ್ಯವಿರುವುದಿಲ್ಲ. ಹಾಗಾಗಿ ನಮ್ಮ ನಂತರವೂ ಶ್ರೀರಾಮನ ವ್ಯಕ್ತಿತ್ವ ಉಳಿಸುವ ಪ್ರಯತ್ನಕ್ಕೆ ನಾವು–ನೀವೆಲ್ಲರೂ ದೇಶಸೇವೆ ಮೂಲಕ ಸಾಕ್ಷಿಯಾಗಬೇಕು ಎಂದು ಕಿವಿಮಾತು ಹೇಳಿದರು.

ಭಾರತೀಯ ಪರಂಪರೆ ಉಳಿವಿಗೆ ಎಲ್ಲರೂ ಮಾತನಾಡುತ್ತಾರೆ. ಆದರೆ, ಸರ್ಕಾರಿ ಶಾಲಾ–ಕಾಲೇಜುಗಳಲ್ಲಿ ಭಾರತೀಯ ಪರಂಪರೆ ಆಚರಣೆಗೆ ಅವಕಾಶ ನೀಡುತ್ತಿಲ್ಲ. ಇದರಿಂದ ನಮ್ಮ ಮಕ್ಕಳಲ್ಲಿ ನಮ್ಮತನ ಎಲ್ಲಿ ಬರುತ್ತೆ ಎಂದ ಪ್ರಶ್ನಿಸಿದ ಶ್ರೀಗಳು, ಚಿಕ್ಕವಯಸ್ಸಿನಿಂದಲೇ ನಮ್ಮ ಸಂಸ್ಕೃತಿ ಕುರಿತು ಮಕ್ಕಳಿಗೆ ಕಲಿಸಬೇಕು ಎಂದು ಸಲಹೆ ನೀಡಿದ ಶ್ರೀಗಳು, ನಾವು ಮಾಡುವ ದೇವರ ಸೇವೆ, ಬೇರೆ ಕೆಲಸಗಳಲ್ಲೂ ಕಾಣಬಹುದು. ಆದರೆ, ಆ ಕೆಲಸದಲ್ಲಿ ಭ್ರಷ್ಟಾಚಾರ, ಸ್ವಜನ ಪಕ್ಷಪಾತಕ್ಕೆ ಎಡೆಮಾಡಿಕೊಡಬಾರದು ಎಂದು ತಿಳಿ ಹೇಳಿದರು.

ವಾಲ್ಮೀಕಿ ರಾಮಾಯಣದಲ್ಲಿ ಶ್ರೀರಾಮನ ಸದ್ಗುಣಗಳನ್ನು ಉಲ್ಲೇಖಿಸಿ, ಜನರಿಗೆ ಪರಿಚಯಿಸಿದ್ದಾರೆ. ಅದಕ್ಕಾಗಿ ಶ್ರೀರಾಮಚಂದ್ರ ಜನಮಾನಸದಲ್ಲಿ ಉಳಿದಿದ್ದಾರೆ ಎಂದರು. ಈ ವೇಳೆ ರಾಮಕೃಷ್ಣಾಶ್ರಮದ ಸ್ವಾಮಿ ಮುಕ್ತಿದಾನಂದ ಮಹಾರಾಜ್ ಉಪಸ್ಥಿತರಿದ್ದರು.

ಜಿಲ್ಲಾ ಮಟ್ಟದ ವಾಲಿಬಾಲ್ ಪಂದ್ಯಾವಳಿಯಲ್ಲಿ ಹುಣಸೂರು ಬಾಲಕರ ತಂಡ ಚಾಂಪಿಯನ್

ಮೈಸೂರು, ಸೆ.11(ಎಸ್‌ಪಿಎನ್)– ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ದೈಹಿಕ ವಿಭಾಗದಿಂದ ಹೆಚ್.ಡಿ.ಕೋಟೆ ಕ್ರೀಡಾಂಗಣದಲ್ಲಿ ಆಯೋಜನೆಗೊಂಡಿದ್ದ ಮೈಸೂರು ಜಿಲ್ಲಾ ಮಟ್ಟದ ವಾಲಿಬಾಲ್ ಪಂದ್ಯಾವಳಿ ಸೋಮವಾರ ಮುಕ್ತಾಯಗೊಂಡಿತು.

ಪಂದ್ಯಾವಳಿಯಲ್ಲಿ ಮೈಸೂರು ಜಿಲ್ಲೆಯ 9 ತಾಲೂಕಿನಿಂದ ಒಟ್ಟು 36ತಂಡಗಳು ಭಾಗವಹಿಸಿದ್ದವು. ಸರ್ಕಾರಿ ಪ್ರೌಢಶಾಲಾ ಬಾಲಕರ ವಿಭಾಗದಿಂದ ಹುಣಸೂರು ಮತ್ತು ಹೆಚ್.ಡಿ.ಕೋಟೆ ತಂಡ ಫೈನಲ್‌ನಲ್ಲಿ ಮುಖಾಮುಖಿಯಾಗಿ ಹುಣಸೂರು ಬಾಲಕರ ತಂಡ ಪ್ರಥಮ ಸ್ಥಾನ, ಹೆಚ್.ಡಿ. ಕೋಟೆ ತಂಡ ದ್ವಿತೀಯ ಸ್ಥಾನ ಗಳಿಸಿದೆ.

ಬಾಲಕಿಯರ ವಿಭಾಗದಿಂದ ಹೆಚ್.ಡಿ. ಕೋಟೆ ತಂಡ ಮತ್ತು ಮೈಸೂರು ಉತ್ತರ ವಲಯದ ತಂಡ ಫೈನಲ್ ಮುಖಾಮುಖಿಯಾಗಿ ಹೆಚ್.ಡಿ.ಕೋಟೆ ತಂಡ ಪ್ರಥಮ, ಮೈಸೂರು ಉತ್ತರ ವಲಯ ತಂಡ ದ್ವಿತೀಯ ಸ್ಥಾನಗಳಿಸಿತು.

ಸರ್ಕಾರಿ ಪ್ರಾಥಮಿಕ ಶಾಲಾ ಬಾಲಕರ ವಿಭಾಗದಿಂದ ಹುಣಸೂರು ಮತ್ತು ಮೈಸೂರು ತಂಡ ಫೈನಲ್ ಮುಖಾಮುಖಿಯಾಗಿ ಹುಣಸೂರು ತಂಡ ಪ್ರಥಮ, ಮೈಸೂರು ತಂಡ ದ್ವಿತೀಯ ಪಡೆದವು.

ಪ್ರಾಥಮಿಕ ಶಾಲಾ ವಿಭಾಗದಿಂದ ಬಾಲಕಿಯರ ತಂಡದಲ್ಲಿ ಹೆಚ್.ಡಿ. ಕೋಟೆ ಮತ್ತು ಹುಣಸೂರು ತಂಡ ಫೈನಲ್‌ನಲ್ಲಿ ಮುಖಾಮುಖಿಯಾಗಿ ಹೆಚ್.ಡಿ.ಕೋಟೆ ತಂಡ ಜಯಗಳಿಸಿ ಪ್ರಥಮ ಸ್ಥಾನ ಹುಣಸೂರು ದ್ವಿತೀಯ ಸ್ಥಾನಗಳಿಸಿದೆ ಎಂದು ಟಿಪಿಓ ರಾಮ ಪ್ರಸಾದ್ ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಉದ್ಯಾನವನ ಒತ್ತುವರಿ ಸಂಬಂಧ ಶಾಸಕರ ಚರ್ಚೆ

ಮೈಸೂರು, ಸೆ.11(ಎಸ್‌ಪಿಎನ್)–ಚಾಮರಾಜ ಕ್ಷೇತ್ರದ ವ್ಯಾಪ್ತಿಯ ಉದ್ಯಾನವನ ಒತ್ತುವರಿ ಕುರಿತು ಯಾದವಗಿರಿಯ ಮೈಗ್ರಾಪ ಕಚೇರಿಯಲ್ಲಿ ಮಂಗಳವಾರ (ಸೆ.12) ಸಂಜೆ 4 ಗಂಟೆಗೆ ನಡೆಯುವ ಸಭೆಯಲ್ಲಿ ಶಾಸಕ ಕೆ.ಹರೀಶ್‌ಗೌಡ ಭಾಗವಹಿಸಿ, ಸದಸ್ಯರೊಂದಿಗೆ ಚರ್ಚೆ ನಡೆಸಲಿದ್ದಾರೆ ಎಂದು ಎಂಜಿಪಿ ಸದಸ್ಯ ಕಿರಣ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬುಡಕಟ್ಟು ಆಶ್ರಮ ಶಾಲೆಗಳ ಮಕ್ಕಳಲ್ಲಿ ರಕ್ತಹೀನತೆ

ಕ್ಷೀರಭಾಗ್ಯ ಯೋಜನೆ ವಿಸ್ತರಣೆಗೆ ಸರ್ಕಾರಕ್ಕೆ ಮನವಿ



ಮೈಸೂರು,ಸೆ.11(ಎಂಟಿವೈ)– ಬುಡಕಟ್ಟು ಆಶ್ರಮ ಶಾಲೆಗಳ ಮಕ್ಕಳಲ್ಲಿ ರಕ್ತಹೀನತೆ ಕಂಡು ಬರುತ್ತಿದ್ದು, ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಕ್ಷೀರಭಾಗ್ಯ ಯೋಜನೆಯನ್ನು ಬುಡಕಟ್ಟು ಆಶ್ರಮ ಶಾಲೆಗಳ ಮಕ್ಕಳಿಗೂ ವಿಸ್ತರಣೆ ಮಾಡುವಂತೆ ಮನವಿ ಸಲ್ಲಿಸುವುದಾಗಿ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಉಪ ನಿರ್ದೇಶಕಿ ಬಿ.ಎಸ್. ಪ್ರಭಾ ಅರಸ್ ತಿಳಿಸಿದ್ದಾರೆ.

ಸರಗೂರು ತಾಲೂಕಿನ ಚನ್ನಗುಂಡಿ ಆಶ್ರಮ ಶಾಲೆಯಲ್ಲಿ ಕೈಟಿಪುರ, ನಂಜನಗೂಡು ತಾಲೂಕಿನ ನಾಗಣಾಪುರ ಆಶ್ರಮಶಾಲೆ, ವೆಂಕಟಗಿರಿ ಆಶ್ರಮ ಶಾಲೆಯ ಸುಮಾರು 200 ಮಕ್ಕಳಿಗೆ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಜೆಎಸ್‌ಎಸ್ ಉನ್ನತ ಶಿಕ್ಷಣ ಸಂಸ್ಥೆ ವಾಕ್ ಮತ್ತು ಶ್ರವಣ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ 21 ಆಶ್ರಮ ಶಾಲೆಗಳಿದ್ದು, 2500 ಮಕ್ಕಳಿದ್ದಾರೆ. ಇದರಲ್ಲಿ ಈಗಾಗಲೇ 8 ಆಶ್ರಮ ಶಾಲೆಗಳ 740 ಮಕ್ಕಳ ಆರೋಗ್ಯ ತಪಾಸಣೆ ನಡೆಸಲಾಗಿದೆ. ಚನ್ನಗುಂಡಿ ಆಶ್ರಮಶಾಲೆಯಲ್ಲಿ ಜೇನುಕುರುಬ, ಬೆಟ್ಟ ಕುರುಬ, ಸೋಲಿಗ ವಿದ್ಯಾರ್ಥಿಗಳು ಹೆಚ್ಚಾಗಿದ್ದಾರೆ. ಶಿಬಿರದಲ್ಲಿ ಕಿವಿ, ಮೂಗು, ಗಂಟಲು, ರಕ್ತ ಪರೀಕ್ಷೆ ದಂತ ಪರೀಕ್ಷೆ ನೇತ್ರ ಪರೀಕ್ಷೆ, ವಾಕ್ ಶ್ರವಣ ಸಮಸ್ಯೆಗಳ ಬಗ್ಗೆ ಚಿಕಿತ್ಸೆ ನೀಡಲಾಗಿದೆ ಉಚಿತವಾಗಿ ಎಲ್ಲಾ ಮಕ್ಕಳಿಗೂ ಔಷಧಿಯನ್ನು ವಿತರಿಸಲಾಗಿದೆ. ತಪಾಸಣಾ ಶಿಬಿರಗಳಲ್ಲಿ ಮಕ್ಕಳಿಗೆ ರಕ್ತಹೀನತೆ ಇರುವುದು ಕಂಡು ಬರುತ್ತಿದೆ ಅಲ್ಲದೆ, ಇನ್ನಿತರ ಆರೋಗ್ಯ ಸಮಸ್ಯೆಯೂ ಕಂಡು ಬರುತ್ತಿದೆ ಈ ಹಿನ್ನೆಲೆಯಲ್ಲಿ ಕ್ಷೀರ ಭಾಗ್ಯ ಯೋಜನೆ ಆಶ್ರಮ ಶಾಲಾ ಮಕ್ಕಳಿಗೂ ವಿಸ್ತರಣೆಯಾದರೆ, ಬುಡಕಟ್ಟು ಸಮುದಾಯ ಮಕ್ಕಳ ಆರೋಗ್ಯ ಕಾಪಾಡಲು ಸಹಕಾರಿಯಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಡಾ. ಮಹದೇವಪ್ಪ, ಡಾ. ಎಂ.ಡಿ. ಇಂದಿರಾ, ಸಮುದಾಯ ಆರೋಗ್ಯಾಧಿಕಾರಿ ಡಾ. ರವೀಶ್‌ಗಣಿ ಡಾ. ಮಾಧುರ್ಯ ಬಿ.ಎಸ್., ಡಾ. ಹರ್ಷ, ಡಾ. ಜವಹಾರ್, ಡಾ. ಅಲ್ಲೈಕ, ಮಹೇಂದ್ರ ರಾಜ ಎಂ., ವಿಜಯ ಕುಮಾರ್, ತಾಲೂಕು ಕಲ್ಯಾಣಾಧಿ ಕಾರಿ ಅರುಣ್‌ಪ್ರಭು, ಕಚೇರಿ ಅಧೀಕ್ಷಕ ನಾಗರಾಜ್ ಮುಖ್ಯ ಶಿಕ್ಷಕರಾದ ಷಣ್ಮುಖ ಆರಾಧ್ಯ, ಅಶೋಕ್, ಕೃಷ್ಣರಾಜು, ಶಿವಲಿಂಗನಾಯ್ಕ, ನಿಧಿ ಮಂಜುನಾಥ್ ಉಪಸ್ಥಿತರಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಸೆ.11– ಸೆಪ್ಟೆಂಬರ್ 12 ರಂದು ಬೆಳಗ್ಗೆ 10 ರಿಂದ ಸಂಜೆ 5:30 ಘಂಟೆಯವರೆಗೆ ನಿರ್ವಹಣಾ ಕಾಮಗಾರಿ ನಿಮಿತ್ತ ಬಿ.ಡಿ ಕಾಲೋನಿ, ಅಜೀಜ್ ಸೇಠ್ ನಗರ, 320 ಮನೆ, ಕೆಸರಿ ಕಾಲೋನಿ, ಮಹದೇವಪುರ ಮುಖ್ಯ ರಸ್ತೆ, ಶಕ್ತಿನಗರ, ರಾಜ್‌ಕುಮಾರ್ ರಸ್ತೆ, ಕಲ್ಯಾಣಗಿರಿ, ಅಕ್ಷಯ ಭಂಡಾರ್, ರಮ್ಮನಹಳ್ಳಿ, ಕಾಳಿಸಿದ್ದನಹುಂಡಿ, ಹಂಚ್ಯ, ಸಾತಗಳ್ಳಿ, ಗಳಿಗರಹುಂಡಿ, ನೆಹರು ನಗರ, ಸಾತಗಳ್ಳಿ ಗ್ರಾಮ, ಡಿ.ಟಿ.ಎಸ್.ರಾವ್ ನಗರ, ವಿಟಿಯೂ ಕಾಲೇಜು ಎದುರು, ಸನ್‌ಪ್ಯೂರ್ ಬಡಾವಣೆ, ಸಾತಗಳ್ಳಿ ಬಿ ಜೋನ್, ವಿಟಿಯೂ ಕಾಲೇಜು, ಭಾರತ್ ನಗರ, ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳು. ರಾಜೀವನಗರ 2ನೇ ಹಂತ, ಕ್ರಿಶ್ಚಿಯನ್ ಕಾಲೋನಿ, ಯಾಸಿನ್ ಮಸ್ಜಿದ್, ಎಸ್.ಬಡಾವಣೆ, ಸೂರ್ಯನಾರಾಯಣ ದೇವಸ್ಥಾನ ರಸ್ತೆ, ಆಲ್ ಬಜಾರ್ ಮಸ್ಜಿದ್ ವೃತ್ತ, ಅಂಬೇಡ್ಕರ್ ಭವನ ರಸ್ತೆ ಕ್ಯೂಬಾ ಮಸ್ಜಿದ್ ವೃತ್ತ, ನಾರಾಯಣ ಹೃದಯಾಲಯ ಆಸ್ಪತ್ರೆ, ಕಾಮನಕೆರೆಹುಂಡಿ, ಕೆ.ಹೆಚ್.ಬಿ. ಬಡಾವಣೆ, RTO–55, ಆಸಿನಾ ಬಡಾವಣೆ, ರಾಜೀವನಗರ 3ನೇ ಹಂತ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮಾಲಿನ್ಯ ನಿಯಂತ್ರಣ ಮಂಡಳಿಯ ನೂತನ ನಿರ್ದೇಶಕರಾಗಿ ನೇಮಕಗೊಂಡ ಮರಿಸ್ವಾಮಿ ಅವರನ್ನು ವಿಧಾನಪರಿಷತ್ ಸದಸ್ಯ ಡಾ. ಡಿ ತಿಮ್ಮಯ್ಯ, ಕೆಪಿಸಿಸಿ ಹಿಂದುಳಿದ ವರ್ಗದ ರಾಜ್ಯ ಕಾರ್ಯದರ್ಶಿ ಹರೀಶ್ ಮೊಗಣ್ಣ, ಮುಖಂಡ ರಮೇಶ್ ಅಭಿನಂದಿಸಿದರು

ಉತ್ತರ ಕರ್ನಾಟಕದಂತೆ ಇಲ್ಲೂ ಸಹಕಾರ ಕ್ಷೇತ್ರ ಪ್ರಬಲವಾಗಬೇಕು

ಕೃಷ್ಣರಾಜ ಸಹಕಾರ ಬ್ಯಾಂಕಿನ ವಾರ್ಷಿಕ ಮಹಾಸಭೆಯಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ ಸಲಹೆ



ಮೈಸೂರು, ಸೆ.11(ಜಿಎ)–ಸಹಕಾರ ಕ್ಷೇತ್ರ ಅತ್ಯಂತ ಪ್ರಬಲವಾದ ಕ್ಷೇತ್ರ. ಈ ಕ್ಷೇತ್ರದ ಮೂಲಕ ಬಡವರ ಕಲ್ಯಾಣ ಸಾಧ್ಯವಿದೆ. ಉತ್ತರ ಕರ್ನಾಟಕ ಭಾಗದಲ್ಲಿ ಸಹಕಾರ ಕ್ಷೇತ್ರಗಳು ಸಾಕಷ್ಟು ಪ್ರಬಲವಾಗಿವೆ. ಅದೇ ರೀತಿ ಇಲ್ಲೂ ಸಹ ಸಹಕಾರ ಕ್ಷೇತ್ರಗಳು ಪ್ರಬಲವಾಗಬೇಕು ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ಸಲಹೆ ನೀಡಿದರು.

ನಗರದ ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಕೃಷ್ಣರಾಜ ಸಹಕಾರ ಬ್ಯಾಂಕ್‌ನ ವಾರ್ಷಿಕ ಮಹಾಸಭೆ ಹಾಗೂ ಹಿರಿಯ ಸಹಕಾರಿಗಳಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿ, ನಗರದ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ಬಡವರ್ಗದವರ ಕಲ್ಯಾಣ ದೃಷ್ಟಿಯಿಂದ ಕಾರ್ಯನಿರ್ವಹಿಸುತ್ತಿದೆ ಎಂದರು.


ಸಹಕಾರ ಬ್ಯಾಂಕ್‌ಗಳು ಆರೋಗ್ಯಕರವಾಗಿ ಮುಂದುವರೆದು ಎಲ್ಲರಿಗೂ ಉತ್ತಮ ಆರ್ಥಿಕ ಸೇವೆಯನ್ನು ನೀಡಬೇಕು. ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ಎಲ್ಲರ ಸಹಕಾರದೊಂದಿಗೆ ಉತ್ತಮವಾಗಿ ಕಾರ್ಯನಿರ್ವಹಿಸಿ ಲಾಭದಾಯಕವಾಗಿ ಮುನ್ನಡೆಯುತ್ತಿರುವುದು ಶ್ಲಾಘನೀಯ ಎಂದು ಅವರು ತಿಳಿಸಿದರು.

ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್ ಮಾತನಾಡಿ, ಕೃಷ್ಣರಾಜೇಂದ್ರ ಬ್ಯಾಂಕ್ ಶತಮಾನೋತ್ಸವವನ್ನು ಪೂರೈಸಿದ ಬ್ಯಾಂಕ್ ಆಗಿದ್ದು, ಎಲ್ಲರ ಸಹಕಾರದೊಂದಿಗೆ ಬ್ಯಾಂಕ್ ಉತ್ತಮವಾಗಿ ಮುನ್ನಡೆಯುತ್ತಿದೆ. ಬ್ಯಾಂಕ್‌ನ ಅಧ್ಯಕ್ಷ ಹಾಗೂ ಪದಾಧಿಕಾರಿಗಳಾಗಿ ಕಾರ್ಯನಿರ್ವಹಿಸಿದ ಹಲವರು ರಾಜಕೀಯ ಕ್ಷೇತ್ರದಲ್ಲಿ ಉನ್ನತ ಸ್ಥಾನವನ್ನು ಅಲಂಕರಿಸಿದ್ದಾರೆ. ಬ್ಯಾಂಕ್ ಪ್ರಸಕ್ತ ವರ್ಷ 54 ಲಕ್ಷ ರೂ.ನಿವ್ವಳ ಲಾಭಗಳಿಸಿದೆ. ಕೋವಿಡ್ ಸಂದರ್ಭದಲ್ಲೂ ಸಹಕಾರಿಗಳು ಬ್ಯಾಂಕ್‌ನ ಏಳಿಗೆಗೆ ಶ್ರಮಿಸಿದ್ದಾರೆ ಎಂದರು. ಈ ಸಂದರ್ಭ ಹಿರಿಯ ಸಹಕಾರಿಗಳಾದ ಎಂ.ಮಲ್ಲಿಕಾರ್ಜುನಸ್ವಾಮಿ, ಆರ್.ರಂಗಸ್ವಾಮಿ, ಎಸ್.ಸಿದ್ಧಲಿಂಗಸ್ವಾಮಿ, ಎಸ್.ಮೋಹನ್‌ರಾಜು, ಎನ್.ಮಲ್ಲಿಕಾರ್ಜುನಸ್ವಾಮಿ, ತಿಮ್ಮಯ್ಯ, ಎಸ್.ಇ. ಸುಬ್ಬಣ್ಣ, ಚನ್ನೇಗೌಡ, ಎಂ.ಎಸ್.ಕರಿಬಸಪ್ಪ, ಎಂ.ಸಿದ್ದಪ್ಪ, ಡಿ.ಆನಂದಕುಮಾರ್, ಎ. ಸಂಪತ್‌ಕುಮಾರಾಚಾರ್, ಎಂ.ಎಸ್.ನಟರಾಜ್, ಎಂ.ಮುಕುಂದ, ಸಿದ್ದರಾಮಯ್ಯ, ಎಸ್.ಬಸಪ್ಪ ಮಹಮ್ಮದ್ ಅನ್ವರ್, ಇಂದ್ರಮ್ಮ, ಎ.ಅನಸೂಯ, ಎ.ಜಿ.ಪದ್ಮಾವತಮ್ಮ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬ್ಯಾಂಕ್ ಉಪಾಧ್ಯಕ್ಷ ಡಿ.ಬಸವರಾಜು, ನಿರ್ದೇಶಕರಾದ ತಾಯೂರು ವಿಠಲಮೂರ್ತಿ, ಎಂ.ಡಿ. ಪಾರ್ಥಸಾರಥಿ, ಎಂ.ಎನ್.ಸಿದ್ದಪ್ಪ ಎಚ್.ವಿ. ಭಾಸ್ಕರ್, ಎಂ.ಎಸ್.ಅರುಣ್‌ಸಿದ್ದಪ್ಪ, ಎಚ್.ಎನ್.ಸರ್ವಮಂಗಳ, ಬಿ.ನಾಗರಾಜ್, ಎಂ.ಎನ್.ನವೀನ್‌ಕುಮಾರ್, ಪ್ರಭಾರ ವ್ಯವಸ್ಥಾಪಕ ಡಿ.ಅನಂತವೀರಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಅಮೆರಿಕದ ನ್ಯೂಜೆರ್ಸಿಯ ರಾಬಿನ್ಸ್‌ವಿಲ್ಲೆ ಅಕ್ಷರಧಾಮದ ಉದ್ಘಾಟನೆ ಅಂಗವಾಗಿ ಏರ್ಪಡಿಸಿದ್ದ 'ಸ್ಫೂರ್ತಿ ಉತ್ಸವ'ದಲ್ಲಿ ಶ್ರೀ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ಭಾಗವಹಿಸಿದ್ದರು. ಈ ವೇಳೆ ಶ್ರೀಗಳು ಸ್ವಾಮಿ ನಾರಾಯಣ ಆಶ್ರಮದ ಮುಖ್ಯಸ್ಥರಾದ ಶ್ರೀ ಮಹಾಂತ ಸ್ವಾಮಿಗಳ ಕುಶಲೋಪರಿ ವಿಚಾರಿಸುತ್ತಿರುವುದು.



ಅಮೆರಿಕದ ನ್ಯೂಜೆರ್ಸಿಯ ರಾಬಿನ್ಸ್‌ವಿಲ್ಲೆ ಅಕ್ಷರಧಾಮದ ಉದ್ಘಾಟನೆ ಅಂಗವಾಗಿ ಏರ್ಪಡಿಸಿದ್ದ 'ಸ್ಫೂರ್ತಿ ಉತ್ಸವ'ದಲ್ಲಿ ಶ್ರೀ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಪಾಲ್ಗೊಂಡು ಆಶೀರ್ವಚನ ನೀಡಿದರು. ಬಾಬ್ ಬಾಬ್ ಹೂಗಿನ್ ಹಾಗೂ ಶ್ರೀ ಈಶ್ವರಚರಣ ಸ್ವಾಮೀಜಿ ಉಪಸ್ಥಿತರಿದ್ದರು.

ಹತಾಶ ಪರಿಸ್ಥಿತಿಯೇ ಬಿಜೆಪಿ–ಜೆಡಿಎಸ್ ಮೈತ್ರಿಗೆ ನಾಂದಿಯಾಗಿದೆ

ಸಂಸದ ಶ್ರೀನಿವಾಸ ಪ್ರಸಾದ್ ಪ್ರತಿಕ್ರಿಯೆ

ಮೈಸೂರು, ಸೆ.11(ಎಸ್‌ಬಿಡಿ)– ಕಳೆದ ವಿಧಾನಸಭೆ ಚುನಾವಣೆಯ ಸೋಲಿನ ಹತಾಶೆಯಿಂದಲೇ ಮುಂಬರುವ ಲೋಕ ಸಭಾ ಚುನಾವಣೆಗೆ ಬಿಜೆಪಿ–ಜೆಡಿಎಸ್ ಮೈತ್ರಿ ಚರ್ಚೆ ಆರಂಭವಾಗಿದೆ ಎಂದು ನೇರವಾಗಿ ಕುಟುಕಿರುವ ಬಿಜೆಪಿ ಸಂಸದ ವಿ.ಶ್ರೀನಿವಾಸ ಪ್ರಸಾದ್, ಉತ್ತರ ಭಾರತ ರಾಜ್ಯಗಳಲ್ಲಿನ ಸಂಘಟನೆ, ಪ್ರಧಾನಿ ಮೋದಿ ವರ್ಚಸ್ಸಿನಿಂದ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರುವ ಸಾಧ್ಯತೆ ಇದೆ ಎಂದಿದ್ದಾರೆ.

ಮೈಸೂರಿನಲ್ಲಿ ಖಾಸಗಿ ಸುದ್ದಿವಾಹಿನಿ ಯೊಂದಿಗೆ ಮಾತನಾಡಿರುವ ಅವರು, ಬಿಜೆಪಿ ಮತ್ತು ಜೆಡಿಎಸ್‌ಗೆ ಕಳೆದ ವಿಧಾನ ಸಭಾ ಚುನಾವಣೆಯಲ್ಲಿ ಭಾರೀ ಹಿನ್ನಡೆ ಯಾಗಿದೆ. ಹಾಗಾಗಿ ಎರಡೂ ಪಕ್ಷದವರು ಹತಾಶರಾಗಿದ್ದಾರೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ 25 ಕ್ಷೇತ್ರಗಳಲ್ಲಿ ಗೆದ್ದಿತ್ತು. ಜೆಡಿಎಸ್ ಹಾಗೂ ಕಾಂಗ್ರೆಸ್ ಒಂದೊಂದು ಸ್ಥಾನ ಗೆದ್ದಿದ್ದವು. ಆದರೆ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಬಹುಮತ ಪಡೆದು ಅಧಿಕಾರಕ್ಕೆ ಬಂದಿದೆ. ಜನರಲ್ಲಿ ಕಾಂಗ್ರೆಸ್ ಬಗ್ಗೆ ಒಲವಿದೆ ಎಂಬ ವಾತಾವರಣ ಎದ್ದು



ಕಾಣುತ್ತಿದೆ. ಹಾಗಾಗಿ ಈ ಎಲ್ಲಾ ರಾಜಕೀಯ ಬೆಳವಣಿಗೆಗಳಾಗುತ್ತಿವೆ ಎಂದು ತಿಳಿಸಿದ್ದಾರೆ.

ಹೊಂದಾಣಿಕೆ ಮಾತುಗಳಿಂದ ಯಾರಿಗೂ ಲಾಭ ಅಥವಾ ನಷ್ಟವಿಲ್ಲ. ಜೆಡಿಎಸ್ ಬಲಿಷ್ಠವಾಗಿರುವ ಕಡೆ ಕ್ಷೇತ್ರ ಬಿಟ್ಟುಕೊಡುವುದು. ಆದರೆ ಬಹಳಷ್ಟು ಕಡೆ ಜೆಡಿಎಸ್ ಸಂಘಟನೆ ಇಲ್ಲ. ಹಾಗಾಗಿ ಜೆಡಿಎಸ್‌ಗೆ ಕಡಿಮೆ ಸ್ಥಾನ ಬಿಟ್ಟುಕೊಟ್ಟು, ಹೆಚ್ಚು ಸ್ಥಾನಗಳಲ್ಲಿ ಬಿಜೆಪಿ ಸ್ಪರ್ಧಿಸುವ ಲೆಕ್ಕಾಚಾರವಿರುವಂತಿದೆ. ಅಲ್ಲದೆ ಜೆಡಿಎಸ್ ಏಕಾಂಗಿಯಾಗಿ ಚುನಾವಣೆ ಎದುರಿಸಲಾಗದ ಕಾರಣ ದೇವೇಗೌಡರು ಮೈತ್ರಿ ಸಹಜ ಎಂದಿದ್ದಾರೆ. ಈ ಬಾರಿ ಬಹಳಷ್ಟು ಕ್ಷೇತ್ರಗಳಲ್ಲಿ ಬಿಜೆಪಿ ಕೂಡ ಕಾಂಗ್ರೆಸ್ ವಿರುದ್ಧ ಹೋರಾಟ ಮಾಡಲು ಸಾಧ್ಯವಿಲ್ಲ ಎನ್ನುವುದು ವಾಸ್ತವ ಸ್ಥಿತಿ. ದಕ್ಷಿಣ ಭಾರತದ ಐದು ರಾಜ್ಯಗಳಲ್ಲಿ ಕರ್ನಾಟಕದಲ್ಲಾದರೂ ಹೆಚ್ಚು ಸ್ಥಾನ ಗೆಲ್ಲುವುದು ಬಿಜೆಪಿಗೆ ಅನಿವಾರ್ಯವಾಗಿದೆ ಎಂದರು.

ವಿಧಾನಸಭೆಯಲ್ಲಿ ಪ್ರತಿಪಕ್ಷ ನಾಯಕರಿಲ್ಲ. ಈ ಬಗ್ಗೆ ಅಸಂಬದ್ಧವಾದ ಉತ್ತರ ಹೇಳುತ್ತಾರೆ. ಪಕ್ಷ ಸಂಘಟನೆಗೆ ಸರಿಯಾದ ಅಧ್ಯಕ್ಷರಿಲ್ಲ. 123 ಗೆಲ್ಲುತ್ತೇವೆ ಎಂದು 19 ಸ್ಥಾನ ಗೆದ್ದಿರುವ ಜೆಡಿಎಸ್ ಕೂಡ ಹತಾಶವಾಗಿದೆ. ಹಾಗಾಗಿ ಸಹಜವಾಗಿ ಪರಸ್ಪರ ಹೊಂದಾಣಿಕೆ ಮಾತನ್ನಾಡುತ್ತಿದ್ದಾರೆ. ಬಿಜೆಪಿ ಪ್ರಪಂಚದಲ್ಲಿ ಅತೀ ಹೆಚ್ಚು ಸದಸ್ಯರನ್ನು ಹೊಂದಿರುವ ಪಕ್ಷ ರಾಷ್ಟ್ರೀಯ ಪಕ್ಷ ಕಾಂಗ್ರೆಸ್ ದುರ್ಬಲ ಆಗಿದ್ದರಿಂದ ಅದು ಎದ್ದು ಕಾಣುತ್ತಿದೆ ಎಂದು ಹೇಳಿದರು.

ಮುಂದಿನ ಚುನಾವಣೆಯಲ್ಲಿ ಏನಾಗುತ್ತದೆ ಎನ್ನುವುದನ್ನು ಹೇಳುವುದು ಬಹಳ ಕಷ್ಟ, ನಾನಿನ್ನೂ ಬಿಜೆಪಿ ಸದಸ್ಯನಾಗಿದ್ದೇನೆ. ಕಳೆದ ಚುನಾವಣೆಯಿಂದ ನಾನೂ ಹತಾಶನಾಗಿದ್ದೇನೆ. ಯಾವುದೇ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದ ಕಾರಣ ಕರ್ನಾಟಕದಲ್ಲಿ ಹೀನಾಯ ಸೋಲಾಯಿತು. ಬರೀ ರಾಷ್ಟ್ರೀಯ ಸಮೀಕ್ಷೆಗೆ ಮೀಸಲಾದರು. ಕಳೆದ ವಿಧಾನಸಭಾ ಚುನಾವಣೆ ನಡೆಸಿದ ರೀತಿ ನೆನೆದರೆ ಅಸಹ್ಯವಾಗುತ್ತದೆ. ಶಿಸ್ತಿನ ಪಕ್ಷ, ಪ್ರಾಮಾಣಿಕ ಪಕ್ಷ ಎನ್ನುವುದೆಲ್ಲಾ ಬೊಗಳೆ ಮಾತು. ಅದಕ್ಕೆ ಆ ರೀತಿಯ ಸೋಲು ಕಂಡಿದ್ದು. ರಾಷ್ಟ್ರೀಯ ಮಟ್ಟದ ಬಲವಾದ ಪಕ್ಷ ಇಲ್ಲದಿರುವುದರಿಂದ ಉತ್ತರಭಾರತದ ಹಲವು ರಾಜ್ಯಗಳಲ್ಲಿ ಬಿಜೆಪಿ ಸಂಘಟನೆ ತುಂಬಾ ಚೆನ್ನಾಗಿದೆ. ಹಾಗಾಗಿ ಸಣ್ಣಪುಟ್ಟ 30 ಪಕ್ಷಗಳು ಸೇರಿಕೊಂಡು ಇಂಡಿಯಾ ಸಂಘಟನೆಯಡಿ ಬಿಜೆಪಿ ಮೇಲೆರಗಿವೆ. ದಕ್ಷಿಣ ಭಾರತದಲ್ಲಿ ಹಿನ್ನೆಡೆಯಾದರೂ ಉತ್ತರ ಭಾರತದಲ್ಲಿನ ಸಂಘಟನೆ, ಜನಬೆಂಬಲ ಹಾಗೂ ಪ್ರಧಾನಿ ಮೋದಿ ವರ್ಚಸ್ಸಿನಿಂದ ಮುಂಬರುವ ಚುನಾವಣೆಯಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರುವ ಸಾಧ್ಯತೆ ಇದೆ ಎಂದು ವಿಶ್ಲೇಷಿಸಿದರು.

ಸಾಧ್ವಿನಿ ಕೊಪ್ಪರಿಂದ ಭಕ್ತಿ ಭಾವಗೀತೆ

ಮೈಸೂರು, ಸೆ. 11– ಉಡುಪಿ ಪೇಜಾವರ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀ ಪಾದಂಗಳವರ 36ನೇ ಚಾತುರ್ಮಾಸ್ಯದ ಪ್ರಯುಕ್ತ ಸಾಧ್ವಿನಿ ಕೊಪ್ಪ ಅವರಿಂದ ಭಕ್ತಿ ಭಾವ ಗೀತೆ ಕಾರ್ಯಕ್ರಮ



ವನ್ನು ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣ ಧಾಮದಲ್ಲಿ ಸೆ.12 ಮಂಗಳ ವಾರದಂದು ಸಂಜೆ 7 ಗಂಟೆಗೆ ಆಯೋಜಿಸಲಾಗಿದೆ ಎಂದು ಚಾತುರ್ಮಾಸ್ಯ ಸಮಿತಿಯ ಕಾರ್ಯಾಧ್ಯಕ್ಷ ರವಿಶಾಸ್ತ್ರಿ ತಿಳಿಸಿದ್ದಾರೆ.

ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ

ಮೈಸೂರು, ಸೆ.11– ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿ ಸೆ.14 ರಂದು ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯರ ಭವನದಲ್ಲಿ ಬೆಳಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅ.5, 6, 7ರಂದು ತೋಟಗಳ ಸ್ಪರ್ಧೆ

ಮೈಸೂರು, ಸೆ.11– ತೋಟಗಾರಿಕೆ ಇಲಾಖೆ ಮತ್ತು ಜಿಲ್ಲಾ ತೋಟಗಾರಿಕೆ ಸಂಘ



ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ನಿಶಾದ್ ಬಾಗ್ (ಕುಪ್ಪಣ್ಣ ಪಾರ್ಕ್) ಆವರಣದಲ್ಲಿ ಅ.15 ರಿಂದ 24 ರವರೆಗೆ 2023–24 ನೇ ಸಾಲಿನ ದಸರಾ ಫಲಪುಷ್ಪ ಪ್ರದರ್ಶನವನ್ನು ನಡೆಸಲು ತೀರ್ಮಾನಿಸಲಾಗಿದ್ದು, ಕೈಗಾರಿಕಾ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಆಡಳಿತ ಅಧಿಕಾರಿ ಕಚೇರಿ, ಆಸ್ಪತ್ರೆ ತೋಟಗಳು, ಖಾಸಗಿ ತೋಟಗಳು ಮತ್ತು ಮನೆ ಮುಂದಿನ ಕೈ ತೋಟಗಳು ಇತರೆ ಸಂಘ ಸಂಸ್ಥೆಗಳಿಗೆ ಅ.5, 6 ಮತ್ತು 7 ರಂದು ತೋಟಗಳ ಸ್ಪರ್ಧೆ ಏರ್ಪಡಿಸಲಾಗುವುದು.

ಸೆ.8 ರಿಂದ 30 ರವರೆಗೆ ಪ್ರವೇಶ ಪತ್ರಗಳನ್ನು ವಿತರಿಸಲಾಗುತ್ತಿದ್ದು, ಆಸಕ್ತರು ತಮ್ಮ ಸಂಸ್ಥೆಯ ಹೆಸರು ಮತ್ತು ವಿಳಾಸವನ್ನು ಜಿಲ್ಲಾ ತೋಟಗಾರಿಕೆ ಸಂಘದ ಕಚೇರಿಗೆ ಬಂದು ನೋಂದಾಯಿಸಿಕೊಂಡು ರಶೀದಿಯನ್ನು ಪಡೆದುಕೊಳ್ಳಬೇಕು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ಜಿಲ್ಲಾ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಸೆ. 11–ಮೈಸೂರಿನ ಲಕ್ಷ್ಮಿಪುರಂನಲ್ಲಿರುವ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಸೆ. 14 ರಂದು ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಆರೋಗ್ಯ ಜೀವನ ಧ್ಯಾನ ಶಿಬಿರ

ಮೈಸೂರು, ಸೆ. 11– ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಆಶ್ರಮದಲ್ಲಿ ಸೆ. 22 ರಿಂದ 24 ರವರೆಗೆ ಆರೋಗ್ಯಜೀವನ, ಧ್ಯಾನ, ಯೋಗ, ಪ್ರಾಣಾಯಾಮ, ಸುದರ್ಶನ ಕ್ರಿಯೆಯನ್ನು ಕಲಿಸುವ ಶಿಬಿರವನ್ನು ತಮಿಳು ಭಾಷೆಯಲ್ಲಿ ಏರ್ಪಡಿಸಲಾಗಿದೆ. ಶಿಬಿರವು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ. 9841019715, 9384807009 ಸಂಪರ್ಕಿಸಬಹುದು.

ಕೌಟಿಲ್ಯ ವಿದ್ಯಾಲಯದಲ್ಲಿ 'ಕ್ಯೂಟ್ ಕೃಷ್ಣ, ರ್‍ಯಾವಿಷಿಂಗ್ ರಾಧಾ' ಸ್ಪರ್ಧೆ





ಮೈಸೂರು, ಸೆ.11–ಮೈಸೂರಿನ ಕೌಟಿಲ್ಯ ವಿದ್ಯಾಲಯದಲ್ಲಿ ಕೃಷ್ಣ ಜನ್ಮಾಷ್ಟಮಿಯ ಪ್ರಯುಕ್ತ ಪುಟ್ಟ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಅದರಲ್ಲಿ ವೈಯಕ್ತಿಕ ವಿಭಾಗದಲ್ಲಿ ವೇಷಭೂಷಣ ಸ್ಪರ್ಧೆ, ಏಕಪಾತ್ರ ಅಭಿನಯ, ಕಥೆ ಹೇಳುವುದು, ಸಾಮೂಹಿಕ ನೃತ್ಯ, ಸಮೂಹ ಗಾಯನ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿತ್ತು.

'ಕ್ಯೂಟ್ ಕೃಷ್ಣ, ರ್‍ಯಾವಿಷಿಂಗ್ ರಾಧಾ' ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಕನ್ನಡ ಉಪನ್ಯಾಸಕರು, ಪತ್ರಕರ್ತರು, ಬರಹಗಾರರು, ಹಾಗೂ ಸಂಗೀತ ತಜ್ಞರು, ಆದ ಡಾ. ರಮಾ ವಿ ಬೆನ್ನೂರು, ದೀಪ ಬೆಳಗುವುದರ ಮುಖಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಪುಟಾಣಿ ಕೃಷ್ಣ ಮತ್ತು ರಾಧೆಯ ವೇಷ ಭೂಷಣಗಳಲ್ಲಿ ರಾರಾಜಿಸುತ್ತಿದ್ದ ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಅವರು, ನಮ್ಮ ಸಂಸ್ಕೃತಿಯನ್ನು ಉಳಿಸಲು ಈ ರೀತಿಯ ಸ್ಪರ್ಧೆಗಳು ಬಹಳ ಮುಖ್ಯ ಎಂದರು. ಶ್ರೀ ಕೃಷ್ಣನ ಭಗವದ್ಗೀತೆಯ ಸಂದೇಶವನ್ನು ಇದೇ ವೇಳೆ ತಿಳಿಸಿಕೊಟ್ಟರು. ಈ ಕಾರ್ಯಕ್ರಮದಲ್ಲಿ 150ಕ್ಕೂ ಹೆಚ್ಚು ಸ್ಪರ್ಧಿಗಳು ಹಾಗೂ 20ಕ್ಕೂ ಹೆಚ್ಚು ಪೂರ್ವ ಪ್ರಾಥಮಿಕ ಶಾಲೆಗಳು ಭಾಗವಹಿಸಿದ್ದವು.

ಸಂಸ್ಥೆಯ ಅಧ್ಯಕ್ಷ ಟಿ ಬಾಬು, ಸಂಸ್ಥೆಯ ಟ್ರಸ್ಟಿ ನೀತು, ಪ್ರಾಂಶುಪಾಲರಾದ ಶಶಿಕಲಾ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕೇಂದ್ರ ಸರ್ಕಾರಿ ಯೋಜನೆ 'ಪಿಎಂ ಸ್ವನಿಧಿ' ಅನುಷ್ಠಾನ ಸಂಚಾಲಕರಾಗಿ ರಾಮದಾಸ್ ನೇಮಕ

ಮೈಸೂರು, ಸೆ. 11– ಪ್ರಧಾನ ಮಂತ್ರಿ ಸ್ವನಿಧಿಯಿಂದ ಸನ್ಮಾನ್‌ವರೆಗಿನ 9 ಯೋಜನೆಗಳ ಅನುಷ್ಠಾನ ಸಂಬಂಧ ಬಿಜೆಪಿ ವತಿಯಿಂದ ಪ್ರತಿ ರಾಜ್ಯದಲ್ಲಿ ಒಬ್ಬರನ್ನು ಸಂಚಾಲಕರನ್ನಾಗಿ ನೇಮಿಸಿ, ಅವರಿಗೆ ಜವಾಬ್ದಾರಿ ನೀಡುತ್ತಿದ್ದು, ಕರ್ನಾಟಕ ರಾಜ್ಯದ ಸಂಚಾಲಕರಾಗಿ, ಮಾಜಿ ಶಾಸಕ ಎಸ್.ಎ. ರಾಮದಾಸ್ ಅವರನ್ನು ನೇಮಿಸಲಾಗಿದೆ.

ಪಿಎಂ ಸ್ವನಿಧಿ ಯೋಜನೆಯಲ್ಲಿ ರಸ್ತೆ ಬದಿ ವ್ಯಾಪಾರಿಗಳು, ಸಂಚಾರಿ ವ್ಯಾಪಾರಿಗಳು, ಪತ್ರಿಕಾ ವಿತರಕರು, ಹಾಲು ವಿತರಕರು ಹೀಗೆ ಮನೆ ಮನೆಗೆ ಸೇವೆ ಒದಗಿಸುವವರಿಗಾಗಿ ಕೇಂದ್ರ ಸರ್ಕಾರ ಮೊದಲ ಹಂತದಲ್ಲಿ 10 ಸಾವಿರ, 2ನೇ ಹಂತದಲ್ಲಿ 20 ಸಾವಿರ, 3ನೇ ಹಂತದಲ್ಲಿ 50 ಸಾವಿರ ಹಾಗೂ ನಾಲ್ಕನೇ ಹಂತದಲ್ಲಿ ಮುದ್ರಾ ಯೋಜನೆ ಮೂಲಕ 10 ಲಕ್ಷದವರೆಗೆ ಯಾವುದೇ ಗ್ಯಾರಂಟಿ ಇಲ್ಲದೆ ಬಂಡವಾಳ ಕಲ್ಪಿಸುತ್ತದೆ. ಶೇ.7 ಬಡ್ಡಿಯನ್ನು ಕೇಂದ್ರವೇ ನೀಡುತ್ತದೆ. ಡಿಜಿ



ಟಲ್ ಪೇಮೆಂಟ್‌ಗಾಗಿ ಪ್ರತಿ ತಿಂಗಳು 100 ಮಂದಿಗೆ ಕ್ಯೂ ಆರ್ ಕೋಡ್ ಮತ್ತು ಸೌಂಡ್ ಬಾಕ್ಸ್ ನೀಡಲಾಗುವುದು. 2 ಲಕ್ಷ ಅಪಘಾತ ವಿಮೆ ಕೂಡ ನೀಡಲಾಗುತ್ತದೆ. ಫಲಾನುಭವಿ ಹೆಂಡತಿ ಮತ್ತು 2 ಮಗುವಿಗೆ ಗರ್ಭಿಣಿ ಆತಿಥ್ಯ ಭತ್ಯೆ 5 ಸಾವಿರ ಮತ್ತು ಮಕ್ಕಳ ಪೋಷಣೆಗೆ 6 ಸಾವಿರ ನೀಡಲಾಗುತ್ತದೆ. 60 ವಯಸ್ಸಿನ ನಂತರ 3 ಸಾವಿರ ಪಿಂಚಣಿ ನೀಡಲಾಗುವುದು. ಪತ್ರಿಕಾ ವಿತರಕರ ನೋಂದಣಿ ಮತ್ತು ಯೋಜನೆ ಜಾರಿಗೊಳಿಸುವ ಕಾರ್ಯ ಸೆ. 16 ರಿಂದ ಪ್ರಾರಂಭವಾಗಿ ಅಕ್ಟೋಬರ್ 15 ರವರೆಗೆ ಪಿಎಂ ಸ್ವನಿಧಿ ಮಾಸದಲ್ಲಿ ಜಾರಿಗೊಳಿಸಲಾಗುವುದು ಎಂದು ರಾಮದಾಸ್ ತಿಳಿಸಿದ್ದಾರೆ.

ಸೆ.15, ಸಂವಿಧಾನ ಓದು ಕಾರ್ಯಕ್ರಮ ಸಿದ್ಧತೆ ಮಾಡಿಕೊಳ್ಳಲು ಡಿಸಿ ಸೂಚನೆ

ಮೈಸೂರು, ಸೆ.11– ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸೆ.15 ರಂದು ಬೆಳಗ್ಗೆ 10 ಗಂಟೆಗೆ ಮೈಸೂರು ನಗರದ ಓವಲ್ ಮೈದಾನದ ಆವರಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ ಹೆಚ್.ಸಿ.ಮಹದೇವಪ್ಪ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಂವಿಧಾನ ಓದು ಕಾರ್ಯಕ್ರಮ ನಡೆಯಲಿದ್ದು, 3 ರಿಂದ 5 ಸಾವಿರದವರೆಗೆ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಏಕಕಾಲದಲ್ಲಿ ಸಂವಿಧಾನ ಪೀಠಿಕೆ ಓದಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ತಿಳಿಸಿದರು.

ಇಂದು ನೂತನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲಾ ಮಟ್ಟದ ಅಧಿಕಾರಿಗಳು ಸಂವಿಧಾನ ಓದು ಕಾರ್ಯಕ್ರಮಕ್ಕೆ ಸಕಲ ರೀತಿಯಲ್ಲಿ ಸಿದ್ಧತೆ ಮಾಡಿಕೊಳ್ಳಬೇಕು. ಜಿಲ್ಲಾ, ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿರುವ ಕಚೇರಿಗಳು ಹಾಗೂ ವಿದ್ಯಾಸಂಸ್ಥೆಗಳು ತಮ್ಮ ಕಚೇರಿ ಹಾಗೂ ವಿದ್ಯಾಸಂಸ್ಥೆಗಳಲ್ಲಿ ಸಾಮೂಹಿಕವಾಗಿ ಸಂವಿಧಾನ ಪೀಠಿಕೆ ಓದಬೇಕು ಎಂದು ನಿರ್ದೇಶನ ನೀಡಿದರು.

ಸಂವಿಧಾನದ ಪೀಠಿಕೆಯನ್ನು ಓದುವುದರೊಂದಿಗೆ ಎಲ್ಲರೂ ಸಂವಿಧಾನದ ಪೀಠಿಕೆಗೆ ಬದ್ಧರಾಗಿರಬೇಕು. ಸಂವಿಧಾನಿಕ ತತ್ವಗಳನ್ನು ತಮ್ಮ ಜೀವನ ಮತ್ತು ಕರ್ತವ್ಯಗಳಲ್ಲಿ ಅಳವಡಿಸಿಕೊಳ್ಳುವ ಪ್ರತಿಜ್ಞೆ ಕೈಗೊಳ್ಳಬೇಕೆಂದು ತಿಳಿಸಿದರು.

ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸೆ.15ರಂದು ಬೆಳಗ್ಗೆ 10 ಗಂಟೆಗೆ ವಿಧಾನಸೌಧದ ಮುಂಭಾಗದಲ್ಲಿ 5 ಸಾವಿರ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಗಳಿಂದ ಸಂವಿಧಾನ ಪೀಠಿಕೆಯನ್ನು ಓದುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ರಾಜ್ಯದ ಎಲ್ಲಾ ವಿದ್ಯಾಸಂಸ್ಥೆಗಳು ಹಾಗೂ ಇಲಾಖೆಗಳು ಆನ್‌ಲೈನ್ ಮೂಲಕ



ಪಾಲ್ಗೊಳ್ಳುವರು. ಹಾಗಾಗಿ ಅದೇ ಸಂದರ್ಭಕ್ಕೆ ಜಿಲ್ಲೆಯಲ್ಲೂ ಸಂವಿಧಾನ ಪೀಠಿಕೆ ಓದುವ ಕಾರ್ಯಕ್ರಮ ನಡೆಯಲಿದೆ ಎಂದರು.

ಅಂದು ಎಲ್ಲಾ ಸರ್ಕಾರಿ ಕಚೇರಿ, ಶಾಲಾ–ಕಾಲೇಜು, ವಿದ್ಯಾರ್ಥಿ ನಿಲಯಗಳಲ್ಲಿ ಸಂವಿಧಾನ ಪೀಠಿಕೆ ಓದಬೇಕು. ಈ ಮೂಲಕ ಸಂವಿಧಾನ ಪೀಠಿಕೆಯ ಮಹತ್ವ ಹಾಗೂ ಸಂವಿಧಾನದ ಮೌಲ್ಯ ಮತ್ತು ತತ್ವಗಳನ್ನು ಜನರಿಗೆ ತಿಳಿಸಬೇಕು ಎಂದರು.

ತಾಲೂಕು ಮಟ್ಟದಲ್ಲಿ ತಹಸೀಲ್ದಾರ್ ಹಾಗೂ ತಾಲೂಕು ಪಂಚಾಯತ್ ಅಧಿಕಾರಿಗಳು ಸೇರಿ ತಾಲೂಕು ಕ್ರೀಡಾಂಗಣಗಳಲ್ಲಿ ಕಾರ್ಯಕ್ರಮ ಆಯೋಜಿಸಿ ಯಶಸ್ವಿಗೊಳಿಸಬೇಕು ಎಂದರು. ಶಾಲಾ ಶಿಕ್ಷಣ ಇಲಾಖೆ, ಕಾಲೇಜು ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕೃಷಿ ಇಲಾಖೆ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆಗಳಿಗೆ ಸಂವಿಧಾನ ಪೀಠಿಕೆ ಓದುವಲ್ಲಿ ನೋಂದಣಿ ಮಾಡಿಸುವುದಕ್ಕೆ ಗುರಿ ನಿಗದಿಪಡಿಸಿದ್ದು, ಇದನ್ನು ಸೂಕ್ತವಾಗಿ ಪಾಲಿಸಿ ಎಂದು ನಿರ್ದೇಶನ ನೀಡಿದರು. ಜಿಲ್ಲಾ ಮತ್ತು ತಾಲೂಕು ವ್ಯಾಪ್ತಿಯಲ್ಲಿ ಬರುವ ದಲಿತ ಸಂಘರ್ಷ ಸಮಿತಿಯ ಮುಖಂಡರುಗಳು, ಪರಿಶಿಷ್ಟ ಪಂಗಡದ ಮುಖಂಡರುಗಳು, ಹಿಂದುಳಿದ ವರ್ಗಗಳ ಮುಖಂಡರು ಹಾಗೂ ಅಲ್ಪಸಂಖ್ಯಾತರ ಸಮಿತಿಯ ಮುಖಂಡರು ಭಾಗವಹಿಸುವರು ಎಂದರು.

1 ಲಕ್ಷ ಮೀರಿ ಜನ ನೋಂದಣಿ: ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಂಗೇಗೌಡ ಮಾತನಾಡಿ, ಜಿಲ್ಲೆಯಲ್ಲಿ 1 ಲಕ್ಷ ಜನ ಮೀರಿ ನೋಂದಣಿ ಮಾಡಿಕೊಂಡಿದ್ದಾರೆ ಎಂದರು. ಇನ್ನೂ ನೋಂದಣಿ ಕಾರ್ಯ ನಡೆಯುತ್ತಿದೆ. ಎಲ್ಲಾ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಳ್ಳಬೇಕೆಂದು ಕೋರಿದರು.

ಸಮಾಜ ಕಲ್ಯಾಣ ಇಲಾಖೆಯ http://thepreamble-swdkar.in ವೆಬ್‌ಸೈಟ್ ಮೂಲಕ ನೊಂದಾಯಿಸಿಕೊಂಡು ಪ್ರಜಾಪ್ರಭುತ್ವದ ಅಧಿಕೃತ ಆಚರಣೆಯಲ್ಲಿ ಭಾಗವಹಿಸಲು ಸಾರ್ವಜನಿಕರನ್ನು ಪ್ರೇರೇಪಿಸಲು ಅಗತ್ಯ ಕ್ರಮವಹಿಸಲಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ.ಎಂ.ಗಾಯಿತ್ರಿ, ಮಹಾನಗರ ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್, ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



ಕೆಪಿಸಿಸಿ ಸದಸ್ಯರಾಗಿ ನೇಮಕಗೊಂಡ ಅಹಿಂದ ಮುಖಂಡ ನಜರ್‌ಬಾದ್ ನಟರಾಜ್ ಅವರಿಗೆ ಕಾಂಗ್ರೆಸ್ ಕಚೇರಿಯಲ್ಲಿ ಪಕ್ಷದ ಜಿಲ್ಲಾ ಅಧ್ಯಕ್ಷ ಬಿ.ಜೆ.ವಿಜಯ್‌ಕುಮಾರ್ ಸನ್ಮಾನಿಸಿ, ಶುಭ ಹಾರೈಸಿದರು. ಪಂಚಾಯತ್ ರಾಜ್ ಗ್ರಾಮಾಂತರ ಜಿಲ್ಲಾಧ್ಯಕ್ಷ ಮಲ್ಲೇಶ್, ಜಿಲ್ಲಾ ಕಾರ್ಯದರ್ಶಿ ಶಿವಪ್ರಕಾಶ್, ಎಂ.ಪಿ.ರಾಜೇಶ್, ಸುರೇಶ್, ಲೋಕೇಶ್, ಬಸವರಾಜು, ಮಂಜು ಹಾಗೂ ಇನ್ನಿತರರು ಹಾಜರಿದ್ದರು.

ಡಿ–ಗ್ರೂಪ್ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು, ಸೆ.11– ಮೈಸೂರು ಜಿಲ್ಲೆ ಸಹಾಯಕ ಕಾರ್ಮಿಕ ಆಯುಕ್ತರ ಕಚೇರಿಯ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯಲ್ಲಿ ಗೌರವಧನದ ಆಧಾರದ ಮೇಲೆ ಡಿ ಗ್ರೂಪ್ ಹುದ್ದೆ ಖಾಲಿಯಿದ್ದು, ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆ.22 ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಮೈಸೂರಿನ ಕುವೆಂಪುನಗರದಲ್ಲಿರುವ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಸಹಾಯಕ ಕಾರ್ಮಿಕ ಆಯುಕ್ತರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಸಹಾಯಕ ಕಾರ್ಮಿಕ ಆಯುಕ್ತರು ಹಾಗೂ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಮಾಜಿ ಶಾಸಕ ಎಲ್.ನಾಗೇಂದ್ರರ ಜನ್ಮದಿನ: ಅಭಿಮಾನಿಗಳಿಂದ ವಿವಿಧ ಸೇವಾ ಕಾರ್ಯಗಳು





ಮೈಸೂರು, ಸೆ. 11–ಎಲ್.ನಾಗೇಂದ್ರ ಅಭಿಮಾನಿ ಬಳಗದ ವತಿಯಿಂದ ಮಾಜಿ ಶಾಸಕ ಎಲ್.ನಾಗೇಂದ್ರ ಅವರ ಜನುಮ ದಿನದ ಪ್ರಯುಕ್ತ ತಿಲಕ್‌ನಗರದಲ್ಲಿರುವ ಕಿವುಡ ಮತ್ತು ಅಂಧ ಮಕ್ಕಳ ಶಾಲೆಯ ಮಕ್ಕಳಿಗೆ ಉಪಾಹಾರ ವಿತರಿಸಲಾಯಿತು. ನಂತರ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಜೀವಧಾರ ರಕ್ತನಿಧಿ ಕೇಂದ್ರದ ಆವರಣದಲ್ಲಿ 40ಕ್ಕೂ ಹೆಚ್ಚು ಯುವ ಅಭಿಮಾನಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿದರು. ಅನಂತರ ಮಂಡಿ ಮೊಹಲ್ಲಾದ ಎಂ.ಪಿ.ಉಗ್ರಪ್ಪ ಸರ್ಕಾರಿ ಶಾಲೆಯ ಮಕ್ಕಳಿಗೆ ಶಾಲಾ ಸಮವಸ್ತ್ರ ವಿತರಿಸಲಾಯಿತು.

ಈ ವೇಳೆ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ವಾರ್ಡ್ ಅಧ್ಯಕ್ಷ ವಿಜಯಕುಮಾರ್, ಸದಾಶಿವ್, ಕೇಬಲ್ ರಾಜು, ಸೂರಜ್, ಚಂದ್ರು, ರವಿ, ಕೆಂಪಣ್ಣ, ರಾಜು, ಮೈಸೂರು ಸಿಟಿ ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಹೇಮಾ ಸಂತೋಷ್, ಮಧು, ಕುಮಾರ್, ಚಂದ್ರು, ಶ್ರೇಯಸ್, ಅಭಿ, ಗೋಪಾಲ್ ಇನ್ನಿತರರು ಉಪಸ್ಥಿತರಿದ್ದರು.

ಇನ್ಸ್‌ಪೆಕ್ಟರ್ ವಿ.ಡಿ.ಮಮತಾ ಅವರೊಂದಿಗೆ ಫೋನ್ ಇನ್ ಕಾರ್ಯಕ್ರಮ

ಮೈಸೂರು, ಸೆ. 11– ಮೈಸೂರು ಜಿಲ್ಲಾ ಮಹಿಳಾ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್



ವಿ.ಡಿ. ಮಮತಾ ಅವರೊಂದಿಗೆ "ಮಹಿಳಾ ಪೊಲೀಸ್ ಠಾಣೆಯ ಸೇವೆಗಳು ಮತ್ತು ಕಾರ್ಯಚಟುವಟಿಕೆಗಳು" ಕುರಿತ ಜೆಎಸ್‌ಎಸ್ ರೇಡಿಯೋದಲ್ಲಿ ನೇರ ಸಂದರ್ಶನ ಫೋನ್–ಇನ್ ಕಾರ್ಯಕ್ರಮವನ್ನು ಸೆ. 13 ರಂದು ಬೆಳಗ್ಗೆ 11:30 ರಿಂದ 12:30ರವರೆಗೆ ಏರ್ಪಡಿಸಲಾಗಿದೆ. ಸಾರ್ವಜನಿಕರು ಹಾಗೂ ಕೇಳುಗರು ಮಹಿಳಾ ಪೊಲೀಸ್ ಠಾಣೆಯಲ್ಲಿರುವ ಸೇವೆಗಳು, ದೂರು ದಾಖಲಿಸುವ ನಿಯಮಗಳು, ಪ್ರಕ್ರಿಯೆಗಳು, ಮಹಿಳಾ ದೌರ್ಜನ್ಯ ತಡೆ ಹಾಗೂ ಮಹಿಳಾ ರಕ್ಷಣೆಗೆ ಇರುವ ಕಾನೂನು ಸುವ್ಯವಸ್ಥೆ ಕುರಿತು ಯಾವುದೇ ಪ್ರಶ್ನೆ ಇಲ್ಲವೆ ಸಲಹೆಗಳು ಬೇಕಿದ್ದಲ್ಲಿ ಮೊ. 8296725912 ಮೂಲಕ ಸಂಪರ್ಕಿಸಿ ನೇರವಾಗಿ ಮಾತನಾಡಬಹುದು.



ಮೈಸೂರಿನ ಕುವೆಂಪುನಗರ ಕೆ ಬ್ಲಾಕ್ ಯುವಕರ ಸಂಘದ ಆಶ್ರಯದಲ್ಲಿ ಜರುಗಿದ ಚುಟುಕು ಕ್ರಿಕೆಟ್ ಪಂದ್ಯಾವಳಿಯ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಕಾಂಗ್ರೆಸ್ ಮುಖಂಡರು ಹಾಗೂ ಸಮಾಜ ಸೇವಕ ಕುಮಾರ್ ಗೌಡ ಉಪಸ್ಥಿತರಿದ್ದರು.

ಕಲೆ ಮಕ್ಕಳಲ್ಲಿ ಬೌದ್ಧಿಕ ಪ್ರೌಢಿಮೆ ಹೆಚ್ಚಿಸುತ್ತದೆ

ಖ್ಯಾತ ಗಂಜೀಫಾ ಕಲಾವಿದ ಗಂಜೀಫಾ ರಘುಪತಿ ಭಟ್ ಅಭಿಮತ

ಮೈಸೂರು, ಸೆ. 11–ಕಲಾ ಪ್ರಕಾರಗಳು ಶಿಕ್ಷಣದ ಒಂದು ಭಾಗವೆಂದು ಪರಿಗಣಿಸಿ, ಆ ನಿಟ್ಟಿನಲ್ಲಿ ಉತ್ತೇಜಿಸಿದರೆ ಮಕ್ಕಳಲ್ಲಿರುವ ಸಾಂಸ್ಕೃತಿಕ ಮನಸ್ಸು ಅರಳಿ, ಬೌದ್ಧಿಕ ಪ್ರೌಢಿಮೆ ವಿಕಸನಗೊಳ್ಳುತ್ತದೆ ಎಂದು ಅಂತರ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಗಂಜಿಫಾ ಕಲಾವಿದ, ಗಂಜಿಫಾ ರಘುಪತಿ ಭಟ್ ಅವರು ಕರೆ ನೀಡಿದರು.

ಮೈಸೂರಿನ ಆರ್.ಟಿ.ನಗರದ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಆಯೋಜಿಸಿದ್ದ ಅಂತರ ಶಾಲಾ ನೈಪುಣ್ಯ ದಸರಾ ಚಿತ್ರಕಲಾ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

"ನಾಡಹಬ್ಬ ದಸರೆ" ಕರ್ನಾಟಕದ ಹೆಮ್ಮೆಯ ಪರಂಪರೆ. ದಸರೆ ಕೇವಲ ಪಾರಂಪರಿಕ ಸಾಂಪ್ರದಾಯಿಕ ಹಬ್ಬ ಅಷ್ಟೇ ಅಲ್ಲ. ಅದು ಸಾಂಸ್ಕೃತಿಕ ಚಟುವಟಿಕೆಗಳಿಗೆ ವೇದಿಕೆಯನ್ನು ಒದಗಿಸುವ ಮೂಲಕ ಎಲ್ಲ ಪ್ರಾಕಾರಗಳ ಕಲೆಗಳು, ಕಲಾವಿದರನ್ನು ಸಂಗಮಗೊಳಿಸುವ ಅಪೂರ್ವ ಸಂದರ್ಭವಾಗಿದೆ. ಇಂಥ ಸಂದರ್ಭವನ್ನು ಬಳಸಿಕೊಂಡು ಶಾಲಾ ಮಕ್ಕಳಲ್ಲಿಯೂ ಅವರ ಅಭಿರುಚಿ ಮತ್ತು ಕಲಾ ಸಾಮರ್ಥ್ಯವನ್ನು ಪ್ರತಿಬಿಂಬಿಸಲು ವೇದಿಕೆ ನಿರ್ಮಿಸಿರುವ ನೈಪುಣ್ಯ ಶಿಕ್ಷಣ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದು



ಅವರು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ನೈಪುಣ್ಯ ಸಂಸ್ಥೆಯ ಅಧ್ಯಕ್ಷ, ಆರ್.ರಘುರವರು ಸಾಂಪ್ರದಾಯಿಕ ಗಂಜೀಫಾ ಕಲೆಯನ್ನು ಉಳಿಸಿ, ವಿಶ್ವಮಾನ್ಯತೆ ಒದಗಿಸಲು ಕಾರಣರಾಗಿರುವ ನಾಡು ಕಂಡ ಶ್ರೇಷ್ಠ ಕಲಾವಿದರಾದ ರಘುಪತಿ ಭಟ್ ರವರು, ಇಂದು ಈ ಕಾರ್ಯಕ್ರಮ ಉದ್ಘಾಟಿಸುವ ಮೂಲಕ ಶಾಲಾ ಮಕ್ಕಳಿಗೆ ಪ್ರೇರಣೆಯಾಗಿದ್ದಾರೆ, ಈ ನಿಟ್ಟಿನಲ್ಲಿ ಸಾಂಪ್ರದಾಯಿಕ ಕಲೆಗಳನ್ನು ಶಿಕ್ಷಣ ಸಂಸ್ಥೆಗಳಲ್ಲಿ ಉತ್ತೇಜಿಸುವ ಕಾರ್ಯ ಕೈಗೆತ್ತಿಕೊಳ್ಳಬೇಕಿದೆ. ಆ ಮೂಲಕ ಶಿಕ್ಷಣ ಹಂತದಲ್ಲಿ ನಮ್ಮ ಸಾಂಸ್ಕೃತಿಕ ವೈಭವವನ್ನು, ಐತಿಹಾಸಿಕ ಪರಂಪರೆಯನ್ನು ಬೆಳೆಸಿ ಉಳಿಸುವ ಜಾಗೃತಿ ಮೂಡಿಸಬೇಕಾಗಿದೆ. ಈ ನಿಟ್ಟಿನಲ್ಲಿ ನಮ್ಮ ನೈಪುಣ್ಯ ಶಾಲೆಯು ಕಾರ್ಯೋನ್ಮುಖವಾಗಿದೆ ಎಂದು ಹೇಳಿದರು.

ವಿವಿಧ ಹಂತದ ಶಾಲಾ ಮಕ್ಕಳಿಗಾಗಿ ಏರ್ಪಡಿಸಿದ್ದ ಈ ಸ್ಪರ್ಧೆಯಲ್ಲಿ ಐತಿಹಾಸಿಕ ಸ್ಥಳಗಳು, ಜಾನಪದ ಸಂಸ್ಕೃತಿ, ಬೊಂಬೆ ಹಬ್ಬ ವಿಷಯಗಳನ್ನು ನೀಡಲಾಗಿತ್ತು. ನಗರದ ಹಾಗೂ ಜಿಲ್ಲೆಯ ವಿವಿಧ ಶಾಲೆಯ ನೂರಾರು ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಸಂಸ್ಥೆಯ ಪ್ರಾಂಶುಪಾಲೆ ಶ್ರೀಮತಿ ಶೋಭಿತಾ ಎಸ್ ಆರಾಧ್ಯ ಉಪಸ್ಥಿತರಿದ್ದರು.

ಸಾರ್ವಜನಿಕರ ಸಮಸ್ಯೆ ಆಲಿಸಲು ಶಾಸಕರ ಕಚೇರಿ ಉದ್ಘಾಟನೆ

ಶಾಸಕ ದರ್ಶನ್ ಧ್ರುವನಾರಾಯಣ್



ನಂಜನಗೂಡು, ಸೆ.11– ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಸಲುವಾಗಿ ನಗರದಲ್ಲಿ ಶಾಸಕರ ಕಚೇರಿ ತೆರೆಯಲಾಗಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ನಗರದ ತಾಪಂ ಕಚೇರಿಯಲ್ಲಿ ಶಾಸಕರ ನೂತನ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಕ್ಷೇತ್ರದ ಜನರು ತಮ್ಮ ಸಮಸ್ಯೆ, ಅಹವಾಲುಗಳನ್ನು ಸಲ್ಲಿಸಲು ನನ್ನನ್ನು ಭೇಟಿಯಾಗಲು ಬರುತ್ತಾರೆ. ಜನರಿಗೆ ಕಷ್ಟವಾಗದಂತೆ ಕ್ಷೇತ್ರದಲ್ಲೇ ಲಭ್ಯವಿರುವ ಸಲುವಾಗಿ ತಾಪಂ ಕಚೇರಿಯಲ್ಲಿ ತಮ್ಮ ನೂತನ ಕಚೇರಿ ತೆರೆಯಲಾಗಿದೆ. ಈ ಕಚೇರಿಯಲ್ಲಿ ಜನರ ಅಹವಾಲು ಸ್ವೀಕರಿಸಲು ಸಿಬ್ಬಂದಿ ನೇಮಿಸಲಾಗಿದೆ. ಬೆಳಗ್ಗೆ 10 ರಿಂದ ಸಂಜೆ 5 ರವರೆಗೆ ಸಾರ್ವಜನಿಕರು ತಮ್ಮ ಅಹವಾಲು ಸಲ್ಲಿಸಬಹುದು. ಜೊತೆಗೆ ನಾನು ವಾರದಲ್ಲಿ 2 ದಿನ ಖುದ್ದು ಹಾಜರಿದ್ದು ಜನರ ಅಹವಾಲು ಸ್ವೀಕರಿಸಿ ಅವರ ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ನೇರವಾಗಿ ಬರಲು ಸಾಧ್ಯವಾಗದವರಿಗೆ ಕಚೇರಿ ಸಹಾಯವಾಣಿ ಸಂಖ್ಯೆ ತೆರೆಯಲಾಗಿದ್ದು, ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ ಎಂದರು.

ಗ್ರಾಮ ಮಟ್ಟದಲ್ಲಿ ಜನಸಂಪರ್ಕ ಸಭೆ: ಜನರ ಸಮಸ್ಯೆಗಳನ್ನು ಅವರ ಮನೆ ಬಾಗಿಲಿಗೆ ತೆರಳಿ ಪರಿಹರಿಸಬೇಕೆಂಬ ದೃಷ್ಟಿಯಿಂದ ತಾಲೂಕಿನ ಎಲ್ಲಾ ಗ್ರಾಮಗಳಿಗೂ ಭೇಟಿ ನೀಡಿ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಜನಸಂಪರ್ಕ ಸಭೆಗಳನ್ನು ನಡೆಸಲಾಗುತ್ತಿದೆ. ಕಾಡಂಚಿನ ಗ್ರಾಮಗಳಲ್ಲಿ ಹೆಚ್ಚಾಗಿ ಕಾಡುಪ್ರಾಣಿಗಳ ಹಾವಳಿ ಬಗ್ಗೆ ಜನರು ದೂರು ನೀಡುತ್ತಿದ್ದಾರೆ. ಕಾಡು ಪ್ರಾಣಿಗಳ ನಿಯಂತ್ರಣಕ್ಕೆ 19 ಕಿಮೀ ರೈಲ್ವೆ ಬ್ಯಾರಿಕೇಡ್ ನಿರ್ಮಿಸುವ ಅಗತ್ಯವಿದ್ದು, ಮತ್ತೆ ಹುಲಿ ಮತ್ತು ಚಿರತೆ ಸೆರೆ ಹಿಡಿಯಲು ಹೆಚ್ಚುವರಿ ಬೋನ್‌ಗಳ ಅವಶ್ಯಕತೆ ಇದ್ದು, ಈಗಾಗಲೇ ಈ ಬಗ್ಗೆ ಸದನದಲ್ಲಿ ಚರ್ಚಿಸಿ ಹೆಚ್ಚಿನ ಅನುದಾನ ಕೊಡುವಂತೆ ಕೋರಿದ್ದೇನೆ. ಶೀಘ್ರದಲ್ಲೇ ಅನುದಾನ ಬಿಡುಗಡೆಯಾಗಲಿದ್ದು, ಕಾಡು ಪ್ರಾಣಿಗಳ ಹಾವಳಿ ತಪ್ಪಿಸಲು ಕ್ರಮ ವಹಿಸುತ್ತೇನೆ ಎಂದರು.

ಗ್ರಾಮೀಣ ಭಾಗದಲ್ಲಿ ರಸ್ತೆ ಚರಂಡಿ, ಸಮುದಾಯ ಭವನಗಳು ಸೇರಿದಂತೆ ಮೂಲ ಸೌಕರ್ಯ ಒದಗಿಸುವಂತೆ ಸಾರ್ವಜನಿಕರು ಮನವಿ ಮಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿಗಳ ಮನವೊಲಿಸಿ, ಹೆಚ್ಚಿನ ಅನುದಾನ ತಂದು ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ರೂಪಿಸಲು ಶ್ರಮಿಸುತ್ತೇನೆ ಎಂದರು.

ನಂತರ ನಗರದ ಚಾಮಲಾಪುರ ಬೀದಿಯಲ್ಲಿ ನೂತನ ರಾಮಮಂದಿರ ಸಮುದಾಯ ಭವನವನ್ನು ಉದ್ಘಾಟಿಸಿದರು. ಈ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹೇಶ್, ಸಿ.ಎಂ.ಶಂಕರ್, ಶ್ರೀಕಂಠನಾಯಕ, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಮುಖಂಡರಾದ ದೊರೆಸ್ವಾಮಿ ನಾಯಕ, ನಾಗರಾಜು, ರಾಜೇಶ್, ನಗರಸಭಾ ಸದಸ್ಯ ಶ್ರೀಕಂಠಸ್ವಾಮಿ, ಗಾಯಿತ್ರಿ, ಶ್ವೇತಲಕ್ಷ್ಮಿ, ಪುರಸಭಾ ಮಾಜಿ ಅಧ್ಯಕ್ಷ ಶ್ರೀಧರ್, ಜಗದೀಶ್, ಗೋಪಾಲ್, ಶ್ರೀಕಂಠ, ಉಮೇಶ, ಗೋವಿಂದರಾಜು, ಮಾಯಪ್ಪ, ಉಮಾ, ಮಾಜಿ ನಗರಸಭಾ ಸದಸ್ಯರಾದ ಚಂದ್ರು, ಮಂಜುನಾಥ್ ಸೇರಿದಂತೆ ಇತರರಿದ್ದರು.

ಅರಣ್ಯ ಸಿಬ್ಬಂದಿಯಿಂದ ವನ್ಯ ಸಂಪತ್ತು, ವನ್ಯಜೀವಿಗಳ ಸಂರಕ್ಷಣೆ



ಹುಣಸೂರು, ಸೆ.11– ವನ್ಯ ಸಂಪತ್ತು ಮತ್ತು ವನ್ಯಜೀವಿಗಳ ಸಂರಕ್ಷಣೆಯಂತಹ ಶ್ರೇಷ್ಠ ಕಾರ್ಯವನ್ನು ಅರಣ್ಯ ಇಲಾಖೆ ಸಿಬ್ಬಂದಿ ಮಾಡುತ್ತಿದ್ದಾರೆ ಎಂದು 8ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಪಾಟೀಲ್ ಮೋಹನ್ ಕುಮಾರ ಭೀಮನಗೌಡ ಅಭಿಪ್ರಾಯಪಟ್ಟರು.

ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಅಂಗವಾಗಿ ಸೋಮವಾರ ನಗರದ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಹುಣಸೂರು ವಿಭಾಗ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಹುತಾತ್ಮರ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಅರಣ್ಯ ಸಿಬ್ಬಂದಿ ನಿರ್ವಹಿಸುತ್ತಿರುವ ಕಾರ್ಯ ಯಾವ ರಕ್ಷಣಾ ಸಿಬ್ಬಂದಿಗೂ ಕಡಿಮೆ ಇಲ್ಲ. ಮಾನವ–ವನ್ಯಜೀವಿ ಸಂಘರ್ಷದಂತಹ ಸೂಕ್ಷ್ಮ ಪರಿಸ್ಥಿತಿಯನ್ನು ಒತ್ತಡದ ನಡುವೆಯೇ ಸಮಚಿತ್ತದಿಂದ ನಿರ್ವಹಿಸುತ್ತಿದ್ದೀರಿ. ಅಭಿವೃದ್ಧಿ ಮತ್ತು ಕೈಗಾರಿಕಾ ಕ್ರಾಂತಿ ಹೆಸರಿನಲ್ಲಿ ಕಳೆದೊಂದು ಶತಮಾನದಲ್ಲಿ ಸಾಕಷ್ಟು ವನ್ಯಜೀವಿ ಮತ್ತು ಅರಣ್ಯ ಸಂಪತ್ತನ್ನು ಹಾಳು ಮಾಡಿದ್ದೇವೆ. ಇದೀಗ ಅರಣ್ಯ ಸಿಬ್ಬಂದಿ ಶ್ರಮದಿಂದ ಉಳಿದಿರುವ ಅರಣ್ಯ ಸಂಪತ್ತನ್ನು ರಕ್ಷಿಸಿಕೊಳ್ಳದಿದ್ದರೆ ಭವಿಷ್ಯದಲ್ಲಿ ಸಂಕಷ್ಟ ಎದುರಾಗಲಿದೆ ಎಂದರು.

ಹುಲಿ ಯೋಜನೆ ನಿರ್ದೇಶಕ ಹರ್ಷ ಕುಮಾರ್ ಚಿಕ್ಕನರಗುಂದ ಮಾತನಾಡಿ, ಅರಣ್ಯ ಸಿಬ್ಬಂದಿ ಒತ್ತಡದ ನಡುವೆಯೇ ಕರ್ತವ್ಯ ನಿರ್ವಹಿಸಬೇಕಿದೆ. ನೀವು ಅರಣ್ಯವನ್ನು ಉಳಿಸುವತ್ತ ಹೆಚ್ಚಿನ ಗಮನಹರಿಸಿ. ಆದರೆ ಹುತಾತ್ಮರಾಗುವತ್ತ ಮನಸು ಹರಿಯಬಿಡಬೇಡಿ. ಏಕೆಂದರೆ ನೀವಿಲ್ಲದೇ ಅರಣ್ಯ ಸಂಪತ್ತು ರಕ್ಷಿಸಲು ಸಾಧ್ಯವಿಲ್ಲವೆಂದು ಸಿಬ್ಬಂದಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶೆ ಶಿರಿನ್ ಜಾವಿದ್ ಅನ್ಸಾರಿ, ಪ್ರಾದೇಶಿಕ ವಿಭಾಗದ ಡಿಸಿಎಫ್ ಪಿ.ಎ.ಸೀಮಾ, ಹುಣಸೂರು ವನ್ಯಜೀವಿ ಉಪವಿಭಾಗದ ಎಸಿಎಫ್ ಡಿ.ಎಸ್.ದಯಾನಂದ್, ನಾಗರಹೊಳೆ ವನ್ಯಜೀವಿ ಉಪವಿಭಾಗದ ಎಸಿಎಫ್ ಪಿ.ಅನುಷಾ, ಮೇಟಿಕುಪ್ಪೆ ಎಸಿಎಫ್ ಕೆ.ಎನ್.ರಂಗಸ್ವಾಮಿ, ಹುಣಸೂರು ಪ್ರಾದೇಶಿಕ ವಿಭಾಗದ ಎಸಿಎಫ್ ಮಹದೇವಯ್ಯ ಸೇರಿದಂತೆ ಆರ್‌ಎಫ್‌ಓಗಳು, ಅರಣ್ಯ ಸಿಬ್ಬಂದಿ, ಕಚೇರಿ ಸಿಬ್ಬಂದಿ ಇನ್ನಿತರ ಅರಣ್ಯ ಸಿಬ್ಬಂದಿ ಹಾಜರಿದ್ದರು.

ಇಂದು ವಿದ್ಯುತ್ ವ್ಯತ್ಯಯ

ಭೇರ್ಯ, ಸೆ.11– ಸಾಲಿಗ್ರಾಮ ಉಪ ವಿಭಾಗ ವ್ಯಾಪ್ತಿಯ ಭೇರ್ಯ ವಿದ್ಯುತ್ ವಿತರಣಾ ಉಪಕೇಂದ್ರದಿಂದ ಹೊರಹೊಮ್ಮುವ ಫೀಡರ್‌ಗಳ ತ್ರೈಮಾಸಿಕ ತುರ್ತು ನಿರ್ವಹಣಾ ಕೆಲಸ ಹಿನ್ನೆಲೆಯಲ್ಲಿ ಸೆ.12 ರಂದು ಬೆಳಗ್ಗೆ 10 ರಿಂದ ಸಂಜೆ 5 ರವರೆಗೆ ಭೇರ್ಯ, ಹೊಸಅಗ್ರಹಾರ, ಮುಂಜನಹಳ್ಳಿ ಹಾಗೂ ಮೇಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಕೋಣಗಳ್ಳಿ ಡೈರಿ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ

ತಿ.ನರಸೀಪುರ, ಸೆ.11– ರೈತರು ಇರುವ ಜಾಗದಲ್ಲಿ ಮೇವಿನ ಗಿಡಗಳನ್ನು ಬೆಳೆದು ಹಸುಗಳಿಗೆ ನೀಡಿದರೆ ಉತ್ಪಾದನಾ ವೆಚ್ಚ ಕಡಿಮೆ ಮಾಡಬಹುದು ಎಂದು ಮೈಸೂರು ಜಿಲ್ಲಾ ಹಾಲು ಒಕ್ಕೂಟದ ಮಾರ್ಗ ವಿಸ್ತರಣಾಧಿಕಾರಿ ಪ್ರಮೋದ್ ತಿಳಿಸಿದರು.

ತಾಲೂಕಿನ ಕೋಣಗಳ್ಳಿಯಲ್ಲಿ ಸೋಮವಾರ ನಡೆದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಸರ್ವಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ಹೈನುಗಾರಿಕೆಯಲ್ಲಿ ಪಶು ಆಹಾರ ಕಡಿಮೆ ಮಾಡುವ ಪರಿಪಾಠ ಬೆಳೆಸಿಕೊಂಡು ಮೇವಿನ ಬೆಳೆಗಳಾದ ಅಗಸೆ ಗಿಡ, ನುಗ್ಗೇ ಗಿಡ, ಕುದುರೆ ಬೇಲಿ ಮಸಾಲೆಯಂತಹ ಬೆಳೆಗಳನ್ನು ಬೆಳೆದು ಹಸುಗಳಿಗೆ ನೀಡಿದರೆ ಹಾಲಿನ ಉತ್ಪಾದನೆ ಜಾಸ್ತಿಯಾಗಲಿದ್ದು, ಗುಣಮಟ್ಟ ಸಹ ಉತ್ತಮವಾಗಿರುತ್ತದೆ. ಹಾಗಾಗಿ ರೈತರು ತಮಗಿರುವ ಜಮೀನಿನಲ್ಲಿ ಮೇವಿನ ಗಿಡಗಳನ್ನು ಬೆಳೆದು ಉತ್ಪಾದನಾ ವೆಚ್ಚ ಕಡಿಮೆ ಮಾಡಿಕೊಳ್ಳುವಂತೆ ಸಲಹೆ ನೀಡಿದರು.



ಮೇಲಿನ ಗಿಡಗಳ ಬೀಜಗಳನ್ನು ಒಕ್ಕೂಟದಿಂದ ರಿಯಾಯಿತಿ ದರದಲ್ಲಿ ಕೊಡುವ ವ್ಯವಸ್ಥೆ ಮಾಡಲಾಗುತ್ತದೆ. ಸಹಕಾರ ಸಂಘದ ಸ್ವಂತ ಕಟ್ಟಡ ನಿರ್ಮಾಣಕ್ಕೆ 1 ಗುಂಟೆ ನಿವೇಶನ ಖರೀದಿಸಿದರೆ ಮೈಮುಲ್ ಮಾಜಿ ಅಧ್ಯಕ್ಷರಾದ ಓಂಪ್ರಕಾಶ್ ಹಾಗೂ ಸದಸ್ಯ ಚೆಲುವರಾಜು ಅವರಿಂದ ಅನುದಾನ ಕೊಡಿಸಲಾಗುತ್ತದೆ ಎಂದರು.

ಸಂಘದ ಸಿಇಓ ರಶ್ಮಿ 2022–23ನೇ ಸಾಲಿನ ವಾರ್ಷಿಕ ವರದಿ ಮಂಡಿಸಿ ಸಂಘವು ಪ್ರಸಕ್ತ ಸಾಲಿನಲ್ಲಿ 95,123 ರೂ. ನಿವ್ವಳ ಲಾಭಗಳಿಸಿದೆ ಎಂದರು.

ಸಂಘದ ಅಧ್ಯಕ್ಷೆ ಜಯಮ್ಮ, ನಿರ್ದೇಶಕರಾದ ಭಾಗ್ಯಮ್ಮ, ಲಕ್ಷ್ಮಿ, ಮಂಜುಳ, ರತ್ನಮ್ಮ, ನಂಜಮ್ಮಣಿ, ಶಿವಮ್ಮ, ಶೈಲಜಾ, ರತ್ನಮ್ಮ, ಹಾಲು ಪರೀಕ್ಷಕಿ ಲೀಲಾವತಿ ಹಾಜರಿದ್ದರು.

ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ದಸಂಸ ಪ್ರತಿಭಟನೆ

ಹೆಚ್.ಡಿ.ಕೋಟೆ, ಸೆ.11– ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರು ಸೋಮವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಸಣ್ಣ ರಾಮಪ್ಪ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ದಸಂಸ ಜಿಲ್ಲಾ ಸಂಚಾಲಕ ಬೆಟ್ಟಯ್ಯ ಕೋಟೆ ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷ ಕಳೆದರೂ ದಲಿತರು ಸಾವನ್ನಪ್ಪಿದರೇ ಅಂತ್ಯ ಸಂಸ್ಕಾರ ಮಾಡಲು ಸ್ಮಶಾನವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ ಅವರು, ತಾಲೂಕಿನ ಮಲಾರ ಗ್ರಾಮದ ದಲಿತರಿಗೆ ಬೆಳಗನಹಳ್ಳಿ ಕಾವಲ್ ಸರ್ವೇ ನಂ.1ರಲ್ಲಿ ಮಂಜೂರಾಗಿರುವ 25 ಗುಂಟೆ, ಬೊಪ್ಪನಹಳ್ಳಿ ಗ್ರಾಮದ ಸರ್ವೇ ನಂ.14 ರಲ್ಲಿ ಜಿಲ್ಲಾಧಿಕಾರಿಗಳ ಆದೇಶದಂತೆ ಮಂಜೂರಾಗಿರುವ 22 ಗುಂಟೆ, ಹೊಮ್ಮರಗಳ್ಳಿ ಗ್ರಾಮದ ಸರ್ವೇ ನಂ.22ರಲ್ಲಿ 2 ಎಕರೆ, ಬನವಾಡಿ ಗ್ರಾಮದ ಸರ್ವೇ ನಂ.16 ರಲ್ಲಿರುವ 1 ಎಕರೆ ಭೂಮಿ ಸ್ಮಶಾನಕ್ಕೆ ಮೀಸಲಿಡಲಾಗಿದೆ. ಆದರೂ ಅಂತ್ಯ ಸಂಸ್ಕಾರಕ್ಕೆ ಸ್ಥಳ ಇಲ್ಲದಂತಾಗಿದೆ. ತಾಲೂಕಿನಲ್ಲಿ ಇಂತಹ ಸಮಸ್ಯೆಗಳು ಹಾಸು ಹೊಕ್ಕಾಗಿವೆ. ಸರ್ಕಾರ ದಲಿತರ ಸ್ಮಶಾನಕ್ಕಾಗಿ ಭೂಮಿ ಮಂಜೂರು ಮಾಡಿದರೂ ತಾಲೂಕು ಆಡಳಿತ ಆ ಭೂಮಿಗಳನ್ನು ಸಂಬಂಧಪಟ್ಟವರ ಸ್ವಾಧೀನಕ್ಕೆ ನೀಡದೇ ವಂಚಿಸುತ್ತಿದೆ. ಹೀಗಾಗಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಅಲ್ಲದೇ ತಾಲೂಕಿನ ಎಲ್ಲಾ ಗ್ರಾಮಗಳಲ್ಲಿರುವ ದಲಿತರ ಸ್ಮಶಾನ ಗುರುತಿಸಿ ಗ್ರಾಪಂಗಳ ಮೂಲಕ ಸಂರಕ್ಷಿಸಿ ಮೂಲಸೌಕರ್ಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಅಕ್ಬರ್ ಪಾಷ, ಗಣೇಶ್, ಹೆಚ್.ಸಿ.ಮಂಜುನಾಥ್, ಮುತ್ತು, ನಿಂಗರಾಜು, ದಾಸಯ್ಯ, ಸಿದ್ದರಾಜು, ರಾಜಶೇಖರ್, ಸುರೇಶ್, ಮಹದೇವು, ಶಿವಣ್ಣ, ಪರಶಿವ, ಪುಟ್ಟಯ್ಯ, ಬಸವರಾಜು ಇದ್ದರು.

ತಮಿಳುನಾಡಿಗೆ ಕಾವೇರಿ ನೀರು ಬಿಟ್ಟ

ಸರ್ಕಾರದ ಕ್ರಮ ಖಂಡಿಸಿ ರೈತ ಸಂಘ ಪ್ರತಿಭಟನೆ



ನಂಜನಗೂಡು, ಸೆ11– ತಮಿಳುನಾಡಿಗೆ ಕಾವೇರಿ ನೀರು ಹರಿಸಿದ ರಾಜ್ಯ ಸರ್ಕಾರದ ಕ್ರಮ ಖಂಡಿಸಿ ಸಾಮೂಹಿಕ ನಾಯಕತ್ವದ ರೈತ ಸಂಘದ ಪದಾಧಿಕಾರಿಗಳು ಕಪಿಲಾ ನದಿಗೆ ಇಳಿದು ನಂತರ ಊಟಿ–ಮೈಸೂರು ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ನಗರದ ಡಿ.ದೇವರಾಜ ಅರಸು ಸೇತುವೆ ಬಳಿ ಜಮಾವಣೆಗೊಂಡ ರೈತ ಸಂಘದ ಕಾರ್ಯಕರ್ತರು ಮತ್ತು ಪದಾಧಿಕಾರಿಗಳು ಮೊದಲು ತಲೆ ಮೇಲೆ ಕಲ್ಲು ಹೊತ್ತೊಂಡು ಕಪಿಲಾ ನದಿಗೆ ಇಳಿದು ಹೋರಾಟ ನಡೆಸಿದ ಬಳಿಕ ಮೈಸೂರು–ಊಟಿ ರಾಷ್ಟ್ರೀಯ ಹೆದ್ದಾರಿ ತಡೆದು ಧರಣಿ ನಡೆಸಿದರಲ್ಲದೆ ರಾಜ್ಯ ಸರ್ಕಾರ ಮತ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಟಿ.ಆರ್.ವಿದ್ಯಾಸಾಗರ್ ಮಾತನಾಡಿ, ರಾಜ್ಯದಲ್ಲಿ ಮಳೆಗಾಲವೇ ಪ್ರಾರಂಭವಾಗಿಲ್ಲ. ಜೊತೆಗೆ ರಾಜ್ಯದ ಕೆರೆಕಟ್ಟೆಗಳು ತುಂಬಿಲ್ಲ. ಆದರೂ ನೀರನ್ನು ತಮಿಳುನಾಡಿಗೆ ಹರಿಸುತ್ತಿರುವುದು ಖಂಡನೀಯ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ತಮಿಳುನಾಡು ಪರ ಕೆಲಸ ಮಾಡುತ್ತಿದೆ. ಅತಿವೃಷ್ಟಿ ಮತ್ತು ಅನಾವೃಷ್ಟಿಯಾದಾಗಲೂ ಒಂದೇ ರೀತಿಯ ಮಾನದಂಡ ಪಾಲಿಸುವಂತೆ ಸೂಚನೆ ನೀಡುತ್ತಿದೆ. ಒಂದು ಪ್ರಾದೇಶಿಕ ಪಕ್ಷವನ್ನು ಓಲೈಸುವ ಸಲುವಾಗಿ ಕೇಂದ್ರ ಸರ್ಕಾರ ಈ ಕ್ರಮ ಅನುಸರಿಸುತ್ತಿದೆ. ಇದರಿಂದ ರಾಜ್ಯದ ರೈತರಿಗೆ ತೊಂದರೆಯಾಗುತ್ತಿದೆ. ರಾಜ್ಯದ ರೈತರು ಹೊಸದಾಗಿ ನಾಟಿ ಮಾಡಲು ನೀರು ಕೇಳುತ್ತಿಲ್ಲ. ಬದಲಾಗಿ ಬೆಳೆದು ನಿಂತಿರುವ ಬೆಳೆ ರಕ್ಷಣೆ ಮಾಡುವ ಸಲುವಾಗಿ ನೀರಿಗಾಗಿ ಹೋರಾಟ ನಡೆಸುತ್ತಿದ್ದಾರೆ. ರಾಜ್ಯದ ರೈತರ ಹಿತ ಕಾಯಬೇಕಾದ ರಾಜ್ಯ ಸರ್ಕಾರ ತಮಿಳುನಾಡಿಗೆ ನೀರನ್ನು ಬಿಟ್ಟಿರುವುದು ದುರ್ದೈವ. ಬೆಳೆದು ನಿಂತಿರುವ ಬೆಳೆಗೆ ಹಾನಿಯಾದರೇ ಅದಕ್ಕೆ ಕೇಂದ್ರ, ರಾಜ್ಯ ಸರ್ಕಾರ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರವೇ ಹೊಣೆ ಎಂದರು.

ರಾಜ್ಯ ಸರ್ಕಾರ ಕೂಡಲೇ ಎಲ್ಲಾ ಜಿಲ್ಲೆಗಳನ್ನು ಬರಪೀಡಿತವೆಂದು ಘೋಷಣೆ ಮಾಡಬೇಕು. ಒಂದು ವೇಳೆ ಬೆಳೆದಿರುವ ಬೆಳೆ ನೀರಿಲ್ಲದೆ ಹಾಳಾದಲ್ಲಿ ಎಕರೆಗೆ ಕನಿಷ್ಠ 50 ಸಾವಿರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ, ರಘು, ತಾಲೂಕು ಅಧ್ಯಕ್ಷ ಸತೀಶ್ ರಾವ್, ಶಂಕರ ನಾಯಕ, ದೊಡ್ಡಯ್ಯ, ನಾಗರಾಜು, ಶಿವಣ್ಣ, ಶ್ವೇತಾ, ಶೈಲಜಾ, ಮಹದೇವಸ್ವಾಮಿ, ವೇಣುಗೋಪಾಲ್, ಮಹದೇವನಾಯಕ, ಸಿದ್ದಮ್ಮ ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು ಇದ್ದರು.

ಬೈಕ್‌ನಿಂದ ಆಯತಪ್ಪಿ ಬಿದ್ದು ಸವಾರ ಸಾವು

ಸರಗೂರು, ಸೆ.11– ಬೈಕ್‌ನಿಂದ ಆಯ ತಪ್ಪಿ ಬಿದ್ದು ಆಸ್ಪತ್ರೆಗೆ ದಾಖಲಾಗಿದ್ದ ಸವಾರ ಚಿಕಿತ್ಸೆ ಫಲಕಾರಿಯಾಗದೇ ಸೋಮವಾರ ಮುಂಜಾನೆ ಸಾವನ್ನಪ್ಪಿದ್ದಾನೆ.



ತಾಲೂಕಿನ ಹಾದನೂರು ಗ್ರಾಮದ ನಿವಾಸಿ ಮೂರ್ತಿ ಅಲಿಯಾಸ್ ಉಮೇಶ್(28) ಸಾವನ್ನಪ್ಪಿದವರು. ಈತ ಭಾನುವಾರ ರಾತ್ರಿ ಹಾದನೂರಿನಿಂದ ತನ್ನ ಪತ್ನಿ ಮನೆ ಹೆಚ್.ಡಿ.ಕೋಟೆ ತಾಲೂಕಿನ ಯಲಮತ್ತೂರು ಗ್ರಾಮಕ್ಕೆ ಬೈಕ್‌ನಲ್ಲಿ ತೆರಳುತ್ತಿದ್ದ. ಆದರೆ ನಿಲುವಾಗಿಲು ಗ್ರಾಮದ ಬಳಿ ಬೈಕ್‌ನಿಂದ ಆಯತಪ್ಪಿ ಕೆಳಗೆ ಬಿದ್ದ ಪರಿಣಾಮ ಉಮೇಶ್ ತೀವ್ರ ಗಾಯಗೊಂಡಿದ್ದರು. ಈ ವೇಳೆ ಪಕ್ಕದಲ್ಲೇ ಜಮೀನಿನಲ್ಲಿ ಬೆಳೆಗಳಿಗೆ ನೀರು ಹಾಯಿಸುತ್ತಿದ್ದ ರೈತರು ಸ್ಥಳಕ್ಕಾಗಮಿಸಿ, ಆಂಬುಲೆನ್ಸ್‌ನಲ್ಲಿ ಉಮೇಶ್‌ನನ್ನು ಹೆಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಗೆ ಕಳುಹಿಸಿಕೊಟ್ಟರು.

ಆಸ್ಪತ್ರೆಯಲ್ಲಿ ಈತನಿಗೆ ಪ್ರಥಮ ಚಿಕಿತ್ಸೆ ನೀಡಿ, ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್. ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಸೋಮವಾರ ಬೆಳಗಿನ ಜಾವ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ. ಈ ಸಂಬಂಧ ಸರಗೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತಿ.ನರಸೀಪುರದಲ್ಲಿ ಮಹದೇಶ್ವರ ಫ್ಯಾಷನ್ ಷೋ ರೂಂ ಉದ್ಘಾಟನೆ


ರಿಯಾಯಿತಿ ದರದಲ್ಲಿ ಬಟ್ಟೆ ಮಾರಾಟ: ಕೆ.ವಜ್ರೇಗೌಡ

ತಿ.ನರಸೀಪುರ, ಸೆ11– ಪಟ್ಟಣದ ಕಾವೇರಿ–ಕಪಿಲಾ ರಸ್ತೆಯ ಪೆಟ್ರೋಲ್ ಬಂಕ್ ಎದುರು ನೂತನವಾಗಿ ಆರಂಭಿಸಿರುವ ಮಹದೇಶ್ವರ ಫ್ಯಾಷನ್ ಷೋ ರೂಂ ಜವಳಿ ಅಂಗಡಿಯನ್ನು ಶ್ರೀಮಹದೇಶ್ವರ ಗ್ರೂಪ್ ಮಾಲೀಕ ಕೆ.ವಜ್ರೇಗೌಡ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಕೆ.ವಜ್ರೇಗೌಡ, ಗ್ರಾಮೀಣ ಜನರು ಮದುವೆ ಸೇರಿದಂತೆ ವಿವಿಧ ಶುಭ ಸಮಾರಂಭಗಳಿಗೆ ಜವಳಿ ಖರೀದಿಸಲು ದೂರದ ಮೈಸೂರಿಗೆ ಹೋಗುವುದನ್ನು ಮನಗಂಡು ಒಂದೇ ಸೂರಿನಲ್ಲಿ ಎಲ್ಲಾ ರೀತಿಯ ಉಡುಪುಗಳು ದೊರೆಯುವ ಅತ್ಯುತ್ತಮವಾದ ಬಟ್ಟೆ ಷೋ ರೂಂ ಅನ್ನು ತೆರೆದು ಗ್ರಾಹಕರಿಗೆ ಅನುಕೂಲ ಕಲ್ಪಿಸಲಾಗಿದೆ. ಮಹಿಳೆಯರು, ಪುರುಷರು, ಮಕ್ಕಳ ರೆಡಿಮೇಡ್ ಬಟ್ಟೆಗಳು ಇಲ್ಲಿ ರಿಯಾಯಿತಿ ದರದಲ್ಲಿ ದೊರೆಯುತ್ತಿದ್ದು, ತಾಲೂಕಿನ ಸಾರ್ವಜನಿಕರು ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ತಾಲೂಕಿನಲ್ಲೇ ಅತೀ ದೊಡ್ಡ ಷೋ ರೂಂ ನಮ್ಮದಾಗಿದ್ದು, ಗೌರಿ–ಗಣೇಶ ಹಬ್ಬದ ಅಂಗವಾಗಿ ಶೇ.10 ರಷ್ಟು ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದರು.

ಸಮಾಜ ಸೇವೆ ಮಾಡುವ ಉದ್ದೇಶ ಹೊಂದಿರುವ ನಾವು ಮೊದಲಿನಿಂದಲೂ ಸೇವಾ ಮನೋಭಾವದಿಂದ ಕೆಲಸ ಮಾಡುತ್ತಿದ್ದೇವೆ. ಸಾವಿರಾರು ಎಕರೆ ಕೃಷಿ ಪ್ರದೇಶದಲ್ಲಿ ಸಾವಿರಾರು ಮಂದಿಗೆ ಕೆಲಸ ಮಾಡಲು ಅವಕಾಶ ಮಾಡಿಕೊಟ್ಟಿದ್ದೇವೆ. ನಮಗಿರುವ 2 ಪೆಟ್ರೋಲ್ ಬಂಕ್, ಚೌಲ್ಟ್ರಿ ಹಾಗೂ 25 ರಿಂದ 30 ಬಸ್‌ಗಳಲ್ಲಿ ನೂರಾರು ಮಂದಿಗೆ ಉದ್ಯೋಗ ದೊರಕಿಸಿಕೊಟ್ಟಿದ್ದೇವೆ. ಇದೀಗ ಬಟ್ಟೆ ಷೋ ರೂಂನಲ್ಲಿ ನೂರಕ್ಕೂ ಹೆಚ್ಚು ಮಂದಿಗೆ ಕೆಲಸ ಮಾಡಲು ಅವಕಾಶ ಕಲ್ಪಿಸಿಕೊಡಲು ಮುಂದಾಗಿದ್ದೇವೆ. ಹಾಗಾಗಿ ಸಾರ್ವಜನಿಕರು ಮೈಸೂರಿನ ಬಟ್ಟೆ ಷೋ ರೂಂನಲ್ಲಿ ದೊರಕುವುದಕ್ಕಿಂತ ಕಡಿಮೆ ಬೆಲೆಯಲ್ಲಿ ಉತ್ತಮ ಗುಣಮಟ್ಟದ ಆಕರ್ಷಕ ಬಟ್ಟೆಗಳು ದೊರಕಲಿದ್ದು ಇದರ ಸದುಪಯೋಗ ಪಡಿಸಿಕೊಳ್ಳುವಂತೆ ಮನವಿ ಮಾಡಿದರು.



ಈ ವೇಳೆ ಮಹದೇಶ್ವರ ಫ್ಯಾಶನ್ ಷೋ ರೂಂ ಮಾಲೀಕ ಕೆ.ವಿ.ಸುಹಾಸ್‌ಗೌಡ, ಜನತಾ ಬಜಾರ್ ಮಾಜಿ ಅಧ್ಯಕ್ಷ ಕೇತುಪುರ ದೊಡ್ಡಲಿಂಗೇಗೌಡ, ಪುರಸಭಾ ಮಾಜಿ ಅಧ್ಯಕ್ಷ ಟಿ.ಎಂ.ನಂಜುಂಡಸ್ವಾಮಿ, ಎಪಿಎಂಸಿ ಮಾಜಿ ಅಧ್ಯಕ್ಷ ರಾಜಣ್ಣ, ತಾಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಸೋಸಲೆ ಲಿಂಗರಾಜು, ಆಲಗೂಡು ಘಟಕ ಮಹದೇವು, ಬಸ್ ಮಾಲೀಕ ಹುಬ್ಬಳ್ಳಿ ಮಹದೇವ್, ಕಿಟ್ಟಣ್ಣ ಮತ್ತಿತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	**(ದೂ: 2521923)**
ಕಿಕ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಜೈಲರ್(ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಜವಾನ್ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಕಥಾ ಚಿತ್ರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಸಪ್ತಸಾಗರದಾಚೆ ಎಲ್ಲೋ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಜವಾನ್ (ಹಿ)	4 ಪ್ರದರ್ಶನಗಳು
ಸಂಗಂ	
ಜವಾನ್ (ಹಿ)	4 ಪ್ರದರ್ಶನಗಳು
ಲಿಡೋ	
ಖುಷಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಜವಾನ್ (ಹಿ)	4 ಪ್ರದರ್ಶನಗಳು
ಪ್ರಭಾ	
ನಮೋ ಭೂತಾತ್ಮ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಸಪ್ತಸಾಗರದಾಚೆ ಎಲ್ಲೋ (ಕ): ಬೆ.10.20ಕ್ಕೆ, ಮ.1.10ಕ್ಕೆ, ರಾ.7.15ಕ್ಕೆ, ರಾ.10.05ಕ್ಕೆ, ಜವಾನ್ (ಹಿಂ): ಸಂ.4ಕ್ಕೆ.
ಸ್ಕ್ರೀನ್ 2	ಲೂಸಿಯಾ (ಕ): ಬೆ.10.05ಕ್ಕೆ, ಜೈಲರ್ (ಕ): ಮ.12.45ಕ್ಕೆ, ಜೈಲರ್ (ತ): ಮ.3.55ಕ್ಕೆ, ಖುಷಿ (ತೆ): ರಾ.7.10ಕ್ಕೆ, ಜವಾನ್ (ಹಿಂ): ರಾ.10.25ಕ್ಕೆ.
ಸ್ಕ್ರೀನ್ 3	ದಿ ನನ್ 2 (ಇಂ): ಬೆ.10.55ಕ್ಕೆ, ರಾ.10.10ಕ್ಕೆ, ಟೋಬಿ (ಕ): ಮ.1.10ಕ್ಕೆ, ಸಪ್ತಸಾಗರದಾಚೆ ಎಲ್ಲೋ (ಕ): ಸಂ.4.05ಕ್ಕೆ, ಜವಾನ್ (ಹಿಂ): ರಾ.7ಕ್ಕೆ.
ಸ್ಕ್ರೀನ್ 4	ಜವಾನ್ (ಹಿಂ): ಬೆ.9.45ಕ್ಕೆ, ಮ.1ಕ್ಕೆ, ಸಂ.6.55ಕ್ಕೆ, ರಾ.10.15ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ಸಂ.4.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಜೈಲರ್ (ಕ): ಬೆ.11.20ಕ್ಕೆ, ರಾ.9.50ಕ್ಕೆ, ಜೈಲರ್ (ತ): ಮ.2.50ಕ್ಕೆ, ಸಂ.6.20ಕ್ಕೆ.
ಸ್ಕ್ರೀನ್ 2	ಗೂಮರ್ (ಹಿಂ): ಬೆ.9.55ಕ್ಕೆ, ಓಎಂಜಿ 2 (ಹಿಂ): ಮ.12.55ಕ್ಕೆ, ರಾ.7.15ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಸಂ.4.10ಕ್ಕೆ, ಬ್ಲೂ ಬೀಟಲ್ (ಇಂ): ರಾ.10.30ಕ್ಕೆ.
ಸ್ಕ್ರೀನ್ 3	ಗದರ್ 2 (ಹಿಂ): ಬೆ.9.55ಕ್ಕೆ, ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಮ.1.25ಕ್ಕೆ, ಬ್ಲೂ ಬೀಟಲ್ (ಇಂ): ಸಂ.4.55ಕ್ಕೆ, ಆಚಾರ್ & ಕೋ (ಕ): ರಾ.7.45ಕ್ಕೆ, ಗೂಮರ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಜೈಲರ್ (ತ): ಬೆ.10.30ಕ್ಕೆ, ಗದರ್ 2(ಹಿಂ): ಮ.2ಕ್ಕೆ, ಸಂ.6.10ಕ್ಕೆ, ಓಎಂಜಿ 2 (ಹಿಂ): ರಾ.9.40ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಈ ಪಟ್ಟಣಕ್ಕೆ ಏನಾಗಿದೆ (ಕ): ಬೆ.10.45ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಮ.1.15ಕ್ಕೆ, ಶೀಲಾ (ಕ): ಸಂ.4.15ಕ್ಕೆ, ಡಿಡಿ ರಿಟರ್ನ್ಸ್ (ತ): ಸಂ.6.30ಕ್ಕೆ, ರಾ.9ಕ್ಕೆ.
ಸ್ಕ್ರೀನ್ 2	ಕೌಸಲ್ಯ ಸುಪ್ರಜಾ ರಾಮ (ಕ): ಬೆ.1.15ಕ್ಕೆ, ರಾ.7ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ) ಸಂ.4.15ಕ್ಕೆ.
ಸ್ಕ್ರೀನ್ 3	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10.30ಕ್ಕೆ, ಸಂ.4ಕ್ಕೆ, ಮೆಗ್ 2 ದಿ ಟ್ರೆಂಚ್ (3ಡಿ) (ಇಂ): ಮ.1.20ಕ್ಕೆ, ಸಂ.6.55ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 4	ಮೆಗ್ 2 ದಿ ಟ್ರೆಂಚ್ (3ಡಿ)(ಇಂ): ಬೆ.10.45ಕ್ಕೆ, ನಮೋ ಭೂತಾತ್ಮ (ಕ): ಮ.1.10ಕ್ಕೆ, ಮ.3.50ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಸಂ.6.30ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಜೈಲರ್ (ತ): ಬೆ.8.35ಕ್ಕೆ, ಬೆ.11.40ಕ್ಕೆ, ಮ.3.40ಕ್ಕೆ, ಸಂ.6.45ಕ್ಕೆ, ರಾ.10.30ಕ್ಕೆ, ಜೈಲರ್ (ಕ): ಬೆ.8.25ಕ್ಕೆ, ಮ.3.10ಕ್ಕೆ, ಓಎಂಜಿ 2 (ಹಿಂ): ಬೆ.8.20ಕ್ಕೆ, ಬೆ.11.50ಕ್ಕೆ, ಸಂ.6.40ಕ್ಕೆ, ರಾ.10.15ಕ್ಕೆ, ಗದರ್ 2 (ಹಿಂ): ಮ.12.05ಕ್ಕೆ, ಮ.3.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ರಾ.9.45ಕ್ಕೆ, ಆಚಾರ್ & ಕೋ (ಕ): ಮ.3.55ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಮ.3.25ಕ್ಕೆ, ರಾ.10.30ಕ್ಕೆ, ನಮೋ ಭೂತಾತ್ಮ (ಕ): ಬೆ.11.55ಕ್ಕೆ, ರಾಖಿ ಔರ್ ರಾಣಿ (ಹಿಂ): ಬೆ.9.20ಕ್ಕೆ, ಸಂ.6.20ಕ್ಕೆ, ರಾ.9.50ಕ್ಕೆ, ಓಪನ್‌ಹೈಮರ್ (ಇಂ): ಸಂ.6.35ಕ್ಕೆ, ಭೋಳಾ ಶಂಕರ್ (ತೆ): ಬೆ.9.05ಕ್ಕೆ, ಮ.12.30ಕ್ಕೆ, ಮ.2.55ಕ್ಕೆ, ಸಂ.6.20ಕ್ಕೆ, ಮೆಗ್ 2 (ಇಂ): ಮ.12.50ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಹುಲಿ ದಾಳಿಗೆ ಹಸು ಬಲಿ

ಹನಗೋಡು, ಸೆ.11– ಹುಲಿ ದಾಳಿಗೆ ಹಸು ಬಲಿಯಾಗಿರುವ ಘಟನೆ ಸೋಮವಾರ ಮಧ್ಯಾಹ್ನ ಬಿ.ಆರ್. ಕಾವಲು ಗ್ರಾಮದಲ್ಲಿ ನಡೆದಿದೆ.



ಬೀರತಮನಹಳ್ಳಿ ಮೀಸಲು ಅರಣ್ಯದಂಚಿನ ಬಿ.ಆರ್. ಕಾವಲು ಗ್ರಾಮದ ರವಿ ಅವರಿಗೆ ಸೇರಿದ ಹಸು ಬಲಿಯಾಗಿರುವುದು. ಇಂದು ಮಧ್ಯಾಹ್ನ ರವಿ ಅವರ ಜಮೀನಿನಲ್ಲಿ ಮೇಯುತ್ತಿದ್ದ ಹಸು ಮೇಲೆ ಹುಲಿ ಏಕಾಏಕಿ ದಾಳಿ ಮಾಡಿ ಕೊಂದು ಹಾಕಿದೆ. ಈ ವೇಳೆ ಹುಲಿ ದಾಳಿ ಕಂಡ ರವಿ ಹಾಗೂ ಅಕ್ಕಪಕ್ಕದ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ರೈತರ ಚೀರಾಟದಿಂದಾಗಿ ಹುಲಿ ಗಾಬರಿಗೊಂಡು ಕಾಡಿನತ್ತ ಓಡಿ ಹೋಗಿದೆ ಎನ್ನಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯಾಧಿಕಾರಿಗಳು ಪರಿಶೀಲನೆ ನಡೆಸಿ ಸರ್ಕಾರದಿಂದ ಸಿಗುವ ಪರಿಹಾರ ಕೊಡಿಸುವುದಾಗಿ ಭರವಸೆ ನೀಡಿದರು.

ಈ ವೇಳೆ ಸ್ಥಳದಲ್ಲಿದ್ದ ಗ್ರಾಮಸ್ಥರು ಮಾತನಾಡಿ, ವಾರದ ಹಿಂದೆ ರವಿ ಅವರಿಗೆ ಸೇರಿದ ಮತ್ತೊಂದು ಹಸುವನ್ನು ಈ ಹಿಂದೆ ಹುಲಿ ಕೊಂದಿತ್ತು. ಇದೀಗ ಇನ್ನೊಂದು ಹಸುವನ್ನು ಬಲಿ ಪಡೆದಿದೆ. ಹುಲಿ ದಾಳಿಯಿಂದ ಸಾರ್ವಜನಿಕರು ಭಯಗೊಂಡಿದ್ದಾರೆ. ಹೀಗಾಗಿ ಅರಣ್ಯಾಧಿಕಾರಿಗಳು ಹುಲಿ ಸೆರೆಗೆ ಕ್ರಮ ವಹಿಸಬೇಕು ಮತ್ತು ಸರ್ಕಾರದಿಂದ ಹಸುಗಳನ್ನು ಕಳೆದುಕೊಂಡ ರೈತನಿಗೆ ಸೂಕ್ತ ಪರಿಹಾರ ದೊರಕಿಸಿಕೊಡುವಂತೆ ಮನವಿ ಮಾಡಿದರು.

ಇದಕ್ಕೆ ಸ್ಪಂದಿಸಿದ ಅರಣ್ಯಾಧಿಕಾರಿಗಳು ಗ್ರಾಮದಲ್ಲಿ ಹುಲಿ ಸೆರೆಗೆ ಬೋನಿಟ್ಟು ಕಾರ್ಯಾಚರಣೆ ಕೈಗೊಂಡಿದ್ದಾರೆ.

ನಂಜಮ್ಮ ನಿಧನ



ಹುಣಸೂರು, ಸೆ.11– ತಾಲೂಕಿನ ಸಿಬಿಟಿ ಕಾಲೋನಿ ಕಾಂಗ್ರೆಸ್ ಮುಖಂಡ ಕುಪ್ಪುಸ್ವಾಮಣ್ಣ ಅವರ ತಾಯಿ ನಂಜಮ್ಮ(85) ಸೋಮವಾರ ಸಂಜೆ ನಿಧನರಾದರು. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ ಸಿಬಿಟಿ ಕಾಲೋನಿಯ ತೋಟದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಸಾರ್ವಜನಿಕ ಪ್ರಕಟಣೆ

ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ನನ್ನ ಕಕ್ಷೀದಾರರು ಅದರ ಮಾಲೀಕರಾದ, ಮೈಸೂರು ನಗರ, ಸಿದ್ಧಾರ್ಥನಗರ, 2ನೇ ಹಂತ, ತೀರ್ಥಂಕರ ಮಾರ್ಗ, ಮನೆ ನಂಬರ್ 896 ರ ನಿವಾಸಿಯಾದ ಶ್ರೀ ಶ್ರೀಧರ್ ಸಿ. ಬಿನ್ ಚಂದ್ರಯ್ಯ ಮತ್ತು ಇವರ ಕುಟುಂಬದ ಸದಸ್ಯರುಗಳಿಂದ ಖರೀದಿಸಲು ಉದ್ದೇಶಿಸಿರುತ್ತಾರೆ.


ಷೆಡ್ಯೂಲ್ ಸ್ವತ್ತಿನ ಪರಭಾರೆಯ ವಿಚಾರದಲ್ಲಿ ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇದ್ದಲ್ಲಿ, ಇಂದಿನಿಂದ ಏಳು (07) ದಿನಗಳ ಒಳಗೆ ಲಿಖಿತ ತಕರಾರು ಮತ್ತು ಪೂರಕ ದಾಖಲಾತಿಗಳನ್ನು ಈ ಕೆಳಗೆ ಸಹಿ ಮಾಡಿದವರಿಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಈ ಅವಧಿಯಲ್ಲಿ ಯಾವುದೇ ತಕರಾರುಗಳು ಪೂರಕ ದಾಖಲಾತಿಗಳೊಂದಿಗೆ ಈ ಕೆಳಗೆ ಸಹಿ ಮಾಡಿದವರಿಗೆ ಬಾರದಿದ್ದಲ್ಲಿ, ಷೆಡ್ಯೂಲ್ ಸ್ವತ್ತಿನ ಮೇಲೆ ಇತರ ಯಾರಿಗೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇರುವುದಿಲ್ಲ ಮತ್ತು ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡಲು ಸ್ವತ್ತಿನ ಮಾಲೀಕರು ಪೂರ್ಣ ಹಕ್ಕುಳ್ಳವರಾಗಿರುತ್ತಾರೆ ಎಂದು ಪರಿಗಣಿಸಿ ಕ್ರಯದ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.

ಷೆಡ್ಯೂಲ್

ಮೈಸೂರು ಜಿಲ್ಲೆ ಮತ್ತು ತಾಲ್ಲೂಕು, ವರುಣ ಹೋಬಳಿ, ಇನಾಂ ಉತ್ತನಹಳ್ಳಿ ಗ್ರಾಮದ ಸರ್ವೆ ನಂಬರ್ 342/1 ರಲ್ಲಿನ ಎರಡು ಎಕರೆ (2.00.00.00) ವಿಸ್ತೀರ್ಣದ ಕೈಗಾರಿಕೆ ಉದ್ದೇಶಕ್ಕಾಗಿ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ ರವರ ಆದೇಶ ಸಂಖ್ಯೆ **ALN 98: 96-97** ದಿನಾಂಕ **04/04/1997** ರಲ್ಲಿ ಅನ್ಯಕ್ರಾಂತವಾಗಿರುವ ಜಮೀನಿಗೆ ಚಕ್ಕುಬಂದಿ:
ಪೂರ್ವಕ್ಕೆ: ಸರ್ವೆ ನಂಬರ್ 342/2 ; ಪಶ್ಚಿಮಕ್ಕೆ: ಸರ್ವೆ ನಂಬರ್ 338 ಮತ್ತು ಕಾಲುವೆ ; ಉತ್ತರಕ್ಕೆ: ರಸ್ತೆ ; ದಕ್ಷಿಣಕ್ಕೆ: ಸರ್ವೆ ನಂಬರ್ 342/3.

Sd/- M.N. Prakash Kalappa,
KAR-1996-2000, Advocate & Legal Consultant,
#67/7A, P.R.I. Complex, No. 2 & 3,
1st Floor, New Sayyaji Rao Road, Fort
Mohalla, Mysuru-570 004. Mob: 9343112535.
Email: mnprakashkalappa@gmail.com
ಮೈಸೂರು: 11–9–2023

ಚಿರಸ್ಮರಣೆ



ರೋಟರಿಯನ್ ಪಿ.ಹೆಚ್.ಎಫ್ ಎನ್.ಡಿ. ನಾಗರಾಜೇ ಅರಸ್
ಮಾಲೀಕರು ಶ್ರೀನಿವಾಸ ಇಂಜಿನಿಯರಿಂಗ್ ವರ್ಕ್ಸ್
ಸಂಸ್ಥಾಪನಾ ಸದಸ್ಯರು ರೋಟರಿ ಸೌತ್ ಈಸ್ಟ್
ಟ್ರಸ್ಟಿ ಆಫ್ ರೋಟರಿ ಸೌತ್ ಈಸ್ಟ್ ಚಾರಿಟೆಬಲ್ ಟ್ರಸ್ಟ್
ಮೃತರ ಶರೀರವನ್ನು 13–09–23ರಂದು ಬೆಳಗ್ಗೆ 8.30–12.30 ಗಂಟೆ ವರೆಗೆ ಅಂತಿಮ ದರ್ಶನಕ್ಕೆ ಮೃತರ ಲಕ್ಷ್ಮೀಪುರಂ, ಹಾರ್ಡ್ವಿಕ್ ಸ್ಕೂಲ್ ಹಿಂಭಾಗದ ಸ್ವಗೃಹದಲ್ಲಿ ಇರಿಸಲಾಗುವುದು. ಅಂತಿಮ ಸಂಸ್ಕಾರವನ್ನು ಮಧ್ಯಾಹ್ನ 1.30 ಗಂಟೆಗೆ ಅರಸ್ ರುದ್ರಭೂಮಿಯಲ್ಲಿ ನೆರವೇರಿಸಲಾಗುತ್ತದೆ (ಹರಿಶ್ಚಂದ್ರ ಘಾಟ್ ಪಕ್ಕ)

ಕಳೆದಿದೆ

ಶಿವಕುಮಾರ್ ಪಿ S/o ಪಳನಿಸ್ವಾಮಿ, ಚಾಮರಾಜನಗರ ಜಿಲ್ಲೆ, ಹನೂರು ತಾಲ್ಲೂಕು, ರಾಮಾಪುರ ಹೋಬಳಿ, ಗೋಪಿನಾಥಂ ಗ್ರಾಮದ ನಾನು ನನ್ನ ಮೂಲ ವಿಭಜನಾ ಪತ್ರದ ದಾಖಲೆ ಸಂಖ್ಯೆ. HAN-1-04925-2019-20 ರಂತೆ ಸಿಡಿ ಸಂಖ್ಯೆ. HAND471 ದಿನಾಂಕ 20-03-2020 & ಶುದ್ಧ ಕ್ರಯಪತ್ರ ದಾಖಲೆ ಸಂಖ್ಯೆ. HAN-1-02226-2020-21 ರಂತೆ, CD No.HAND606 ದಿನಾಂಕ 02-11-2020 ಇವೆರಡನ್ನೂ ಹನೂರಿನ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ನೋಂದಾಯಿಸಲಾಗಿದೆ. ದಿನಾಂಕ 24-08-2023 ರಂದು ಗೋಪಿನಾಥಂನಲ್ಲಿರುವ ಮನೆಯನ್ನು ಬದಲಾಯಿಸುವಾಗ, ಮೇಲ್ಕಂಡ ದಾಖಲೆಗಳು ಕಳೆದುಹೋಗಿವೆ ಮತ್ತು ಎಫ್‌ಐಆರ್ ಅನ್ನು ಪೊಲೀಸ್ ಠಾಣೆ, ಎಂ.ಎಂ.ಹಿಲ್ಸ್, ಹನೂರು, ಚಾಮರಾಜನಗರದಲ್ಲಿ ದಿನಾಂಕ 01-09 - 2023 ರಂದು ಜಿಎಸ್‌ಸಿ ನಂ.ಪಿಓ1138230600131 ರ ಮೂಲಕ ದಾಖಲಿಸಲಾಗಿದೆ. ಈ ಎರಡೂ ದಾಖಲೆಗಳು ಸಿಕ್ಕಲ್ಲಿ ದಯವಿಟ್ಟು ಮೇಲಿನ ವಿಳಾಸದ ದೂರವಾಣಿ ಸಂಖ್ಯೆ: 9886335264/8880732574ಗೆ ಈ ಜಾಹೀರಾತು ನೀಡಿದ ದಿನಾಂಕದಿಂದ 15 ದಿನಗಳೊಳಗೆ ಸಂಪರ್ಕಿಸಿ.



PUBLIC NOTICE

Notice is hereby issued to the general public that Smt. A.S. Mahalakshmi, W/o Sri L. Ravindra Narayan & D/o Late A.R. Sampath Kumar, residing at #2932, L-4, Ashoka Road East 32 Cross, Lashkar Mohalla, Mysuru-570 001 has agreed to sell the schedule property to my client/s.

Any person/s asserting any right, title, interest or claim, pending litigation or demand of any nature in or upon the schedule property or any part thereof, the same may be brought to the notice of the undersigned along with documentary evidence at #L-50/2A, 1st Floor, Ashoka Road, Mysuru-570 001 within SEVEN (07) days from the date of this public notice, failing which such claims/s shall be considered to have been waived and / or given up and my client/s shall be entitled to complete the sale transaction that there are no claims of whatsoever nature with respect of the schedule property.

SCHEDULE

All that piece and parcel of residential property bearing No. 2932, New No. L 4, measuring towards Northern Road side East to West 8'2" Feet and South to North 45 Feet and attached to it on the Southern side measuring East to West 47'2" Feet and South to North 62 feet altogether measuring 3295 square feet (L Shape property) having constructed Madras Tarsi roofing, red oxide flooring measuring 1200 square feet on the ground floor and 1100 square feet on the first floor & bounded on:

East by: Property bearing No. 2932/1, L-4/A & 2932/A L4/A. ; West by: Property bearing No. 2933 ; North by: Road ; South by: Property bearing No. 2932/B L4/2.

Sd/- M. Sanjay Jain, BBM, LL.B, CCL, CMJFS
Advocate, #L-50/2A, 1st Floor, Ashoka Road, Mysuru-570 001. Mob: 9341464636.
Email: msj186@yahoo.co.in
Place: Mysuru
Date: 09/09/2023